ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಡಿಸೆಂಬರ್ 29 ಗುರುವಾರ 2022


ಸಂಪುಟ: 43 | ಸಂಚಿಕೆ: 252 | ಪುಟಗಳು: 12

ದೂರವಾಣಿ: 2496520, 2496521, 2496526, 2496527, 2496528,
ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್,
ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com
website: www.mysurumithra.com

₹4

ಕೆಬಿಜೆಯವರ
ಛೂಮಂತ್ರ... ಛೂಮಂತ್ರ...



ಭೌಗೋಳಿಕ ವಿಸ್ಮಯದಂತಿರುವ ಕಾಶ್ಮೀರದ ಬಗ್ಗೆ ಪ್ರವಾಸಿಗರೊಬ್ಬರ ಅನಿಸಿಕೆ–2

■ ಪುಟ–4

ಜನವರಿಯಲ್ಲಿ ಕೊರೊನಾ ಹೆಚ್ಚಳ ಸಾಧ್ಯತೆ

ಮುಂದಿನ 40 ದಿನ ನಿರ್ಣಾಯಕ

ನವದೆಹಲಿ: ಚೀನಾ ಸೇರಿದಂತೆ ವಿವಿಧ ದೇಶಗಳಲ್ಲಿ ಉಲ್ಬಣಿಸಿರುವ ಕೊರೊನಾ ಸೋಂಕು ಇದೀಗ ಭಾರತದಲ್ಲೂ ಹೊಸ ಅಲೆಯ ಭೀತಿ ಸೃಷ್ಟಿ ಮಾಡಿದ್ದು, ಮುಂದಿನ 40 ದಿನಗಳು ದೇಶಕ್ಕೆ ಅತ್ಯಂತ ನಿರ್ಣಾಯಕವಾಗಿರಲಿದೆ ಎಂದು ಕೇಂದ್ರ ಆರೋಗ್ಯ ಇಲಾಖೆ ಅಭಿಪ್ರಾಯಪಟ್ಟಿದೆ. ಕೇಂದ್ರ ಆರೋಗ್ಯ ಇಲಾಖೆಯ ▶ 9ನೇ ಪುಟಕ್ಕೆ

ಮೈಸೂರು ವಿವಿ ವಿದ್ಯಾರ್ಥಿ ನಿಲಯದಲ್ಲಿ ಬೆಳಗಿನ ಉಪಾಹಾರದಲ್ಲಿತ್ತು ಸತ್ತ ಇಲಿ!

ಕೆರಳಿದ ವಿದ್ಯಾರ್ಥಿಗಳಿಂದ ಪ್ರತಿಭಟನೆ: ವ್ಯವಸ್ಥೆ ವಿರುದ್ಧ ಭಾರೀ ಆಕ್ರೋಶ

ಮೈಸೂರು,ಡಿ.28(ಎಂಟಿವೈ)– ಮೈಸೂರು ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ನಿಲಯವೊಂದರಲ್ಲಿ ವಿದ್ಯಾರ್ಥಿಗಳಿಗೆ ಬಡಿಸಿದ ಉಪಾಹಾರದಲ್ಲಿ ಸತ್ತ ಇಲಿ ಪತ್ತೆಯಾದ ಹಿನ್ನೆಲೆಯಲ್ಲಿ ಹಾಸ್ಟೆಲ್ ವಿದ್ಯಾರ್ಥಿಗಳು ಮೈಸೂರು ಮಾನಸ ಗಂಗೋತ್ರಿಯ ಮುಖ್ಯದ್ವಾರ, ಕುವೆಂಪು ಪ್ರತಿಮೆ ಮುಂದೆ ಪ್ರತಿಭಟಿಸಿ ಆಕ್ರೋಶ ವ್ಯಕ್ತಪಡಿಸಿದರು.

ಮಾನಸ ಗಂಗೋತ್ರಿಯ ಕ್ಯಾಂಪಸ್‌ನಲ್ಲಿರುವ ಎ ಬ್ಲಾಕ್ ವಿದ್ಯಾರ್ಥಿನಿಲಯದಲ್ಲಿ ಬೆಳಗಿನ ಉಪಾಹಾರ ಬಡಿಸುವ ವೇಳೆ ವಿದ್ಯಾರ್ಥಿಯೊಬ್ಬರ ತಟ್ಟೆಯ ಉಪಾಹಾರದಲ್ಲಿ ಸತ್ತ ಇಲಿ ಪತ್ತೆಯಾಗಿದೆ. ಅಷ್ಟರಲ್ಲಾಗಲೇ ಕೆಲವು ವಿದ್ಯಾರ್ಥಿಗಳು ಉಪಾಹಾರ ಸೇವಿಸಿದ್ದರು. ಆಹಾರದಲ್ಲಿ ಇಲಿ ಪತ್ತೆಯಾದ ಹಿನ್ನೆಲೆಯಲ್ಲಿ ಆಕ್ರೋಶಗೊಂಡ ವಿದ್ಯಾರ್ಥಿಗಳು ಹಾಸ್ಟೆಲ್ ಸಿಬ್ಬಂದಿಗಳ ನಿರ್ಲಕ್ಷ್ಯ ಖಂಡಿಸಿ, ಪ್ರತಿಭಟನೆಗೆ ಮುಂದಾದರು.

ಹಾಸ್ಟೆಲ್‌ನಿಂದ ಅಡುಗೆ ಪಾತ್ರೆ ಹಾಗೂ ಉಪಾಹಾರದಲ್ಲಿ ಪತ್ತೆಯಾದ ಇಲಿಯಿದ್ದ ತಟ್ಟೆಯೊಂದಿಗೆ ಮಾನಸ ಗಂಗೋತ್ರಿಯ ಮುಖ್ಯದ್ವಾರ, ಕುವೆಂಪು ಪ್ರತಿಮೆ ಬಳಿ ಜಮಾಯಿಸಿದ ವಿದ್ಯಾರ್ಥಿಗಳು, ಹಾಸ್ಟೆಲ್ ಸಿಬ್ಬಂದಿಗಳ ನಿರ್ಲಕ್ಷ್ಯದ ವಿರುದ್ಧ ಕಿಡಿಕಾರಿದರು. ವಿದ್ಯಾರ್ಥಿಗಳ ಪ್ರತಿಭಟನೆ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಗೇಟ್ ಹಾಕಲಾಯಿತು. ಈ ವೇಳೆ ಮಧ್ಯಾಹ್ನದವರೆಗೂ ಪ್ರತಿಭಟನೆ ಮುಂದುವರೆಸಿದ ವಿದ್ಯಾರ್ಥಿಗಳು, ವ್ಯವಸ್ಥೆ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಹಾಸ್ಟೆಲ್‌ನಲ್ಲಿ ಸ್ವಚ್ಛತೆ ಇಲ್ಲದಂತಾಗಿದೆ. ಅವಧಿ ಮೀರಿದ ಆಹಾರ ಪದಾರ್ಥಗಳಿಂದ ಅಡುಗೆ ತಯಾರಿಸಲಾಗುತ್ತಿದೆ. ಕಳಪೆ ಗುಣಮಟ್ಟದ ಆಹಾರ ಪೂರೈಕೆ ಮಾಡಲಾಗುತ್ತಿದೆ. ಕುಡಿಯುವ ನೀರು ಇಲ್ಲದೆ ವಿದ್ಯಾರ್ಥಿಗಳು ▶ 9ನೇ ಪುಟಕ್ಕೆ



"ಇಲಿ ಬಿದ್ದಿದ್ದ ಉಪಾಹಾರ ಸೇವಿಸಿದ್ದ 10 ವಿದ್ಯಾರ್ಥಿಗಳನ್ನು ಗಂಗೋತ್ರಿಯ ಆವರಣದಲ್ಲಿರುವ ಆರೋಗ್ಯ ಕೇಂದ್ರದಲ್ಲಿ ತಪಾಸಣೆ ಮಾಡಲಾಗಿದೆ. ಆದರೆ, ವಿದ್ಯಾರ್ಥಿಗಳ ಆರೋಗ್ಯದಲ್ಲಿ ಯಾವುದೇ ಸಮಸ್ಯೆ ಕಂಡು ಬಂದಿಲ್ಲ. ಆದರೂ, ಅವರ ಬಗ್ಗೆ ನಿಗಾ ವಹಿಸಲಾಗಿದೆ. ಉಳಿದ ವಿದ್ಯಾರ್ಥಿಗಳು ಆಹಾರ ಸೇವಿಸದ ಕಾರಣ ಆರೋಗ್ಯ ತಪಾಸಣೆಗೆ ಒಳಗಾಗಿಲ್ಲ.

– ಡಾ.ಬಿ.ಎಸ್.ಚಂದ್ರಶೇಖರ್,
ವಿದ್ಯಾರ್ಥಿನಿಲಯ ಕ್ಷೇಮಪಾಲನಾ ನಿರ್ದೇಶಕ

ಬೆಂಗಳೂರು–ಮೈಸೂರು ಹೆದ್ದಾರಿ ಗುಣಮಟ್ಟದ ಬಗ್ಗೆ ಆಕ್ಷೇಪ

ಜ.5ರಂದು ಗಡ್ಕರಿ ಪರಿಶೀಲನೆ

ಬೆಂಗಳೂರು, ಡಿ.28(ಕೆಎಂಶಿ)– ವಿಶ್ವದರ್ಜೆ ಗುಣಮಟ್ಟದ ಬೆಂಗಳೂರು–ಮೈಸೂರು ರಾಷ್ಟ್ರೀಯ ಹೆದ್ದಾರಿಯ ಕಾಮಗಾರಿ ಪರಿಶೀಲನೆ ಗಾಗಿ ಕೇಂದ್ರ ಭೂ ಸಾರಿಗೆ ಸಚಿವ ನಿತಿನ್ ಗಡ್ಕರಿ ರಾಜ್ಯ ಪ್ರವಾಸ ಕೈಗೊಳ್ಳುತ್ತಿದ್ದಾರೆ.





ರಸ್ತೆ ಗುಣಮಟ್ಟದ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ ಕೇಂದ್ರ ಭೂಸಾರಿಗೆ ಸಚಿವರು ಜನವರಿ 5ಕ್ಕೆ ಖುದ್ದು ಈ ರಸ್ತೆಯಲ್ಲಿ ಪ್ರಯಾಣಿಸಿ, ಅದರ ಗುಣಮಟ್ಟದ ಬಗ್ಗೆ ಪರಿಶೀಲನೆ ನಡೆಸಲಿದ್ದಾರೆ ಎಂದು ವಿಧಾನಪರಿಷತ್ತಿನಲ್ಲಿ ಲೋಕೋಪಯೋಗಿ ಸಚಿವ ಸಿ.ಸಿ. ಪಾಟೀಲ್ ಪ್ರಕಟಿಸಿದರು. ಪ್ರಶ್ನೋತ್ತರ ವೇಳೆಯಲ್ಲಿ ಮರಿತಿಬ್ಬೇಗೌಡ ಅವರ ಪ್ರಸ್ತಾವಕ್ಕೆ ಉತ್ತರಿಸಿದ ಸಚಿವರು, ರಸ್ತೆ ಗುಣಮಟ್ಟದ ಬಗ್ಗೆ ನಾನು ಈಗಾಗಲೇ ಎರಡು ಬಾರಿ ಭೇಟಿ ನೀಡಿ ರಸ್ತೆ ಪರಿಶೀಲಿಸಿದ್ದೇನೆ. ಮಳೆಯಿಂದ ಸಮಸ್ಯೆಯಾದಾಗ ಮುಖ್ಯಮಂತ್ರಿಯವರೂ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಇತ್ತೀಚೆಗೆ ಎರಡು ಮೂರು ಪಟ್ಟು ಮಳೆ ಹೆಚ್ಚಾದಾಗ ಸಮಸ್ಯೆಯಾಗಿತ್ತು. ಕೆಲವು ಭಾಗಗಳಲ್ಲಿ ರಾಜಕಾಲುವೆಗಳ ಒತ್ತುವರಿಯಾಗಿತ್ತು ಮತ್ತು ಕಲ್ಲು, ಕಸ–ಕಡ್ಡಿಯಿಂದ ಚರಂಡಿ ಮುಚ್ಚಿದರ ಪರಿಣಾಮ ನೀರು ರಸ್ತೆಯಿಂದ ಸರಾಗವಾಗಿ ಹರಿದುಹೋಗಲು ಸಾಧ್ಯವಾಗಲಿಲ್ಲ. ಇದರಿಂದ ತಾತ್ಕಾಲಿಕ ಕೆರೆ ನಿರ್ಮಾಣವಾಗಿದ್ದು, ನಮ್ಮ ಗಮನಕ್ಕೆ ಬಂದಿದೆ. ಸಮಸ್ಯೆಯ ನಂತರ ಗುತ್ತಿಗೆದಾರರು ಮೂಲ ನಕ್ಷೆಯಲ್ಲಿ ಕೆಲ ಬದಲಾವಣೆ ಮಾಡಿ, ನೀರು ಸರಾಗವಾಗಿ ಹರಿದುಹೋಗುವಂತೆ ಕಾಮಗಾರಿ ಕೈಗೆತ್ತಿಕೊಂಡಿದ್ದಾರೆ. ರಸ್ತೆಯಲ್ಲಿ ಉಬ್ಬು ತಗ್ಗುಗಳ ಸಮಸ್ಯೆ ಇದೆ. ಅದನ್ನು ಸರಿಪಡಿಸುವಂತೆ ಹೆದ್ದಾರಿ ಪ್ರಾಧಿಕಾರಕ್ಕೆ ಸೂಚಿಸಲಾಗುವುದು ಎಂದರು. ಇಂತಹ ರಸ್ತೆಗಳಲ್ಲಿ ಒಂದೆರಡು ಕಡೆ ಮಾತ್ರ ಸ್ಥಳೀಯ ಪ್ರದೇಶಗಳಿಗೆ ಸಂಪರ್ಕ ಕಲ್ಪಿಸಲು ಸಾಧ್ಯವಾಗಲಿದೆ. ರಸ್ತೆಯ ಮೂಲ ಉದ್ದೇಶ, ಬೆಂಗಳೂರು–ಮೈಸೂರಿಗೆ ನೇರ ಸಂಪರ್ಕಿಸುವುದಾಗಿದೆ. ಆದರೂ ಕೇಂದ್ರ ಸಚಿವರು ಭೇಟಿ ನೀಡಿದಾಗ ಮಂಡ್ಯ, ರಾಮನಗರ, ಚನ್ನಪಟ್ಟಣ, ಮದ್ದೂರು ಭಾಗದ ಜನಪ್ರತಿನಿಧಿಗಳ ಹಾಗೂ ಜನರ ಬೇಡಿಕೆಯನ್ನು ಪ್ರಸ್ತಾವನೆ ರೂಪದಲ್ಲಿ ಸಲ್ಲಿಸಲಾಗುವುದು ಎಂದರು. ಇದಕ್ಕೂ ಮುನ್ನ ಮಾತನಾಡಿದ ಮರಿತಿಬ್ಬೇಗೌಡ, ಸಾವಿರಾರು ಕೋಟಿ ಖರ್ಚು ಮಾಡಿ ರಸ್ತೆ ನಿರ್ಮಿಸಲಾಗುತ್ತಿದೆ. ರಸ್ತೆಯಲ್ಲಿ ಉಬ್ಬು ತಗ್ಗುಗಳಿವೆ. ಕಾರುಗಳು ಮೇಲೆಗರಿ ಬೀಳುತ್ತಿವೆ. ಮೇಲು ಸೇತುವೆಯಲ್ಲಿ ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡಿಲ್ಲ ಮಳೆಗಾಲದಲ್ಲಿ ಅಪಘಾತಗಳು ಹೆಚ್ಚಾಗುತ್ತವೆ. ಸರ್ವಿಸ್ ರಸ್ತೆ ಏಳೂವರೆ ಮೀಟರ್ ಮಾಡುತ್ತಿದ್ದಾರೆ. ಅದರ ಗುಣಮಟ್ಟ ಸರಿಯಿಲ್ಲ. ಮುಖ್ಯರಸ್ತೆಯುದ್ಧಕ್ಕೂ ತಂತಿಬೇಲಿಯ ಬ್ಯಾರಿಕೇಡ್ ಹಾಕಿದ್ದಾರೆ. ಅವು ಈಗಾಗಲೇ ತುಕ್ಕು ▶ 9ನೇ ಪುಟಕ್ಕೆ

ಸಿಎಂ ಬಸವರಾಜ ಬೊಮ್ಮಾಯಿ ಪುತ್ಥಳಿಗೆ ರೈತರ ರಕ್ತಾಭಿಷೇಕ

- ಕಬ್ಬಿನ ದರ ನಿಗದಿಯೂ ಸೇರಿದಂತೆ ನಾನಾ ಬೇಡಿಕೆ ಈಡೇರಿಕೆಗೆ 52 ದಿನದಿಂದ ಪ್ರತಿಭಟನೆ ನಡೆಸಲಾಗುತ್ತಿದೆ
- ಗೃಹ ಸಚಿವ ಅಮಿತ್ ಷಾ ಭೇಟಿ ಹಿನ್ನೆಲೆಯಲ್ಲಿ ಪ್ರತಿಭಟನೆ ಕೈಬಿಡಲು ಪೊಲೀಸರು ಮನವಿ ಮಾಡಿದ್ದರು
- ದಿಢೀರ್ ಬೆಳವಣಿಗೆಯಿಂದ ಎಚ್ಚೆತ್ತ ಪೊಲೀಸರು ರೈತರ ವಶಕ್ಕೆ ಪಡೆದು ನಂತರ ಬಿಡುಗಡೆ

ಮಂಡ್ಯ, ಡಿ. 28–ಕಬ್ಬಿನ ದರ ನಿಗದಿ ಸೇರಿದಂತೆ ವಿವಿಧ ಬೇಡಿಕೆಗಳನ್ನು ಮುಂದಿಟ್ಟು ಕಳೆದ 52 ದಿನಗಳಿಂದ ಮಂಡ್ಯ ನಗರದ ಸರ್ ಎಂ.ವಿಶ್ವೇಶ್ವರಯ್ಯ ಪ್ರತಿಮೆ ಮುಂದೆ ಪ್ರತಿಭಟನೆ ನಡೆಸುತ್ತಿರುವ ರೈತರು, ಸಿಎಂ ಬಸವರಾಜ ಬೊಮ್ಮಾಯಿಯವರ ಪುತ್ಥಳಿಗೆ ರಕ್ತಾಭಿಷೇಕ ಮಾಡಿದ ವಿಲಕ್ಷಣ ಘಟನೆ ಬುಧವಾರ ಮಧ್ಯಾಹ್ನ ನಡೆದಿದೆ.

ಇನ್ನೆರಡು ದಿನದಲ್ಲಿ (ಡಿ.30) ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರು ಮಂಡ್ಯಕ್ಕೆ ಆಗಮಿಸಲಿದ್ದು, ರೈತರು ಪ್ರತಿಭಟನೆ ನಡೆಸುತ್ತಿರುವ ಸ್ಥಳದ ಸಮೀಪವಿರುವ ಮೈದಾನದಲ್ಲೇ ಅಮಿತ್ ಷಾ ಅವರು ಸಮಾವೇಶ ನಡೆಸಲಿರುವುದರಿಂದ ಪ್ರತಿಭಟನೆಯನ್ನು ಹಿಂಪಡೆಯುವಂತೆ ಜಿಲ್ಲಾ ಉಸ್ತುವಾರಿ ಸಚಿವ ಗೋಪಾಲಯ್ಯ ಹಾಗೂ ಜಿಲ್ಲಾಡಳಿತ, ರೈತರಲ್ಲಿ ಮನವಿ ಮಾಡಿತ್ತು. ಷಾ ಅವರ ಕಾರ್ಯಕ್ರಮ ಮುಗಿದ ನಂತರ ಮುಖ್ಯಮಂತ್ರಿಗಳೊಂದಿಗೆ ಮಾತನಾಡಿ ರೈತರ ಬೇಡಿಕೆ ಈಡೇರಿಸುವುದಾಗಿ ಗೋಪಾಲಯ್ಯ ಭರವಸೆ ನೀಡಿದ್ದರು.



ಇಂದು ರೈತರು ಪ್ರತಿಭಟನೆ ಹಿಂಪಡೆಯುತ್ತಾರೆ ಎಂಬ ನಿರೀಕ್ಷೆಯು ಜಿಲ್ಲಾಡಳಿತಕ್ಕೆ ಇತ್ತು. ಆದರೆ, ಪ್ರತಿಭಟನೆ ಹಿಂಪಡೆಯುವುದಿರಲಿ, ಮುಖ್ಯಮಂತ್ರಿಗಳ ಪುತ್ಥಳಿಗೆ ಮೊದಲೇ ತಮ್ಮೆಲ್ಲರಿಂದ ಸಂಗ್ರಹಿಸಿದ್ದ ರಕ್ತವನ್ನು ಸಿರಿಂಜ್‌ನಲ್ಲಿ ರಕ್ತಾಭಿಷೇಕ ಮಾಡುವ ಮೂಲಕ ರೈತರು ಪ್ರತಿಭಟನೆಯನ್ನು ತೀವ್ರಗೊಳಿಸಿದ್ದರು. ಮುನ್ನೆಚ್ಚರಿಕಾ ಕ್ರಮವಾಗಿ ಇಂದು ಬೆಳಗ್ಗೆಯಿಂದ ▶ 9ನೇ ಪುಟಕ್ಕೆ

ವಾಹನ ದಟ್ಟಣೆ, ಅಪಘಾತ ತಪ್ಪಿಸಲು ಮೈಸೂರಿನ ರಿಂಗ್ ರಸ್ತೆಯ 4 ಜಂಕ್ಷನ್‌ಗಳಲ್ಲಿ

ಗ್ರೇಡ್ ಸಪರೇಟರ್, ಫ್ಲೈಓವರ್ ಇಲ್ಲವೇ ಅಂಡರ್ ಪಾಸ್

ಮೂರು ದಿನದೊಳಗೆ ಡಿಪಿಆರ್ ಸಿದ್ಧಪಡಿಸಲು ಅಧಿಕಾರಿಗಳಿಗೆ ಸಂಸದ ಪ್ರತಾಪ್ ಸಿಂಹ ಸೂಚನೆ

ಮೈಸೂರು, ಡಿ. 28(ಆರ್‌ಕೆ)– ವಾಹನ ದಟ್ಟಣೆ, ರಸ್ತೆ ಅಪಘಾತಗಳನ್ನು ತಪ್ಪಿಸಲು ಮೈಸೂರಿನ ರಿಂಗ್ ರಸ್ತೆಯ 4 ಬ್ಲಾಕ್‌ಸ್ಪಾಟ್ ಜಂಕ್ಷನ್‌ಗಳಲ್ಲಿ ಫ್ಲೈಓವರ್, ಗ್ರೇಡ್ ಸಪರೇಟರ್ ಅಥವಾ ರೋಡ್ ಅಂಡರ್‌ಪಾಸ್ ನಿರ್ಮಿಸಲಾಗುವುದು ಎಂದು ಸಂಸದ ಪ್ರತಾಪ್ ಸಿಂಹ ತಿಳಿಸಿದ್ದಾರೆ.

ಮುಡಾ ಅಧ್ಯಕ್ಷ ಯಶಸ್ವಿ ಎಸ್.ಸೋಮಶೇಖರ್, ಆಯುಕ್ತ ಜಿ.ಟಿ.ದಿನೇಶ್ ಕುಮಾರ್ ಹಾಗೂ ಅಧಿಕಾರಿಗಳೊಂದಿಗೆ ಇಂದು ರಿಂಗ್ ರಸ್ತೆಯ ಜಂಕ್ಷನ್‌ಗಳನ್ನು ಪರಿಶೀಲಿಸಿದ ಅವರು, ಅತೀ ಹೆಚ್ಚು ವಾಹನ ಸಂಚರಿಸುವ ಹಾಗೂ ಅಪಘಾತಗಳು ಸಂಭವಿಸುವ ವಿಜಯನಗರ 3 ಮತ್ತು 4ನೇ ಹಂತದ ಬಸವನಹಳ್ಳಿ ಜಂಕ್ಷನ್, ಬೋಗಾದಿ ಸಿಗ್ನಲ್ ಲೈಟ್ ಜಂಕ್ಷನ್ ಹಾಗೂ ಜೆ.ಪಿ. ನಗರ ಬಳಿಯ ಕುಪ್ಪಲೂರು ರಿಂಗ್ ರೋಡ್ ಜಂಕ್ಷನ್‌ಗಳಲ್ಲಿ ಗ್ರೇಡ್ ಸಪರೇಟರ್, ಫ್ಲೈಓವರ್ ಅಥವಾ ಅಂಡರ್‌ಪಾಸ್ ಪೈಕಿ ಆ ಸ್ಥಳಕ್ಕೆ ಯಾವುದು ಸೂಕ್ತವೆನಿಸುವುದೋ ಆ ಯೋಜನೆಯನ್ನು ಮುಡಾ ವತಿಯಿಂದ ಕೈಗೆತ್ತಿಕೊಳ್ಳುವಂತೆ ಪ್ರಾಧಿಕಾರದ ಅಧ್ಯಕ್ಷ ಹಾಗೂ ಆಯುಕ್ತರಿಗೆ ಸಲಹೆ ನೀಡಿದರು.



ನುರಿತ ಸ್ಟ್ರಕ್ಚರಲ್ ಇಂಜಿನಿಯರ್‌ಗಳನ್ನು ಸ್ಥಳಕ್ಕೆ ಕರೆದೊಯ್ದು ಪರಿಶೀಲಿಸಿ ಆ ಸ್ಥಳಗಳಿಗೆ ಸೂಕ್ತ ಎನಿಸುವ ಯೋಜನೆಗಳಿಗೆ 3 ದಿನದೊಳಗಾಗಿ ಡಿಪಿಆರ್ ಸಿದ್ಧಪಡಿಸಬೇಕು, ನಂತರ ಪ್ರಾಧಿಕಾರದ ಸಭೆಯಲ್ಲಿ ಚರ್ಚಿಸಿ ಅನುಮೋದನೆ ಪಡೆದು ನಂತರ ಸರ್ಕಾರದಿಂದ ಅನುಮತಿ ಪಡೆದು ಟೆಂಡರ್ ಪ್ರಕ್ರಿಯೆ ನಡೆಸುವಂತೆಯೂ ಅವರು ತಿಳಿಸಿದರು. ಸುಗಮ ಸಂಚಾರ, ಅಪಘಾತ ರಹಿತ ವಲಯವನ್ನಾಗಿಸಲು ಈ ಮೂರೂ ರಿಂಗ್ ರೋಡ್ ▶ 6ನೇ ಪುಟಕ್ಕೆ

ಜ.15ರೊಳಗೆ ಕಾಂಗ್ರೆಸ್ ಮೊದಲ ಪಟ್ಟಿ ಬಿಡುಗಡೆಗೆ ಹೈಕಮಾಂಡ್ ನಿರ್ಧಾರ

- ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ ಮಾಹಿತಿ
- ಈ ಬಾರಿ ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ಶತಸಿದ್ಧ: ವಿಶ್ವಾಸ



ಮೈಸೂರು,ಡಿ.28(ಎಂಟಿವೈ)– ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಲಿರುವ ಕಾಂಗ್ರೆಸ್ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಜ.15ರೊಳಗೆ ಪ್ರಕಟಿಸಲು ಹೈಕಮಾಂಡ್ ನಿರ್ಧರಿಸಿದೆ ಎಂದು ಕಾಂಗ್ರೆಸ್ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ್ ತಿಳಿಸಿದ್ದಾರೆ.

ಮೈಸೂರಲ್ಲಿ ಬುಧವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಈ ಬಾರಿ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರುವುದು ಖಚಿತ. ಕಾಂಗ್ರೆಸ್‌ಗೆ ಅಧಿಕಾರ ಒಲಿಯುವುದನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ. ಬಿಜೆಪಿ ಸರ್ಕಾರದ ದುರಾಡಳಿತ, ಮಿತಿ ಮೀರಿದ ಭ್ರಷ್ಟಾಚಾರ, ನಾನಾ ಹಗರಣ, ಕೋಮು ಗಲಭೆ ಸೃಷ್ಟಿಸಲು ನಡೆಸಿದ ಸಂಚು, ದಲಿತರ ಮೇಲಿನ ದೌರ್ಜನ್ಯ ಸೇರಿದಂತೆ ಇನ್ನಿತರ ಪ್ರಕರಣಗಳಿಂದ ರಾಜ್ಯದ ಜನತೆ ಬೇಸತ್ತಿದ್ದಾರೆ. ಬಿಜೆಪಿ ಸರ್ಕಾರ ಎಲ್ಲಾ ಹಂತಗಳಲ್ಲೂ ವೈಫಲ್ಯ ಕಂಡಿದೆ. ಇದರಿಂದ ಬಿಜೆಪಿ ಕಾರ್ಯಕರ್ತರೇ ಅವರದೇ ಸರ್ಕಾರದ ವಿರುದ್ಧ ಅಸಮಾಧಾನಗೊಂಡಿದ್ದಾರೆ ಎಂದು ಆರೋಪಿಸಿದರು. ಈ ಹಿಂದೆ ಸಿದ್ದರಾಮಯ್ಯ ನೇತೃತ್ವದ ಸರ್ಕಾರದಲ್ಲಿ ಮಾಡಿದ ಜನಪರ ಕಾರ್ಯಗಳ ಬಗ್ಗೆ ತಿಳಿದಿರುವ ಮತದಾರರು ಬಿಜೆಪಿ ಬಗ್ಗೆ ಭ್ರಮನಿರಶನ ಹೊಂದಿದ್ದಾರೆ. ಈ ಸರ್ಕಾರವನ್ನು ಜನರೇ ಕಿತ್ತೊಗೆಯಲಿದ್ದಾರೆ. ಎಲ್ಲೆಡೆ ಕಾಂಗ್ರೆಸ್‌ಗೆ ಬೆಂಬಲ ದೊರೆಯುತ್ತಿದೆ. ▶ 9ನೇ ಪುಟಕ್ಕೆ

ಪ್ರಧಾನಿ ಮೋದಿ ತಾಯಿ ಆಸ್ಪತ್ರೆಗೆ ದಾಖಲು

- ಆರೋಗ್ಯ ಸ್ಥಿರ
- ಆಸ್ಪತ್ರೆಗೆ ಪ್ರಧಾನಿ ಭೇಟಿ; ಮಾಹಿತಿ ಸಂಗ್ರಹ



ಅಹಮದಾಬಾದ್, ಡಿ. 28– ಪ್ರಧಾನಿ ನರೇಂದ್ರ ಮೋದಿಯವರ ತಾಯಿ ಹೀರಾಬೆನ್ ಅವರ ಆರೋಗ್ಯದಲ್ಲಿ ಏರುಪೇರಾಗಿದ್ದು, ಅಹಮದಾಬಾದ್‌ನ ಯುಎನ್ ಮೆಹ್ತಾ ಹೃದ್ರೋಗ ಮತ್ತು ಸಂಶೋಧನಾ ಕೇಂದ್ರದಲ್ಲಿ ಅವರನ್ನು ದಾಖಲಿಸಲಾಗಿದೆ. ತಾಯಿ ಆಸ್ಪತ್ರೆಗೆ ದಾಖಲಾಗಿರುವುದು ತಿಳಿಯುತ್ತಿದ್ದಂತೆ ಪ್ರಧಾನಿ ಮೋದಿಯವರು ಇಂದು ಸಂಜೆ ಅಹಮದಾಬಾದ್‌ಗೆ ಆಗಮಿಸಿ, ಆಸ್ಪತ್ರೆಗೆ ತೆರಳಿ ತಾಯಿಯ ಆರೋಗ್ಯದ ಬಗ್ಗೆ ವೈದ್ಯರಿಂದ ಮಾಹಿತಿ ಪಡೆದರು.

ಕಳೆದ ಜೂನ್ 18ರಂದು 100ನೇ ವರ್ಷಕ್ಕೆ ಕಾಲಿಟ್ಟ ಹೀರಾಬೆನ್ ಅವರು ಮಂಗಳವಾರ ರಾತ್ರಿ ತೀವ್ರವಾಗಿ ಅಸ್ವಸ್ಥಗೊಂಡಿದ್ದು, ಅವರನ್ನು ಕೂಡಲೇ ಆಸ್ಪತ್ರೆಗೆ ದಾಖಲಿಸಲಾಗಿದೆ. ಪ್ರಧಾನಿ ಮೋದಿಯವರ ತಾಯಿ ಹೀರಾಬೆನ್ ಅವರ ಆರೋಗ್ಯ ಸ್ಥಿರವಾಗಿದೆ ಎಂದು ಯುಎನ್ ಮೆಹ್ತಾ ಆಸ್ಪತ್ರೆಯ ಪ್ರಕಟಣೆ ತಿಳಿಸಿದೆ. ಮೋದಿ ಅವರ ತಾಯಿ ಆಸ್ಪತ್ರೆಗೆ ದಾಖಲಾಗಿದ್ದಾರೆ ಎಂಬ ವಿಷಯ ▶ 6ನೇ ಪುಟಕ್ಕೆ

ಕಡಕೊಳ ಬಳಿ ಕಾರು ಅಪಘಾತದಲ್ಲಿ ಪ್ರಹ್ಲಾದ್ ಮೋದಿ, ಕುಟುಂಬದವರಿಗೆ ಗಾಯ

ಸಹೋದರನಿಗೆ ಪ್ರಧಾನಿ ಮೋದಿ ಕರೆ ಮಾಡಿ ಆರೋಗ್ಯ ವಿಚಾರಣೆ

ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಪ್ರಹ್ಲಾದ್ ಮೋದಿ ಸುದ್ದಿಗೋಷ್ಠಿಯಲ್ಲಿ ಮಾಹಿತಿ

ಮೈಸೂರು, ಡಿ. 28(ಆರ್‌ಕೆ)– ಬೆಂಗಳೂರು–ನೀಲಗಿರಿ ರಸ್ತೆಯ ಕಡಕೊಳ ಬಳಿ ಮಂಗಳವಾರ ಮಧ್ಯಾಹ್ನ ಸಂಭವಿಸಿದ ಕಾರು ಅಪಘಾತದಲ್ಲಿ ಗಾಯಗೊಂಡು, ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಪ್ರಹ್ಲಾದ್ ಮೋದಿ ಹಾಗೂ ಕುಟುಂಬದವರು ಚೇತರಿಸಿಕೊಳ್ಳುತ್ತಿದ್ದಾರೆ.

ಘಟನೆ ನಡೆದ ತಕ್ಷಣ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಿನ್ನೆಯೇ ದೂರವಾಣಿ ಕರೆ ಮಾಡಿ ಸಹೋದರ ಹಾಗೂ ಕುಟುಂಬದ ಸದಸ್ಯರ ಆರೋಗ್ಯದ ಬಗ್ಗೆ ವಿಚಾರಿಸಿ ಶೀಘ್ರ ಗುಣಮುಖರಾಗುವಂತೆ ಹಾರೈಸಿದ್ದಾರೆ.

ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಇಂದು ಸುದ್ದಿಗೋಷ್ಠಿ ನಡೆಸಿ, ಘಟನೆ ಬಗ್ಗೆ ಮಾಹಿತಿ ಹಂಚಿಕೊಂಡ ಪ್ರಹ್ಲಾದ್ ಮೋದಿ ಅವರು, ನನ್ನ ಸಹೋದರರಾದ, ಪ್ರಧಾನಿ ನರೇಂದ್ರ ಮೋದಿ ಅವರು ತಮಗೆ ಮೊಬೈಲ್ ಮೂಲಕ ಕರೆ ಮಾಡಿ ನಮ್ಮ ಆರೋಗ್ಯ ಸ್ಥಿತಿ, ಯೋಗಕ್ಷೇಮ ವಿಚಾರಿಸಿದರು, ಘಟನೆ ಬಗ್ಗೆ ವಿವರಿಸಿ, ನಾವೆಲ್ಲರೂ ಕ್ಷೇಮವಾಗಿದ್ದೇವೆ, ಗುಣಮುಖರಾಗಿ ಗುಜರಾತ್‌ಗೆ ಮರಳುತ್ತಿರುವುದಾಗಿ ತಿಳಿಸಿದೆ ಎಂದರು.

ಬೆಂಗಳೂರಿನಿಂದ ಸ್ನೇಹಿತ ರಾಜಶೇಖರ ಅವರ ಕಾರಿನಲ್ಲಿ ಮಂಗಳವಾರ ನಾನು ಮತ್ತು ನಮ್ಮ ಕುಟುಂಬದವರು ಮೈಸೂರು ಮೂಲಕ ಬಂಡಿಪುರಕ್ಕೆ ತೆರಳುತ್ತಿದ್ದೆವು. ಆ ವೇಳೆ ಕಾರು ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆಯಿತು. ಮೊಮ್ಮಗನ ಎಡಕಾಲಿನ ಮೂಳೆ ಮುರಿದಿರುವುದನ್ನು ಹೊರತುಪಡಿಸಿದರೆ, ▶ 6ನೇ ಪುಟಕ್ಕೆ



ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಪ್ರಹ್ಲಾದ್ ಮೋದಿ ಅವರು ಸುದ್ದಿಗೋಷ್ಠಿ ನಡೆಸಿದರು. ಶಾಸಕ ಎಸ್.ಎ.ರಾಮದಾಸ್, ಮೆಹುಲ್ ಮೋದಿ, ಜೆಎಸ್‌ಎಸ್ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ.ಮಧು, ಜೆಎಸ್‌ಎಸ್, ವೈದ್ಯಕೀಯ ಕಾಲೇಜು ಪ್ರಾಂಶುಪಾಲ ಡಾ.ಹೆಚ್.ಬಸವನಗೌಡಪ್ಪ ಹಾಗೂ ಇತರರನ್ನು ಚಿತ್ರದಲ್ಲಿ ಕಾಣಬಹುದು.

ವಿಶೇಷ ವಿಮಾನದಲ್ಲಿ ಅಹಮದಾಬಾದ್‌ಗೆ ಮರಳಿದ ಪ್ರಹ್ಲಾದ್ ಮೋದಿ ಕುಟುಂಬ

ಮೈಸೂರು, ಡಿ. 28(ಆರ್‌ಕೆ)– ಮಂಗಳವಾರ ಕಾರು ಅಪಘಾತದಲ್ಲಿ ಗಾಯಗೊಂಡು ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಪ್ರಧಾನಿ ನರೇಂದ್ರ ಮೋದಿ ಅವರ ಸಹೋದರ ಪ್ರಹ್ಲಾದ್ ಮೋದಿ ಹಾಗೂ ಕುಟುಂಬದವರು ಇಂದು ರಾತ್ರಿ ವಿಶೇಷ ವಿಮಾನದಲ್ಲಿ ಅಹಮದಾಬಾದ್‌ಗೆ ಹಿಂದಿರುಗಿದರು. ಆಸ್ಪತ್ರೆಯಿಂದ ಬಿಡುಗಡೆಯಾಗಿ ಮಂಡಕಳ್ಳಿ ಏರ್‌ಪೋರ್ಟ್‌ಗೆ ತೆರಳಿದ ಅವರು, ರಾತ್ರಿ 7.35 ಗಂಟೆಗೆ ವಿಶೇಷ ವಿಮಾನದಲ್ಲಿ ಅಹಮದಾಬಾದ್‌ಗೆ ಪ್ರಯಾಣ ಬೆಳೆಸಿದರು. ಅದಕ್ಕೂ ಮುನ್ನಾ ಪ್ರಹ್ಲಾದ್ ಮೋದಿ ಅವರ ಪುತ್ರಿ ಹಾಗೂ ಅಳಿಯ ಮಧ್ಯಾಹ್ನ ಚಾಮುಂಡಿಬೆಟ್ಟಕ್ಕೆ ತೆರಳಿ ತಾಯಿ ಚಾಮುಂಡೇಶ್ವರಿ ದರ್ಶನ ಪಡೆದರು. ಸಂಜೆ ಆಸ್ಪತ್ರೆಗೆ ಭೇಟಿ ನೀಡಿದ್ದ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್, ಪ್ರಹ್ಲಾದ್ ಮೋದಿ ಅವರನ್ನು ಭೇಟಿ ಮಾಡಿ ಆರೋಗ್ಯ ವಿಚಾರಿಸಿದ ಬಳಿಕ ಮಂಡಕಳ್ಳಿ ಏರ್‌ಪೋರ್ಟ್‌ಗೆ ಕುಟುಂಬದವರನ್ನು ಬೀಳ್ಕೊಟ್ಟರು. ನಾಳೆ (ಗುರುವಾರ) ಬೆಳಗ್ಗೆ ಆಸ್ಪತ್ರೆಯಿಂದ ಡಿಸ್‌ಚಾರ್ಜ್ ಆಗಿ ಅಹಮದಾಬಾದ್‌ಗೆ ಹಿಂದಿರುಗುವುದಾಗಿ ಪ್ರಹ್ಲಾದ್ ಮೋದಿ ಬೆಳಗ್ಗೆ ಸುದ್ದಿಗೋಷ್ಠಿಯಲ್ಲಿ ಹೇಳಿದ್ದರು. ಆದರೆ ಅವರ ತಾಯಿ ಹೀರಾ ಬೆನ್ ಅವರ ಆರೋಗ್ಯದಲ್ಲಿ ವ್ಯತ್ಯಯವಾಗಿ ಆಸ್ಪತ್ರೆಗೆ ದಾಖಲಾಗಿರುವ ಹಿನ್ನೆಲೆಯಲ್ಲಿ ಇಂದೇ ವಾಪಸ್ಸಾದರು ಎಂದು ಹೇಳಲಾಗಿದೆ.

ಮೈಸೂರು ಮಿತ್ರ ಗುರುವಾರ 29 ಡಿಸೆಂಬರ್ 2022

ಸಮಾಜಕ್ಕೆ ಪೇಜಾವರ ಶ್ರೀಗಳ ಕೊಡುಗೆ ಅನನ್ಯ

ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್ ಸ್ಮರಣೀಯ ನುಡಿ



ಮೈಸೂರು, ಡಿ. 28– ಉಡುಪಿಯ ಪೇಜಾವರಮಠದ ಹಿಂದಿನ ಯತಿಗಳಾಗಿದ್ದ ವಿಶ್ವೇಶತೀರ್ಥ ಸ್ವಾಮೀಜಿ ಸಮ ಸಮಾಜ ನಿರ್ಮಾಣದ ಕನಸು ಕಂಡಿದ್ದರು. ಆ ನಿಟ್ಟಿನಲ್ಲಿ ಅವರು ಅನೇಕ ಹೋರಾಟ ಮಾಡಿದ್ದಾರೆ ಎಂದು ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ. ಪ್ರಕಾಶ್ ಹೇಳಿದರು.

ನಗರದ ಸರಸ್ವತಿಪುರಂನಲ್ಲಿರುವ ಶ್ರೀ ಕೃಷ್ಣಧಾಮ ಆವರಣದಲ್ಲಿ ಶ್ರೀ ಕೃಷ್ಣ ಮಿತ್ರ ಮಂಡಳಿ ಹಾಗೂ ಮೈಸೂರು ಮತ್ತು ಜಿಲ್ಲಾ ಬ್ರಾಹ್ಮಣ ಸಂಘ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಪೇಜಾವರ ವಿಶ್ವೇಶತೀರ್ಥ ಶ್ರೀಪಾದರ ತೃತೀಯ ಸಂಸ್ಮರಣಾರ್ಥ ಪೇಜಾವರ ವಿಶ್ವೇಶತೀರ್ಥ ನಮನ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, ಪೇಜಾವರ ಶ್ರೀಗಳ ಕನಸು ನಾವೆಲ್ಲರೂ ನನಸು ಮಾಡುವ ಅಗತ್ಯವಿದೆ. ಎಲ್ಲ ಸಮಾಜದವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಮಾಜ ಸುಧಾರಣೆಗೆ ಶ್ರೀಗಳು ಅಪಾರವಾಗಿ ಶ್ರಮಿಸಿದ್ದಾರೆ ಎಂದು ಹೇಳಿದರು.

ನಂತರ ಮಾತನಾಡಿದ ಶ್ರೀ ಕೃಷ್ಣ ಮಿತ್ರ ಮಂಡಳಿ ಅಧ್ಯಕ್ಷ ಸುಬ್ರಮಣ್ಯ ತಂತ್ರಿ, ಪೇಜಾವರ ಸ್ವಾಮೀಜಿ ಎಲ್ಲರ ಪ್ರೀತಿ ಸಂಪಾದಿಸಿದ್ದರು. ಪೇಜಾವರ ಸ್ವಾಮೀಜಿ ಅವರು ಜಾತಿ ಸೀಮಿತ ಸ್ವಾಮೀಜಿ ಎನಿಸದೇ ಎಲ್ಲ ವರ್ಗದ ಜನರ ಪ್ರೀತಿಗೆ ಪಾತ್ರರಾಗಿದ್ದರು. ಯತಿಗಳು ಸಾಮರಸ್ಯ ನಡಿಗೆ ಮೂಲಕ ಸಮಾಜದ ಒಗ್ಗಟ್ಟಿಗೆ ಶ್ರಮಿಸುವ ಕೆಲಸವನ್ನು ಮಾಡುವ ಜತೆಗೆ ಪ್ರಕೃತಿ ಸಂಕಷ್ಟ ಸಂದರ್ಭದಲ್ಲಿ ಅವರ ಸೇವೆಗೆ ಸದಾ ಸಿದ್ಧರಾಗಿ ಪಾದಯಾತ್ರೆ ನಡೆಸಿ ಜನರ ಬದುಕಿಗೆ ಚೈತನ್ಯ ತುಂಬುವ ಕೆಲಸ ಮಾಡುತ್ತಿದ್ದರು. ಯಾವುದೇ ಸಮಸ್ಯೆ ಎದುರಾದರೂ ಅದಕ್ಕೆ ಸೂಕ್ತ ಪರಿಹಾರ ಕೊಡುವ ಶಕ್ತಿ ಹೊಂದಿದ್ದರು ಎಂದು ಬಣ್ಣಿಸಿದರು.

ಈ ಸಂದರ್ಭದಲ್ಲಿ ಶ್ರೀ ಇಳೈಆಳ್ವಾರ್ ಸ್ವಾಮೀಜಿ, ಕರ್ನಾಟಕ ಸರ್ಕಾರ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ರಾಜ್ಯ ನಿರ್ದೇಶಕ ಎಂ.ಆರ್.ಬಾಲಕೃಷ್ಣ, ಉಪಾಧ್ಯಕ್ಷ ಪುಟ್ಟಣ್ಣ ಭಟ್, ಕಾರ್ಯದರ್ಶಿ ಶ್ರೀ ವತ್ಸರಾವ್, ರಾಮಕೃಷ್ಣ, ವಸುದೇವ್ ಭಟ್, ಕಡಕೊಳ ಜಗದೀಶ್, ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ಪ್ರಧಾನ ಕಾರ್ಯದರ್ಶಿ ವಿಕ್ರಮ ಅಯ್ಯಂಗಾರ್, ಸಂಘಟನಾ ಕಾರ್ಯದರ್ಶಿ ಅಜಯ್ ಶಾಸ್ತ್ರಿ, ವಿನಯ್ ಕಣಗಾಲ್, ರಂಗನಾಥ್, ಸುಚೀಂದ್ರ, ಚಕ್ರಪಾಣಿ, ಅಮೋಘ ನಾಗರಾಜ್ ಹಾಗೂ ಇನ್ನಿತರರು ಭಾಗವಹಿಸಿದ್ದರು.



ಇಂದಿರಾ ಗಾಂಧಿ ಕಾಂಗ್ರೆಸ್ ಭವನದಲ್ಲಿ ಕೆಪಿಸಿಸಿ ಸಂಯೋಜಕರಾದ ಸಿ.ಎಸ್.ರಘು ಅವರ ಹುಟ್ಟುಹಬ್ಬವನ್ನು ಆಚರಿಸಲಾಯಿತು. ಈ ವೇಳೆ ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಮಾಜಿ ಶಾಸಕ ವಾಸು, ಮುಖಂಡರಾದ ಶಿವಣ್ಣ, ಹರೀಶ್‌ಗೌಡ, ಮಾಜಿ ನಗರಪಾಲಿಕೆ ಸದಸ್ಯ ರಘುರಾಜೇ ಅರಸು, ಕಾಂಗ್ರೆಸ್ ದಕ್ಷಿಣ ಪದವೀಧರರ ಘಟಕದ ಅಧ್ಯಕ್ಷ ರಾಘವೇಂದ್ರ, ಎನ್‌ಎಸ್‌ಯುಐ ಪ್ರಧಾನ ಕಾರ್ಯದರ್ಶಿ ನಾಗೇಶ್, ಕರಿಯಪ್ಪ, ವಿನಯ್, ಹರೀಶ್, ರೋಹಿತ್, ಭೈರೇಗೌಡ, ಶಶಿ ಮತ್ತಿತರರು ಇದ್ದರು.

ಪಂಚಮಸಾಲಿ ಲಿಂಗಾಯತಗೌಡರಿಗೆ 2ಎ ಮೀಸಲಾತಿ ಬೇಡಿಕೆಗೆ ವಿರೋಧ ಸಲ್ಲದು




ಮೈಸೂರು, ಡಿ.28 (ಆರ್‌ಕೆಬಿ)– ಪಂಚಮಸಾಲಿ ಲಿಂಗಾಯಿತರಿಗೆ 2ಎ ಮೀಸಲಾತಿ ಕೊಡಬಾರದು ಎಂಬ ವಿವಿಧ ಕಾಯಕ ಸಮಾಜಗಳ ಮುಖಂಡರ ಹೇಳಿಕೆಯನ್ನು ಲಿಂಗಾಯಿತಗೌಡ ಮಹಾಸಭಾ ರಾಜ್ಯ ಕಾರ್ಯದರ್ಶಿ ಕೇಬಲ್ ಮಹೇಶ್ ಖಂಡಿಸಿದ್ದಾರೆ.

ಮೈಸೂರು ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಂಚಮಸಾಲಿ ಲಿಂಗಾಯಿತರು ಬಹುಪಾಲು ಕೃಷಿಯನ್ನೇ ನಂಬಿ ಬದುಕುತ್ತಿದ್ದಾರೆ. ಹಳ್ಳಿಗಳಲ್ಲಿ ನಮ್ಮ ಸಮುದಾಯದ ಆರ್ಥಿಕ ಪರಿಸ್ಥಿತಿ ಶೋಚನೀಯವಾಗಿದೆ. ಸಾಲ ಮಾಡಿ ವ್ಯವಸಾಯದಲ್ಲಿ ತೊಡಗಿರುವ ಈ ಸಮುದಾಯದ ಮಕ್ಕಳಿಗೆ ಮೀಸಲಾತಿ ಸಿಗದೆ ವಿದ್ಯಾಭ್ಯಾಸ ಹಾಗೂ ಉದ್ಯೋಗದಲ್ಲಿ ತೊಂದರೆ ಅನುಭವಿಸುತ್ತಿದ್ದಾರೆ. 2ಎ ಮೀಸಲಾತಿ ಸಿಕ್ಕಿದರೆ ಈ ಸಮುದಾಯದ ಮಕ್ಕಳಿಗೆ ವಿದ್ಯಾಭ್ಯಾಸ ಮತ್ತು ಉದ್ಯೋಗದಲ್ಲಿ ಅನುಕೂಲವಾಗುತ್ತದೆ. ಹೀಗಾಗಿ ಪಂಚಮಸಾಲಿ ಲಿಂಗಾಯಿತಗೌಡ, ಮಾಲೇಗೌಡ, ದೀಕ್ಷಗೌಡ ಛಳಿ–ಲಿಂಗಾಯಿತ ಒಳ ಪಂಗಡಗಳಿಗೆ 2ಎ ಮೀಸಲಾತಿ ನೀಡುವಂತೆ ಹಕ್ಕೊತ್ತಾಯ ಮಂಡಿಸಿ, ಹೋರಾಟ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಕೆಲವು ಪಟ್ಟಭದ್ರ ಶಕ್ತಿಗಳು ಪಂಚಮಸಾಲಿ ಲಿಂಗಾಯಿತರಿಗೆ 2ಎ ಮೀಸಲಾತಿ ನೀಡುವುದನ್ನು ವಿರೋಧಿಸುತ್ತಿವೆ. ಬೇರೆಯವರಿಗೆ ಮೀಸಲಾತಿ ಕೊಡುವುದನ್ನು ನಾವೆಂದಿಗೂ ವಿರೋಧಿಸಿಲ್ಲ. ಸಂವಿಧಾನದ ಅಡಿಯಲ್ಲಿ ಪ್ರತಿಯೊಬ್ಬರಿಗೂ ಮೀಸಲಾತಿ ಕೊಡುವುದು ಸರ್ಕಾರದ ಜವಾಬ್ದಾರಿಯಾಗಿದೆ. ಹಾಗಾಗಿ ನಾವು 2ಎ ಮೀಸಲಾತಿ ಕೇಳುತ್ತಿದ್ದೇವೆ. ಇದಕ್ಕೆ ವಿರೋಧಿಸುವುದರಲ್ಲಿ ಅರ್ಥವಿಲ್ಲ. ಆದ್ದರಿಂದ ಸರ್ಕಾರ ಬೇರೆ ಸಮುದಾಯಗಳ ಮೀಸಲಾತಿಗೆ ತೊಂದರೆಯಾಗದ ರೀತಿಯಲ್ಲಿ ಪಂಚಮಸಾಲಿ ಲಿಂಗಾಯಿತ ಗೌಡ ಸಮುದಾಯವನ್ನು 2ಎ ಮೀಸಲಾತಿಗೆ ಒಳಪಡಿಸಬೇಕು ಎಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಸಿದ್ದೇಶ್‌ಬಾಬು (ಗೊಂಬೆ), ವಿರೂಪಾಕ್ಷಮ್ಮ, ಕಣೇನೂರು ಜಗದೀಶ್, ಬಸವರಾಜೇಂದ್ರಸ್ವಾಮಿ ಉಪಸ್ಥಿತರಿದ್ದರು.

ಹಿರಿಯ ನಟ ಶ್ರೀನಾಥ್ ಜನ್ಮ ದಿನಾಚರಣೆ



ಮೈಸೂರು, ಡಿ.28(ಆರ್‌ಕೆಬಿ)– ಹಿರಿಯ ನಟ ಪ್ರಣಯರಾಜ ಶ್ರೀನಾಥ್ ಅವರ 79ನೇ ಹುಟ್ಟುಹಬ್ಬವನ್ನು ಮೈಸೂರು ಕನ್ನಡ ವೇದಿಕೆ ಆಶ್ರಯದಲ್ಲಿ ಮೈಸೂರಿನ ಲಲಿತ ಕಲಾ ಶಾಲೆಯಲ್ಲಿ ಪುಸ್ತಕ ಮತ್ತು ಸಿಹಿ ವಿತರಿಸುವ ಮೂಲಕ ಆಚರಿಸಲಾಯಿತು.

ಸದಾ ನಗುಮುಖದ ನಟ ಶ್ರೀನಾಥ್ ಕೌಟುಂಬಿಕ, ಪೌರಾಣಿಕ ಚಿತ್ರಗಳಲ್ಲಿ ಲೀಲಾಜಾಲವಾಗಿ ಅಭಿನಯಿಸಿ ಸಿನಿಪ್ರಿಯರ ಮೆಚ್ಚುಗೆ ಗಳಿಸಿದವರು. ಅವರು ದೀರ್ಘಕಾಲ ಚಿತ್ರಗಳಲ್ಲಿ ನಟಿಸುವಂತಾಗಲೀ ಎಂದು ಹಾರೈಸಲಾಯಿತು. ಈ ವೇಳೆ ಮಾತನಾಡಿದ ವೇದಿಕೆ ಅಧ್ಯಕ್ಷ ಎಲ್.ಬಾಲಕೃಷ್ಣ, ಕಳೆದ ಐದು ದಶಕಗಳಿಂದ ಕನ್ನಡ ಚಿತ್ರಗಳಲ್ಲಿ ಅಭಿನಯಿಸಿರುವ ಶ್ರೀನಾಥ್ ಅವರಿಗೆ ಸರ್ಕಾರ ಪದ್ಮಶ್ರೀ ಪ್ರಶಸ್ತಿ ನೀಡಿ ಗೌರವಿಸಬೇಕು ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ನಾಲಾಬೀದಿ ರವಿ, ಗುರುಬಸಪ್ಪ, ಗಿರಿಜಮ್ಮ, ಗೋಪಿ, ಮದನ್, ಕಿರಣ್, ಶಿಕ್ಷಕ ಪರಮೇಶ್ ಉಪಸ್ಥಿತರಿದ್ದರು.

ಜ.1, ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ



ಮೈಸೂರು, ಡಿ.28– ಜಿಲ್ಲಾಡಳಿತ ಮತ್ತು ಕನ್ನಡ ಸಂಸ್ಕೃತಿ ಇಲಾಖೆ ವತಿಯಿಂದ ಜನವರಿ 1ರಂದು ಬೆಳಗ್ಗೆ 11.30 ಗಂಟೆಗೆ ಕಲಾಮಂದಿರದ ಆವರಣದಲ್ಲಿ ಶ್ರೀ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಎಲ್.ನಾಗೇಂದ್ರ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಮೇಯರ್ ಶಿವಕುಮಾರ್, ಸಂಸದರಾದ ಪ್ರತಾಪ್‌ಸಿಂಹ, ವಿ.ಶ್ರೀನಿವಾಸ್‌ಪ್ರಸಾದ್, ಸುಮಲತಾ ಅಂಬರೀಶ್, ವಿಧಾನಸಭೆ–ವಿಧಾನಪರಿಷತ್‌ನ ಶಾಸಕರು, ನಿಗಮ ಮಂಡಳಿ ಅಧ್ಯಕ್ಷರು ಉಪಸ್ಥಿತರಿರುವರು.

ವೈಮನಸ್ಸುಗಳ ದೂರ ಮಾಡಿ ಪಕ್ಷ ಸಂಘಟಿಸೋಣ

● ಮುಖಂಡರು, ಕಾರ್ಯಕರ್ತರಿಗೆ ಕೆಪಿಸಿಸಿ ಕಾರ್ಯಾಧ್ಯಕ್ಷ ಧ್ರುವನಾರಾಯಣ್ ಕಿವಿಮಾತು

● ಮೈಸೂರು ಕಾಂಗ್ರೆಸ್ ಕಚೇರಿಯಲ್ಲಿ 137ನೇ ಕಾಂಗ್ರೆಸ್ ಸಂಸ್ಥಾಪನಾ ದಿನಾಚರಣೆ



ಮೈಸೂರು,ಡಿ.28(ಎಂಟಿವೈ)– ವೈಮನಸ್ಸುಗಳಿದ್ದರೆ ದೂರ ಸರಿಸಿ, ಸಂಕುಚಿತ ಮನೋಭಾವವನ್ನು ಬದಿಗೊತ್ತಿ ಪಕ್ಷವನ್ನು ಸಂಘಟಿಸಲು ಎಲ್ಲರೂ ಒಗ್ಗೂಡಬೇಕು ಎಂದು ಮಾಜಿ ಸಂಸದ, ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ್ ಸಲಹೆ ನೀಡಿದ್ದಾರೆ.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಬುಧವಾರ ಆಯೋಜಿಸಿದ್ದ 137ನೇ ಕಾಂಗ್ರೆಸ್ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ಹಿಂದೆ ಅಧಿಕಾರದಲ್ಲಿದ್ದಾಗ ಹಲವು ಜನಪರ ಕಾರ್ಯಕ್ರಮ ಜಾರಿಗೆ ತಂದು ಶೋಷಿತ ಸಮುದಾಯ ಒಳಗೊಂಡಂತೆ ಎಲ್ಲಾ ವರ್ಗದ ಬಡ ಜನರಿಗೆ ನೆರವಾಗಿತ್ತು. ಆದರೆ, ಕಳೆದ ವಿಧಾನಸಭಾ ಹಾಗೂ ಲೋಕಸಭಾ ಚುನಾವಣೆಗಳಲ್ಲಿ ಕಾಂಗ್ರೆಸ್‌ಗೆ ಹಿನ್ನಡೆಯಾಗಿದೆ. ಮೊದಲ ಬಾರಿಗೆ ಕಾಂಗ್ರೆಸ್ ಎರಡು ಅಂಕಿಗಳನ್ನು ದಾಟಲು ಸಾಧ್ಯವಾಗದ ಸ್ಥಿತಿ ನಿರ್ಮಾಣವಾಗಿದೆ. ಇದನ್ನು ಪಕ್ಷದ ಕಾರ್ಯಕರ್ತರು, ಮುಖಂಡರು ಸವಾಲಾಗಿ ಪರಿಗಣಿಸಿ ಪಕ್ಷವನ್ನು ಸಂಘಟಿಸಬೇಕು. ಪಕ್ಷ ಅಧಿಕಾರಕ್ಕೆ ಬಂದರೆ ಎಲ್ಲರಿಗೂ ಅವಕಾಶ ಸಿಗಲಿದೆ. ಇಲ್ಲದಿದ್ದರೆ ಕಷ್ಟವಾಗಲಿದೆ. ಪಕ್ಷದಲ್ಲಿ ಮುಖಂಡರಿಗೆ ಸ್ಥಾನ ಸಿಕ್ಕಿದರೂ ಫಲಿತಾಂಶ ಹೊರ ಬೀಳದಿದ್ದರೆ ಯಾವುದೇ ಪ್ರಯೋಜನವಿಲ್ಲ. ಕೊಟ್ಟ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಿ ಪಕ್ಷದ ಅಭ್ಯರ್ಥಿಗಳಿಗೆ ಪ್ರತಿಯೊಂದು ಬೂತ್‌ಗಳಲ್ಲೂ ಹೆಚ್ಚಿನ ಲೀಡ್ ತಂದುಕೊಡಲು ಶ್ರಮಿಸಬೇಕು. ವ್ಯವಸಾಯ ಮಾಡಿದವರಿಗೆ ಬೆಳೆ ಸಿಗಲಿದೆ. ಅದೇ ರೀತಿ ವ್ಯವಸಾಯ ಮಾಡದೆ ಇದ್ದರೆ ಪಾರ್ಥೇನಿಯಂ ಗಿಡ ಬೆಳೆಯುತ್ತದೆಯೇ ಹೊರತು, ಬೆಳೆ ಸಿಗುವುದಿಲ್ಲ. ಹಾಗಾಗಿ ಪಕ್ಷದ ಕಾರ್ಯಕರ್ತರು ಚುನಾವಣೆಯನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು ಎಂದರು.

ದೇಶದ ಅಭಿವೃದ್ಧಿ ಕಾಂಗ್ರೆಸ್ ಕೊಡುಗೆ ಅಪಾರ: ಆಧುನಿಕ ಭಾರತದ ಪಿತಾಮಹ ಜವಾಹರಲಾಲ್ ನೆಹರು. ದೇಶಕ್ಕೆ ಹಲವಾರು ಕೊಡುಗೆಗಳು, ಯೋಜನೆಗಳನ್ನು ನೀಡಿದ ನೆಹರು ಅವರ ಹೆಸರನ್ನು ಹೇಳುವುದಕ್ಕೆ ಬಿಜೆಪಿಯವರಲ್ಲಿ ಸಂಕುಚಿತ ಮನೋಭಾವ ಕಾಡುತ್ತಿದೆ. ನೆಹರು ಅವರು ಪಂಚವಾರ್ಷಿಕ ಯೋಜನೆಗಳನ್ನು ಜಾರಿಗೆ ತಂದು ಬಲಿಷ್ಠ ಭಾರತವನ್ನು ನಿರ್ಮಾಣ ಮಾಡಿದರು. ಆದರೆ, ಅವರ ಸಾಧನೆಗಳ ಬಗ್ಗೆ ಮಾತನಾಡಲು ಮತ್ತು ಚೀನಾ–ಭಾರತ ಸಂಘರ್ಷದ ಬಗ್ಗೆ ಸಂಸತ್ತಿನಲ್ಲಿ ಚರ್ಚೆಗೆ ಅವಕಾಶ ಮಾಡಿಕೊಡದೆ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಅಣಕಿಸುವ ಪ್ರಯತ್ನ ನಡೆದಿದೆ ಎಂದು ಕಿಡಿಕಾರಿದರು.

ದೇಶಕ್ಕೆ ಸ್ವಾತಂತ್ರ್ಯ ಬಂದಾಗ ಬ್ರಿಟಿಷರು ಎಲ್ಲವನ್ನು ಹೊತ್ತೊಯ್ದ ಕಾರಣ ನಮ್ಮಲ್ಲಿ ಸಂಪತ್ತು ಇರಲಿಲ್ಲ. ಮೊದಲ ಪ್ರಧಾನಿಯಾಗಿದ್ದ ನೆಹರು ಅವರು ಸಂಪತ್ತನ್ನು ಕ್ರೋಢೀಕರಿಸಿ ಅಭಿವೃದ್ಧಿಗೆ ಆದ್ಯತೆ ನೀಡಿದರು. ಆಹಾರ ಉತ್ಪಾದನೆಯಲ್ಲಿ ಭಾರತ ಪ್ರಗತಿ ಕಾಣಲು ಕಾಂಗ್ರೆಸ್ ಕೊಡುಗೆ ಅಪಾರವಾಗಿದೆ. ಹಸಿರು ಕ್ರಾಂತಿ ಮೂಲಕ ದೇಶ ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬಿಯಾಗಲು ಕಾರಣವಾಯಿತು. ಕಾಂಗ್ರೆಸ್ 1985ರಲ್ಲಿ ಸ್ಥಾಪನೆಯಾಗಿದ್ದು, ಪ್ರತಿ ವರ್ಷ ಶ್ರದ್ಧಾಭಕ್ತಿಯಿಂದ ಆಚರಣೆ ಮಾಡಿಕೊಂಡು ಬರುತ್ತಿದ್ದೇವೆ. ಕಾಂಗ್ರೆಸ್ ಸ್ವಾತಂತ್ರ್ಯಕ್ಕಾಗಿ ಉದಯವಾದ ಪಕ್ಷ. ಸ್ವಾತಂತ್ರ್ಯ ಪೂರ್ವದಲ್ಲಿ ಸ್ವಾತಂತ್ರ್ಯಕ್ಕೋಸ್ಕರ ಹಾಗೂ ನಂತರದಲ್ಲಿ ಸುಭದ್ರ ಭಾರತದ ನಿರ್ಮಾಣಕ್ಕಾಗಿ ಶ್ರಮಿಸಿದೆ. ಹಲವಾರು ಯೋಜನೆಗಳನ್ನು ಜಾರಿಗೆ ತರುವ ಮೂಲಕ ಅಭಿವೃದ್ಧಿಗೆ ದೊಡ್ಡ ಕೊಡುಗೆಯನ್ನು ನೀಡಿದೆ. ಹಲವಾರು ಸಂಸ್ಥೆಗಳನ್ನು ಹುಟ್ಟು ಹಾಕಿ ದುಡಿಯುವ ವರ್ಗಗಳಿಗೆ ಉದ್ಯೋಗ ನೀಡಿ ಭವ್ಯ ಭಾರತ ನಿರ್ಮಾಣಕ್ಕೆ ಕಾರಣವಾಗಿದೆ ಎಂದು ಗುಣಗಾನ ಮಾಡಿದರು.

ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ ಮಾತನಾಡಿ, ರಾಜ್ಯ ಬಿಜೆಪಿ ಸರ್ಕಾರದ ಸಾಕಷ್ಟು ಲೋಪದೋಷಗಳ ಸರಮಾಲೆಯೇ ಇದೆ. ಆಡಳಿತ ವೈಫಲ್ಯ ತುಂಬಿ ತುಳುಕಿದೆ. ಒಂದು ಕಾರ್ಯಕ್ರಮ ಕೊಟ್ಟಿದ್ದೇವೆ ಅಂತ ಬಿಜೆಪಿಯವರು ಹೇಳಲಾಗದ ಸ್ಥಿತಿಯಲ್ಲಿ ಇದ್ದಾರೆ. ಮುಂದಿನ ಚುನಾವಣೆಯಲ್ಲಿ ಪಕ್ಷವನ್ನು ಅಧಿಕಾರಕ್ಕೆ ತರಲು ಎಲ್ಲರೂ ಒಗ್ಗಟ್ಟಿನಿಂದ ಕೆಲಸಮಾಡಬೇಕು. ಮೈಸೂರಿನ ಮೂರು ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆಲುವು ಸಾಧಿಸಬೇಕು. ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ವಾಸು, ಎಂ.ಕೆ.ಸೋಮಶೇಖರ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಬಿ.ಆರ್.ಚಂದ್ರಮೌಳಿ, ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ಮುಖಂಡ ಕೆ.ಹರೀಶ್‌ಗೌಡ, ಮಾಜಿ ಮೇಯರ್‌ಗಳಾದ ನಾರಾಯಣ್, ಮೋದಾಮಣಿ, ಪುಷ್ಪಲತಾ ಚಿಕ್ಕಣ್ಣ, ಟಿ.ಬಿ.ಚಿಕ್ಕಣ್ಣ, ಎಂ.ಸಿ.ರಾಜೇಶ್ವರಿ ಪುಟ್ಟಸ್ವಾಮಿ, ಮಾಜಿ ಉಪಮೇಯರ್ ಹೆಚ್.ಎಂ.ಶಾಂತಕುಮಾರಿ, ಪ್ರಧಾನ ಕಾರ್ಯದರ್ಶಿಗಳಾದ ಎಂ.ಶಿವಣ್ಣ, ಈಶ್ವರ್ ಚಕ್ಕಡಿ, ಮೈಸೂರು ನಗರ ಮಾಜಿ ಅಧ್ಯಕ್ಷ ಟಿ.ಎಸ್.ರವಿಶಂಕರ್, ಜಿ.ಪಂ ಮಾಜಿ ಸದಸ್ಯ ಎಸ್.ಅರುಣ್‌ಕುಮಾರ್, ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವಿದ್ಯಾ, ಎಸ್‌ಸಿ ಘಟಕದ ರಮೇಶ್, ಮಂಜುನಾಥ್, ಶಿವಪ್ರಸಾದ್, ಸುನಂದಕುಮಾರ್, ಸೇವಾದಳದ ಮುಖ್ಯಸ್ಥ ಶಿವಶಂಕರ್ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ಕುವೆಂಪು ಜನ್ಮದಿನ: ಭಾವಚಿತ್ರಕ್ಕೆ ಮೇಯರ್ ಪುಷ್ಪ ನಮನ



ಮೈಸೂರು,ಡಿ.28(ಆರ್‌ಕೆಬಿ)– ರಾಷ್ಟ್ರಕವಿ ಕುವೆಂಪು ಅವರ ಹುಟ್ಟುಹಬ್ಬದ ಅಂಗವಾಗಿ ಕರ್ನಾಟಕ ಸೇನಾಪಡೆ ಮೈಸೂರು ಜಿಲ್ಲಾ ಘಟಕ ಬುಧವಾರ ಮೈಸೂರಿನ ಅಗ್ರಹಾರ ವೃತ್ತದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮೇಯರ್ ಶಿವಕುಮಾರ್ ಮತ್ತು ಮುಡಾ ಅಧ್ಯಕ್ಷ ಯಶಸ್ವಿ ಎಸ್. ಸೋಮಶೇಖರ್, ಕುವೆಂಪು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

ನಂತರ ಮಾತನಾಡಿದ ಮೇಯರ್ ಶಿವಕುಮಾರ್, ಕುವೆಂಪು ಅವರು ತಮ್ಮ ಬರಹಗಳ ಮೂಲಕ ಸಮಾಜದ ಅಸಮಾನತೆ ವಿರುದ್ಧ ಸಮರ ಸಾರಿದ್ದಲ್ಲದೆ, ಸಮಾಜಕ್ಕೆ ವಿಶ್ವ ಮಾನವ ಸಂದೇಶ ಸಾರಿದರು. ಕನ್ನಡ ನೆಲ, ಜಲ, ಭಾಷೆಗಾಗಿ ಜೀವನ ಪರ್ಯಂತ ಹೋರಾಟ ನಡೆಸಿದರು ಎಂದು ಕುವೆಂಪು ಅವರನ್ನು ಸ್ಮರಿಸಿದರು.

ಮುಡಾ ಅಧ್ಯಕ್ಷ ಯಶಸ್ವಿ ಎಸ್.ಸೋಮಶೇಖರ್ ಮಾತನಾಡಿ, ರಾಜ್ಯ ಕಂಡ ಮಹಾನ್ ಚೇತನ ಕುವೆಂಪು. ಕನ್ನಡಕ್ಕೆ ಮೊಟ್ಟ ಮೊದಲ ಜ್ಞಾನಪೀಠ ಪ್ರಶಸ್ತಿ ತಂದವರು ಎಂದು ಸ್ಮರಿಸಿದರು. ಇದೇ ವೇಳೆ ರಾಜ್ಯ ಒಕ್ಕಲಿಗರ ಸಂಘದ ಕಾರ್ಯಾಧ್ಯಕ್ಷ ಸಿ.ಜಿ.ಗಂಗಾಧರ್ ಸಿಹಿ ವಿತರಿಸಿದರು. ಚಿಂತಕ ಡಾ.ರಘುರಾಂ ವಾಜಪೇಯಿ, ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ಕಾಂಗ್ರೆಸ್ ಮುಖಂಡ ಎನ್.ಎಂ.ನವೀನ್‌ಕುಮಾರ್, ಲಯನ್ಸ್‌ಕ್ಲಬ್ ಅಧ್ಯಕ್ಷ ಸುರೇಶ್ ಗೋಲ್ಡ್, ಸೇನಾ ಪಡೆ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್‌ಗೌಡ, ಒಕ್ಕಲಿಗರ ಸಂಘದ ಕಾರ್ಯದರ್ಶಿ ಚೇತನ್, ಮುಡಾ ಸದಸ್ಯೆ ಎಂ.ಲಕ್ಷ್ಮೀದೇವಿ, ಮುಖಂಡರಾದ ಡಾ.ಶಾಂತರಾಜೇಅರಸ್, ಪಿ.ಪ್ರಜೀಶ್, ಯೋಗೇಶ್ ಉಪ್ಪಾರ್, ಸಿ.ಹೆಚ್.ಕೃಷ್ಣಯ್ಯ, ಪ್ರಭುಶಂಕರ್, ಎಳನೀರು ರಾಮಣ್ಣ, ಚಂದ್ರು, ದರ್ಶನ್‌ಗೌಡ, ಪ್ರಭಾಕರ್, ಕೃಷ್ಣಮೂರ್ತಿ ಇನ್ನಿತರರು ಉಪಸ್ಥಿತರಿದ್ದರು.


ವಿಕಲಚೇತನರ ಬಸ್ ಪಾಸ್‌ಗೆ ಮಾನ್ಯತೆ

ಮೈಸೂರು,ಡಿ.28–ವಿಕಲಚೇತನರಿಗೆ ನೀಡಲಾಗಿರುವ 2023ರ ರಿಯಾಯತಿ ಬಸ್ ಪಾಸನ್ನು ಫೆ.28ರವರೆಗೆ ಪ್ರಯಾಣಿಸಲು ಅನುಮತಿಸಿದೆ. ಪಾಸ್‌ಗಳನ್ನು ಕೆ.ಆರ್.ನಗರ, ಪಿರಿಯಾಪಟ್ಟಣ, ಹೆಚ್.ಡಿ.ಕೋಟೆ, ಸರಗೂರು, ಹುಣಸೂರು ಮತ್ತು ನಗರ ಸಾರಿಗೆ ಬಸ್ ನಿಲ್ದಾಣದಲ್ಲಿ ನವೀಕರಿಸಲಾಗುವುದು. https://sevasinduservices.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದು. ಜೊತೆಗೆ 660 ರೂ.ಗಳನ್ನು ನಗದು ರೂಪದಲ್ಲಿ ಪಾವತಿಸಿ 2 ಸ್ಟ್ಯಾಂಪ್ ಅಳತೆಯ ಇತ್ತೀಚಿನ ಭಾವಚಿತ್ರವನ್ನು ಸಲ್ಲಿಸಿ ರಿಯಾಯಿತಿ ಪಾಸ್‌ಗಳನ್ನು ನವೀಕರಿಸಿಕೊಳ್ಳಬಹುದು.



ತೆಲುಗು ರೆಡ್ಡಿ ಸಂಘದ 2023ನೇ ನೂತನ ವರ್ಷದ ಕ್ಯಾಲೆಂಡರ್ ಅನ್ನು ಎಪಿಎನ್ ಪ್ರಾಪರ್ಟೀಸ್ ವ್ಯವಸ್ಥಾಪಕ ನಿರ್ದೇಶಕ ಎ.ಪಿ.ನಾಗೇಶ್ ಬಿಡುಗಡೆಗೊಳಿಸಿದರು. ಈ ವೇಳೆ ಸಮಾಜ ಸೇವಕ ಲೀಲಾದರ್, ತೆಲುಗು ರೆಡ್ಡಿ ಸಂಘದ ಅಧ್ಯಕ್ಷ ಜಿ ಗುರುಪ್ರಸಾದ್, ಕಾರ್ಯದರ್ಶಿ ಹರೀಶ್ ರೆಡ್ಡಿ, ಉಪಾಧ್ಯಕ್ಷರಾದ ವಿಶ್ವನಾಥ್ ಶಿವಣ್ಣ, ಗುರುರಾಜ, ಪದಾಧಿಕಾರಿಗಳು, ಮುಖಂಡರು ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

29.12.2022 ಗುರುವಾರ, ಮಳೆ ನಕ್ಷತ್ರ: ಮೂಲ, 16.12.2022ರಿಂದ 29.12.2022 ಶ್ರೀ ಶುಭಕೃತ ನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಮಾರ್ಗಶಿರ ಮಾಸ, ಶುಕ್ಲ ಪಕ್ಷ, ತಿಥಿ: ಸಪ್ತಮಿ, ನಕ್ಷತ್ರ: ಪೂಭಾ, ರಾಹುಕಾಲ: ಮಧ್ಯಾಹ್ನ 1.30ರಿಂದ 3ರವರೆಗೆ

■ **ಪಾಳ್ಯಂ ಶ್ರೀ ಶಾಸ್ತಾ ಪೀಠಂ ಅಭಯದಾಯಕ ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನಂ:** ಧನುರ್ಮಾಸದ ವಿಶೇಷ ಪೂಜಾ ಕಾರ್ಯಕ್ರಮ, ಲಕ್ಷಾರ್ಚನಾ ಮತ್ತು ವಾರ್ಷಿಕ ಕುಂಭಾಭಿಷೇಕ ಪೂಜಾ ಮಹೋತ್ಸವ, ಮಹಾಭಿಷೇಕ, ಅಲಂಕಾರಸೇವೆ, ನಾಮಾರ್ಚನೆ, ಮಹಾನಿವೇದನೆ, ಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನಂ, ರಾಘವೇಂದ್ರನಗರ, ಬೆಳಗ್ಗೆಯಿಂದ

■ **ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ :** ಕುವೆಂಪು ಜನ್ಮ ದಿನಾಚರಣೆ ಪ್ರಯುಕ್ತ ಕುವೆಂಪು ಸಾಹಿತ್ಯ : ತೌಲನಿಕ ವಿವೇಚನೆ ಕುರಿತು ವಿಚಾರ ಸಂಕಿರಣ, ಉದ್ಘಾಟನೆ : ಬೆಂಗಳೂರು ವಿವಿ ಕುಲಪತಿ ಪ್ರೊ. ಲಿಂಗರಾಜ ಗಾಂಧಿ, ಅಧ್ಯಕ್ಷತೆ : ಕರಾಮುವಿವಿ ಕುಲಪತಿ ಪ್ರೊ ಶರಣಪ್ಪ ವಿ. ಹಲಸೆ, ಉಪಸ್ಥಿತರು : ಕರಾಮುವಿವಿ ಕುಲಸಚಿವ ಪ್ರೊ. ಕೆ.ಎಲ್.ಎನ್.ಮೂರ್ತಿ, ಸ್ಥಳ: ಕಾವೇರಿ ಸಭಾಂಗಣ, ಕರಾಮುವಿವಿ, ಬೆಳಗ್ಗೆ9.45ಕ್ಕೆ.

■ **ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು:** ಕೌದಿ ಕಲೆ ನರಸಿಮುಲು ಪಿ.ಬ್ಯಾಗೇರಿ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ, ಸ್ಥಳ: ಶ್ರೀ ಕಲಾನಿಕೇತನ ಆರ್ಟ್ ಗ್ಯಾಲರಿ, ವಿಜಯನಗರ 2ನೇ ಹಂತ, ಬೆಳಗ್ಗೆ 10ರಿಂದ.

■ **ಮೈಸೂರು ವಿವಿ ಪ್ರಸಾರಾಂಗ :** ರಾಷ್ಟ್ರಕವಿ ಕುವೆಂಪು ಅವರ ಜನ್ಮ ದಿನೋತ್ಸವ ಕಾರ್ಯಕ್ರಮ, ಉದ್ಘಾಟನೆ: ಸಾಹಿತಿ ಡಾ.ಸಿ.ಪಿ.ಕೃಷ್ಣಕುಮಾರ್, ಅಧ್ಯಕ್ಷತೆ: ಮೈಸೂರು ವಿವಿ ಕುಲಸಚಿವರಾದ ವಿ.ಆರ್.ಶೈಲಜಾ, ಮುಖ್ಯ ಅತಿಥಿಗಳು: ವಿದ್ವಾಂಸ ಪ್ರೊ.ಸಿ.ನಾಗಣ್ಣ, ಪ್ರಾಸ್ತಾವಿಕ ನುಡಿ: ಪ್ರಸಾರಾಂಗ ನಿರ್ದೇಶಕ ಪ್ರೊ.ಎಂ. ನಂಜಯ್ಯ ಹೊಂಗನೂರು, ಸ್ಥಳ: ಪ್ರಸಾರಾಂಗ ಸಭಾಂಗಣ, ಬೆಳಗ್ಗೆ 10ಕ್ಕೆ.

■ **ಚುಟುಕು ಸಾಹಿತ್ಯ ಪರಿಷತ್, ವೈದ್ಯವಾರ್ತಾ ಪ್ರಕಾಶನ :** ಡಾ.ಸಿಎಸ್‌ಕೆ ಅವರ ಹೊಂಬೆಳಕು ಕೃತಿ ಲೋಕಾರ್ಪಣೆ ಸಮಾರಂಭ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ : ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷ ಎಂ. ಶಿವಣ್ಣ, ಅಧ್ಯಕ್ಷತೆ: ವಿಧಾನಪರಿಷತ್ ಸದಸ್ಯ ಡಾ. ಡಿ. ತಿಮ್ಮಯ್ಯ, ಕೃತಿ ಲೋಕಾರ್ಪಣೆ : ಜಯದೇವ ಹೃದ್ರೋಗ ಸಂಸ್ಥೆಯ ಮೆಡಿಕಲ್ ಸೂಪರಿಂಟೆಂಡೆಂಟ್ ಡಾ. ಕೆ.ಎಸ್. ಸದಾನಂದ, ಕೃತಿ ಕುರಿತು ಮಾತನಾಡುವವರು: ಮೈಸೂರು ವಿವಿ ವಿಶ್ರಾಂತ ಕುಲಪತಿ ಪ್ರೊ. ಕೆ.ಎಸ್. ರಂಗಪ್ಪ, ಮುಖ್ಯ ಅತಿಥಿಗಳು : ಮಾಜಿ ಶಾಸಕ ತೋಂಟದಾರ್ಯ, ಡಾ. ಎಂ.ಜಿ.ಆರ್. ಅರಸ್, ಡಾ. ಸಿ. ಶರತ್‌ಕುಮಾರ್, ನಾದಬ್ರಹ್ಮ ಸಂಗೀತ ಸಭಾ ಸಭಾಂಗಣ, ಜೆಎಲ್‌ಬಿ ರಸ್ತೆ, ಬೆಳಗ್ಗೆ 10ಕ್ಕೆ.

■ **ಅಂತರ್ಜಲ ನಿರ್ದೇಶನಾಲಯ, ಬೆಂಗಳೂರು :** ಅಂತರ್ಜಲ ಜನಜಾಗೃತಿ ಕಾರ್ಯಾಗಾರ, ಅಧ್ಯಕ್ಷತೆ : ಮೈಸೂರು ತಾಪಂ ಕಾರ್ಯನಿರ್ವಹಣಾಧಿಕಾರಿ ಹೆಚ್.ಡಿ. ಗಿರೀಶ್, ಉದ್ಘಾಟನೆ : ನಂಜನಗೂಡು ತಾಪಂ ಕಾರ್ಯನಿರ್ವಹಣಾಧಿಕಾರಿ ಶ್ರೀನಿವಾಸ್, ಮುಖ್ಯ ಅತಿಥಿಗಳು : ನಿವೃತ್ತ ಭೂವಿಜ್ಞಾನಿಗಳಾದ ಕೆ.ವಿ.ಆರ್. ಚೌಧರಿ, ಪ್ರೊ. ವಿ. ಜಗನ್ನಾಥ್, ನರೇಗಾ ಸಹಾಯಕ ನಿರ್ದೇಶಕ ರಘುನಾಥ್, ಸ್ಥಳ: ಮೈಸೂರು ತಾಪಂ ಸಭಾಂಗಣ, ನಜರ್‌ಬಾದ್, ಬೆಳಗ್ಗೆ 10ಕ್ಕೆ.

■ **ಮೈಸೂರು ಅರಮನೆ ಮಂಡಳಿ:** ಫಲಪುಷ್ಪ ಪ್ರದರ್ಶನ, ಸ್ಥಳ: ಮೈಸೂರು ಅರಮನೆ ಆವರಣ, ಬೆಳಗ್ಗೆ 10 ರಿಂದ ರಾತ್ರಿ 9 ರವರೆಗೆ.

■ **ಸುಪ್ರಭ ನಾಗೇಶ್‌ರಾವ್ ಸೇವಾ ಪ್ರತಿಷ್ಠಾನ :** ಏಕ ವ್ಯಕ್ತಿಯಿಂದ ವಿಶ್ವಶಾಂತಿಗಾಗಿ ವಿಷ್ಣು ಸಹಸ್ರನಾಮ ಪಾರಾಯಣ, ಸ್ಥಳ : 622, 2ನೇ ಮೇನ್, ಶಾರದಾದೇವಿನಗರ, ಬೆಳಗ್ಗೆ

■ **ಶ್ರೀ ನಟರಾಜ ಮಹಿಳಾ ವಸತಿ ಪ್ರಥಮ ದರ್ಜೆ ಕಾಲೇಜು, ಹಂಸಧ್ವನಿ ಸಾಂಸ್ಕೃತಿಕ ಟ್ರಸ್ಟ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು :** ವಿಶ್ವಮಾನವ ದಿನಾಚರಣೆ ಮತ್ತು ಗೀತ ಗಾಯನ ಕಾರ್ಯಕ್ರಮ, ಸಾನ್ನಿಧ್ಯ : ಶ್ರೀ ಚಿದಾನಂದ ಸ್ವಾಮೀಜಿ, ಮುಖ್ಯ ಅತಿಥಿಗಳು : ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ. ಎಸ್. ಶಿವರಾಜಪ್ಪ, ಪ್ರೊ. ಎಸ್.ಮಲ್ಲಣ್ಣ, ಶ್ರೀಮತಿ ದಿವ್ಯಶ್ರೀ, ಪ್ರಸನ್ನಕುಮಾರ್ ವೃಂದದವರಿಂದ ಗೀತ ಗಾಯನ, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಡಾ. ಎಂ. ಶಾರದ, ಉಪಸ್ಥಿತರು : ಉಪಪ್ರಾಂಶುಪಾಲ ಡಾ. ಜಿ. ಪ್ರಸಾದಮೂರ್ತಿ, ಸ್ಥಳ: ಶ್ರೀ ನಟರಾಜ ಸಭಾ ಭವನ, ಬೆಳಗ್ಗೆ 10.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಹಾಗೂ ಸಂಜೆ 5.00ಕ್ಕೆ "ಒಂದೇ ಕಥೆ" ವಿವಿಧ ಮುಖ– ಬಾನುಲಿ ಸರಣೀ, ಪ್ರಸ್ತುತಿ –ಪ್ರಭುಸ್ವಾಮಿ ಮಳಿಮಠ, 6.40 ಅರಿವಿನ ಶಿಖರ–ಗಾಯನ– ನಿತಿನ್ ರಾಜಾರಾಂ ಶಾಸ್ತ್ರಿ, ಎಂ.ಡಿ.ಸುಮತಿ ಮುರಾರಿ, ವ್ಯಾಖ್ಯಾನ– ಡಾ.ಪ್ರದೀಪ್ ಕುಮಾರ್ ಹೆಬ್ರಿ, 8.30 ಹಾಡು ಹೇಳಿದ ಕಥೆ, ಪ್ರಸ್ತುತಿ– ಡಾ. ಮೈಸೂರು ಉಮೇಶ್, 10.00ವಿ.ಕೆ. ರಾಮನ್–ವೇಣುವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ, 1.20 ಭಾವಗೀತೆಗಳು, 4.00 ಜನಪದ ಸಂಗೀತ–ತುಳಸಮ್ಮ ಮತ್ತು ತಂಡ, 4.30 ಚರ್ಚೆ, 6.50 ಕೃಷಿರಂಗ –ಕಿಸಾನ್ ವಾಣಿ–ಅಂಗಾಂಶ ಕೃಷಿ ತಂತ್ರಜ್~ಆನದಿಂದ ಅಭಿವೃದ್ಧಿಪಡಿಸಿದ ಸಸ್ಯಗಳ ಆಯ್ಕೆ ಹಾಗೂ ನಿರ್ವಹಣೆ ಕುರಿತು ಡಾ.ಎಸ್.ಸಿ.ವೆಂಕಟೇಶ್ ಅವರೊಡನೆ ಸಂದರ್ಶನ, 10.00 ನಾಟಕ "ಕ್ರಿಸ್‌ಮಸ್ ಉಡುಗೊರೆ", ರಚನೆ– ರಾಮಚಂದ್ರನ್, ನಿರ್ದೇಶನ ಹಾಗೂ ನಿರ್ಮಾಣ:– ಪ್ರಭುಸ್ವಾಮಿ ಮಳಿಮಠ್

■ **ಮೈಸೂರು ವಿಶ್ವವಿದ್ಯಾನಿಲಯ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ:** ಕುವೆಂಪು ಜನ್ಮ ದಿನೋತ್ಸವದ ಪ್ರಯುಕ್ತ ಕುವೆಂಪು ಸಾಹಿತ್ಯ–ಬಹುಮುಖಿ ಚಿಂತನೆ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ, ಉದ್ಘಾಟನೆ: ಸಾಹಿತಿ ಡಾ.ಅರವಿಂದ ಮಾಲಗತ್ತಿ, ಮುಖ್ಯ ಅತಿಥಿಗಳು: ಸಾಹಿತಿ ಡಾ.ಡಿ.ಕೆ.ರಾಜೇಂದ್ರ, ಅಧ್ಯಕ್ಷತೆ : ಮೈಸೂರು ವಿವಿ ಕುಲಪತಿ ಡಾ.ರಾಜಶೇಖರ, ಸ್ಥಳ: ಬಿ.ಎಂ.ಶ್ರೀ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 10.30ಕ್ಕೆ.

■ **ವಿವೇಕಾನಂದ ರಾಕ್ ಮೆಮೋರಿಯಲ್, ವಿವೇಕಾನಂದ ಕೇಂದ್ರ :** ಸಮರ್ಥ ಭಾರತ ಪರ್ವ ಉತ್ಸವ ಪ್ರಯುಕ್ತ ರಸಪ್ರಶ್ನೆ, ಸ್ವಾಮಿ ವಿವೇಕಾನಂದರ ವಿಚಾರಗಳು – ದೇಶಭಕ್ತಿ, ಶಿಕ್ಷಣ, ಚಾರಿತ್ರ್ಯ ನಿರ್ಮಾಣದ ಬಗ್ಗೆ, ಸ್ಥಳ: ವಿವೇಕಾನಂದ ಕೇಂದ್ರ, ಪಂಪಾಪತಿ ರಸ್ತೆ, ಸಂಜೆ 4ಕ್ಕೆ.

■ **ಜೆಎಸ್‌ಎಸ್ ವಾಕ್ ಮತ್ತು ಶ್ರವಣ ಸಂಸ್ಥೆ :** ಘಟಿಕೋತ್ಸವ ಸಮಾರಂಭ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಮುಖ್ಯ ಅತಿಥಿಗಳು : ನಿಮ್ಹಾನ್ಸ್ ನಿರ್ದೇಶಕಿ ಡಾ. ಪ್ರತಿಮಾಮೂರ್ತಿ, ಅಧ್ಯಕ್ಷತೆ : ಜೆಎಸ್‌ಎಸ್ ಮಹಾವಿದ್ಯಾಪೀಠ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ. ಬೆಟಸೂರುಮಠ, ಗೌರವ ಅತಿಥಿಗಳು : ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕ ಆರ್. ಮಹೇಶ್, ಸ್ಥಳ: ಶ್ರೀ ರಾಜೇಂದ್ರ ಶತಮಾನೋತ್ಸವ ಸಭಾಂಗಣ, ಸಂಜೆ 4ಕ್ಕೆ.

■ **ಶ್ರೀ ಆಂಡಾಳ್ ಮಂದಿರಂ:** ಧನುರ್ಮಾಸ ಪೂಜೆ, ವಿದ್ವಾನ್ ಎಂ.ಕೆ. ಶೆಲ್ವ ನಾರಾಯಣ ಅವರಿಂದ ತಿರುಪ್ಪಾವೈ ಪ್ರವಚನ. ಸ್ಥಳ: ಆಂಡಾಳ್ ಮಂದಿರಂ ಆವರಣ. ವಿವಿ ಮೊಹಲ್ಲಾ, ಸಂಜೆ 6 ರಿಂದ 7.30ರವರೆಗೆ.

■ **ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನ:** ವಿದುಷಿ ಬಿ.ಕೆ. ಸೀತಾಲಕ್ಷ್ಮಿ ಅವರಿಂದ ತಿರುಪ್ಪಾವೈ ಪ್ರವಚನ. ಸ್ಥಳ: ದೇವಸ್ಥಾನ ಆವರಣ, ತ್ಯಾಗರಾಜ ರಸ್ತೆ, ಸಂಜೆ 6ಕ್ಕೆ.

■ **ದೇಸಿರಂಗ ಸಾಂಸ್ಕೃತಿಕ ಸಂಸ್ಥೆ :** ರಂಗ ಮತ್ತು ನೃತ್ಯೋತ್ಸವದ ಸಮಾರೋಪ ಸಮಾರಂಭ, ಉದ್ಘಾಟನೆ : ಚಿಂತಕ ಪ್ರೊ. ಕಾಳೇಗೌಡ ನಾಗವಾರ, ಅಧ್ಯಕ್ಷತೆ : ಚಿಂತಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ಮುಖ್ಯ ಅತಿಥಿಗಳು : ಪ್ರೊ. ಮೈಸೂರು ಕೃಷ್ಣಮೂರ್ತಿ, ಕೃಷ್ಣ ಜನಮನ, ನಂತರ 'ಯಾತ್ರೆ' ನಾಟಕ ಪ್ರದರ್ಶನ, ನಿರ್ದೇಶನ : ಕೃಷ್ಣಜನಮನ, ಸ್ಥಳ: ಕಿರುರಂಗ ಮಂದಿರ, ಕಲಾಮಂದಿರದ ಆವರಣ, ಸಂಜೆ 6ಕ್ಕೆ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಅಧ್ಯಾತ್ಮ ರಾಮಾಯಣ ಕುರಿತು ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಚಿನ್ಮಯ ಮಿಷನ್ :** ಪಂಡಿತ್ ಕೃಷ್ಣರಾವ್ ಪ್ರಕಾಶ್ ಅವರಿಂದ ಪ್ರಾತಃ ಸ್ಮರಣಂ ಕುರಿತು ಉಪನ್ಯಾಸ, ಸ್ಥಳ: ಶ್ರೀ ಚಿನ್ಮಯ ಮಿಷನ್, ಮೈಸೂರು ಆಶ್ರಮದ ದತ್ತ ಸನ್ನಿಧಿ ಯಜ್ಞಶಾಲೆ, ಸಂಜೆ 6ಕ್ಕೆ.

■ **ಹೆಬ್ಬಾರ್ ಶ್ರೀ ವೈಷ್ಣವ ಉಪಸಭಾ, ಕೆ.ಆರ್. ವನಂ :** ಡಾ. ಎನ್.ಕೆ. ರಾಮಶೇಷನ್ ಅವರಿಂದ ತಿರುಪ್ಪಾವೈ ಕಾಲಕ್ಷೇಪ, ಸ್ಥಳ: ಡಾ. ಕಮಲರಾಮನ್ ಅವರ ಮಂದಿರ, ಅಂಬೇಡ್ಕರ್ ರಸ್ತೆ, ಸಂಜೆ 6.15 ರಿಂದ.

■ **ಶ್ರೀ ಮಹಾಜನಸಭಾ :** ಪ್ರವಚನ ಪ್ರವೀಣ ವಿದ್ವಾನ್ ಮುಡುಂಬೈ ರಾಮಾನುಜ ಶರ್ಮ ಅವರಿಂದ ತಿರುಪ್ಪಾವೈ ಕಾಲಕ್ಷೇಪ, ಸ್ಥಳ: ಶ್ರೀ ಕೃಷ್ಣಮೂರ್ತಿಪುರಂ ಶ್ರೀರಾಮಮಂದಿರ, ಕಾಂತರಾಜ ಅರಸು ರಸ್ತೆ, ಸಂಜೆ 6.15 ರಿಂದ.

ಕಂಚಮಳ್ಳಿಯಲ್ಲಿಂದು, ಹೆಚ್.ಡಿ. ಕೋಟೆ ತಾ.

■ **ಜೆಎಸ್‌ಎಸ್ ಮಹಾವಿದ್ಯಾಪೀಠ, ಜೆಎಸ್‌ಎಸ್ ಪದವಿಪೂರ್ವ ಕಾಲೇಜು :** ಎನ್‌ಎಸ್‌ಎಸ್ ವಾರ್ಷಿಕ ಶಿಬಿರ, ಬೆಳಗ್ಗೆ 6.30ಕ್ಕೆ ಗೌಡಿಕೆ ಸೋಮಣ್ಣ ಅವರಿಂದ ಧ್ವಜಾರೋಹಣ, ಬೆಳಗ್ಗೆ 10ಕ್ಕೆ ಉಚಿತ ಆರೋಗ್ಯ ತಪಾಸಣೆ ಮತ್ತು ಔಷಧ ವಿತರಣಾ ಶಿಬಿರ, ಸಂಜೆ 4.30ಕ್ಕೆ ಸಭಾ ಕಾರ್ಯಕ್ರಮ, ಅಧ್ಯಕ್ಷತೆ : ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ ಕೃಷ್ಣಯ್ಯ, ಮುಖ್ಯ ಅತಿಥಿಗಳು: ತಾಲೂಕು ದೈಹಿಕ ಶಿಕ್ಷಣಾಧಿಕಾರಿ ಟಿ.ಪಿ.ರಾಮ್‌ಪ್ರಸಾದ್, ವೃಷಭೇಂದ್ರ ಮತ್ತು ಶ್ರೀಮತಿ ಎಸ್.ಸರ್ವಮಂಗಳ ಅವರಿಂದ ಉಪನ್ಯಾಸ.

ಸುತ್ತೂರು ಕ್ಷೇತ್ರ, ನಂಜನಗೂಡು ತಾ.

■ **ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್:** ಎನ್‌ಎಸ್‌ಎಸ್ ವಾರ್ಷಿಕ ಶಿಬಿರ, ಸಂಯೋಜನಾಧಿಕಾರಿ ಜಿ.ಎಲ್.ತ್ರಿಪುರಾಂತಕ ಅವರಿಂದ ಯಶಸ್ಸು ಕುರಿತು ಉಪನ್ಯಾಸ, ಮುಖ್ಯ ಅತಿಥಿಗಳು: ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಶಾಖಾ ವ್ಯವಸ್ಥಾಪಕ ಎಂ.ಎಸ್. ಶಿವಪ್ರಕಾಶ್, ಅಧ್ಯಕ್ಷತೆ: ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ಮುಖ್ಯಸ್ಥ ಡಾ.ಶ್ರೀಕಂಠಸ್ವಾಮಿ, ಸಂಜೆ 4ಕ್ಕೆ

ಡಾ.ಹೆಚ್.ಸಿ.ಮಹದೇವಪ್ಪ-ಧ್ರುವನಾರಾಯಣ ಬೆಂಬಲಿಗರ ಶಕ್ತಿ ಪ್ರದರ್ಶನ; ತಮ್ಮ ನಾಯಕರಿಗೆ ಟಿಕೆಟ್ ನೀಡುವಂತೆ ಘೋಷಣೆ

● ಕಾಂಗ್ರೆಸ್ ಕಚೇರಿ ಎದುರು ಕೆಲ ಕಾಲ ಉದ್ವಿಗ್ನ ಪರಿಸ್ಥಿತಿ ● ತಮ್ಮ ತಮ್ಮ ಬೆಂಬಲಿಗರ ಸಮಾಧಾನಗೊಳಿಸಿದ ನಾಯಕರು ● ಬೇಸತ್ತು ಅಭಿಪ್ರಾಯ ಸಂಗ್ರಹ ನಿಲ್ಲಿಸಿ ಹೊರ ನಡೆದ ವೀಕ್ಷಕ ಚಲುವರಾಯಸ್ವಾಮಿ

ಮೈಸೂರು, ಡಿ.28– ನಂಜನಗೂಡು ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಟಿಕೆಟ್ ಪಡೆಯಲು ಮಾಜಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಮತ್ತು ಕೆಪಿಸಿಸಿ ಕಾರ್ಯಾಧ್ಯಕ್ಷರೂ ಆದ ಮಾಜಿ ಸಂಸದ ಆರ್.ಧ್ರುವನಾರಾಯಣ್ ಮಧ್ಯೆ ತೀವ್ರ ಪೈಪೋಟಿ ಏರ್ಪಟ್ಟಿದ್ದು, ಅಭಿಪ್ರಾಯ ಸಂಗ್ರಹಕ್ಕಾಗಿ ವೀಕ್ಷಕರಾಗಿ ಬಂದಿದ್ದ ಮಾಜಿ ಸಚಿವ ಎನ್.ಚಲುವರಾಯಸ್ವಾಮಿ ಮುಂದೆ ಇಬ್ಬರೂ ಮುಖಂಡರ ಬೆಂಬಲಿಗರು ಶಕ್ತಿ ಪ್ರದರ್ಶನದ ಮೂಲಕ ಗೊಂದಲ ಸೃಷ್ಟಿಸಿದ್ದಾರೆ.

ಮೈಸೂರಿನ ರೈಲ್ವೆ ನಿಲ್ದಾಣ ಬಳಿಯಿರುವ ಕಾಂಗ್ರೆಸ್ ಕಚೇರಿಯಲ್ಲಿ ಎನ್. ಚಲುವರಾಯಸ್ವಾಮಿ ಅವರು ನಂಜನಗೂಡು ಕ್ಷೇತ್ರದ ಅಭ್ಯರ್ಥಿ ಆಯ್ಕೆಗಾಗಿ ಅಭಿಪ್ರಾಯ ಸಂಗ್ರಹಣೆಗೆ ಸೋಮವಾರ ಸಂಜೆ ಕರೆದಿದ್ದ ಈ ಸಭೆಯಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ. ಬಿ.ಜೆ. ವಿಜಯಕುಮಾರ್ ಉಪಸ್ಥಿತರಿದ್ದರು. ಮೊದಲಿಗೆ ನಂಜನಗೂಡು ವಿಧಾನಸಭಾ ಕ್ಷೇತ್ರಕ್ಕೆ ಒಳಪಟ್ಟ ನಂಜನಗೂಡು ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಎಂ. ಶಂಕರ್, ನಂಜನಗೂಡು ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕುರಟ್ಟಿ ಮಹೇಶ್ ಮತ್ತು ಹುಲ್ಲಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀಕಂಠ ನಾಯಕ ಅವರನ್ನು ಕರೆದು ವೀಕ್ಷಕರು ಅಭಿಪ್ರಾಯ ಸಂಗ್ರಹಿಸುತ್ತಿದ್ದರು.

ಈ ವೇಳೆ ಕಾಂಗ್ರೆಸ್ ಕಚೇರಿ ಮುಂಭಾಗ ಧ್ರುವನಾರಾಯಣ ಮತ್ತು ಡಾ.ಹೆಚ್.ಸಿ. ಮಹದೇವಪ್ಪ ಅವರ ಬೆಂಬಲಿಗರು ತಮ್ಮ ನಾಯಕರ ಭಾವಚಿತ್ರವಿರುವ ಪ್ಲೇಕಾರ್ಡ್‌ಗಳನ್ನು ಪ್ರದರ್ಶಿಸುತ್ತಾ ಅವರಿಗೇ ಟಿಕೆಟ್ ನೀಡಬೇಕೆಂದು ಘೋಷಣೆ ಕೂಗಲಾರಂಭಿಸಿದರು. ಇಬ್ಬರ ಬೆಂಬಲಿಗರು ಪೈಪೋಟಿಗಿಳಿದಂತೆ ಘೋಷಣೆ ಕೂಗಿದ್ದು, ಕೆಲ ಕಾಲ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು. ವಿಶೇಷವೆಂದರೆ ಧ್ರುವನಾರಾಯಣ ಮತ್ತು ಮಹದೇವಪ್ಪ ಬೆಂಬಲಿಗರು ಒಟ್ಟಾಗಿ ನಿಂತುಕೊಂಡೇ ತಮ್ಮ ತಮ್ಮ



▶ ಕಾಂಗ್ರೆಸ್ ಒಂದು ಮನೆಯಿದ್ದಂತೆ. ಈ ಮನೆಯಲ್ಲಿ ಘರ್ಷಣೆಗಳು ಇರಬಾರದು. ಎಲ್ಲರೂ ಶಾಂತಿ-ಸೌಹಾರ್ದತೆಯಿಂದ ವರ್ತಿಸಬೇಕು. ನನ್ನ ಮತ್ತು ಮಹದೇವಪ್ಪ ಅವರ ಬೆಂಬಲಿಗರು ಸಹಜವಾಗಿಯೇ ಘೋಷಣೆಗಳನ್ನು ಕೂಗಿದ್ದಾರೆ. ಆ ಸಂದರ್ಭದಲ್ಲಿ ಕೆಲವರು ಕೂಗಿದ ಘೋಷಣೆಗಳ ಬಗ್ಗೆ ವಿಷಾದಿಸುತ್ತೇನೆ. ಕಾಂಗ್ರೆಸ್ ಕಾರ್ಯಕರ್ತರಲ್ಲಿ ಹಾಗೂ ಮುಖಂಡರಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಘೋಷಣೆ ಕೂಗುತ್ತಿದ್ದ ಬೆಂಬಲಿಗರನ್ನು ನಾನೂ ಮತ್ತು ಮಹದೇವಪ್ಪ ಅವರು ಒಟ್ಟಾಗಿ ಸಮಾಧಾನ ಮಾಡಿ ಕಳುಹಿಸಿದ್ದೇವೆ. ನಂಜನಗೂಡು ಕ್ಷೇತ್ರಕ್ಕೆ ಮೂವರು ಆಕಾಂಕ್ಷಿಗಳಿದ್ದು, ನಾನೂ ಸೇರಿದಂತೆ ಎಲ್ಲರೂ ಮಾಜಿ ಶಾಸಕರೇ ಆಗಿದ್ದೇವೆ. ವೀಕ್ಷಕರು ಅಭಿಪ್ರಾಯ ಸಂಗ್ರಹಣೆ ಜೊತೆಗೆ ಮೂವರ ಹೆಸರನ್ನು ಹೈಕಮಾಂಡ್‌ಗೆ ಕಳುಹಿಸುತ್ತಾರೆ. ಹೈಕಮಾಂಡ್ ಯಾರಿಗಾದರೂ ಟಿಕೆಟ್ ನೀಡಲಿ, ಕಾಂಗ್ರೆಸ್ ಗೆಲುವಿಗಾಗಿ ಎಲ್ಲರೂ ಕೆಲಸ ಮಾಡುತ್ತೇವೆ.
– ಆರ್. ಧ್ರುವನಾರಾಯಣ, ಮಾಜಿ ಸಂಸದ.

▶ ವೀಕ್ಷಕರು ಅಭಿಪ್ರಾಯ ಸಂಗ್ರಹಿಸುತ್ತಿದ್ದ ವೇಳೆ ಕಾರ್ಯಕರ್ತರ ನಡುವೆ ಯಾವುದೇ ಘರ್ಷಣೆಯಾಗಿಲ್ಲ. ಅವರೆಲ್ಲಾ ತಮ್ಮ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ ಅಷ್ಟೇ. ಯಾವುದೇ ನಾಯಕರ ಮೇಲೆ ಪ್ರೀತಿ, ವಿಶ್ವಾಸ ತೋರುವುದು, ಅವರ ಪರವಾಗಿ ಅಭಿಪ್ರಾಯ ವ್ಯಕ್ತಪಡಿಸುವುದು ಕಾರ್ಯಕರ್ತರ ಸ್ವಾತಂತ್ರ್ಯವಾಗಿದೆ. ಡಾ.ಹೆಚ್.ಸಿ.ಮಹದೇವಪ್ಪ ಮತ್ತು ಆರ್.ಧ್ರುವನಾರಾಯಣ ಇಬ್ಬರೂ ಉತ್ತಮ ಮುಖಂಡರಾಗಿದ್ದಾರೆ. ಮಹದೇವಪ್ಪನವರು 8 ಚುನಾವಣೆಗಳಲ್ಲಿ ಸ್ಪರ್ಧಿಸಿ 5ರಲ್ಲಿ ಗೆದ್ದಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರಾಗಿ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ. ಅದೇ ರೀತಿ ಧ್ರುವನಾರಾಯಣ ಅವರು ಮೂರು ಬಾರಿ ಶಾಸಕರಾಗಿ, ಎರಡು ಬಾರಿ ಸಂಸದರಾಗಿ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದು, ಯಾರಿಗೇ ಟಿಕೆಟ್ ನೀಡಿದರೂ ಎಲ್ಲರೂ ಒಗ್ಗಟ್ಟಾಗಿ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸುತ್ತೇವೆ ಎಂಬುದೇ ನನ್ನ ಹಾಗೂ ಕಾರ್ಯಕರ್ತರ ಅಭಿಪ್ರಾಯವಾಗಿದೆ. ಆದರೂ ಕಾರ್ಯಕರ್ತರು ತಾವು ಬೆಂಬಲಿಸುವ ನಾಯಕನಿಗೆ ಟಿಕೆಟ್ ನೀಡಬೇಕು ಎಂದು ಕೇಳುವುದರಲ್ಲಿ ತಪ್ಪೇನು ಇಲ್ಲ.
– ಕಳಲೆ ಕೇಶವಮೂರ್ತಿ, ಮಾಜಿ ಶಾಸಕ.

ಮುಖಂಡರ ಪರ ಘೋಷಣೆ ಕೂಗಿದರೆ ಹೊರತು ಯಾರ ವಿರುದ್ಧವೂ ಧಿಕ್ಕಾರದ ಘೋಷಣೆ ಕೇಳಿಬರಲಿಲ್ಲ. ಈ ವೇಳೆ ಕಾಂಗ್ರೆಸ್ ಕಚೇರಿಯಲ್ಲೇ ಇದ್ದ ಧ್ರುವನಾರಾಯಣ ಮತ್ತು ಮಹದೇವಪ್ಪ ತಮ್ಮ ಬೆಂಬಲಿಗರನ್ನು ಮನವೊಲಿಸಿ, ವಾಪಸ್ಸು ಕಳುಹಿಸಿದರು. ನಂಜನಗೂಡು ನಂತರ ಚಾಮುಂಡೇಶ್ವರಿ ಕ್ಷೇತ್ರದ ಅಭಿಪ್ರಾಯವನ್ನು ಚಲುವರಾಯಸ್ವಾಮಿ ಸಂಗ್ರಹಿಸಬೇಕಿತ್ತು. ಕಾಂಗ್ರೆಸ್ ಕಚೇರಿ ಮುಂದೆ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಜಮಾಯಿಸಿ ಘೋಷಣೆಗಳನ್ನು ಕೂಗುತ್ತಿದ್ದರಿಂದ ಚಲುವರಾಯಸ್ವಾಮಿ ಅಲ್ಲಿಂದ ತೆರಳಿ, ಜಲದರ್ಶಿನಿ ಅತಿಥಿಗೃಹದಲ್ಲಿ ಚಾಮುಂಡೇಶ್ವರಿ ಕ್ಷೇತ್ರದ ಅಭಿಪ್ರಾಯ ಸಂಗ್ರಹಣೆ ಮಾಡಿದರು.

ಧ್ರುವನಾರಾಯಣ ಸಂಸದರಾಗಿದ್ದಾಗ ನಂಜನಗೂಡು ಕ್ಷೇತ್ರದ ಜನರ ಜೊತೆ ಉತ್ತಮ ಸಂಪರ್ಕ ಇಟ್ಟುಕೊಂಡು ಕಷ್ಟ-ಸುಖಗಳಿಗೆ ಸ್ಪಂದಿಸಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಸೋತ ನಂತರವೂ ಕೂಡ ಮನೆಯಲ್ಲಿ ಕೂರದೇ ಕ್ಷೇತ್ರದಲ್ಲಿ ಸಂಚರಿಸಿ, ಪಕ್ಷದ ಕಾರ್ಯಕರ್ತರು ಹಾಗೂ ಜನರ ಸಮಸ್ಯೆಗಳಿಗೆ ಸ್ಪಂದಿಸಿದ್ದಾರೆ. ಕೊರೊನಾ ಸಂದರ್ಭದಲ್ಲಿ ರೋಗಿಗಳಿಗೆ ಸಹಾಯ ಮಾಡಿದ್ದಾರೆ. ಹೀಗಾಗಿ ನಂಜನಗೂಡಿನಲ್ಲಿ ಸ್ಪರ್ಧಿಸಲು ಧ್ರುವನಾರಾಯಣ ಅವರಿಗೆ ಟಿಕೆಟ್ ನೀಡಬೇಕೆಂದು ಆಗ್ರಹಿಸಿದ ಅವರ ಬೆಂಬಲಿಗರು, ಡಾ. ಹೆಚ್.ಸಿ. ಮಹದೇವಪ್ಪ ಅವರ ಬಗ್ಗೆಯೂ ನಮಗೆ ಗೌರವವಿದೆ. ಆದರೆ ಅವರದೇ ಕ್ಷೇತ್ರವಾದ ತಿ.ನರಸೀಪುರದಲ್ಲಿ ಅವರು ಸ್ಪರ್ಧಿಸಲಿ. ಇಬ್ಬರೂ ಮುಖಂಡರು ಗೆಲ್ಲಲಿ ಎಂದು ಧ್ರುವನಾರಾಯಣ ಬೆಂಬಲಿಗರು ಹೇಳುತ್ತಿದ್ದರು.

ಡಾ. ಹೆಚ್.ಸಿ. ಮಹದೇವಪ್ಪ ಅವರು 650 ಕೋಟಿ ರೂ. ಅನುದಾನ ತಂದು ನಂಜನಗೂಡು ಕ್ಷೇತ್ರವನ್ನು ಅಭಿವೃದ್ಧಿಪಡಿಸಿದ್ದಾರೆ. ಜಾತ್ಯಾತೀತವಾಗಿ ಎಲ್ಲಾ ವರ್ಗದ ಜನರು ಅವರನ್ನು ಇಷ್ಟಪಡುತ್ತಿದ್ದಾರೆ. ಅವರಿಗೆ ನಂಜನಗೂಡಿನಲ್ಲಿ ಟಿಕೆಟ್ ನೀಡಿದರೆ ಅವರು ಗೆಲ್ಲುವುದು ಮಾತ್ರವಲ್ಲದೆ, ಸುತ್ತಮುತ್ತಲಿನ 8 ಕ್ಷೇತ್ರಗಳಲ್ಲಿ ಕಾಂಗ್ರೆಸ್‌ಗೆ ಅನುಕೂಲವಾಗಲಿದೆ. ಆದ್ದರಿಂದ ಅವರಿಗೇ ಟಿಕೆಟ್ ನೀಡಬೇಕು ಎಂದು ಆಗ್ರಹಿಸಿದ ಮಹದೇವಪ್ಪ ಬೆಂಬಲಿಗರು, ಧ್ರುವನಾರಾಯಣ ಅವರನ್ನು ನಾವೇನೂ ವಿರೋಧಿಸುತ್ತಿಲ್ಲ. ಎರಡು ಬಾರಿ ಸಂಸದರಾಗಿದ್ದ ಅವರು ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲಿ ಎಂದು ಹೇಳಿದರು.

ಆದರೆ, ಇಬ್ಬರೂ ಮುಖಂಡರ ಬೆಂಬಲಿಗರು ತಮ್ಮ ನಾಯಕನಿಗೆ ಟಿಕೆಟ್ ದೊರೆಯದಿದ್ದರೆ ಪ್ರತಿಭಟಿಸುವ ಮಾತನ್ನೇ ಆಡದೇ ತಮ್ಮ ನಾಯಕನಿಗೇ ಟಿಕೆಟ್ ದೊರೆಯುತ್ತದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್ ಗೆದ್ದು ಸಿದ್ದರಾಮಯ್ಯ ಮುಖ್ಯಮಂತ್ರಿಯಾಗುತ್ತಾರೆ ಎಂದು ಇಬ್ಬರ ಬೆಂಬಲಿಗರೂ ಹೇಳಿದರು.

ತಿ.ನರಸೀಪುರ ಕ್ಷೇತ್ರದಲ್ಲಿ ಮಾದಿಗ ಸಮುದಾಯಕ್ಕೆ ಟಿಕೆಟ್ ನೀಡಲು ಮನವಿ



ಮೈಸೂರು,ಡಿ.28–ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ತಿ.ನರಸೀಪುರ ವಿಧಾನಸಭಾ ಕ್ಷೇತ್ರದಿಂದ ಮಾದಿಗ ಸಮುದಾಯದವರಿಗೆ ಸ್ಪರ್ಧಿಸಲು ಅವಕಾಶ ಕಲ್ಪಿಸುವಂತೆ ಆದಿಜಾಂಬವ ಅಭಿವೃದ್ಧಿ ಸಂಘ, ಹರಳಯ್ಯ ಚರ್ಮಕರ ಮತ್ತು ಖಾದಿ ಗ್ರಾಮೋದ್ಯೋಗ ಸಂಘ ಸೇರಿದಂತೆ ಸಮುದಾಯದ ಮುಖಂಡರು ಮೈಸೂರು ಜಿಲ್ಲಾ ಕಾಂಗ್ರೆಸ್ ಚುನಾವಣಾ ವೀಕ್ಷಕರಿಗೆ ಮನವಿ ಮಾಡಿದ್ದಾರೆ.

ಇತ್ತೀಚೆಗೆ ಸಂಘ– ಸಂಸ್ಥೆಗಳ ಮುಖಂಡರು ಮತ್ತು ತಿ.ನರಸೀಪುರ ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳ ಮುಖಂಡರು ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಸಭೆ ಸೇರಿ ಚರ್ಚಿಸಿದ ನಂತರ ಅಭ್ಯರ್ಥಿ ಆಯ್ಕೆಗಾಗಿ ಅಭಿಪ್ರಾಯ ಸಂಗ್ರಹಿಸಲು ಮೈಸೂರು ನಗರ ಕಾಂಗ್ರೆಸ್ ಭವನಕ್ಕೆ ವೀಕ್ಷಕರಾಗಿ ಆಗಮಿಸಿದ್ದ ಮಾಜಿ ಸಚಿವ ಎನ್. ಚಲುವರಾಯಸ್ವಾಮಿ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು.

ಮೈಸೂರು ವಿಭಾಗದ ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರವಾದ ಕೊಳ್ಳೇಗಾಲ, ನಂಜನಗೂಡು, ತಿ.ನರಸೀಪುರ ಸೇರಿದಂತೆ ಯಾವುದೇ ಕ್ಷೇತ್ರದಲ್ಲಿ ಮಾದಿಗ ಸಮುದಾಯದ ಅಭ್ಯರ್ಥಿಯೊಬ್ಬರಿಗೆ ಸ್ಪರ್ಧಿಸಲು ಅವಕಾಶ ಮಾಡಿಕೊಡಬೇಕು. ಇಲ್ಲದಿದ್ದರೆ ಆ ಸಮುದಾಯಕ್ಕೆ ಅನ್ಯಾಯ ಮಾಡಿದಂತಾಗುತ್ತದೆ ಎಂದು ಮುಖಂಡರು ತಿಳಿಸಿದರು.

ಸಮುದಾಯದ ಹಿರಿಯರಾದ ಮಾಜಿ ಸಚಿವ ದಿವಂಗತ ಟಿ.ಎನ್.ನರಸಿಂಹಮೂರ್ತಿ ಅವರ ಮೊಮ್ಮಗ, ಪರಿಷತ್ ಮಾಜಿ ಸದಸ್ಯ ದಿವಂಗತ ಎನ್.ಮಂಜುನಾಥ್‌ರ ಪುತ್ರ ಪ್ರಮುಲ್‌ಕುಮಾರ್ ಅವರಿಗೆ ತಿ.ನರಸೀಪುರ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಲು ಅವಕಾಶ ಕಲ್ಪಿಸಿದರೆ ಅನುಕೂಲವಾಗುತ್ತದೆ. ಅವರಿಗೆ ಟಿಕೆಟ್ ನೀಡಿದರೆ, ಅವರನ್ನು ಬಹುಮತದಿಂದ ಗೆಲ್ಲಿಸಿಕೊಂಡು ಬರುವುದಾಗಿ ವೀಕ್ಷಕರಿಗೆ ತಿಳಿಸಿದರು.

ಕಳೆದ ಚುನಾವಣೆಯಲ್ಲಿ ಮಾದಿಗ ಸಮುದಾಯಕ್ಕೆ ಟಿಕೆಟ್ ನೀಡದ ಹಿನ್ನೆಲೆಯಲ್ಲಿ ಸಮುದಾಯದವರು ಕಾಂಗ್ರೆಸ್ ಪಕ್ಷಕ್ಕೆ ಮತ ಚಲಾಯಿಸದ ಕಾರಣ ಕೆಲವು ಕ್ಷೇತ್ರಗಳಲ್ಲಿ ಪಕ್ಷದ ಮುಖಂಡರು ಸೋಲು ಅನುಭವಿಸಬೇಕಾಯಿತು. ಆದ್ದರಿಂದ ಈ ಬಾರಿ ಕ್ಷೇತ್ರದಲ್ಲಿ ನಮ್ಮ ಸಮುದಾಯಕ್ಕೆ ಟಿಕೆಟ್ ನೀಡಬೇಕು ಎಂದು ಆಗ್ರಹಿಸಿದರು. ಸಮುದಾಯದ ಮನವಿ ಸ್ವೀಕರಿಸಿದ ಎನ್.ಚಲುವರಾಯಸ್ವಾಮಿ ಅವರು ಈ ವಿಚಾರವನ್ನು ಪಕ್ಷದ ಹೈಕಮಾಂಡ್ ಗಮನಕ್ಕೆ ತರುವುದಾಗಿ ತಿಳಿಸಿದರು ಎಂದು ಹೇಳಲಾಗಿದೆ.

ತಿ.ನರಸೀಪುರ ಕ್ಷೇತ್ರದ ಬನ್ನೂರು, ತಲಕಾಡು, ಸೋಸಲೆ ಮತ್ತು ಮೂಗೂರು ಹೋಬಳಿಯ ಮಾದಿಗ ಸಮುದಾಯ ಸೇರಿದಂತೆ ಎಲ್ಲಾ ಸಮುದಾಯದ ಮುಖಂಡರು, ಗ್ರಾಪಂ ಸದಸ್ಯರು, ಮಾಜಿ ಅಧ್ಯಕ್ಷರು, ಕಾಂಗ್ರೆಸ್ ಮುಖಂಡರು ಮತ್ತು ಟಿಕೆಟ್ ಆಕಾಂಕ್ಷಿಯಾದ ಯುವ ಕಾಂಗ್ರೆಸ್ ಮುಖಂಡ ಎಂ.ಪ್ರಮುಲ್‌ಕುಮಾರ್ ಸೇರಿದಂತೆ ಹಲವಾರು ಮುಖಂಡರು ತಮ್ಮ ಅಭಿಪ್ರಾಯಗಳನ್ನು ತಿಳಿಸಿದರು.

ಜ.3ಕ್ಕೆ ಪಿಎಂ ಸ್ವಾ-ನಿಧಿ ಮಹೋತ್ಸವ

ಮೈಸೂರು,ಡಿ.28–ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಜ.3ರಂದು ಬೆಳಗ್ಗೆ 10ರಿಂದ ಸಂಜೆ 6.30ರವರೆಗೆ ಪಾಲಿಕೆ ವ್ಯಾಪ್ತಿಯಲ್ಲಿನ ಡೇ-ನಲ್ಮ್ ಯೋಜನೆಯಲ್ಲಿ ಬೀದಿಬದಿ ವ್ಯಾಪಾರಿಗಳ 2022-23ನೇ ಸಾಲಿನ ಸ್ವಾ-ನಿಧಿ ಮಹೋತ್ಸವವನ್ನು ದಸರಾ ವಸ್ತುಪ್ರದರ್ಶನ ಮೈದಾನದಲ್ಲಿ ಏರ್ಪಡಿಸಲಾಗಿದೆ. ಬೀದಿಬದಿ ವ್ಯಾಪಾರಿಗಳನ್ನು ಗುರುತಿಸಿ, ಪ್ರೋತ್ಸಾಹಿಸುವುದು, ಗೌರವಿಸುವುದು ಹಾಗೂ ಸ್ವಚ್ಛತೆ ಕುರಿತು ಅರಿವು ಮೂಡಿಸುವುದು ಕಾರ್ಯಕ್ರಮದ ಮುಖ್ಯ ಉದ್ದೇಶ.



ಕಾರ್ಯಕ್ರಮದಲ್ಲಿ ಬೀದಿಬದಿ ವ್ಯಾಪಾರಿಗಳು ಮತ್ತು ಅವರ ಕುಟುಂಬದ ಸದಸ್ಯರಿಗೆ ಸಾಂಸ್ಕೃತಿಕ ಕಾರ್ಯಕ್ರಮ, ಕ್ರೀಡಾ ಚಟುವಟಿಕೆ ಹಾಗೂ ವಿವಿಧ ಸ್ಪರ್ಧೆ, ಡೇ-ನಲ್ಮ್ ಯೋಜನೆ ಕುರಿತು ಕಿರುಚಿತ್ರ ಪ್ರದರ್ಶನ, ಉತ್ತಮ ವಹಿವಾಟು ಬಗ್ಗೆ ಬ್ಯಾಂಕ್‌ಗಳಿಂದ ತರಬೇತಿ, ಪಿಎಂ ಸ್ವಾ-ನಿಧಿಯ ಯಶಸ್ಸಿನ ಕಥೆಗಳು, ಆಹಾರ ಮೇಳ, ಸ್ವ-ಸಹಾಯ ಸಂಘಗಳ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ, ಬ್ಯಾಂಕುಗಳ ಸೌಲಭ್ಯದ ಬಗ್ಗೆ ಮಾಹಿತಿ ತಿಳಿಸಲಾಗುವುದು.

ಎಸ್‌ಎಸ್‌ಎಲ್‌ಸಿಯಲ್ಲಿ ಶೇ.85, ಪಿಯುಸಿ ಮತ್ತು ಪದವಿಯಲ್ಲಿ ಶೇ.75ರಷ್ಟು ಹೆಚ್ಚಿನ ಅಂಕಗಳಿಸಿದ ಬೀದಿ ಬದಿ ವ್ಯಾಪಾರಸ್ಥರ ಕುಟುಂಬದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡುವುದು ಮತ್ತು ಬೀದಿಬದಿ ವ್ಯಾಪಾರಸ್ಥರಿಗೆ ಗುರುತಿನ ಚೀಟಿ ಮತ್ತು ಮಾರಾಟ ಪ್ರಮಾಣ ಪತ್ರ ವಿತರಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಕಾರ್ಯಕ್ರಮಕ್ಕೆ ಮೈಸೂರು ನಗರ ವ್ಯಾಪ್ತಿಯೊಳಗಿನ ಬೀದಿಬದಿ ವ್ಯಾಪಾರಸ್ಥರು ಮತ್ತು ಕುಟುಂಬದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪಿಎಂ ಸ್ವಾ-ನಿಧಿ ಮಹೋತ್ಸವವನ್ನು ಯಶಸ್ವಿಗೊಳಿಸಿ, ಕಾರ್ಯಕ್ರಮದ ಪ್ರಯೋಜನವನ್ನು ಪಡೆದುಕೊಳ್ಳುವಂತೆ ಪಾಲಿಕೆ ಹೆಚ್ಚುವರಿ ಆಯುಕ್ತರು ಕೋರಿದ್ದಾರೆ.

ಹಾಸ್ಟೆಲ್‌ಗೆ ಸಾಮಗ್ರಿ ಪೂರೈಕೆಗೆ ದರ ಪಟ್ಟಿ ಆಹ್ವಾನ: ನಗರಪಾಲಿಕೆಯ ಶೇ.24.10, ಶೇ.7.25 ಮತ್ತು ಶೇ.5ರ ಅನುದಾನದಡಿ ನಗರಪಾಲಿಕೆ ವ್ಯಾಪ್ತಿಯಲ್ಲಿನ ಹಿಂದುಳಿದ ವರ್ಗಗಳ ಸರ್ಕಾರಿ ವಿದ್ಯಾರ್ಥಿನಿಲಯಗಳು, ವಿಶೇಷಚೇತನರ ಶಾಲೆ ಮತ್ತು ವಿದ್ಯಾರ್ಥಿನಿಲಯಗಳಿಗೆ ಸಾಮಗ್ರಿಗಳು ಮತ್ತು ಮಹಿಳಾ ಫಲಾನುಭವಿಗಳಿಗೆ ಹೊಲಿಗೆಯಂತ್ರ ಹಾಗೂ ವಿಶೇಷಚೇತನರಿಗೆ ತ್ರಿ-ಚಕ್ರವಾಹನಗಳನ್ನು ಖರೀದಿಸಿ ಸರಬರಾಜು ಮಾಡಲು ಅರ್ಹ ಮತ್ತು ಆಸಕ್ತಿಯುಳ್ಳ ಏಜೆನ್ಸಿ, ಸಂಸ್ಥೆಗಳಿಂದ ಕೊಟೇಶನ್, ದರಪಟ್ಟಿ ಕರೆಯಲಾಗಿರುತ್ತದೆ. (ದರಗಳನ್ನು ಎಲ್ಲಾ ರೀತಿಯ ತೆರಿಗೆ, ಸಾಗಾಣಿಕೆ ವೆಚ್ಚ ಸೇರಿದಂತೆ ನಮೂದಿಸುವುದು). ಅದರಂತೆ ಅಧಿಕೃತ ಸರಬರಾಜುದಾರರು ಪಾಲಿಕೆ ಹೆಚ್ಚುವರಿ ಆಯುಕ್ತರ ಕಚೇರಿಯಿಂದ ಹೆಚ್ಚಿನ ವಿವರಗಳನ್ನು ಪಡೆದು ಮುಚ್ಚಿದ ಲಕೋಟೆಯಲ್ಲಿ ಡಿ.30ರ ಸಂಜೆ 5 ಗಂಟೆಯೊಳಗೆ ಹೆಚ್ಚುವರಿ ಆಯುಕ್ತರ ಕಚೇರಿಗೆ ಸಲ್ಲಿಸಬೇಕೆಂದು ಪಾಲಿಕೆ ಹೆಚ್ಚುವರಿ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಸೇರಿ 11 ನಗರಗಳಲ್ಲಿ ಜಿಯೊ 5G ಸೇವೆ ಪ್ರಾರಂಭ



ಮುಂಬೈ: ಹೊಸ ವರ್ಷದ ಪ್ರಯುಕ್ತ ಮೈಸೂರು ಸೇರಿದಂತೆ ಪ್ರಮುಖ 11 ನಗರಗಳಲ್ಲಿ ಇಂದಿನಿಂದ (ಬುಧವಾರ) 5G ಸೇವೆಗಳನ್ನು ಆರಂಭಿಸಲಾಗಿದೆ ಎಂದು ರಿಲಯನ್ಸ್ ಜಿಯೊ ತಿಳಿಸಿದೆ. ಲಖನೌ, ತಿರುವನಂತಪುರ, ನಾಸಿಕ್, ಔರಂಗಾಬಾದ್, ಚಂಡೀಗಢ, ಮೊಹಾಲಿ, ಪಂಚಕುಲ, ಜಿರಾಕ್‌ಪುರ, ಖರಾರ್ ಮತ್ತು ದೇರ ಬಸ್ಸಿ ನಗರಗಳಲ್ಲಿ ಗ್ರಾಹಕರಿಗೆ 5G ಸೇವೆ ಲಭ್ಯವಾಗಿದೆ. ಬಳಕೆದಾರರು ಇಂದಿನಿಂದ ಯಾವುದೇ ಹೆಚ್ಚುವರಿ ವೆಚ್ಚವಿಲ್ಲದೆ, 1 Gbps+ ವೇಗದಲ್ಲಿ ಅನಿಯಮಿತ ಡೇಟಾವನ್ನು ಬಳಸಬಹುದು ಎಂದು ಕಂಪನಿ ಹೇಳಿದೆ.

ಶಾಲೆಗಳು ಮಕ್ಕಳಿಗೆ ಸುರಕ್ಷಿತ ತಾಣವಾಗಬೇಕು

ಮೈಸೂರು,ಡಿ.28– ಶಾಲೆಗಳು ಮಕ್ಕಳಿಗೆ ಸುರಕ್ಷಿತ ತಾಣಗಳಾಗಬೇಕು ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ತಿಳಿಸಿದರು.



ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜವಾಹರ್ ನವೋದಯ ವಿದ್ಯಾಲಯದ ನಿರ್ವಹಣಾ ಸಮಿತಿಯೊಂದಿಗೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜವಾಹರ್ ನವೋದಯ ಶಾಲೆಯ ವಿನ್ಯಾಸ, ಫಲಿತಾಂಶ ಹಾಗೂ ಶಾಲೆಯ ಸಮಸ್ಯೆಗಳ ಬಗ್ಗೆ ಆಲಿಸಿ, ಶಾಲೆಯಲ್ಲಿ ಮಕ್ಕಳಿಗೆ ಗುಡ್ ಟಚ್ ಬ್ಯಾಡ್ ಟಚ್ ಕುರಿತು ತಿಳಿದಿರಬೇಕು. ಹದಿಹರೆಯದವರ ಸಮಸ್ಯೆಗಳ ಬಗ್ಗೆ ಮಾಹಿತಿ ನೀಡಬೇಕು. ಪರಿಸರ ಸ್ನೇಹಿ ವಾತಾವರಣವಿರಬೇಕು ಮತ್ತು ಹೊರಗಿನ ಸಂಪನ್ಮೂಲ ವ್ಯಕ್ತಿಗಳೊಡನೆ ಆಗಾಗ್ಗೆ ಸಂವಾದ, ಚರ್ಚೆಗಳನ್ನು ಏರ್ಪಡಿಸಿ ಎಂದು ತಿಳಿಸಿದರು.

ಶಾಲೆಯ ಪ್ರಾಂಶುಪಾಲರು ಮಾತನಾಡಿ, 24 ಗಂಟೆಗಳ ವಿದ್ಯುಚ್ಛಕ್ತಿ, ಶಾಲಾ ವಾಹನ, ಮಳೆ ನೀರು ಕೊಯ್ಲು, ಶಾಲೆಯಲ್ಲಿ ತ್ಯಾಜ್ಯ ನಿರ್ವಹಣೆ, 400ಮೀ. ಟ್ರ್ಯಾಕ್, ಬಾಸ್ಕೆಟ್ ಬಾಲ್ ಗ್ರೌಂಡ್, ಬಿಸಿ ನೀರಿನ ವ್ಯವಸ್ಥೆ, 4 ಅಧಿಕ ತರಗತಿ ಕೊಠಡಿಗಳನ್ನು ಒದಗಿಸುವಂತೆ ಮನವಿ ಮಾಡಿದರು. ಸಭೆಯಲ್ಲಿ ಜವಾಹರ್ ನವೋದಯ ವಿದ್ಯಾಲಯದ ಸಿಬ್ಬಂದಿಗಳನ್ನು ಒಳಗೊಂಡಂತೆ, ನಿರ್ವಹಣಾ ಸಮಿತಿ ಸದಸ್ಯರು ಹಾಗೂ ಪೋಷಕರು ಪಾಲ್ಗೊಂಡಿದ್ದರು.

ಕನ್ನಡೋತ್ಸವ ಸುಗಮ ಸಂಗೀತ



ಮೈಸೂರು, ಡಿ.28(ಎಂಕೆ)– ನಗರದ ಜಗನ್ಮೋಹನ ಅರಮನೆಯಲ್ಲಿ ಮಹಾರತ್ನ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ 'ಕನ್ನಡೋತ್ಸವ' ಸುಗಮ ಸಂಗೀತ ಕಾರ್ಯಕ್ರಮದಲ್ಲಿ ಸಾಹಿತಿಗಳಾದ ವಿದ್ವಾನ್ ಸುರೇಶ್ ಹಾಗೂ ಪ್ರೊ.ಮೈಸೂರು ಕೃಷ್ಣಮೂರ್ತಿ ಅವರಿಗೆ 'ಕನ್ನಡ ಸಾಹಿತ್ಯ ರತ್ನ' ಪ್ರಶಸ್ತಿ ನೀಡಿ ಅಭಿನಂದಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಮೇಯರ್ ಶಿವಕುಮಾರ್ ಮಾತನಾಡಿ, ಮೈಸೂರು ಕಲೆ-ಸಂಸ್ಕೃತಿಯ ನೆಲೆಯಾಗಿರುವುದಕ್ಕೆ ಮಹಾರಾಜರುಗಳ ಕೊಡುಗೆಯೇ ಮುಖ್ಯ ಕಾರಣವಾಗಿದೆ. ಸಂಗೀತದ ಜೊತೆಗೆ ಸಂಗೀತ ಸ್ಪರ್ಧೆಗಳನ್ನು ಏರ್ಪಡಿಸಿರುವುದು ಶ್ಲಾಘನೀಯ. ಯುವ ಕಲಾವಿದರಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಪಾಲಿಕೆಯಿಂದ ಅಗತ್ಯ ಯೋಜನೆಗಳನ್ನು ರೂಪಿಸಲಾಗುವುದು ಎಂದು ಭರವಸೆ ನೀಡಿದರು. ಇದೇ ವೇಳೆ ರಾಜ್ಯ ಮಟ್ಟದ ಗಾಯನ ಸ್ಪರ್ಧೆಯಲ್ಲಿ ವಿಜೇತರಾದ ಕಲಾವಿದರಿಗೆ ಬಹುಮಾನ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಅಗಸ್ತ್ಯ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ಅಧ್ಯಕ್ಷ ಸಿ.ವಿ.ಪಾರ್ಥಸಾರಥಿ, ಕನ್ನಡ ಸಾಹಿತ್ಯ ಕಲಾಕೂಟ ಅಧ್ಯಕ್ಷ ಎಂ.ಚಂದ್ರಶೇಖರ್, ಸಮಾಜಸೇವಕ ಕೆ.ರಘುರಾಂ ವಾಜಪೇಯಿ, ಮಹಾರತ್ನ ಟ್ರಸ್ಟ್ ಅಧ್ಯಕ್ಷ ಮೈಸೂರು ಮಹಾಲಿಂಗು ಮತ್ತಿತರರು ಉಪಸ್ಥಿತರಿದ್ದರು.

ಹಾರ್ಡ್‌ವೇರ್ ಅಂಗಡಿ ಬಾಗಿಲ ಬೀಗ ಮುರಿದು 2.25 ಲಕ್ಷ ರೂ. ಮೌಲ್ಯದ ಪದಾರ್ಥ, 15 ಸಾವಿರ ನಗದು ಕಳವು

ಮೈಸೂರು, ಡಿ.28–ಹಾರ್ಡ್‌ವೇರ್ ಅಂಗಡಿಯೊಂದರ ಡೋರ್‌ಲಾಕ್ ಮುರಿದು 2.25 ಲಕ್ಷ ರೂ. ಮೌಲ್ಯದ ಪದಾರ್ಥಗಳು ಹಾಗೂ 15 ಸಾವಿರ ರೂ. ನಗದು ಕಳವು ಮಾಡಿರುವ ಘಟನೆ ತಾಲೂಕಿನ ಇಲವಾಲದಿಂದ ವರದಿಯಾಗಿದೆ.




ಇಲವಾಲ ಗ್ರಾಮದ ಸುರೇಂದ್ರಕುಮಾರ್ (25) ಎಂಬುವರು ಅಲ್ಲಿನ ಚಿಕ್ಕನಹಳ್ಳಿ ರಸ್ತೆಯಲ್ಲಿ ಭವಾನಿ ಹಾರ್ಡ್‌ವೇರ್ಸ್ ಅಂಡ್ ಪೇಂಟ್ಸ್ ಹೆಸರಿನಲ್ಲಿ ಅಂಗಡಿ ನಡೆಸುತ್ತಿದ್ದಾರೆ. ಇವರು ಡಿ.25ರಂದು ವ್ಯಾಪಾರ ಮುಗಿಸಿ ಅಂಗಡಿ ಬೀಗ ಹಾಕಿಕೊಂಡು ಹೋಗಿ ಮರುದಿನ ಬೆಳಗ್ಗೆ ಬಂದಾಗ ಅಂಗಡಿ ಡೋರ್‌ಲಾಕ್ ಮುರಿದು 2.25 ಲಕ್ಷ ರೂ. ಮೌಲ್ಯದ ಪದಾರ್ಥಗಳು ಮತ್ತು ಕ್ಯಾಶ್ ಬಾಕ್ಸ್‌ನಲ್ಲಿದ್ದ 15 ಸಾವಿರ ನಗದು ಕಳವು ಮಾಡಿರುವುದು ಗೊತ್ತಾಗಿದೆ. ಇಲವಾಲ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಜಮ್ಮುವಿನಲ್ಲಿ ಎನ್‌ಕೌಂಟರ್: ನಾಲ್ವರು ಉಗ್ರರ ಸದೆಬಡಿದ ಸೇನಾಪಡೆ

ಜಮ್ಮು: ಜಮ್ಮುವಿನ ಸಿದ್ರಾ ಪ್ರದೇಶದಲ್ಲಿ ಭಾರತೀಯ ಸೇನಾಪಡೆ ಬುಧವಾರ ಎನ್‌ಕೌಂಟರ್ ನಡೆಸಿದ್ದು, ನಾಲ್ವರು ಉಗ್ರರನ್ನು ಹತ್ಯೆ ಮಾಡಿದೆ. ಎನ್‌ಕೌಂಟರ್ ಕುರಿತು ಮಾಹಿತಿ ನೀಡಿರುವ ಎಡಿಜಿಪಿ ಮುಕೇಶ್ ಸಿಂಗ್ ಅವರು, ಹೆದ್ದಾರಿಯಲ್ಲಿ ಲಾರಿಯ ಸಂಚಾರವೊಂದು ಅನುಮಾನಾಸ್ಪದವಾಗಿ ಕಂಡು ಬಂದಿತ್ತು. ಕೂಡಲೇ ಲಾರಿಯನ್ನು ಹಿಂಬಾಲಿಸಲಾಗಿತು. ಜಮ್ಮುವಿನ ಸಿಧ್ರಾ ಪ್ರದೇಶದಲ್ಲಿ ಲಾರಿ ನಿಂತಿತು. ಲಾರಿ ನಿಂತ ಕೂಡಲೇ ಚಾಲಕ ಪರಾರಿಯಾದ. ಲಾರಿಯನ್ನು ಪರಿಶೀಲಿಸಿದಾಗ ಉಗ್ರರು ಅಡಗಿ ಕುಳಿತಿರುವುದು ಕಂಡು ಬಂದಿತ್ತು. ಕೂಡಲೇ ಭದ್ರತಾ ಪಡೆಗಳ ಮೇಲೆ ಗುಂಡಿನ ದಾಳಿ ನಡೆಸಲು ಆರಂಭಿಸಿದರು ಎಂದು ಹೇಳಿದ್ದಾರೆ.

ಉಗ್ರರ ಬಳಿ ಭಾರೀ ಪ್ರಮಾಣದ ಶಸ್ತ್ರಾಸ್ತ್ರಗಳಿದ್ದವು. ಉಗ್ರರು ದಾಳಿ ನಡೆಸಲು ಆರಂಭಿಸುತ್ತಿದ್ದಂತೆಯೇ ಸ್ಥಳವನ್ನು ಸುತ್ತುವರೆದು ಉಗ್ರರ ದಾಳಿಗೆ ದಿಟ್ಟ ಉತ್ತರ ನೀಡಲಾಯಿತು. ಇದರಂತೆ ನಾಲ್ವರು ಉಗ್ರರನ್ನು ಹತ್ಯೆ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ರಾಜಮಣಿ ನಿಧನ



ಹೆಚ್.ಡಿ.ಕೋಟೆ, ಡಿ.28– ತಾಲೂಕಿನ ನಾಗನಹಳ್ಳಿ ಗ್ರಾಮ ಪಂಚಾಯತಿ ಸದಸ್ಯ ದಯಾನಂದ್ ಅವರ ತಾಯಿ ಮಾಚನಾಯಕನಹಳ್ಳಿ ಗ್ರಾಮದ ನಿವಾಸಿ ರಾಜಮಣಿ (98) ಬುಧವಾರ ನಿಧನರಾಗಿದ್ದಾರೆ. ಮೃತರು ಓರ್ವ ಪುತ್ರ, ಐದು ಹೆಣ್ಣು ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯ ಸಂಸ್ಕಾರ ಗುರುವಾರ ಅವರ ತೋಟದಲ್ಲಿ ನೆರವೇರಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

ಜೆಎಸ್‌ಎಸ್ ಸೆಂಟರ್ ಫಾರ್ ಮ್ಯಾನೇಜ್‌ಮೆಂಟ್ ಸ್ಟಡೀಸ್ ಹಳೇ ವಿದ್ಯಾರ್ಥಿಗಳ ಸಮಾಗಮ

ಮೈಸೂರು,ಡಿ.28(ಎಂಕೆ)–ಜ್ಞಾನ ಮತ್ತು ಚಿಂತನೆ ಜೀವನದ ಮೌಲ್ಯಗಳಾಗಿವೆ. ಪ್ರತಿಯೊಬ್ಬರು ಬೆಳೆದುಬಂದ ಹಾದಿ, ಬೆಳೆಯಲು ಸಹಕಾರ ನೀಡಿದವರನ್ನು ಎಂದಿಗೂ ಮರೆಯಬಾರದು ಎಂದು ಧಾರವಾಡ ಐಐಐಟಿ ರಿಜಿಸ್ಟ್ರಾರ್ ಪ್ರೊ. ಚನ್ನಪ್ಪ ಬಿ ಅಕ್ಕಿ ಹೇಳಿದರು.




ಮೈಸೂರಿನ ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯದ ಜೆಎಸ್‌ಎಸ್ ಸೆಂಟರ್ ಫಾರ್ ಮ್ಯಾನೇಜ್‌ಮೆಂಟ್ ಸ್ಟಡೀಸ್ ವಿಭಾಗದಲ್ಲಿ ನಡೆದ ಅಲುಮ್ನಿ ಮೀಟ್‌ನಲ್ಲಿ ಮಾತನಾಡಿದ ಅವರು, ಸಂಸ್ಥೆಗಳ ಉಳಿವಿಗಾಗಿ ನಿರ್ಣಾಯಕವಾಗಿರುವ ತಾಂತ್ರಿಕ ಪ್ರಗತಿ ಮತ್ತು ಬದಲಾವಣೆಗಳನ್ನು ವಿವರಿಸಿದರು.

ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯದ ರಿಜಿಸ್ಟ್ರಾರ್ ಪ್ರೊ.ಎಸ್.ಎ. ಧನರಾಜ್ ಮಾತನಾಡಿ, ಸಂಸ್ಥೆಯ ಗುರಿಗಳು ಮತ್ತು ಸಾಧನೆಗಳ ಬೆಳವಣಿಗೆಯಲ್ಲಿ ಹಳೆಯ ವಿದ್ಯಾರ್ಥಿ ಪಾಲ್ಗೊಳ್ಳುವಿಕೆ ಮತ್ತು ಸಂಘದ ಪ್ರಾಮುಖ್ಯತೆಯನ್ನು ತಿಳಿಸಿದರು.

ಹಳೆಯ ವಿದ್ಯಾರ್ಥಿಗಳ ಅನುಭವ ಮತ್ತು ಗ್ರಹಿಕೆಯು ಬೆಳವಣಿಗೆಗೆ ಒಂದು ಪ್ರಮುಖ ಸಾಧನವಾಗಿದೆ ಎಂದು ಅಭಿಪ್ರಾಯಪಟ್ಟರು. ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ.ಎ.ಎನ್‌ಸಂತೋಷ್‌ಕುಮಾರ್, ಹಳೆಯ ವಿದ್ಯಾರ್ಥಿಗಳ ಸಂಘದ ಸಂಯೋಜಕಿ ಪ್ರೊ.ಶ್ರೀದೇವಿ ಕುಳೇನೂರ್, ಡೀನ್ ಪ್ರೊ.ನಾಗೇಶ್, ವಿಭಾಗದ ಮುಖ್ಯಸ್ಥ ಪ್ರೊ.ಸ್ವರೂಪ್ ಸಿಂಹ, ಸಹಾಯಕ ಪ್ರಾಧ್ಯಾಪಕಿ ಬಿ.ಪಿ.ಮಹೇಶ್ವರಿ ಮತ್ತಿತರರಿದ್ದರು.

ಮಹಿಳೆಯ ಸರಕಳವು

ಮೈಸೂರು, ಡಿ.28(ಎಂಕೆ)– ನಡೆದುಕೊಂಡು ಹೋಗುತ್ತಿದ್ದ ಮಹಿಳೆಯ ಮಾಂಗಲ್ಯ ಸರವನ್ನು ಅಪರಿಚಿತ ವ್ಯಕ್ತಿಗಳು ಕಿತ್ತುಕೊಂಡು ಪರಾರಿಯಾಗಿರುವ ಘಟನೆ ಮೈಸೂರಿನ ಜೆ.ಪಿ.ನಗರದ ಅಪೋಲೊ ಫಾರ್ಮಸಿ ಬಳಿ ನಡೆದಿದೆ.



ಜೆ.ಪಿ.ನಗರದ ಭುವನೇಶ್ವರಿ ಲೇಔಟ್‌ನ ದೇವಮ್ಮ ಅವರು ಅಪೋಲೊ ಫಾರ್ಮಸಿ ಬಳಿ ನಡೆದುಕೊಂಡು ಹೋಗುತ್ತಿದ್ದಾಗ ಹಿಂದಿನಿಂದ ಬಂದ ಅಪರಿಚಿತರು ದೇವಮ್ಮ ಅವರ ಕುತ್ತಿಗೆಯಲ್ಲಿದ್ದ ಸುಮಾರು 80 ಸಾವಿರ ರೂ. ಮೌಲ್ಯದ ಮಾಂಗಲ್ಯ ಸರವನ್ನು ಕಿತ್ತುಕೊಂಡು ಪರಾರಿಯಾಗಿದ್ದಾರೆ. ವಿದ್ಯಾರಣ್ಯಪುರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ನಕ್ಕರೆ ಅದೇ ಸ್ವರ್ಗ

ಆತ : ನೀವು ಒಂದು ಲೀಟರ್ ಪೆಟ್ರೋಲ್‌ನಿಂದ ಕಾರ್ ಎಷ್ಟು ಕಿಲೋಮೀಟರ್ ಓಡಿಸ್ತೀರಿ?

ಈತ : ಐದು ಕಿಲೋಮೀಟರ್

ಆತ : ಏನು, ಕೇವಲ ಐದೇ ಕಿಲೋಮೀಟರ್ರೇ?

ಈತ : ಇನ್ನುಳಿದ ಹದಿನೈದು ಕಿಲೋಮೀಟರ್ ನನ್ನ ಹೆಂಡ್ತಿ ಓಡಿಸ್ತಾಳೆ

ಮೈಸೂರು ಮಿತ್ರ

ಗುರುವಾರ, 29 ಡಿಸೆಂಬರ್ 2022

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಬೆಳಕಿಲ್ಲದೆ ವಸ್ತುಗಳು ಕಾಣಿಸುವುದಿಲ್ಲ. ಹಾಗೆಯೇ ಕುತೂಹಲವಿಲ್ಲದೆ ಜ್ಞಾನ ಸಂಪಾದಿಸಲಾಗದು. – ಶಂಕರಚಾರ್ಯರು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಬಟ್ಟೆ ನೋಡಿ ಮಣೆ ಹಾಕ್ತಾರೆ, ಬುದ್ಧಿ ನೋಡಿ ಹೊರಗೆ ಹಾಕ್ತಾರೆ

ನಿಮ್ಮ ಪತ್ರಗಳು

ನಾಗರಹಾವು ಚಿತ್ರಕ್ಕೆ 50 ವರ್ಷ

ಮಾನ್ಯರೆ,

ಡಿ.29ಕ್ಕೆ ಖ್ಯಾತ ನಿರ್ದೇಶಕ, ಚಿತ್ರರಂಗದ ಬ್ರಹ್ಮ ದಿವಂಗತ ಪುಟ್ಟಣ್ಣ ಕಣಗಾಲ್ ನಿರ್ದೇಶನದ ಎನ್.ವೀರಾಸ್ವಾಮಿ ನಿರ್ಮಾಣದ ಅಮೋಘ ಚಿತ್ರರತ್ನ "ನಾಗರಹಾವು" ಸಿನಿಮಾ ಬಿಡುಗಡೆಯಾಗಿ ಐವತ್ತು ವರ್ಷಗಳಾಗುತ್ತದೆ.

ಡಿ. 29 ರಂದು ಬಿಡುಗಡೆಯಾದ "ನಾಗರಹಾವು" ಕನ್ನಡ ಚಲನಚಿತ್ರರಂಗದಲ್ಲೇ ಒಂದು ಹೊಸ ದಾಖಲೆಯನ್ನೇ ಸೃಷ್ಟಿಸಿದಂತಹ ಚಿತ್ರ. ತ.ರಾ.ಸು ಅವರ ಕಾದಂಬರಿ ಆಧಾರಿತ ಈ ಚಿತ್ರ ಹಲವು ನಟ, ನಟಿಯರ ಜೀವನದ ದಿಕ್ಕನ್ನೇ ಬದಲಾಯಿಸಿದಂತಹ ಶ್ರೇಷ್ಠ ಚಿತ್ರ. ರಾಮಾಚಾರಿ (ದಿ.ಸಾಹಸಸಿಂಹ ವಿಷ್ಣುವರ್ಧನ್), ಜಲೀಲ (ದಿ. ರೆಬೆಲ್ ಸ್ಟಾರ್ ಅಂಬರೀಶ್), ಚಾಮಯ್ಯ ಮೇಷ್ಟ್ರು (ದಿ.ಕೆ.ಎಸ್.ಅಶ್ವಥ್), ಅಲುಮೇಲು (ಆರತಿ), ಮಾರ್ಗರೇಟ್ (ಶುಭಾ), ವರದ (ದಿ.ಶಿವರಾಮ್), ಒನಕೆ ಓಬವ್ವ ನಾಗಿ (ಅಭಿನಯ ಶಾರದೆ ದಿ.ಜಯಂತಿ) ಅವರುಗಳ ಅತ್ಯಮೋಘ ಅಭಿನಯ, ಹೀಗೆ ಪ್ರತಿಯೊಂದು ಪಾತ್ರಗಳು ಕನ್ನಡ ಚಲನಚಿತ್ರರಂಗ ಇರುವ ತನಕ ಅಜರಾಮರವಾಗಿರುತ್ತವೆ ಎಂದರೆ ತಪ್ಪಾಗಲಾರದು. ದಿ.ಪುಟ್ಟಣ್ಣ ಕಣಗಾಲರ ಈ ಯಶಸ್ವಿ ಚಿತ್ರ ಇತರ ಭಾಷೆಗಳಲ್ಲಿ ನಿರ್ಮಾಣವಾಯಿತು. ಭಾರತದ ಶ್ರೇಷ್ಠ ನಿರ್ದೇಶಕರುಗಳಲ್ಲಿ ದಿವಂಗತ ಪುಟ್ಟಣ್ಣ ಕಣಗಾಲ್ ಕೂಡ ಒಬ್ಬರು. ದಿ.ಪುಟ್ಟಣ್ಣನವರಿಗೆ ಪುಟ್ಟಣ್ಣನವರೇ ಸರಿಸಾಟಿ. ಕನ್ನಡ ಚಲನಚಿತ್ರರಂಗದಲ್ಲಿ ಮತ್ತೊಮ್ಮೆ ಪುಟ್ಟಣ್ಣ ಕಣಗಾಲ್‌ರಂತಹ ಶ್ರೇಷ್ಠ ನಿರ್ದೇಶಕರು ಹುಟ್ಟಿ ಬರಲಿ. ನಾಗರಹಾವು ಚಿತ್ರಕ್ಕೆ "ಸುವರ್ಣ ಸಂಭ್ರಮದ ಶುಭಾಶಯಗಳು"

–ಅಹಲ್ಯ ಸೀನ ಚಂದ್ರ, ಜನತಾ ನಗರ, ಮೈಸೂರು

ಪೇಜಾವರ ಶ್ರೀಗಳಿಗೆ ಮೈಸೂರಿನಲ್ಲಿ ಸ್ಮಾರಕ ನಿರ್ಮಿಸಲಿ!

ಮಾನ್ಯರೆ,

ಪೇಜಾವರ ಶ್ರೀ ವಿಶ್ವೇಶತೀರ್ಥ ಸ್ವಾಮೀಜಿಯವರು ಶ್ರೀ ಕೃಷ್ಣನಲ್ಲಿ ಲೀನವಾಗಿ ಡಿಸೆಂಬರ್ 29ಕ್ಕೆ ಮೂರು ವರ್ಷವಾಗುತ್ತದೆ. ಪೇಜಾವರ ಶ್ರೀಗಳಿಗೆ ಮೈಸೂರೆಂದರೆ ಬಹಳ ಪ್ರೀತಿ. ಮೈಸೂರಿನಲ್ಲಿ ಶ್ರೀ ಕೃಷ್ಣಧಾಮ, ಶ್ರೀ ರಾಮಧಾಮ, ವಿಜಯ ವಿಠಲ ವಿದ್ಯಾಸಂಸ್ಥೆಗಳು, ಪೇಜಾವರ ಶ್ರೀಧಾಮ, ಹಿಂದುಳಿದ ವರ್ಗಗಳ ವಸತಿ ಶಾಲೆ ಇವುಗಳನ್ನು ನಿರ್ಮಿಸಿ ಸದಾ ಅಮರರಾಗಿದ್ದಾರೆ. ಮೈಸೂರಿನಲ್ಲಿ ಮಂಜುನಾಥನಗರ, ಕೃಷ್ಣಮೂರ್ತಿಪುರಂ, ಗಾಂಧಿನಗರ ಇಲ್ಲಿ ಪಾದಯಾತ್ರೆ ಮಾಡಿ, ಎಲ್ಲರಲ್ಲೂ ಸಾಮರಸ್ಯ ಉಂಟು ಮಾಡಿದ ಶ್ರೇಷ್ಠ ಯತಿರತ್ನ ಶ್ರೀ ಪೇಜಾವರಗಳು. ಮೈಸೂರಿನಲ್ಲಿ ದಸರಾ ಉದ್ಘಾಟನೆ ಮಾಡಿ, ದಸರಾ ನಾಡಹಬ್ಬ ಹಾಗೂ ದೇಶದ ಹಬ್ಬ ಎಂದು ಪ್ರಶಂಸಿಸಿದರು. ದೇಶಾದ್ಯಂತ ಹಿಂದುಳಿದ ವರ್ಗಗಳ ವಸತಿ ನಿವಾಸಗಳಿಗೆ ಭೇಟಿ ನೀಡಿ, ಎಲ್ಲರೂ ವಿದ್ಯಾವಂತರಾಗಬೇಕೆಂದು ಕರೆ ನೀಡಿದ್ದರು. ತುರ್ತು ಪರಿಸ್ಥಿತಿಯಲ್ಲಿ ಪ್ರತಿಭಟನೆ, ಪಂಜಾಬಿನಲ್ಲಿ ಶಾಂತಿ ಯಾತ್ರೆ, ಉತ್ತರ ಭಾರತದ ಉಮಾ ಭಾರತಿಗೆ ಸನ್ಯಾಸಿ ಧೀಕ್ಷೆ, ಕೈಗಾ ಅಣು ವಿದ್ಯುತ್ ಸ್ಥಾವರ ವಿರೋಧಿ ಹೋರಾಟದ ಜೊತೆಗೆ ಅಪ್ಪಟ ಪರಿಸರ ಪ್ರೇಮಿಯಾಗಿದ್ದರು. ಮೈಸೂರಿನ ಕೃಷ್ಣಧಾಮದ ಎದುರು ವೃತ್ತಕ್ಕೆ ಶ್ರೀ ಪೇಜಾವರ ವೃತ್ತ ಎಂದು ನಾಮಕರಣ ಮಾಡಲಿ. ಮೈಸೂರಿನ ಹೃದಯ ಭಾಗದಲ್ಲಿ ಪೇಜಾವರ ಶ್ರೀಗಳ ಪ್ರತಿಮೆ ಸ್ಥಾಪಿಸಿ, ಅಲ್ಲಿ ಅವರ ಸಂದೇಶಗಳನ್ನು ಕೆತ್ತಲಿ. ಮೈಸೂರಿನ ಜಿಲ್ಲಾಡಳಿತ, ಸಂಘ–ಸಂಸ್ಥೆಗಳು ಪೇಜಾವರರ ಸ್ಮಾರಕ ಸ್ಥಾಪನೆ ಮಾಡಲಿ ಎಂದು ಈ ಮೂಲಕ ಕೋರುತ್ತೇನೆ.

–ಎಸ್.ನಾಗರಾಜ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು, ಅರವಿಂದನಗರ, ಮೈಸೂರು.

ಕೋವಿಡ್ ಬಗ್ಗೆ ಆತಂಕ ಬೇಡ, ಸುರಕ್ಷತಾ ಕ್ರಮ ಅನುಸರಿಸಿ!!

ಮಾನ್ಯರೆ,

ಇತ್ತೀಚಿನ ದಿನಗಳಲ್ಲಿ ಕೋವಿಡ್ ರೂಪಾಂತರ ತಳಿ ಬಿಎಫ್ 7 ಚೀನಾ ಸೇರಿದಂತೆ ಅನೇಕ ರಾಷ್ಟ್ರಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕೇಕೆ ಹಾಕುತ್ತಿದ್ದು, ಭಾರತೀಯರು ಲಾಕ್‌ಡೌನ್‌ನಿಂದ ನಿಟ್ಟುಸಿರು ಬಿಡುತ್ತಾ ಬದುಕಿನ ಹಳಿಯನ್ನು ಸುಧಾರಿಸುತ್ತಿರುವ ಸಂದರ್ಭದಲ್ಲಿ ಮತ್ತೊಮ್ಮೆ ಲಾಕ್‌ಡೌನ್ ಮಾಡಿದರೆ ಎಂದು ಅನೇಕ ಜನರಲ್ಲಿ ನಿದ್ದೆಗೆಡಿಸಿ ಭಯ ಮತ್ತು ಆತಂಕ ಶುರುವಾಗಿದೆ, ಆದರೆ ಭಾರತೀಯರು ಆತಂಕ ಪಡುವ ಅಗತ್ಯವಿಲ್ಲ, ಕೋವಿಡ್ ಪರಿಸ್ಥಿತಿ ಭಾರತದಲ್ಲಿ ನಿಯಂತ್ರಣದಲ್ಲಿದೆ ಎಂದು ತಜ್ಞರೇ ಹೇಳುತ್ತಿದ್ದಾರೆ. ಈಗಾಗಲೇ ರೋಗ ನಿರೋಧಕ ಶಕ್ತಿಯಿರುವ ಮೂರು ಲಸಿಕೆಗಳನ್ನು ಪಡೆದಿರುವುದರಿಂದ ಭಾರತದಲ್ಲಿ ಅಂತಹ ಯಾವುದೇ ಅಪಾಯಕಾರಿ ಗಂಭೀರ ಪ್ರಕರಣಗಳು ದಾಖಲಾಗಿಲ್ಲ, ಆದರೆ ಸಾರ್ವಜನಿಕರು ಈಗಲೇ ಎಚ್ಚೆತ್ತುಕೊಂಡು ಮುನ್ನೆಚ್ಚರಿಕೆ ಮತ್ತು ಅಗತ್ಯ ಸುರಕ್ಷತಾ ಕ್ರಮಗಳನ್ನು ಅನುಸರಿಸಿದರೆ ಕೋವಿಡ್ ಉಲ್ಬಣವನ್ನು ನಿಯಂತ್ರಿಸಬಹುದು, ಸರ್ಕಾರದ ಮಾರ್ಗಸೂಚಿಗಳೊಂದಿಗೆ, ಸಾರ್ವಜನಿಕ ಸ್ಥಳಗಳಲ್ಲಿ ಕಡ್ಡಾಯವಾಗಿ ಮಾಸ್ಕನ್ನು ಧರಿಸಿ, ಸಾಮಾಜಿಕ ಅಂತರವನ್ನು ಕಾಪಾಡಿಕೊಳ್ಳುವುದು, ಮೂರನೇ ಬೂಸ್ಟರ್ ಡೋಸ್ ಲಸಿಕೆಯು ರಾಮಬಾಣವಾಗಿದ್ದು ಕಡ್ಡಾಯವಾಗಿ ಹಾಕಿಸಿಕೊಳ್ಳುವುದು, ರೋಗ ನಿರೋಧಕ ಶಕ್ತಿಯಿರುವ ಆಹಾರಗಳನ್ನು ಸೇವಿಸುವುದು, ಬೆಳಿಗ್ಗೆ ಮತ್ತು ಸಂಜೆಯ ವೇಳೆಯಲ್ಲಿ ಹಿಮ ಮತ್ತು ಶೀತ ಗಾಳಿ ಬೀಸುತ್ತಿರುವುದರಿಂದ ವಾಕಿಂಗ್ ನಿಲ್ಲಿಸಿ ಮನೆಯಲ್ಲಿಯೇ ಸರಳ ವ್ಯಾಯಾಮಗಳನ್ನು ಮಾಡುವುದು, ಆಗಾಗ ಸೋಪಿನಿಂದ ಕೈ ಸ್ವಚ್ಛಗೊಳಿಸುವುದು, ಶರೀರವನ್ನು ಬೆಚ್ಚಗಿಟ್ಟುಕೊಳ್ಳಲು ಸ್ವೆಟರ್‌ನಂತಹ ರಕ್ಷಣೆ ನೀಡುವ ಉಡುಪನ್ನು ಧರಿಸುವುದು, ನೆಗಡಿ, ಕೆಮ್ಮು, ಜ್ವರ ಬಂದರೆ ಹತ್ತಿರದ ಆರೋಗ್ಯ ಕೇಂದ್ರಕ್ಕೆ ತೆರಳಿ ಚಿಕಿತ್ಸೆಯನ್ನು ಪಡೆಯುವುದು, ಕೋವಿಡ್ ಅನ್ನು ವೈಭವೀಕರಿಸುವ ಟಿವಿ ಚಾನೆಲ್‌ಗಳನ್ನು ವೀಕ್ಷಿಸುವುದನ್ನು ನಿಲ್ಲಿಸಿ, ಪುಸ್ತಕಗಳನ್ನು ಓದುವತ್ತ ಗಮನ ನೀಡಿದರೆ ಮನಸ್ಸಿಗೆ ನೆಮ್ಮದಿ ಸಿಗುತ್ತದೆ, ಇವೆಲ್ಲವನ್ನೂ ಸಾರ್ವಜನಿಕರು ತಪ್ಪದೇ ಪಾಲಿಸಿದರೆ ಕೋವಿಡ್‌ನ ನಾಲ್ಕನೆಯ ಅಲೆಯ ಸೋಂಕಿನ ಅಪಾಯವನ್ನು ನಿಯಂತ್ರಿಸಬಹುದಾಗಿದೆ.


–ಪರಶಿವಮೂರ್ತಿ ಎನ್.ಪಿ, ನಂಜೀಪುರ, ಸರಗೂರು ತಾ.

ಕೆ–ಸೆಟ್ ಅರ್ಹತಾ ಪರೀಕ್ಷೆಗೆ ಇನ್ನೆಷ್ಟು ದಿನ ಬೇಕು

ಮಾನ್ಯರೆ,

ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಇಲಾಖೆ, ಮೈಸೂರು ವಿಶ್ವವಿದ್ಯಾಲಯ ಪ್ರತಿ ವರ್ಷ ನಡೆಸುತ್ತಿದ್ದ ಕರ್ನಾಟಕ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ ಕೆ–ಸೆಟ್ ಪರೀಕ್ಷೆ ನಡೆದು ಸರಿಸುಮಾರು ಎರಡು ವರ್ಷಗಳೇ ಕಳೆದಿವೆ. 2021ರ ಫೆಬ್ರವರಿ ತಿಂಗಳಿನಲ್ಲಿ ನಡೆದಿದ್ದ ಅರ್ಹತಾ ಪರೀಕ್ಷೆ, ನಂತರ ಕೊರೊನಾ ಕಾರಣದಿಂದ ನಡೆಸಿರಲಿಲ್ಲ. ಕೆ– ಸೆಟ್ ಪರೀಕ್ಷೆಯನ್ನು ಪ್ರತಿ ವರ್ಷವೂ ನಡೆಸಬೇಕಾಗಿತ್ತು. ಆದರೆ ಎರಡು ವರ್ಷವಾದರೂ ಸಾಂಕ್ರಾಮಿಕ ರೋಗದ ಆತಂಕ ಕಡಿಮೆಯಾಗಿ ಎಲ್ಲಾ ಪರೀಕ್ಷೆಗಳು ಸುಸೂತ್ರವಾಗಿ ನಡೆಯುತ್ತಿದ್ದರೂ ಸಹ ಕೆ–ಸೆಟ್ ಪರೀಕ್ಷೆಗೆ ಇನ್ನು ಗ್ರಹಣ ಬಿಟ್ಟಿಲ್ಲ. ಇದರಿಂದ ಲಕ್ಷಾಂತರ ಮಂದಿ ಸ್ನಾತಕೋತ್ತರ ಪದವೀಧರರು, ಸಹಾಯಕ ಪ್ರಾಧ್ಯಾಪಕ ಆಕಾಂಕ್ಷಿಗಳು ಸತತವಾಗಿ ಮನವಿ ಮಾಡಿದರೂ ಸಹ ಇದರ ಬಗ್ಗೆ ಉನ್ನತ ಶಿಕ್ಷಣ ಇಲಾಖೆಯಾಗಲಿ ಅಥವಾ ಮೈಸೂರು ವಿಶ್ವವಿದ್ಯಾಲಯವಾಗಲಿ ಯಾವುದೇ ಪ್ರಕಟಣೆಯನ್ನು ಹೊರಡಿಸಿಲ್ಲ. 2023ರಲ್ಲಾದರೂ ಅರ್ಹತಾ ಪರೀಕ್ಷೆ ನಡೆಸುವರೇ ಎಂಬ ಆಶಾಭಾವನೆಯನ್ನು ಇಟ್ಟುಕೊಂಡಿದ್ದಾರೆ. ಆದಷ್ಟು ಬೇಗ ಇದರ ಬಗ್ಗೆ ಸೂಕ್ತ ನಿರ್ಣಯ ಕೈಗೊಂಡು ಆಕಾಂಕ್ಷಿಗಳಿಗೆ ಅನುವು ಮಾಡಿಕೊಡಿ.

–ಲಕ್ಷ್ಮಿ ಕಿಶೋರ್ ಅರಸ್, ಉಪನ್ಯಾಸಕರು, ಮೈಸೂರು.



ಕೆಬಿಜೆಯವರ

ಛೂಮಂತ್ರ... ಛೂಮಂತ್ರ... ಛೂಮಂತ್ರ...

ಭೌಗೋಳಿಕ ವಿಸ್ಮಯದಂತಿರುವ ಕಾಶ್ಮೀರದ ಬಗ್ಗೆ ಪ್ರವಾಸಿಗರೊಬ್ಬರ ಅನಿಸಿಕೆ–2



Along the way, the landscape...

(ಡಿ.23ರ ಸಂಚಿಕೆಯಿಂದ)

ಈ ಅಂಕಣದಲ್ಲಿ ಹಿಂದೆ ನಾನು ವಿವರಿಸಿರುವಂತೆ ಕಾಶ್ಮೀರದ ಪ್ರಾಚೀನ ಇತಿಹಾಸವು ಕಾಶ್ಮೀರದ ಪ್ರಸ್ತುತ ಚರಿತ್ರೆಗೆ ಸಂಪೂರ್ಣ ವಿರುದ್ಧವಾಗಿದೆ. ಪ್ರಾಯಶಃ ಕಾಶ್ಮೀರ ಕಣಿವೆಯ ಭೌಗೋಳಿಕ ಮೇಲ್ಮೈಯನ್ನು ಹೊರತುಪಡಿಸಿ, ಮಾನವ ಜೀವನ ಮತ್ತು ಚಟುವಟಿಕೆಯ ಪ್ರತಿಯೊಂದು ಆಯಾಮವು ಕಾಶ್ಮೀರದ ಬಗ್ಗೆ ನಾವು ಹಿಂದೆ ಓದಿದ್ದ ಚರಿತ್ರೆ ಮತ್ತು ಪ್ರವಾಸಿ ಪುಸ್ತಕಗಳಿಗಿಂತ ಸಂಪೂರ್ಣ ಭಿನ್ನವಾಗಿದೆಯೆಂದು ತೋರುತ್ತದೆ. ಕಳೆದ ನವೆಂಬರ್ ತಿಂಗಳ ಕಡೆಯ ದಿನಗಳಲ್ಲಿ ನಾನು ನನ್ನ ರೋಟರಿ ಗೆಳೆಯರೊಂದಿಗೆ ಕಾಶ್ಮೀರ ಕಣಿವೆ ತಲುಪಿದಾಗ ನನಗೆ ಈ ಸತ್ಯ ದರ್ಶನವಾಯಿತು.

ಭಾರತದಾದ್ಯಂತ ನಾನು ಹಲವಾರು ಐತಿಹಾಸಿಕ ಹಾಗೂ ಧಾರ್ಮಿಕ ಸ್ಥಳಗಳನ್ನು ನೋಡಿದ್ದೇನೆ. ಆದರೆ ಕೆಲವು ಗೊತ್ತಿಲ್ಲದ ಕಾರಣಗಳಿಂದಾಗಿ, ನಾನು ಕಾಶ್ಮೀರಕ್ಕೆ ಭೇಟಿ ನೀಡಲು ಇದುವರೆಗೂ ಸಾಧ್ಯವಾಗಿರಲಿಲ್ಲ. ಆದರೆ ಈ ಬಾರಿ ಅದು ಸಾಧ್ಯವಾಯಿತು. ಈ ಪ್ರವಾಸವನ್ನು ಆಯೋಜಿಸಿದ್ದ ನನ್ನ ರೋಟರಿ ಮಿತ್ರರಾದ ಎಂ.ಲಕ್ಷ್ಮಿ ನಾರಾಯಣ್ ಅವರಿಗೆ ಧನ್ಯವಾದಗಳು. ಇದು ಕಾಶ್ಮೀರ ನೋಡಲು ನನಗೆ ಕಡೇ ಅವಕಾಶ ಎಂದು ಭಾವಿಸಿ, ಪ್ರವಾಸ ಹೊರಡಲು ನಾನು ತಕ್ಷಣ ಒಪ್ಪಿಕೊಂಡೆ. ಓರ್ವ ಪ್ರವಾಸಿಗನಾಗಿ ಕಾಶ್ಮೀರಕ್ಕೆ ಭೇಟಿ ನೀಡಲು ಈ ರೀತಿ ಸಾಧ್ಯವಾಯಿತು.

ನಾವು, ಮೈಸೂರಿನಿಂದ ಫ್ಲೈ ಬಸ್ಸಿನಲ್ಲಿ ಬೆಂಗಳೂರು ವಿಮಾನ ನಿಲ್ದಾಣ ತಲುಪಿದೆವು. ಹಾಗೂ ಅಲ್ಲಿಂದ ದೆಹಲಿಗೆ (ಎರಡೂವರೆ ಗಂಟೆ ಪ್ರಯಾಣ) ಒಂದು ವಿಮಾನವನ್ನು ಹತ್ತಿದೆವು. ಮತ್ತೆ, ದೆಹಲಿಯಿಂದ ಆ ವಿಮಾನವೇ ಒಂದು ಗಂಟೆ ಅವಧಿಯಲ್ಲಿ ಶ್ರೀನಗರಕ್ಕೆ ತೆರಳುತ್ತದೆ. ಮೈಸೂರಿನಿಂದ ಕಾಶ್ಮೀರಕ್ಕೆ ಒಮ್ಮೆಲೆ ಹೋಗುವುದು ಒಳ್ಳೆಯದೆಂದು ತೋರಿತು. ಪತ್ರಿಕೆಗಳಲ್ಲಿ ನಾವು ಆಗಾಗ್ಗೆ ಓದುವಂತೆ, ಅಲ್ಲಿನ ಕೆಲವು ಹೆಸರಾಂತ ಹಾಗೂ ಪ್ರಸಿದ್ಧ ಸ್ಥಳಗಳು–ಅಂದರೆ ಗುಲ್ಮಾರ್ಗ್, ಸೋನಾಮಾರ್ಗ, ದಾಲ್ ಲೇಕ್ ಮತ್ತು ಮೊಘಲ್ ಗಾರ್ಡನ್ ಮುಂತಾದವು ಶ್ರೀನಗರದ ಸುತ್ತಮುತ್ತಲೇ ಇರುಬಹುದು ಎಂದು ನನ್ನಷ್ಟಕ್ಕೆ ನಾನು ಯಾವಾಗಲೂ ಯೋಚಿಸುತ್ತಿದ್ದೆ.

ಅದರೆ ನಮ್ಮ ಏಳು ದಿನಗಳ ಕಾಲದ ಪ್ರವಾಸದ ದಿಕ್ಸೂಚಿ ಪುಸ್ತಕವು ಈ ನಮ್ಮ ಲೆಕ್ಕಾಚಾರಗಳನ್ನು ತಿರುಗು ಮುರುಗು ಮಾಡಿತು. ನಿಜವಾದ ಚಳಿಗಾಲ ಇಲ್ಲಿ ನವೆಂಬರ್ ತಿಂಗಳಲ್ಲಿ ಪ್ರಾರಂಭವಾಗುತ್ತದೆ. ನಮ್ಮ ವಿಮಾನ ಭೂಸ್ಪರ್ಶ ಮಾಡುತ್ತಿದ್ದಂತೆಯೇ ಅದರ ಅನುಭವ ನಮಗಾಯಿತು. ಸೂರ್ಯನ ಕಿರಣಗಳ ಸ್ಪರ್ಶದಿಂದ ಪ್ರಕಾಶಮಾನವಾಗಿ ಹೊಳೆಯುತ್ತಿದ್ದ ಹಿಮದಿಂದ ಆವೃತ್ತವಾದ ಪರ್ವತ ಶ್ರೇಣಿಗಳು ನಮ್ಮ ಮನಸೂರೆಗೊಂಡವು. ನಮ್ಮನ್ನು ಅಚ್ಚರಿಗೊಳಿಸಲು ಇದೇ ರೀತಿಯ ಇನ್ನೂ ಹಲವಾರು ಪರ್ವತ ಶ್ರೇಣಿಗಳು ನೋಡಲು ಲಭ್ಯವಿದೆ ಎಂಬುದು ಸ್ಪಷ್ಟವಾಯಿತು.

ಅಂದು ರಾತ್ರಿ ನಾವು ನಮಗಾಗಿ ಕಾಯ್ದಿರಿಸಿದ್ದ ಹೋಟೆಲಿನ ರೂಮುಗಳನ್ನು ಸೇರಿಕೊಂಡೆವು. ನಂತರ ಮರುದಿನ ಬೆಳಗಿನ ಉಪಾಹಾರಮುಗಿಸಿದ ಬಳಿಕ ಸೋನಾಮಾರ್ಗ್ ಎಂದು ಕರೆಯಲ್ಪಡುವ 85 ಕಿಲೋ ಮೀಟರ್ ದೂರದ ಸ್ಥಳವನ್ನು ತಲುಪಲು ಸಿದ್ಧರಾದೆವು. ಈ ಸ್ಥಳವು ಸಿಂಧ್ ಕಣಿವೆಯಲ್ಲಿದೆ ಎಂದು ನಮಗೆ ತಿಳಿಸಲಾಯಿತು. ಅಲ್ಪ ವಿರಾಮಕ್ಕಾಗಿ ರಸ್ತೆಬದಿಯ ಒಂದು ಟೀ ಅಂಗಡಿ ಬಳಿ ನಮ್ಮ ವಾಹನವನ್ನು ನಿಲ್ಲಿಸಿದೆವು ಹಾಗೂ ಅಲ್ಲಿಂದ ಮುಂದೆ ಮತ್ತೊಂದು ಸ್ಥಳಕ್ಕೆ ತೆರಳಿದೆವು. ಅಲ್ಲಿ ಸಾಹಸ ಮನೋಭಾವವುಳ್ಳಂತಹವರು ಪರ್ವತ ಜಾರು ಬಂಡಿ ಆಡಲು ತೆರಳಿದರು. ನಿರೀಕ್ಷೆಯಂತೆ, ಪರ್ವತಗಳು ಹಾಲಿನಷ್ಟೇ ಬೆಳ್ಳನೆಯ ಕಣ್ಮನ ಸೆಳೆಯುವ ಹಿಮದಿಂದ ಆವೃತ್ತಗೊಂಡಿದ್ದವು. ಇತ್ತ ಜೇಲಮ್ ನದಿಯು ಅಂಕು–ಡೊಂಕಾದ ಕಣಿವೆಗಳಲ್ಲಿ ಪ್ರಶಾಂತವಾಗಿ ಹರಿಯುತ್ತಿತ್ತು.

ಇಲ್ಲಿ **ಕುತೂಹಲಕಾರಿ ಸಂಗತಿ ಎಂದರೆ, ಸೋನಾಮಾರ್ಗ್‌ನಲ್ಲಿ ಲಡಕ್‌ಗೆ ಸಂಪರ್ಕ ಕಲ್ಪಿಸುವ ಸರ್ವಋತು ಜೋಜಿ–ಲಾ ಎಂಬ ಸುರಂಗದ ಬೃಹತ್ ಕಾಮಗಾರಿ ಪ್ರಗತಿಯಲ್ಲಿತ್ತು.** ಇದು 9.5 ಮೀಟರ್ ಅಗಲ, 7.57 ಮೀಟರ್ ಎತ್ತರವಿದೆ. ಈ ಸುರಂಗವು ಹಿಮಾಲಯ ಶ್ರೇಣಿಯಲ್ಲಿ ಸೋನಾಮಾರ್ಗ್ ಮತ್ತು ಕೇಂದ್ರಾಡಳಿತ ಪ್ರದೇಶ ಲಡಕ್ ಮಾರ್ಗ (ರಾಷ್ಟ್ರೀಯ ಹೆದ್ದಾರಿ–1) ಕಾರ್ಗಿಲ್ ಜಿಲ್ಲೆಯ ಡ್ರಾಸ್ ಪಟ್ಟಣಗಳ ನಡುವಿನ ಅಂತರವನ್ನು ಹಿಮಾಲಯದ ಜೋಸಿ–ಲಾ ಪಾಸ್‌ನಲ್ಲಿ ಸುಮಾರು 16 ಕಿ.ಮೀಗೆ ಕಡಿತಗೊಳಿಸುತ್ತದೆ. ಈ ಕಾಮಗಾರಿಯ ಕೆಲಸವು 15ನೇ ಅಕ್ಟೋಬರ್ 2020 ರಂದು ಪ್ರಾರಂಭವಾಗಿತ್ತು. ದೇಶದ ರಕ್ಷಣಾತ್ಮಕ ದೂರದೃಷ್ಟಿಯಿಂದ ಇದರ ಹೆಗ್ಗಳಿಕೆ ಪ್ರಧಾನಮಂತ್ರಿ ನರೇಂದ್ರ ಮೋದಿಯವರಿಗೆ ಸಲ್ಲುತ್ತದೆ.

ಈ ಸುರಂಗ ಕಾಮಗಾರಿಯನ್ನು ನೋಡಿದ ಮೇಲೆ, ನನಗೆ 1999ರಲ್ಲಿ ನಡೆದ ಕಾರ್ಗಿಲ್ ಯುದ್ಧ ಜ್ಞಾಪಕಕ್ಕೆ ಬಂತು. ಆ ಸಮಯದಲ್ಲಿ ದಿವಂಗತ ಅಟಲ್ ಬಿಹಾರಿ ವಾಜಪೇಯಿ ಪ್ರಧಾನಿಯಾಗಿದ್ದರು ಹಾಗೂ ಜನರಲ್ ಪರ್ವೇಜ್ ಮುಷರಫ್ ಪಾಕಿಸ್ತಾನಿ ಶಸ್ತ್ರಾಸ್ತ್ರ ಪಡೆಗಳ ಮುಖ್ಯಸ್ಥರಾಗಿದ್ದರು. ಸೋನಾಮಾರ್ಗ್‌ದಿಂದ ಈ ರಸ್ತೆಯು ಕಾರ್ಗಿಲ್ ಹಾಗೂ ಅಲ್ಲಿಂದ ಲಡಾಕ್‌ಗೆ ಸಾಗುತ್ತದೆ ಎಂದು ನಮ್ಮ ಗೈಡ್ ಹೇಳಿದರು. ಅವರು ಹೇಳಿದ್ದನ್ನು ಕೇಳಿದರೆ, ಕಾರ್ಗಿಲ್, ಕಾಶ್ಮೀರದಿಂದ (ಭಾರತ) ಕಡಿತಗೊಂಡರು ಏನಾಗಬಹುದು ಎಂದು ಅಚ್ಚರಿಯಾಯಿತು. ಆಗಿದ್ದರೆ ಪ್ರಾಯಶಃ, ಪಿಓಕೆಯಂತೆ (ಪಾಕಿಸ್ತಾನ ಆಕ್ರಮಿತ ಕಾಶ್ಮೀರದಂತೆ)ಭಾರತ ಪಾಕಿಸ್ತಾನಕ್ಕೆ ಲಡಕ್ ಅನ್ನು ಬಿಟ್ಟು ಕೊಟ್ಟಂತೆ ಆಗುತ್ತಿತ್ತು. (ಪಿಓಎಲ್). ದೇವರು ನಮ್ಮ ಪರವಿದ್ದ, ನಾವು ಕಾರ್ಗಿಲ್ ಯುದ್ಧದಲ್ಲಿ ಜಯಶಾಲಿಗಳಾದೆವು. ಭಾರತದ ನೆರೆ ರಾಷ್ಟ್ರಗಳು ನಮ್ಮ ಶತ್ರುಗಳಾಗಿರುವಾಗ, ಇಂತಹ ಸ್ಥಿತಿಯಲ್ಲಿ ನಾವು ನಿರಂತರ ಕಟ್ಟೆಚ್ಚರದಿಂದಿರಬೇಕು. ಹಾಗೂ ಮಿಲಿಟರಿ ಪರಾಕ್ರಮಗಳೇ ನಮ್ಮ ರಾಷ್ಟ್ರೀಯ ಭದ್ರತೆಗೆ ಖಾತರಿಯಾಗಬಲ್ಲವು.

ನಾವು ಅಂದು ಸಂಜೆ ಶ್ರೀನಗರದ ಹೋಟೆಲ್ಲಿಗೆ ಹಿಂದಿರುಗಿದೆವು. ಮರುದಿನ ಬೆಳಗ್ಗೆ, ನಾವು ಶ್ರೀನಗರದಿಂದ 56 ಕಿ.ಮೀ. ದೂರವಿರುವ ಗುಲ್ಮಾರ್ಗ್‌ಗೆ ಹೊರಟೆವು. ಗುಲ್ಮಾರ್ಗ್ ಪ್ರದೇಶವು ಒಂದು ಸುದೀರ್ಘ, ಅಗಲವಾದ ರಸ್ತೆ ಇಕ್ಕೆಲಗಳಲ್ಲಿ ಸುಂದರವಾದ ಮರಗಳನ್ನು ಹೊಂದಿರಬಹುದೆಂದು ನಾನು ಊಹಿಸಿದ್ದೆ. ಕಾಶ್ಮೀರವು ಸುಂದರ ಮರಗಳಿಗೆ ಹೆಸರುವಾಸಿಯಾಗಿದೆ. ಆದರೆ ನಾನು ಅದಾಗಲೇ ಹಿಮದಿಂದ ಆವೃತ್ತವಾದ 18 ಹೋಲ್‌ಗಳ ಗಾಲ್ಫ್ ಮೈದಾನ (ಕೋರ್ಸ್) ಹಾಗೂ ಅಂಕು–ಡೊಂಕಿನ ಕಿರಿದಾದ ರಸ್ತೆಗಳನ್ನು ನೋಡಿದೆ. ಸಮುದ್ರ ಮಟ್ಟದಿಂದ ಪ್ರಪಂಚದಲ್ಲೇ ಅತ್ಯಂತ ಎತ್ತರದಲ್ಲಿರುವುದು ಈ ಗಾಲ್ಫ್ ಮೈದಾನ. ಪ್ರವಾಸಿಗರಿಗೆ ಇಲ್ಲಿ ಆಸಕ್ತಿದಾಯಕವಾದ ಚಟುವಟಿಕೆ ಎಂದರೆ, "ಗೊಂಡೊಲಾ" ಎಂಬ ಕೇಬಲ್ ಕಾರಿನಲ್ಲಿ ಸವಾರಿ ಮಾಡುವುದು. ಇದರ ಮೂಲಕ ಹಿಮದಿಂದ ಆವೃತ್ತವಾಗಿರುವ ಪರ್ವತಗಳ ಪಕ್ಷಿನೋಟವನ್ನು ಪ್ರವಾಸಿಗರು ಸವಿಯಬಹುದು ಹಾಗೂ ಪರ್ವತಗಳ ಇಳಿಜಾರಿನಲ್ಲಿ ಎತ್ತರಕ್ಕೆ ಬೆಳೆದು ನಿಂತಿರುವ ದೇವದಾರು ಮರಗಳನ್ನು ಕಾಣಬಹುದು.

ಅಂದು ರಾತ್ರಿ ಗುಲ್ಮಾರ್ಗ್‌ನ ಸ್ಥಳೀಯ ಹೋಟೆಲಿನಲ್ಲಿ ತಂಗಿದ್ದೆವು. ಮಾರನೆಯ ದಿನ ಬೆಳಗ್ಗೆ 145 ಕಿ.ಮೀ. ದೂರದ ಮತ್ತೊಂದು ರಮಣೀಯ ಸ್ಥಳವಾದ "ಪಹಲ್‌ಗಮ್ ಎಂಬಲ್ಲಿಗೆ ಹೊರಟೆವು. ಇದನ್ನು ಸಾಮಾನ್ಯವಾಗಿ 'ಕುರುಬರ ಕಣಿವೆ' (Valley of Shepherds) ಎಂದು ಕರೆಯುತ್ತಾರೆ. ಮತ್ತೆ ನೀವು ಇಲ್ಲಿ ಹಿಮದಿಂದ ಆವೃತ್ತವಾದ ಪರ್ವತಗಳು ಹಾಗೂ ಅದರ ಕೆಳಭಾಗದಲ್ಲಿ ಹರಿಯುವ ನದಿಯನ್ನು ನೋಡುವಿರಿ. ಇದನ್ನು ಲಿಡರ್ ನದಿ ಎಂದು ಕರೆಯುತ್ತಾರೆ. ಚಾರಣದಲ್ಲಿ ಆಸಕ್ತಿ ಹೊಂದಿದವರು, ಚಾರಣ ಮಾರ್ಗಗಳನ್ನು ಅನುಸರಿಸಬಹುದು. ಇಲ್ಲಿ ಸಣ್ಣ ಕುದುರೆಗಳು ಲಭ್ಯವಿದೆ. ಅರು, ಬೇತಾಬ್ (ಆ ಹೆಸರಿನ, ಹಿರಿಯ ನಟ ಧರ್ಮೇಂದ್ರರ ಪುತ್ರ ಸನ್ನಿ ಡಿಯೋಲ್– ಅಮೃತಾ ಸಿಂಗ್ ಅಭಿನಯದ ಹಿಂದಿ ಚಿತ್ರದ ಚಿತ್ರೀಕರಣ ಅಲ್ಲಿ ನಡೆದಿದ್ದರಿಂದ ಅದನ್ನು ಆ ಹೆಸರಿನಿಂದ ಕರೆಯಲಾಗುತ್ತದೆ ಎಂದು ನಮಗೆ ತಿಳಿಸಲಾಯಿತು) ಹಾಗೂ ಚಂದಾನ್ವರಿ ಎಂಬ ಹೆಸರಿನ ಸ್ಥಳಗಳಿವೆ.

ಪ್ರಮುಖವಾಗಿ, ಈ ಸ್ಥಳವು ಕುಖ್ಯಾತಿಗೆ ಕಾರಣವಾಗಿದೆ. ಏಕೆಂದರೆ **ಅಮರನಾಥ ಯಾತ್ರಿಕರ** ಮೇಲೆ ಇಲ್ಲಿ ಭಯೋತ್ಪಾದಕರು ದಾಳಿ ನಡೆಸಿದ್ದರು. ಅಂದ ಹಾಗೆ ಅಮರನಾಥ ಗುಹಾ ದೇಗುಲಕ್ಕೆ ಇಲ್ಲಿಂದ 32 ಕಿ.ಮೀ. ದೂರವಿದ್ದು, ಚಾರಣ, ನಡಿಗೆ, ಡೋಲಿಗಳು ಅಥವಾ ಸಣ್ಣ ಕುದುರೆಗಳ ಮೂಲಕ ಸಾಗಬಹುದೆಂದು ನಮಗೆ ತಿಳಿಸಲಾಯಿತು. ಜಮ್ಮುವಿನ ಕತ್ರಾದಲ್ಲಿರುವ 'ವೈಷ್ಣೋದೇವಿ ದೇವಸ್ಥಾನ'ಕ್ಕೆ ಭೇಟಿ ನೀಡಿದ ತೃಪ್ತಿಯೂ ನನಗಿದ್ದು, ಇಲ್ಲಿ ನನಗೆ ಕಡೆಯ ಪಕ್ಷ ಪವಿತ್ರ ಅಮರನಾಥ ದೇಗುಲದ ಸಮೀಪಕ್ಕಾದರೂ ತಲುಪಿದ ತೃಪ್ತಿಯೂ ಇದೆ.

ಪಹಲ್‌ಗಾಮ್ ಒಂದು ಆಸಕ್ತಿದಾಯಕ ಪ್ರವಾಸಿ ಕೇಂದ್ರವಾಗಿದ್ದು, ಆ ಉದ್ದೇಶಕ್ಕಾಗಿ ಪ್ರವಾಸಿಗರು ಇಲ್ಲಿ ಒಂದು ದಿನ ಅಥವಾ ಹೆಚ್ಚಿನ ಸಮಯ ಕಳೆಯುತ್ತಾರೆ. ಪಹಲ್‌ಗಾಮ್‌ನಿಂದ ಶ್ರೀನಗರಕ್ಕೆ ಸುಮಾರು 85 ಕಿ.ಮೀ. ದೂರವಿದೆ ಹಾಗೂ ಕೇಂದ್ರೀಯ ಮೀಸಲು ಪೊಲೀಸ್ ಪಡೆ ವಾಹನಗಳು (CRPF) ಇಲ್ಲಿ ರಸ್ತೆಯುದ್ದಕ್ಕೂ ನಿರಂತರವಾಗಿ ಚಲಿಸುತ್ತಿರುವುದನ್ನು ನಾವು ನೋಡಬಹುದು. ಪಾದಚಾರಿ ರಸ್ತೆಗಳಲ್ಲೂ ಸಮವಸ್ತ್ರ ಧರಿಸಿದ ಯೋಧರು ತಮ್ಮ ಬಂದೂಕುಗಳನ್ನು ಸದಾ ಮೇಲಕ್ಕೆ ಎತ್ತಿ ಹಿಡಿದು ಕೆಲವು ಸೂಕ್ಷ್ಮ ಸ್ಥಳಗಳಲ್ಲಿ ಕಟ್ಟೆಚ್ಚರ ವಹಿಸಿರುವಂತಹ ದೃಶ್ಯಗಳನ್ನು ನಾವು ನೋಡಬಹುದು. ಪುಲ್ವಾಮಾ ಘಟನೆ (ಭಾರತೀಯ ಸೇನಾ ವಾಹನದ ಮೇಲಿನ ಆತ್ಮಾಹುತಿ ಬಾಂಬರ್ ದಾಳಿ ನಡೆದು, 40 ಮಂದಿ ನಮ್ಮ ಯೋಧರು ಹುತಾತ್ಮರಾಗಿದ್ದರು). ಇದೇ ರಸ್ತೆಯಲ್ಲಿ ಸಂಭವಿಸಿದ್ದು ಎಂದು ನಮಗೆ ತಿಳಿಸಲಾಯಿತು.

ನಮ್ಮ ಪ್ರವಾಸದ ಕಡೆಯ ಹೆಜ್ಜೆ ಶ್ರೀನಗರಕ್ಕೆ ಹಿಂದಿರುಗುವುದಾಗಿತ್ತು. ಇಲ್ಲಿ ನಾವು ಭಾರೀ ನಿರೀಕ್ಷೆಯೊಂದಿಗೆ ಮೊಘಲ್ ಗಾರ್ಡನ್‌ಗೆ ಭೇಟಿ ನೀಡಿದೆವು. ಏಕೆಂದರೆ ಈ ಗಾರ್ಡನ್‌ನ ಹಿಂದಿರುವ ಹೆಸರು ಮೊಘಲ್ ಆಗಿತ್ತು. ಆದರೆ ಇಲ್ಲಿ ನಮಗೆ ಭಾರೀ ನಿರಾಶೆಯಾಯಿತು. ಸೇವಂತಿಗೆ ಹೂವುಗಳ ಒಣಗಿದ ಗಿಡಗಳನ್ನು ಬಿಟ್ಟರೆ ಇಲ್ಲಿ ಯಾವುದೇ ಹೂವುಗಳಿರಲಿಲ್ಲ. ಖಂಡಿತವಾಗಿಯೂ ಬೇರೆ ಎಲ್ಲಾ ಪ್ರವಾಸಿ ಸ್ಥಳಗಳಲ್ಲಿ ಇರುವ ಹಾಗೆ ಇಲ್ಲಿಯೂ ಫೋಟೋಗ್ರಾಫರ್‌ಗಳಿದ್ದು, ಸಾಂಪ್ರದಾಯಿಕ ಕಾಶ್ಮೀರದ ವಸ್ತ್ರಗಳನ್ನು ತೊಟ್ಟ ಪ್ರವಾಸಿಗ ಸ್ತ್ರೀ ಮತ್ತು ಪುರುಷರ ಫೋಟೋ ತೆಗೆಯಲು ಪೈಪೋಟಿಗಿಳಿಯುತ್ತಾರೆ. ಕಾಶ್ಮೀರ ಉಡುಪುಗಳಲ್ಲಿ ಕಾಣಿಸಿಕೊಂಡು, ರೋಚಕ ಅನುಭವವನ್ನು ಪಡೆಯಬೇಕೆಂದು ಅಪೇಕ್ಷಿಸುವಂತಹವರಿಗೆ ಹಾಗೂ ತಮ್ಮ ಚಾರಿತ್ರಿಕ ಕಾಶ್ಮೀರ ಭೇಟಿಯನ್ನು ಮನೆಗೆ ಹಿಂದಿರುಗಿದ ನಂತರವೂ ಸ್ಮರಣೀಯವಾಗಿಸಲು ಇಚ್ಛಿಸುವಂತಹವರಿಗೆ ಇದು ಪ್ರಶಸ್ತವಾಗಿದೆ.

ಪ್ರಖ್ಯಾತ ಶಂಕರಾಚಾರ್ಯ ದೇವಸ್ಥಾನಕ್ಕೆ ಒಮ್ಮೆ ಭೇಟಿ ನೀಡುವುದರೊಂದಿಗೆ (ಇದರ ಬಗ್ಗೆ ಕಳೆದ ಸಂಚಿಕೆಯಲ್ಲಿ ನಾನು ಬರೆದಿದ್ದೆ) ಆ ಸಂಜೆ ಮುಕ್ತಾಯಗೊಳ್ಳುವುದರಲ್ಲಿತ್ತು. ಆದರೆ ಡಾಲ್ ಸರೋವರದಲ್ಲಿ ದೋಣಿಯಲ್ಲಿ ಒಂದು ಮೋಜಿನ ಸವಾರಿಯ (jolly ride) ಅನುಭವವನ್ನು ಪಡೆದುಕೊಳ್ಳಬಹುದಿತ್ತು ಇಲ್ಲಿ ನಿಮ್ಮ ದೋಣಿ ವಿಹಾರದುದ್ದಕ್ಕೂ ಸ್ಥಳೀಯ ಪದಾರ್ಥಗಳನ್ನು ಮಾರಾಟ ಮಾಡಲು, ಅವುಗಳನ್ನು ತುಂಬಿಕೊಂಡಿರುವ ದೋಣಿಗಳು ನಿಮ್ಮನ್ನು ಹಿಂಬಾಲಿಸುತ್ತವೆ. ಇವುಗಳ ಜೊತೆ ನೀವು ಛಾಯಾಚಿತ್ರಗಳನ್ನು ಸಹ ತೆಗೆದುಕೊಳ್ಳಬಹುದು.

ಕಾಶ್ಮೀರಕ್ಕೆ ಭೇಟಿ ನೀಡುವ ಪ್ರತಿಯೊಬ್ಬ ಪ್ರವಾಸಿಗನೂ ಗೃಹ ದೋಣಿಗಳಲ್ಲಿ (House boat) ತಂಗಲು ಬಯಸುತ್ತಾನೆ. ಆದ್ದರಿಂದ ನಾವು ಡಾಲ್ ಸರೋವರದಿಂದ ಕೆಲವು ಕಿಲೋ ಮೀಟರ್ ದೂರದ ನಿಗೀನ್ ಸರೋವರದಲ್ಲಿ ಹೆಸರಾಂತ ಐಟಿಸಿ ನಿರ್ವಹಣೆಯ "ಹೌಸ್ ಬೋಟ್ಸ್"ಗೆ ಸ್ಥಳಾಂತರಗೊಂಡೆವು. ಇದು ಸಹ ನನಗೆ ಅತ್ಯಂತ ಅಚ್ಚರಿಯನ್ನು ಉಂಟು ಮಾಡಿತು. ಏಕೆಂದರೆ "ಹೌಸ್ ಬೋಟಿನ" ಬಗ್ಗೆ ನಾನು ಭಾವಿಸಿದ್ದಕ್ಕಿಂತ ಇದು ವ್ಯತಿರಿಕ್ತವಾಗಿತ್ತು ನಾನು ಅಂದುಕೊಂಡಿದ್ದ ಪ್ರಕಾರ, ಹೌಸ್ ಬೋಟ್ ಎಂದರೆ, ಸರೋವರಗಳ ಮಧ್ಯೆ ವಾಸಿಸಲು ಉಪಯುಕ್ತವಾದ ವಸತಿ ಇದ್ದು ರಾತ್ರಿ ಪೂರಾ ಸರೋವರದಲ್ಲಿ ಸಂಚರಿಸಬಹುದೆಂಬ ಕಲ್ಪನೆ ನನ್ನದಾಗಿತ್ತು...! ಆದರೆ, ಅದು ಆಗಿಲ್ಲ, ಹೌಸ್ ಬೋಟ್ ಅನ್ನು ಸರೋವರದಲ್ಲಿ ಆಳವಾದ ಜಾಗದಲ್ಲಿ ಭದ್ರವಾಗಿ ತೀರದವರೆಗೂ ಹೂತಿಡಲಾಗಿದೆ. ಬೇರೆ ಮಾಮೂಲಿ ಹೋಟೆಲ್‌ಗಳಲ್ಲಿ ಇರುವ ವ್ಯವಸ್ಥೆಗಳಿಗಿಂತ ಭಿನ್ನ ಎಂದೇನು ನಮಗೆ ಅನ್ನಿಸಲಿಲ್ಲ.

ನಾನು ವಿಮಾನದಲ್ಲಿ ವಾಪಸ್ಸಾಗುವಾಗ, "ಮೊಘಲ್ ಚಕ್ರವರ್ತಿ ಜಹಾಂಗೀರ್ 17ನೇ ಶತಮಾನದಲ್ಲಿ "ಭೂಮಿ ಮೇಲೆ ಸ್ವರ್ಗ ಎಂಬುದು ಏನಾದರೂ ಇದ್ದರೆ, ಅದೇ ಇದು... ಅದೇ ಇದು..." ಎಂದು ಹೇಳಿದ್ದು ಸರಿಯೇ ಎಂದು ಅಚ್ಚರಿಗೊಂಡೆ. ಆದರೆ ಇದೊಂದು "ಕೇವಲ ಉತ್ಪ್ರೇಕ್ಷೆ" ಎನಿಸಿತು. ನಮ್ಮವರೇ ಆದ ನಾಲ್ವಡಿ ಕೃಷ್ಣರಾಜ ಒಡೆಯರ್ ತಮ್ಮ ಯೂರೋಪ್ ಪ್ರವಾಸವನ್ನು ಮುಗಿಸಿ ಹಿಂದಿರುಗಿದಾಗ, ಅವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸುತ್ತಾ, ಈ ರೀತಿ ಹೇಳಿದರು. "ಇಸ್ಟೋ (ಪೂರ್ವವೋ), ವೆಸ್ಟೋ (ಪಶ್ಚಿಮವೋ), ಹೋಂ ಇಸ್ ಬೆಸ್ಟ್ (ನಮ್ಮ ಮನೆಯೇ ನಮಗೆ ಅತ್ಯುತ್ತಮ)". ನಾನು ಭೂಮಿಯ ಮೇಲೆ ಸ್ವರ್ಗದಂತಿರುವ ಮೈಸೂರಿನ ನನ್ನ ಸ್ವಂತ ಮನೆಗೆ ಹಿಂದಿರುಗಲು ಕಾತರದಿಂದಿದ್ದೆ. ಆದರೂ ಸಹ, ಕಾಶ್ಮೀರಿಯೊಬ್ಬನಿಗೆ ತನ್ನ ಮನೆಯೇ ನೆಮ್ಮದಿಯ ತಾಣ ಎಂಬುದು ಸರ್ವವೇದ್ಯವಾದ ಮಾತು.

ಕೆಲವು ದಿನಗಳ ಕಾಲದ ಓರ್ವ ಪ್ರವಾಸಿಗನಾಗಿ ಕಾಶ್ಮೀರದ ಬಗ್ಗೆ ನನ್ನ ಅಭಿಪ್ರಾಯ ಏನೇ ಇರಲಿ, ವಾಸ್ತವ ಸಂಗತಿಯೆಂದರೆ ಕಾಶ್ಮೀರದ ಬಗ್ಗೆ ನಾನು ಕೇವಲ ಸ್ವಲ್ಪ ಮಾತ್ರ ತಿಳಿದುಕೊಂಡಿದ್ದೇನೆ. ಹಿಮಾವೃತವಾಗಿದ್ದಾಗ ಮಾತ್ರವಲ್ಲದೆ, ಸೋಪೊರೆಯಲ್ಲಿ ಸೇಬು ಕೊಯ್ಲಿನ ಸಂದರ್ಭದಲ್ಲಿ, ಟಾಂಗ್ ಮಾರ್ಗ್‌ನಲ್ಲಿ ಚೆರಿ ಹಣ್ಣುಗಳ ಕೊಯ್ಲು ಸಂದರ್ಭದಲ್ಲಿ ಅಥವಾ ಕೇಸರಿ ಆರಿಸುವ ಸಮಯದಲ್ಲಿ ಪಾಂಪೋರಿಗೆ ಹೋಗಬೇಕು ಎಂದು ನಮಗೆ ತಿಳಿಸಲಾಯಿತು. ಟುಲಿಪ್ ಉದ್ಯಾನಗಳು, ಬಟಾನಿಕಲ್ ಗಾರ್ಡನ್ ಇವುಗಳನ್ನು ಸಹ ವಿವಿಧ ಕಾಲಮಾನಗಳಲ್ಲಿ ಇಲ್ಲಿ ನೋಡಬಹುದು.

ಹಾಗೆಯೇ ನಾವು ಕಾಶ್ಮೀರದ ಪಾಶ್ಮಿನಾ ಶಾಲುಗಳನ್ನು, ಕೇಸರಿಯನ್ನು, ಮರದ ಕಲಾಕೃತಿಗಳನ್ನು ಹೇಗೆ ಮರೆಯಲು ಸಾಧ್ಯ? ಈ ಚಳಿಗಾಲದಲ್ಲಿ ಕಾಶ್ಮೀರದ ಜನರು, ಶೀತದಿಂದ ತಮ್ಮನ್ನು ರಕ್ಷಿಸಿಕೊಳ್ಳಲು, ಉದ್ದನೆಯ ತೋಳುಳ್ಳ ನಿಲುವಂಗಿಗಳನ್ನು (ಗೌನ್) ಧುಸುತ್ತಾರೆ. ಇದನ್ನು ಕಾಶ್ಮೀರಿ ಫೆರಾನ್ ಎಂದು ಕರೆಯಲಾಗುತ್ತದೆ. ಅದರೊಳಗೆ ಒಂದು ಸಣ್ಣ ಉರಿಯುವ ಇದ್ದಿಲು ತುಂಬಿದ ಮಡಕೆಯು ಅಡಕವಾಗಿದ್ದು, ವ್ಯಕ್ತಿಯು, ಕೊರೆಯುವ ಚಳಿಯಿಂದ ರಕ್ಷಣೆ ಪಡೆಯಲು ಇದು ನೆರವಾಗುತ್ತದೆ. ನೋಡಲು ಸಹ ಇದು ತುಂಬಾ ಆಕರ್ಷಕವಾಗಿ ಕಾಣುತ್ತದೆ.

ನಮ್ಮ ಗುಂಪಿನ ಕೆಲವು ಪ್ರವಾಸಿ ಸ್ನೇಹಿತರು ಕಾಶ್ಮೀರದ ಮಾಂಸಾಹಾರಿ ಭಕ್ಷ್ಯವಾದ "ರೋಗನ್ ಜೋಷ್" ಅಥವಾ "ರೋಗನ್ ಗೋಷ" ಸೇವಿಸಲು ಆಗಲಿಲ್ಲ. ಇದೊಂದು ಕಾಶ್ಮೀರ ಕಣಿವೆಯಿಂದ ಬಂದ ಸೌಗಂಧ ಭರಿತ ವೇಲೋಗರದ ಭಕ್ಷ್ಯವಾಗಿದೆ. ಇದಕ್ಕೆ ಕಾರಣವೆಂದರೆ 1. ಇಲ್ಲಿ ಯಾವುದೋ ಕಾಯಿಲೆಯ ಕಾರಣದಿಂದ ಕುರಿ ಮಾಂಸವನ್ನು ಈಗ ಮಾರಲಾಗುತ್ತಿಲ್ಲ. 2. ಇದು ಗ್ರಾಹಕರಿಗೆ ಪಾವತಿಸಲು ಸಾಧ್ಯವಾಗದಷ್ಟು ದುಬಾರಿ!

ಅಂತಿಮವಾಗಿ, ನನ್ನ ಬಹುದಿನಗಳ ಕನಸಾದ ಕಾಶ್ಮೀರ ಪ್ರವಾಸವು, ಕುರುಡನೊಬ್ಬ ಆನೆಯ ದೇಹದ ಒಂದು ಭಾಗವನ್ನು ಮುಟ್ಟಿ ಆನೆಯು ಹೀಗೆಯೇ ಇರುಬಹುದೆಂದು ಊಹಿಸಿದ ಹಾಗಾಯಿತು. ಇದರ ನೀತಿ ಕಥೆ ಎಂದರೆ, ಆರು ಮಂದಿ ಅಂಧರು, ಆನೆಯನ್ನು ಸ್ಪರ್ಶಿಸುವ ಮೂಲಕ ಅದು ಹೇಗಿರುತ್ತದೆ ಎಂದು ತಿಳಿಯ ಬಯಸಿದರು. ಆದ್ದರಿಂದ ಪ್ರತಿಯೋರ್ವ ಅಂಧನೂ, ಆನೆಯ ನಾನಾ ಭಾಗಗಳನ್ನು ಮುಟ್ಟಿದ. ಕಾಲುಗಳು, ಬಾಲ, ಹೊಟ್ಟೆ, ಸೊಂಡಿಲು, ಕಣ್ಣುಗಳು ಮತ್ತು ದಂತ. ನಂತರ ಆನೆಯನ್ನು ತಮಗಾದ ಸ್ಪರ್ಶಾನುಭವಕ್ಕೆ ತಕ್ಕಂತೆ ವರ್ಣಿಸಿದರು. ಕಾಲುಗಳನ್ನು ಮುಟ್ಟಿದ ಓರ್ವ ಅಂಧ ಆನೆಯು ಮರದಂತಿದೆ ಎಂದು ಹೇಳಿದರೆ, ಅದರ ದೇಹವನ್ನು ಸ್ಪರ್ಶಿಸಿದ ಮತ್ತೋರ್ವ ಅಂಧ, ಅದು ಗೋಡೆಯಂತಿದೆ ಎಂದು ಹೇಳಿದ ಅದೇ ರೀತಿ ಉಳಿದ ಅಂಧರು ಆನೆಯ ಬಗ್ಗೆ ತಮ್ಮದೇ ಆದ ಅನುಭವವನ್ನು ಹೇಳಿದರು. ಆದರೆ, ಒಟ್ಟಾರೆಯಾಗಿ, ಆನೆಯು ಯಾವ ರೀತಿಯಲ್ಲಿ ಇದೆ ಎಂಬುದನ್ನು ಗ್ರಹಿಸಲು ಅವರಿಗೆ ಸಾಧ್ಯವಾಗಲೇ ಇಲ್ಲ. ಅದೇ ರೀತಿ, ನಾನು ವಾಸ್ತವವಾಗಿ ಕಾಶ್ಮೀರವು ಹೇಗಿರಬಹುದೆಂಬ ಊಹೆಯಲ್ಲೇ ಇದ್ದೇನೆ.

(ಇಂಗ್ಲೀಷ್ ಲೇಖನದ ಕನ್ನಡ ಅನುವಾದ)

5ನೇ ಪುಟದಲ್ಲಿ ಕಾಶ್ಮೀರ ಚಿತ್ರಗಳು.

(ಮುಗಿಯಿತು)

Email : voice@starofmysore.com

ಕಾಶ್ಮೀರ ಕಣಿವೆಯ ಕೆಲವು ಸುಂದರ ದೃಶ್ಯಗಳು


ಕಾಶ್ಮೀರ ಕಣಿವೆಯ ಒಂದು ರಮಣೀಯ ದೃಶ್ಯ.



ಚಳಿಯಲ್ಲೂ ನಮ್ಮನ್ನು ಬೆಚ್ಚಗಿಡಲು ಹೋಟೆಲ್‌ನಲ್ಲಿ ಹೀಟರ್ ಇಟ್ಟಿರುವುದು.


ಕಣಿವೆಯ ಸಮತಟ್ಟಾದ ಒಂದು ಸುಂದರ ತಾಣ


ಕಣಿವೆಯ ಮತ್ತೊಂದು ಸುಂದರ ದೃಶ್ಯ


ನಮ್ಮವರು ಕಾಶ್ಮೀರದ ಸವಿಯನ್ನು ಸವಿಯುತ್ತಿರುವುದು.


ಕುಣಿಯೋಣ ಬಾರಾ ಕುಣಿಯೋಣ ಬಾ...



ಮೊಘಲ್ ಉದ್ಯಾನದ ಪ್ರವೇಶ ದ್ವಾರ



ಮೊಘಲ್ ಗಾರ್ಡನ್: ಕಾಶ್ಮೀರಿ ಉಡುಗೆ ತೊಟ್ಟಿರುವ ಈ ಮುಖಗಳನ್ನು ಗುರುತಿಸುವವರಿಗೆ ಯಾವುದೇ ಬಹುಮಾನವಿಲ್ಲ!


ಸ್ಥಳೀಯ ಸ್ಲೆಡ್ಜ್ ಮಾಲೀಕರು ಪ್ರವಾಸಿಗರನ್ನು ಹಿಮದಿಂದ ಆವೃತವಾದ ಕಡಿದಾದ ಹಾಗೂ ಅಪಾಯಕಾರಿ ಇಳಿಜಾರುಗಳಲ್ಲಿ ಸವಾರಿ ಮಾಡುವಂತೆ ಒತ್ತಾಯಿಸುತ್ತಾರೆ.


ಪೆರಾನ್ ನಿಲುವಂಗಿ ಧರಿಸಿರುವ ವ್ಯಕ್ತಿ ತನ್ನ ಕಂಗ್ರಿಯನ್ನು ಹಿಡಿದಿರುವುದು.



ವ್ಯಾಪಾರವೇ ಮುಖ್ಯ, ಇಲ್ಲಿ ಯಾವುದೇ ಭಾಷಾ ವ್ಯಾಮೋಹವಿಲ್ಲ: ಎಲ್ಲಾ ಅಂಗಡಿ ಸೈನ್ ಬೋರ್ಡ್‌ಗಳು (ನಾಮಫಲಕಗಳು) ಇಂಗ್ಲಿಷ್‌ನಲ್ಲಿವೆ.



ಪಹಲ್‌ಗಾಂ ಉದ್ಯಾನಕ್ಕೆ ಬುದ್ಧ ಮತ್ತು ಗಾಂಧೀಜಿಯವರ ಸಂದೇಶಗಳುಳ್ಳ ಮರದ ಪಟ್ಟಿಯಿಂದ ಬೇಲಿ ನಿರ್ಮಿಸಿರುವುದು.


ಪ್ರಸಿದ್ಧ ಪಶ್‌ಮಿನಾ ಶಾಲುಗಳನ್ನು ಈ ಪಶಿಮಿನಾ ಕುರಿಯ ಉಣ್ಣೆಯಿಂದಲೇ ತಯಾರಿಸುವುದು.



ಪಹಲ್‌ಗಾಂನ ಅರುವಿನಲ್ಲಿರುವ ಒಂದು ಶಾಲೆ


ಪ್ರವಾಸಿಗರಿಗೆ ಬಹುಪ್ರಿಯ ಈ ಕುದುರೆ ಸವಾರಿ


ದಾಲ್ ಸರೋವರದ ಒಂದು ದೃಶ್ಯ


ಹಾಗುಡ್ ಹೆಸರಿನ ದೂಡುಬಂಡಿ


ಹೌಸ್ ಬೋಟ್‌ನಲ್ಲಿರುವ ಐಷಾರಾಮಿ ಕೊಠಡಿ

ಭ್ರಷ್ಟಾಚಾರಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಸ್ಥಿರಾಸ್ತಿ ನೋಂದಣಿ ವೇಳೆ ವೆಬ್‌ಸೈಟ್‌ನಲ್ಲೇ ದಾಖಲೆಗಳ ಒದಗಿಸುವ ವ್ಯವಸ್ಥೆ ಜಾರಿ

ಕಂದಾಯ ಸಚಿವ ಅಶೋಕ್ ಮಾಹಿತಿ



ಬೆಂಗಳೂರು, ಡಿ.28(ಕೆಎಂಶಿ)– ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲು ಸ್ಥಿರಾಸ್ತಿಗಳ ನೋಂದಣಿಯ ವೇಳೆ ಸ್ವತ್ತು ಖರೀದಿ ಮಾಡುವವರು ಅಥವಾ ಮಾರುವವರು ದಾಖಲೆಗಳನ್ನು ಒದಗಿಸುವ ಪದ್ಧತಿಯನ್ನು ಬದಲಾವಣೆ ಮಾಡಿ, ಸರ್ಕಾರದ ವೆಬ್‌ಸೈಟ್‌ನಲ್ಲೇ ಅಗತ್ಯ ದಾಖಲೆಗಳನ್ನು ಲಭ್ಯ ಇರುವಂತಹ ವ್ಯವಸ್ಥೆ ಜಾರಿ ಮಾಡಲಾಗುವುದು ಎಂದು ಕಂದಾಯ ಸಚಿವ ಆರ್.ಅಶೋಕ್ ವಿಧಾನಪರಿಷತ್ತಿನಲ್ಲಿಂದು ಪ್ರಕಟಿಸಿದ್ದಾರೆ.

ಪ್ರಶ್ನೋತ್ತರ ವೇಳೆಯಲ್ಲಿ ಗೋವಿಂದರಾಜು ಪರವಾಗಿ ಕೆ.ಎ.ತಿಪ್ಪೇಸ್ವಾಮಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಇಲಾಖೆಯಲ್ಲಿ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲು ನಿಯಮಾವಳಿಗಳನ್ನು ಸರಳೀಕರಣ ಮಾಡಲಾಗುತ್ತಿದೆ. ಶೀಘ್ರವಾಗಿ ಸೇವೆ ಒದಗಿಸಲು ಆದ್ಯತೆ ನೀಡಲಾಗಿದೆ ಎಂದರು. ಉಪನೋಂದಣಾಧಿಕಾರಿಗಳ ಕಚೇರಿಯಲ್ಲಿ ದಾಖಲೆ ಕೇಳಬಾರದು. ನಕಲಿ ದಾಖಲೆಗಳನ್ನು ಒದಗಿಸಿ ಸಾಕಷ್ಟು ಅವ್ಯವಹಾರಗಳಾಗಿವೆ. ಹಲವು ವರ್ಷಗಳಿಂದಲೂ ಇದನ್ನು ತಪ್ಪಿಸಲು ಪ್ರತಿಯೊಬ್ಬರು ಯತ್ನಿಸಿದ್ದಾರೆ. ಆದರೆ ಸಂಪೂರ್ಣ ಸಾಧ್ಯವಾಗಿಲ್ಲ.

ವ್ಯವಸ್ಥೆಯನ್ನೇ ಬದಲಾವಣೆ ಮಾಡಲು ನಿರ್ಧರಿಸಲಾಗಿದೆ. ಎಲ್ಲಾ ದಾಖಲೆಗಳನ್ನು ಸರ್ಕಾರವೇ ಕಂದಾಯ ಇಲಾಖೆಯಿಂದ ವೆಬ್‌ಸೈಟ್‌ಗೆ ಅಪ್‌ಲೋಡ್ ಮಾಡಲಾಗುವುದು. ಯಾವ ಆಸ್ತಿ ಯಾರ ಹೆಸರಿನಲ್ಲಿದೆ. ಎಲ್ಲಿ ಕೆರೆ, ಕಾಲುವೆಗಳಿವೆ, ಅದರ ಹಿನ್ನೆಲೆ ಏನು ಎಂಬೆಲ್ಲಾ ಮಾಹಿತಿಗಳು ಕಂದಾಯ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲಾಗುವುದು. ಅದನ್ನು ತಿದ್ದುಪಡಿ ಮಾಡಲು ಅವಕಾಶ ಇರುವುದಿಲ್ಲ. ಪ್ರಮುಖ ಕೀಯನ್ನು ಕಂದಾಯ ಇಲಾಖೆ ಕಾರ್ಯದರ್ಶಿ ಅವರಿಗೆ ನೀಡಲಾಗುವುದು. ಯಾವುದೇ ಮಾರ್ಪಾಡು ಮಾಡಬೇಕಾದರೂ ಕಾರ್ಯದರ್ಶಿ ಹಂತದಲ್ಲೇ ನಡೆಯಬೇಕಾಗುತ್ತದೆ ಎಂದರು.

ಉಪನೋಂದಣಿ ಕಚೇರಿಯಲ್ಲಿ ನೋಂದಣಿದಾರರಿಂದ ದಾಖಲೆ ಕೇಳದೆ ವೆಬ್‌ಸೈಟ್‌ನಲ್ಲಿರುವ ದಾಖಲೆಗಳನ್ನು ಪರಿಶೀಲಿಸಿ ನೋಂದಣಿ ಪ್ರಕ್ರಿಯೆಯನ್ನು ಮುಂದುವರೆಸಬಹುದು. ಆರಂಭದಲ್ಲಿ ಇದನ್ನು ಬಳ್ಳಾರಿ ಜಿಲ್ಲೆಯಲ್ಲಿ ಜಾರಿಗೊಳಿಸಲಾಗುತ್ತಿದೆ. ನಂತರ ಹಂತ ಹಂತವಾಗಿ ರಾಜ್ಯಾದ್ಯಂತ ವಿಸ್ತರಣೆ ಮಾಡಲಾಗುವುದು ಎಂದು ಹೇಳಿದರು.

ಅನಿಲ್ ಕುಮಾರ್ ಅವರ ಮತ್ತೊಂದು ಪ್ರಸ್ತಾವಕ್ಕೆ ಉತ್ತರಿಸಿದ ಸಚಿವರು, ಸರ್ಕಾರಿ ಜಮೀನನ್ನು ಉಳುಮೆ ಮಾಡುತ್ತಿರುವ ರೈತರಿಗೆ ಪಿ ನಂಬರ್ ನೀಡಲಾಗುತ್ತಿದೆ. ಸರ್ಕಾರಿ ಭೂಮಿ ಉಳುಮೆ ಮಾಡುವವರಿಗೆ ಕಳೆದ 50 ವರ್ಷದಿಂದಲೂ ದಾಖಲೆಗಳ ಕೊರತೆ ಇದೆ. ರೈತರಿಗೆ ಸರ್ಕಾರಿ ಸೌಲಭ್ಯ ಸಿಗಲಿ ಎಂಬ ಕಾರಣಕ್ಕೆ ಇತ್ತೀಚೆಗೆ ಪಿ ನಂಬರ್ ನೀಡುವ ಪದ್ಧತಿ ಜಾರಿಯಾಗಿದೆ. ಇದನ್ನು ತೆಗೆದು ಖಾಯಂ ಸರ್ವೇ ನಂಬರ್ ನೀಡುವ ಪ್ರಕ್ರಿಯೆ ಜಾರಿಯಲ್ಲಿದೆ. ಪೋಡಿ, ಸರ್ವೇಗೆ ಸಂಬಂಧಿಸಿದಂತೆ ರಾಜ್ಯದಲ್ಲಿ ಲಕ್ಷಾಂತರ ಅರ್ಜಿಗಳು ಬಾಕಿ ಇವೆ. ಮೂರು ಸಾವಿರ ಸರ್ವೇಯರ್ ಅನ್ನು ನೇಮಿಸಲಾಗಿದೆ. ಮುಂದಿನ ನಾಲ್ಕೈದು ವರ್ಷದ ಒಳಗೆ ಇವನ್ನು ಇತ್ಯರ್ಥಪಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಪರವಾನಗಿ ಪಡೆದ ಸರ್ವೇಯರ್‌ಗಳನ್ನು ಮೂರು ವರ್ಷಕ್ಕೆ ನೇಮಿಸಲಾಗುತ್ತಿದೆ. ಪ್ರತಿ ಸರ್ವೇಗೆ ನೀಡುತ್ತಿದ್ದ ಶುಲ್ಕವನ್ನು 800 ರೂ.ಯಿಂದ 1200 ರೂಪಾಯಿಗೆ ಹೆಚ್ಚಿಸಲಾಗಿದೆ. ಸರ್ವೇ ಪದ್ಧತಿಯನ್ನು ಆಧುನಿಕರಣಗೊಳಿಸಲಾಗುತ್ತಿದೆ. ಆನ್‌ಲೈನ್ ವ್ಯವಸ್ಥೆ ಜಾರಿಗೊಳಿಸಲು ಪ್ರಯತ್ನಿಸಲಾಗುತ್ತಿದೆ. ಪರವಾನಗಿ ಪಡೆದ ಸರ್ವೇಯರ್‌ಗಳ ನೇಮಕಾತಿಯನ್ನು ಹೆಚ್ಚಿಸಲಾಗಿದೆ. ಸೂಕ್ಷ್ಮ ಪ್ರಕರಣಗಳಲ್ಲಿ ಸರ್ಕಾರಿ ಸರ್ವೇಯರ್‌ಗಳೇ ಸರ್ವೇ ಮಾಡುತ್ತಾರೆ ಎಂದರು. ಸಹೋದರರು ಆಸ್ತಿ ಭಾಗ ಮಾಡಿಕೊಂಡಾಗ, ಅವರೇ ಸ್ಕೇಚ್ ಮಾಡಿಕೊಟ್ಟು ಒಂದು ತಿಂಗಳ ಒಳಗೆ ಸಲ್ಲಿಸಿದರೆ ತಕ್ಷಣವೇ ಅನುಮೋದನೆ ನೀಡಲಾಗುವುದು ಮತ್ತು ಅದನ್ನು ನೋಂದಣಾಧಿಕಾರಿಗಳ ಕಚೇರಿಗೆ ರವಾನಿಸಲಾಗುವುದು.

ರಾಮನಗರದಲ್ಲಿ ಅಯೋಧ್ಯೆ ಮಾದರಿ ಮಂದಿರ ಅಭಿವೃದ್ಧಿ

ಯೋಜನೆ ರೂಪಿಸಲು ಸಿಎಂ ಸೂಚನೆ

ಬೆಳಗಾವಿ: ರಾಮನಗರದಲ್ಲಿರುವ ಪ್ರಸಿದ್ಧ ರಾಮ ದೇವರ ಬೆಟ್ಟದಲ್ಲಿ ಅಯೋಧ್ಯೆಯ ರಾಮ ಮಂದಿರದ ಮಾದರಿ ದೇವಾಲಯ ನಿರ್ಮಾಣ, ಅಭಿವೃದ್ಧಿಗೆ ಯೋಜನೆ ರೂಪಿಸಲು ಸಿಎಂ ಸೂಚನೆ ನೀಡಿದ್ದಾರೆ.



ಸುವರ್ಣ ಸೌಧದಲ್ಲಿ, ರಾಮನಗರ ಜಿಲ್ಲಾ ಉಸ್ತುವಾರಿ ಸಚಿವ ಅಶ್ವತ್ಥ್ ನಾರಾಯಣ ಈ ಬಗ್ಗೆ ಮಾಹಿತಿ ನೀಡಿದ್ದು ಜಿಲ್ಲೆಯ ಹೆಸರೇ ರಾಮನಗರವಾಗಿರುವುದರಿಂದ ರಾಮ ಮಂದಿರದ ಅಭಿವೃದ್ಧಿಯಾಗುವುದು ಸೂಕ್ತವಾಗಿದೆ. ಅಯೋಧ್ಯೆಯ ಮಾದರಿಯಲ್ಲೇ ದಕ್ಷಿಣ ಭಾರತದಲ್ಲಿ ರಾಮ ಮಂದಿರ ನಿರ್ಮಾಣವಾಗುವ ವಿಶ್ವಾಸವಿದೆ, ಮುಂಬರುವ ಬಜೆಟ್‌ನಲ್ಲಿ ಮುಖ್ಯಮಂತ್ರಿಗಳು ಈ ಬಗ್ಗೆ ಘೋಷಣೆ ಮಾಡುವ ಸಾಧ್ಯತೆ ಇದೆ ಎಂದು ಹೇಳಿದ್ದಾರೆ.

ರಾಮನಗರದಲ್ಲಿರುವ ರಾಮದೇವರ ಬೆಟ್ಟವನ್ನು ದಕ್ಷಿಣದ ಅಯೋಧ್ಯೆಯಾಗಿ ಮಾಡುವ ಉದ್ದೇಶ ಹೊಂದಿದ್ದೇವೆ. ದೇವಸ್ಥಾನ ಅಭಿವೃದ್ಧಿಗೆ ಯೋಜನೆ ರೂಪಿಸಲು ಮುಖ್ಯಮಂತ್ರಿಗಳು ಈಗಾಗಲೇ ಸೂಚನೆ ನೀಡಿದ್ದಾರೆ. ಅಲ್ಲಿರುವ ರಾಮನ ದೇವಸ್ಥಾನವನ್ನು ಜೀರ್ಣೋದ್ಧಾರ ಮಾಡಿ, ದಕ್ಷಿಣ ಅಯೋಧ್ಯೆ ಕೇಂದ್ರವನ್ನಾಗಿ ಮಾಡುತ್ತೇವೆ. ಜೀರ್ಣೋದ್ಧಾರ ಕಾರ್ಯಕ್ರಮಕ್ಕೆ ಯುಪಿ ಸಿಎಂ ಯೋಗಿ ಆದಿತ್ಯನಾಥ್ ಅವರನ್ನು ಆಹ್ವಾನಿಸಲಿದ್ದೇವೆ. ಅಭಿವೃದ್ಧಿಗಾಗಿ ಮುಂಬರುವ ಬಜೆಟ್‌ನಲ್ಲಿ ಸಿಎಂ ಅನುದಾನ ಘೋಷಣೆ ಮಾಡುತ್ತಾರೆ. ಆ ಮೂಲಕ ರಾಮನಗರದ ರಾಮದೇವರ ಬೆಟ್ಟವನ್ನು ಹಿಂದೂ ಧಾರ್ಮಿಕ ಕೇಂದ್ರವನ್ನಾಗಿ ಮಾಡುತ್ತೇವೆ ಎಂದು ಅಶ್ವತ್ಥ್ ನಾರಾಯಣ ಮಾಹಿತಿ ನೀಡಿದ್ದಾರೆ.

ವರ್ಷದಲ್ಲಿ 100 ಪೊಲೀಸ್ ಠಾಣೆ ನಿರ್ಮಾಣ

ಮುಖ್ಯಮಂತ್ರಿ ಬೊಮ್ಮಾಯಿ ಭರವಸೆ



ಬೆಂಗಳೂರು,ಡಿ.28(ಕೆಎಂಶಿ)– ಒಂದೇ ವರ್ಷದಲ್ಲಿ ನೂರಕ್ಕೂ ಹೆಚ್ಚು ಪೊಲೀಸ್ ಠಾಣೆಗಳನ್ನು ನಿರ್ಮಾಣ ಮಾಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.


ಬೆಳಗಾವಿ ಪೊಲೀಸ್ ಆಯುಕ್ತರ ನೂತನ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ಈಗಾಗಲೇ 16 ಪೊಲೀಸ್ ಠಾಣೆ ನಿರ್ಮಾಣದ ಹಂತದಲ್ಲಿವೆ. ಒಂದೇ ವರ್ಷದಲ್ಲಿ ನೂರಕ್ಕೂ ಹೆಚ್ಚು ಪೊಲೀಸ್ ಠಾಣೆಗಳನ್ನು ನಿರ್ಮಾಣ ಮಾಡಲಾಗುತ್ತಿದೆ ಎಂದು ಹೇಳಿದರು.

ರಾಜ್ಯದಲ್ಲಿ 2500 ಪೊಲೀಸ್ ಮನೆಗಳನ್ನು ನಿರ್ಮಾಣ ಮಾಡುತ್ತಿದ್ದು, ಸುಮಾರು 80 ಕೋಟಿ ರೂ.ಗಳ ವೆಚ್ಚದಲ್ಲಿ 300 ಜೀಪ್ ಹಾಗೂ ಸ್ಕಾರ್ಪಿಯೊ ಖರೀದಿ ಮಾಡಲಾಗುತ್ತಿದೆ. ಡಿವೈಎಸ್ಪಿಗಳಿಗೆ ಸ್ಕಾರ್ಪಿಯೊ ವಾಹನಗಳನ್ನು ನೀಡಲಾಗುತ್ತಿದೆ ಎಂದು ಮಾಹಿತಿ ನೀಡಿದರು. ಕರ್ನಾಟಕ ಪೊಲೀಸ್ ಪಡೆಗೆ ಅಭಿನಂದಿಸಿ, ಗಡಿ ಭಾಗದಲ್ಲಿ ಕೇವಲ ಶಕ್ತಿ ಪ್ರದರ್ಶನ ಮಾಡುವುದಲ್ಲ. ಜನರ ಜೊತೆ ನಿರಂತರ ಸಂಪರ್ಕ ಇಟ್ಟುಕೊಂಡು ಅವರ ಸಮಸ್ಯೆ ಪರಿಹರಿಸುವ ಕೆಲಸ ಮಾಡಬೇಕು. ಗಡಿ ಭಾಗದ ಸಮಸ್ಯೆ ಪರಿಹರಿಸಿದರೆ ಹೆಚ್ಚು ಅನುಕೂಲ. ಇತ್ತೀಚೆಗೆ ವಿಧ್ವಂಸಕ ಕೃತ್ಯಗಳು ನಡೆಯುತ್ತಿವೆ ಅವುಗಳನ್ನು ಅತ್ಯಂತ ವೇಗವಾಗಿ ಪತ್ತೆ ಹಚ್ಚುವ ಕೆಲಸ ಆಗುತ್ತಿದೆ ಎಂದರು. ದಕ್ಷತೆಯಿಂದ ನಮ್ಮ ಪೊಲೀಸರು ಕೆಲಸ ಮಾಡುತ್ತಿದ್ದಾರೆ. ನಾನು ಗೃಹ ಸಚಿವನಾಗಿದ್ದಾಗ ಅಡಿಗಲ್ಲು ಹಾಕಿದ ಕಟ್ಟಡಗಳು ಈಗ ಉದ್ಘಾಟನೆಯಾಗುತ್ತಿವೆ. ಎಫ್‌ಎಸ್‌ಎಲ್ ರಿಪೋರ್ಟ್ 15 ದಿನದಲ್ಲಿ ಬಂದರೆ ಅಪರಾಧ ನಿಯಂತ್ರಣಕ್ಕೆ ಹೆಚ್ಚು ಅನುಕೂಲ ಆಗುತ್ತದೆ ಎಂದು ಸಿಎಂ ಬೊಮ್ಮಾಯಿ ಹೇಳಿದರು.

ಮಾಜಿ ಸಚಿವ ಆರ್.ವಿ.ದೇಶಪಾಂಡೆ ಅತ್ಯುತ್ತಮ ಶಾಸಕ

ವಿಧಾನಸಭೆಯಲ್ಲಿ ಪ್ರಶಸ್ತಿ ಪ್ರದಾನ

ಬೆಂಗಳೂರು, ಡಿ.28(ಕೆಎಂಶಿ)– ಕಾಂಗ್ರೆಸ್‌ನ ಹಿರಿಯ ಶಾಸಕ ಹಾಗೂ ಮಾಜಿ ಸಚಿವ ಆರ್.ವಿ. ದೇಶಪಾಂಡೆ ಅವರಿಗೆ 2022ನೇ ಸಾಲಿನ ಅತ್ಯುತ್ತಮ ಶಾಸಕ ಪ್ರಶಸ್ತಿ ಪ್ರದಾನ ಮಾಡಿ ವಿಧಾನಸಭೆಯಲ್ಲಿ ಗೌರವಿಸಲಾಯಿತು. ಸದನ ಆರಂಭವಾಗುತ್ತಿದ್ದಂತೆ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಅತ್ಯುತ್ತಮ ಶಾಸಕ ಪ್ರಶಸ್ತಿಗೆ ಆರ್.ವಿ.ದೇಶಪಾಂಡೆ ಅವರನ್ನು ಆಯ್ಕೆ ಮಾಡಿರುವುದಾಗಿ ಪ್ರಕಟಿಸಿದರು.



ಕಳೆದ 1995ರಿಂದಲೂ ಸಂಸತ್‌ನಲ್ಲಿ ಅಸಾಧಾರಣ ಸಂಸದೀಯ ಪಟು ಪ್ರಶಸ್ತಿ ನೀಡಿ ಗೌರವಿಸುವುದು ರೂಢಿಯಲ್ಲಿದೆ. ಅದೇ ರೀತಿ ಅನೇಕ ರಾಜ್ಯಗಳಲ್ಲಿ ಅತ್ಯುತ್ತಮ ಶಾಸಕ ಪ್ರಶಸ್ತಿ ನೀಡಲಾಗುತ್ತಿದೆ. ಸಂಸದೀಯ ವ್ಯವಸ್ಥೆಯಲ್ಲಿ ವಿಧಾನ ಮಂಡಲದ ಕಲಾಪದ ಚರ್ಚೆ ಭಾಗವಹಿಸಿದವರನ್ನು ಗುರುತಿಸುವುದು ವ್ಯವಸ್ಥೆಗೆ ಶಕ್ತಿ ಕೊಡುವ ಕೆಲಸವಾಗಲಿದೆ. ನಮ್ಮ ರಾಜ್ಯದಲ್ಲೂ ಅತ್ಯುತ್ತಮ ಸಂಸದೀಯಪಟು, ಅತ್ಯುತ್ತಮ ಶಾಸಕ ಪ್ರಶಸ್ತಿಯನ್ನು ನೀಡಲಾಗುತ್ತಿದ್ದು, ಕಾರಣಾಂತರಗಳಿಂದ ಮಧ್ಯೆ ಮಧ್ಯೆ ನೀಡಲು ಆಗಿರಲಿಲ್ಲ.

ಈಗಾಗಲೇ ಪ್ರಜಾಪ್ರಭುತ್ವ ಮೌಲ್ಯಗಳನ್ನು ಉಳಿಸುವ ಬಗ್ಗೆ, ಚುನಾವಣೆ ಸುಧಾರಣೆ ಬಗ್ಗೆ ಚರ್ಚೆ ನಡೆಸಲಾಗಿದೆ. ಕಳೆದ 2021ರಿಂದ ಅತ್ಯುತ್ತಮ ಶಾಸಕ ಪ್ರಶಸ್ತಿ ನೀಡುವುದು ಮರು ಜಾರಿಯಾಗಿದೆ. ಕಳೆದ ವರ್ಷ ಲೋಕಸಭಾ ಅಧ್ಯಕ್ಷ ಓಂ ಬಿರ್ಲಾ ಅವರ ಸಮ್ಮುಖದಲ್ಲಿ ಮಾಜಿ ಸಿಎಂ ಯಡಿಯೂರಪ್ಪ ಅವರಿಗೆ ಅತ್ಯುತ್ತಮ ಶಾಸಕ ಪ್ರಶಸ್ತಿ ನೀಡಿ ಗೌರವಿಸಿದ್ದೆವು. ಈ ಪ್ರಶಸ್ತಿ ಆಯ್ಕೆಗೆ ಸಭಾಧ್ಯಕ್ಷರು, ಮುಖ್ಯಮಂತ್ರಿ ವಿರೋಧ ಪಕ್ಷದ ನಾಯಕರು, ಕಾನೂನು ಸಚಿವರು ಒಳಗೊಂಡ ಸಮಿತಿ ರಚಿಸಲಾಗಿತ್ತು.

ಕೃಷಿ ಯಾಂತ್ರೀಕರಣ ಅಭಿಯಾನಕ್ಕೆ ಕೇಂದ್ರ, ರಾಜ್ಯದಿಂದ 113 ಕೋಟಿ ಅನುದಾನ ಬಿಡುಗಡೆ

- ಕೃಷಿ ಸಚಿವ ಬಿ.ಸಿ.ಪಾಟೀಲ್ ವಿಧಾನಸಭೆಯಲ್ಲಿ ಹೇಳಿಕೆ
- 45 ಹೆಚ್‌ಪಿಗಿಂತ ಅಧಿಕ ಸಾಮರ್ಥ್ಯದ ಟ್ರ್ಯಾಕ್ಟರ್ ನೀಡುವ ಪ್ರಸ್ತಾಪ ಸರ್ಕಾರದ ಮುಂದಿಲ್ಲ; ಸ್ಪಷ್ಟನೆ

ಬೆಂಗಳೂರು, ಡಿ.28 (ಕೆಎಂಶಿ) ಕೃಷಿ ಯಾಂತ್ರಿಕರಣ ಅಭಿಯಾನ ಯೋಜನೆಯಡಿ ಯಂತ್ರೋಪಕರಣಗಳ ಖರೀದಿಗಾಗಿ ಕೇಂದ್ರದಿಂದ 83 ಕೋಟಿ ಹಾಗೂ ರಾಜ್ಯ ಸರ್ಕಾರ 30 ಕೋಟಿ ಸೇರಿ ಒಟ್ಟು 113 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಎಂದು ಕೃಷಿ ಸಚಿವ ಬಿ.ಸಿ. ಪಾಟೀಲ್ ವಿಧಾನಸಭೆಯಲ್ಲಿ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ರಾಜೇಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು 2022–23ನೇ ಸಾಲಿನ ಕೃಷಿ ಯಾಂತ್ರೀಕರಣ ಉಪ ಅಭಿಯಾನ ಯೋಜನೆ ಯಡಿ ಕೃಷಿ ಚಟುವಟಿಕೆಗಳಿಗೆ ಅಗತ್ಯ ವಿರುವ ಯಂತ್ರೋಪಕರಣಗಳ ಖರೀದಿಗೆ ಕೇಂದ್ರ–ರಾಜ್ಯ ಸರ್ಕಾರಗಳು ಕಾಲಕಾಲಕ್ಕೆ ಅನುದಾನ ಬಿಡುಗಡೆ ಮಾಡುತ್ತಿವೆ. ಎಲ್ಲಿಯೂ ಅನುದಾನದ ಕೊರತೆ ಇಲ್ಲ ಎಂದರು.

ರೈತರ ಕೃಷಿ ಚಟುವಟಿಕೆಗಳಿಗೆ 45 ಎಚ್‌ಪಿಗಿಂತ ಹೆಚ್ಚಿನ ಟ್ರಾಕ್ಟರ್‌ಗಳನ್ನು ನೀಡಬೇಕೆಂದು ಕೆಲವರು ಮನವಿ ಮಾಡಿದ್ದಾರೆ. ಕೃಷಿ ಚಟುವಟಿಕೆಗಳಿಗೆ 45 ಎಚ್‌ಪಿ ಸಾಮರ್ಥ್ಯದ ಟ್ರಾಕ್ಟರ್ ಸಾಕು. ಹಿಂದೆ ಕೇವಲ 25 ಎಚ್‌ಪಿ ಸಾಮರ್ಥ್ಯದ ಟ್ರಾಕ್ಟರ್‌ಗಳನ್ನು ನೀಡುತ್ತಿದ್ದರು. ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಇದನ್ನು 25ರಿಂದ 45ಕ್ಕೆ ಹೆಚ್ಚಳ ಮಾಡಿದರು. ಹೀಗಾಗಿ 45 ಎಚ್‌ಪಿಗಿಂತ ಹೆಚ್ಚಿನ ಸಾಮರ್ಥ್ಯದ ಟ್ರಾಕ್ಟರ್ ನೀಡುವ ಸರ್ಕಾರದ ಪ್ರಸ್ತಾವನೆ ಇಲ್ಲ ಎಂದು ಹೇಳಿದರು.




ರಾಗಿ ಬೆಲೆಗೆ ಹೆಚ್ಚಿನ ಬೆಲೆ ನಿಗದಿಪಡಿಸುವುದು ಹಾಗೂ ಇನ್ನಷ್ಟು ಖರೀದಿ ಕೇಂದ್ರಗಳನ್ನು ತೆರೆಯಲು ಅವಕಾಶ ಕಲ್ಪಿಸಬೇಕೆಂದು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ಡಾ. ರಂಗನಾಥ್ ಅವರ ಮತ್ತೊಂದು ಪ್ರಸ್ತಾವಕ್ಕೆ ಇದೇ ಸಂದರ್ಭದಲ್ಲಿ ತಿಳಿಸಿದರು.

ಕೇಂದ್ರ ಸರ್ಕಾರದ ಮಾರ್ಗಸೂಚಿ ಮತ್ತು ನಿರ್ದೇಶನದಂತೆ ನಾವು ರಾಗಿ ಖರೀದಿ ಕೇಂದ್ರಗಳನ್ನು ತೆರೆಯಬೇಕು ಹಾಗೂ ಅವರು ನಿಗದಿಪಡಿಸಿದ ದರದಲ್ಲೇ ನಾವು ಕೂಡ ಖರೀದಿ ಮಾಡುತ್ತೇವೆ. ಇದರಲ್ಲಿ ರಾಜ್ಯ ಸರ್ಕಾರದ ಪಾತ್ರ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಸಣ್ಣ ಹಿಡುವಳಿದಾರರಂತೆ ದೊಡ್ಡ ಹಿಡುವಳಿದಾರರಿಗೆ ಅನ್ಯಾಯವಾಗದಂತೆ ಕ್ರಮ ತೆಗೆದುಕೊಳ್ಳಬೇಕೆಂದು ಶಾಸಕರು ಮನವಿ ಮಾಡಿದ್ದಾರೆ. ಬೆಲೆ ಹೆಚ್ಚಳ ಮಾಡುವ ಇಲ್ಲವೇ ಖರೀದಿ ಕೇಂದ್ರಗಳನ್ನು ಹೆಚ್ಚಿಸಲು ನಮಗೆ ವ್ಯಾಪ್ತಿಗೆ ಬರುವುದಿಲ್ಲ. ಆದರೂ ಬೇಡಿಕೆ ಹೆಚ್ಚಿರುವುದರಿಂದ ಮನವಿಯನ್ನು ಸಕಾರಾತ್ಮಕವಾಗಿ ಪರಿಗಣಿಸಲು ಮನವಿ ಮಾಡಲಾಗುವುದು ಎಂದರು.

ಸ್ವಾಮಿನಾಥನ್ ಆಯೋಗವು ಸರ್ಕಾರಕ್ಕೆ 9 ಶಿಫಾರಸ್ಸುಗಳನ್ನು ಸಲ್ಲಿಸಿದೆ. ರೈತರ ಜಮೀನುಗಳಿಗೆ ಕೃಷಿ ಶಾಲಾ ಸ್ಥಾಪನೆ, ವಿಶೇಷ ಕೃಷಿ ವಲಯಗಳು ಸ್ಥಾಪನೆ, ಗ್ರಾಮ ಮಟ್ಟದಲ್ಲಿ ಕೃಷಿ ಜ್ಞಾನ ಕೇಂದ್ರಗಳ ಸ್ಥಾಪನೆ, ದ್ವಿದಳ ಧಾನ್ಯಗಳ ಅಭಿಯಾನ ಹೀಗೆ 9 ಶಿಫಾರಸ್ಸುಗಳನ್ನು ಮಾಡಿದೆ. ಸರ್ಕಾರ ಹಂತಹಂತವಾಗಿ ಅನುಷ್ಠಾನ ಮಾಡಲಿದೆ ಎಂದರು.



ಕೆಆರ್‌ಎಸ್: ಚಿರತೆ ಸೆರೆ ಕಾರ್ಯಾಚರಣೆ ಮೂರು ತಿಂಗಳ ನಂತರ ಯಶಸ್ವಿ

ಶ್ರೀರಂಗಪಟ್ಟಣ, ಡಿ.28– ಮೂರು ತಿಂಗಳುಗಳಿಂದ ವಿಶ್ವವಿಖ್ಯಾತ ಕೆಆರ್‌ಎಸ್ ಬೃಂದಾವನ ಗಾರ್ಡನ್ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ಪ್ರತ್ಯಕ್ಷಗೊಂಡು ಪ್ರವಾಸಿಗರು ಹಾಗೂ ಸಿಬ್ಬಂದಿಗೆ ಆತಂಕ ತಂದಿದ್ದ ಚಿರತೆ ಬುಧವಾರ ಬೋನಿಗೆ ಬಿದ್ದಿದೆ.

ಘಟನೆ ವಿವರ: ಕಳೆದ ತಿಂಗಳು ಬೃಂದಾವನದ ದಕ್ಷಿಣ ಗೇಟ್‌ನಲ್ಲಿ ಪ್ರತ್ಯಕ್ಷಗೊಂಡು ಜನರಲ್ಲಿ ಆತಂಕ ಉಂಟುಮಾಡಿತ್ತು. ಚಿರತೆ ಸೆರೆಗೆ ಬೃಂದಾವನದ ಹಲವು ಕಡೆ ಎಂಟು ಬೋನ್‌ಗಳನ್ನು ಹಾಗೂ ಸಿಸಿ ಕ್ಯಾಮೆರಾಗಳನ್ನು ಅರಣ್ಯ ಇಲಾಖೆಯ ಅಧಿಕಾರಿಗಳು ಅಳವಡಿಸಿದ್ದರು. ಬುಧವಾರ ಮುಂಜಾನೆ 6ರ ಸಮಯದಲ್ಲಿ ಕರ್ನಾಟಕ ಕೈಗಾರಿಕಾ ಭದ್ರತಾ ಪಡೆ(ಕೆಐಎಸ್‌ಎಫ್) ಇನ್‌ಸ್ಪೆಕ್ಟರ್ ಸಂತೋಷ್ ಅವರು ಗಸ್ತು ತಿರುಗುವ ವೇಳೆ ಅಣೆಕಟ್ಟಿನ ಉತ್ತರ ದಂಡೆಯಲ್ಲಿ ಅರಣ್ಯ ಇಲಾಖೆ ಇಡಲಾಗಿದ್ದ ಬೋನ್‌ನಲ್ಲಿ ಪಂಜರದ ಬಾಗಿಲು ಮುಚ್ಚಿರುವುದನ್ನು ಗಮನಿಸಿದ್ದಾರೆ. ನಂತರ ಬೋನಿನೊಳಗೆ ಚಿರತೆ ಸೆರೆ ಸಿಕ್ಕಿರುವುದನ್ನು ಖಚಿತಪಡಿಸಿಕೊಂಡ ಸಂತೋಷ್ ತಕ್ಷಣ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ನೀರಾವರಿ ನಿಗಮದ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ.

ವಿಷಯ ತಿಳಿದು ಸ್ಥಳಕ್ಕೆ ಬಂದ ಅರಣ್ಯ ಸಹಾಯಕ ಸಂರಕ್ಷಣಾಧಿಕಾರಿ (ಎಸಿಎಫ್) ಶಂಕರೇಗೌಡ ನೇತೃತ್ವದ ತಂಡ ಪರಿಶೀಲನೆ ನಡೆಸಿ, ಅಣೆಕಟ್ಟಿನ ಉತ್ತರ ಗೇಟ್ ಮತ್ತು ದಕ್ಷಿಣ ಗೇಟ್ ಸುತ್ತಲೂ ಕಾಣಿಸುತ್ತಿದ್ದ ಚಿರತೆ ಇದೇ ಎಂದು ದೃಢಪಡಿಸಿದರು. ಚಿರತೆಗೆ ಸುಮಾರು ಐದು ವರ್ಷ ಆಗಿರಬಹುದು ಎಂದ ಅವರು, ಅಧಿಕಾರಿ ಗಳ ಸೂಚನೆ ಮೇರೆಗೆ ಬಂಡೀಪುರ ಅಥವಾ ನಾಗರ ಹೊಳೆ ಅರಣ್ಯ ಪ್ರದೇಶಕ್ಕೆ ಚಿರತೆಯನ್ನು ಸಾಗಿಸಿದರು.

ಸಾಮಾನ್ಯವಾಗಿ ಸೆಪ್ಟೆಂಬರ್‌ನಿಂದ ಡಿಸೆಂಬರ್‌ವರೆಗೆ, ಈ ಭಾಗಗಳಲ್ಲಿ ಚಿರತೆಗಳು ವ್ಯಾಪಕವಾಗಿ ಕಾಣಿಸಿಕೊಳ್ಳುತ್ತವೆ. ಏಕೆಂದರೆ ಈ ಸಮಯದಲ್ಲಿ ಸಂಯೋಗ ಮತ್ತು ಸಂತಾನೋತ್ಪತ್ತಿಗಾಗಿ ಕಬ್ಬಿನ ಗದ್ದೆಗಳಲ್ಲಿ ಚಿರತೆಗಳು ಆಶ್ರಯ ಪಡೆಯುತ್ತವೆ. ರೈತರು ಕಬ್ಬನ್ನು ಕಟಾವು ಮಾಡಿದಾಗ, ಸ್ವಾಭಾವಿಕವಾಗಿ ವಾಸದ ರಕ್ಷಣೆ ಕಳೆದು ಹೋಗುತ್ತದೆ ಆ ಸಮಯದಲ್ಲಿ ಚಿರತೆಗಳು ಸ್ಥಳ ಹುಡುಕಿಕೊಂಡು ಹೋಗುವಾಗ ಕೆಲವು ಸಲ ಜನನಿಬಿಡ ಪ್ರದೇಶಗಳಿಗೆ ಪ್ರವೇಶಿಸುತ್ತವೆ. ಹಾಗಾಗಿ ಈ ಭಾಗಗಳಲ್ಲಿ ಚಿರತೆಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಕಳೆದ 3–4 ದಿನಗಳಿಂದ ಕೆಆರ್‌ಎಸ್ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚಿರತೆ ಹಿಂಡು ಕಾಣಿಸಿಕೊಂಡಿದ್ದು, ಮೇಕೆ ಹಾಗೂ ಕುರಿಗಳ ಮೇಲೆ ದಾಳಿ ಮಾಡಿವೆ. ಈಗಾ ಗಲೇ ಬೃಂದಾವನ ಗಾರ್ಡನ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಕೆಲವು ಕಡೆ ಬೋನ್ ಇಡಲಾಗಿದೆ ಎಂದರು. ಕೆಆರ್‌ಎಸ್ ಅಣೆಕಟ್ಟಿನ ಆವರಣಕ್ಕೆ ಚಿರತೆಗಳು ಪ್ರವೇಶಿಸುವುದನ್ನು ತಡೆಯಲು 15–20 ಅಡಿ ಚೈನ್–ಲಿಂಕ್ ಬೇಲಿಯನ್ನು ಸ್ಥಾಪಿಸುವ ಸಿಎನ್‌ಎನ್‌ಎಲ್‌ನ ಪ್ರಸ್ತಾವ ಇದೆ ಎಂದ ಎಸಿಎಫ್ ಇದು ಚಿರತೆ ತಡೆಗೆ ಪರಿಣಾಮಕಾರಿ ಕ್ರಮವಾಗಿದೆ ಎಂದರು.

ಮತ್ತೊಂದು ಚಿರತೆ ಸೆರೆ



ಕೆ.ಆರ್.ಸಾಗರ ಪೊಲೀಸ್ ಠಾಣಾ ವ್ಯಾಪ್ತಿಯ ಹೊಸ ಕನ್ನಂಬಾಡಿ ಸಮೀಪದ ಬಸ್ತಿಹಳ್ಳಿ ಗ್ರಾಮದಲ್ಲಿ ಬುಧವಾರ ರಾತ್ರಿ 8.30ರ ಸಮಯದಲ್ಲಿ ಚಿರತೆಯೊಂದು ಅರಣ್ಯ ಇಲಾಖೆ ಇಟ್ಟಿರುವ ಬೋನಿಗೆ ಬಿದ್ದಿದೆ. ಅರಣ್ಯ ಇಲಾಖೆ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿದ್ದು, ಕಳೆದ ವಾರ ರೈತರೊಬ್ಬರು ತೋಟದ ಮನೆಯಲ್ಲಿ ಮೇಕೆಗಳ ಮೇಲೆ ದಾಳಿ ಮಾಡಿದ್ದ ಚಿರತೆಗಳ ಹಿಂಡಿನ ಚಿರತೆ ಇರಬಹುದು ಎಂದು ತಿಳಿಸಿದ್ದಾರೆ.

ಮುಂದಿನ ಚುನಾವಣೆಯಲ್ಲಿ ಸ್ಪರ್ಧೆ ಖಚಿತ: ಎಲ್.ಆರ್. ಶಿವರಾಮೇಗೌಡ



ನಾಗಮಂಗಲ, ಡಿ.28– ಬೆಂಬಲಿಗರು ಹಾಗೂ ಅಭಿಮಾನಿಗಳ ಒತ್ತಾಯದ ಮೇರೆಗೆ ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುವೆ ಎಂದು ಮಾಜಿ ಸಂಸದ ಎಲ್. ಆರ್. ಶಿವರಾಮೇಗೌಡ ಹೇಳಿದರು.

ತಾಲೂಕಿನ ಬಿಂಡಿಗನವಿಲೆ ಹೋಬಳಿ ಕದಬಹಳ್ಳಿ ಗ್ರಾಮದ ಕಾವೇರಿ ರಂಗನಾಥ ಸ್ವಾಮಿ ದೇವಾಲಯದ ಆವರಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಎಲ್‌ಆರ್‌ಎಸ್ ಸ್ವಾಭಿಮಾನಿ ಪರ್ವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೇವಲ ಐದು ತಿಂಗಳ ಸಂಸದನಾಗಿ ಆಯ್ಕೆಯಾಗಿದ್ದ, ನನಗೆ ಮುಂದಿನ ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ಸಿಗಲಿಲ್ಲ. ಆದರೂ ನಾನು ಕ್ಷೇತ್ರದ ಜನರಿಂದ ದೂರ ಸರಿದಿಲ್ಲ. ಅವರ ಜೊತೆ ಇದ್ದೇನೆ ಎಂದರು.

ನಾನು ಮಾಜಿ ಪ್ರಧಾನಿ ದೇವೇಗೌಡರು ಮತ್ತು ಕುಮಾರಸ್ವಾಮಿ ಬಗ್ಗೆ ಲಘುವಾಗಿ ಮಾತನಾಡುವುದಿಲ್ಲ ಎಂದ ಅವರು, ಮುಖ್ಯಮಂತ್ರಿಯಾಗಿ ತಾಲೂಕಿಗೆ ಕುಮಾರಸ್ವಾಮಿ ಕೊಡುಗೆ ಏನು. ನನ್ನ ಕುರಿತು ಲೇವಡಿ ಮಾಡುವುದನ್ನು ಬಿಡಿ. ತಾಲೂಕಿನ ನಿಮ್ಮ ಶಾಸಕರಿಗೆ ಬುದ್ಧಿಹೇಳಿ. ನಾನು ಅಧಿಕಾರ ಮಾಡಿರುವುದು ಜನರಿಗಾಗಿ. ನನ್ನ ಅವಧಿಯಲ್ಲಿ ನಾನು ಯಾರ ಬಳಿಯಾದರೂ ಒಂದು ರೂ ಪಡೆದು ಭ್ರಷ್ಟಾಚಾರ ಎಸಗಿದ್ದರೆ ಬೆಂಬಲಿಸಬೇಡಿ ಎಂದರು.

ತಾಲೂಕಿನಲ್ಲಿರುವ ಸಮಸ್ಯೆಗಳ ಕುರಿತು ಮುಂದಿನ ಚುನಾವಣೆಯಲ್ಲಿ ಗಮನ ಸೆಳೆಯಬೇಕಿದೆ, ಇಲ್ಲಿನ ಜನರ ಸ್ವಾಭಿಮಾನಕ್ಕೆ ಧಕ್ಕೆ ಬಂದರೆ ಯಾವ ಪಂಚರತ್ನಗಳು ಕೆಲಸಕ್ಕೆ ಬರುವುದಿಲ್ಲ. ಇಲ್ಲಿಯವರೆಗೆ ನಡೆದ 15 ಚುನಾವಣೆಗಳಲ್ಲಿ ಪಕ್ಷೇತರರು 6 ಸಲ ಜಯ ಸಾಧಿಸಿದ್ದಾರೆ ಎಂದರು. ಎಲ್.ಎಸ್. ಚೇತನ್ ಗೌಡ ಮಾತನಾಡಿ, ನನ್ನ ತಂದೆ ರಾಜಕೀಯಕ್ಕೆ ಬಂದು 40 ವರ್ಷಗಳಾಗಿದ್ದು, ಅಂದಿನಿಂದ ಇಂದಿನವ ರೆಗೂ ಜನರ ಜೊತೆ ಸೇರಿ ಅಭಿವೃದ್ಧಿ ಗಾಗಿ ಹೋರಾಟ ಮಾಡುತ್ತಾ ಬಂದಿದ್ದಾರೆ. ಅಭಿಮಾನಿಗಳು ಹಾಗೂ ತಾಲೂಕಿನ ಜನತೆ ಚುನಾವಣೆಯಲ್ಲಿ ಸ್ಪರ್ಧಿಸಬೇಕು ಎಂದು ಒತ್ತಾಯಿಸಿದ ಕಾರಣ ಶಿವರಾಮೇಗೌಡರು ಪಕ್ಷೇತರವಾಗಿ ಸ್ಪರ್ಧಿಸುತ್ತಿದ್ದಾರೆ ಎಂದರು.

ಮುಖಂಡ ಜುಬೇರ್ ಅವರ ನೇತೃತ್ವದಲ್ಲಿ ನೂರಾರು ಯುವಕರು ಶಿವರಾಮೇಗೌಡರ ಸ್ವಾಭಿಮಾನಿ ಬಣಕ್ಕೆ ಸೇರ್ಪಡೆಯಾದರು. ವಕೀಲ ಟಿ.ಕೆ.ರಾಮೇಗೌಡ, ತಾಲೂಕಿನ ಅಹಿಂದ ನಾಯಕ ಮಂಜೇಗೌಡ, ಮಂಜಣ್ಣ, ಬಿ.ವಿ.ಸತ್ಯಣ್ಣ, ಹೇಮರಾಜು, ಪಾಳ್ಯ ರಘು, ನಾರಾಯಣಗೌಡ, ಮಹೇಶ್, ಮಹಮ್ಮದ್ ಶೇಕ್, ಕುಮಾರ್, ಹಿರೇಗೌಡ, ದೇವರಾಜು, ಕೃಷ್ಣ, ಮನು, ಧರಣಿ, ತಮ್ಮಯ್ಯ, ಶಂಕರ್, ಪ್ರಕಾಶ್, ಸುಬ್ಬಣ್ಣ, ಕೇಶವಣ್ಣ, ಮಂಜು, ಗುರು, ಸಣ್ಣಪ್ಪಗೌಡ, ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಸಿ.ಜೆ.ಕುಮಾರ್, ವಕೀಲ ಟಿ.ಕೆ. ರಾಮೇಗೌಡ ಸೇರಿ ಇತರರು ಇದ್ದರು.

ಕ್ರೀಡೆಯಿಂದ ಆರೋಗ್ಯ ವೃದ್ಧಿ



ಭಾರತೀನಗರ, ಡಿ.28– ನಿರಂತರ ಕ್ರೀಡಾಭ್ಯಾಸದಿಂದ ಮಾನವನ ಬೌದ್ಧಿಕ ವಿಕಾಸದ ಜೊತೆಗೆ ಆರೋಗ್ಯ ವೃದ್ಧಿಗೆ ಸಹಾಯಕವಾಗಲಿದೆ. ಕ್ರೀಡಾ ಚಟುವಟಿಕೆಯಲ್ಲಿ ಪ್ರತಿಯೊಬ್ಬರು ಪಾಲ್ಗೊಳ್ಳುವಂತೆ ಭಾರತೀನಗರದ ಸರ್ಕಾರಿ ಪ್ರಥಮದರ್ಜೆ ಕಾಲೇಜು ಪ್ರಾಂಶುಪಾಲ ಆರ್.ರಮೇಶ್ ಹೇಳಿದರು.

ಭಾರತೀನಗರದ ಸರ್ಕಾರಿ ಪ್ರಥಮದರ್ಜೆ ಕಾಲೇಜು ಆವರಣದಲ್ಲಿ ಆಯೋಜಿಸಲಾಗಿದ್ದ ಮೈಸೂರು ವಿಶ್ವವಿದ್ಯಾನಿಲಯ ಮಾಂಢವ್ಯ ವಲಯ ಮಹಿಳೆಯರ ವಾಲಿಬಾಲ್ ಟೂರ್ನಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಣ ಮತ್ತು ಕ್ರೀಡೆ ಎರಡು ಕಣ್ಣುಗಳಿದ್ದಂತೆ. ಜೀವನದಲ್ಲಿ ಕ್ರೀಡೆ ಮತ್ತು ಓದು ಎರಡನ್ನು ಸಮವಾಗಿ ಅಳವಡಿಸಿಕೊಂಡರೆ ಉತ್ತಮ ವ್ಯಕ್ತಿತ್ವ, ಜೀವನ ಹಾಗೂ ಆರೋಗ್ಯವಂತ ಬದುಕನ್ನು ರೂಢಿಸಿಕೊಳ್ಳಲು ಸಾಧ್ಯ ಎಂದರು.

ವಿಜೇತರ ಪಟ್ಟಿ: ಟೂರ್ನಿಯಲ್ಲಿ ಮಂಡ್ಯ ಪಿಇಎಸ್ ಕಾಲೇಜು (ಪ್ರಥಮಸ್ಥಾನ), ಭಾರತೀನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು (ದ್ವಿತೀಯ ಸ್ಥಾನ), ಮಂಡ್ಯ ಮಹಿಳಾ ಸರ್ಕಾರಿ ಕಾಲೇಜು (ತೃತೀಯ ಬಹುಮಾನ) ಪಡೆದುಕೊಂಡಿವೆ.

ಪ್ರಥಮ ಮತ್ತು ದ್ವಿತೀಯ ಸ್ಥಾನಕ್ಕೆ ಆಯ್ಕೆಯಾದ ತಂಡಗಳು ಮೈಸೂರು ವಿಶ್ವವಿದ್ಯಾನಿಲಯ ಅಂತರ ವಲಯ ಮಟ್ಟದ ಕ್ರೀಡಾಕೂಟದಲ್ಲಿ ಮಾಂಢವ್ಯ ವಲಯವನ್ನು ಪ್ರತಿನಿಧಿಸುತ್ತಾರೆ.



ಕಿಕ್ಕೇರಿಯಲ್ಲಿ ಹಳೆ ವಿದ್ಯಾರ್ಥಿ ಸಂಘದವರು ಏರ್ಪಡಿಸಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ 35 ವರ್ಷಗಳ ಹಿಂದೆ ಸರ್ಕಾರಿ ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಅಂದಿನ ಗುರುಗಳಿಗೆ ಗುರುನಮನ ಸಲ್ಲಿಸಿ ಸಂಭ್ರಮಿಸಿದರು. ಗುರುಗಳಾದ ಎಸ್. ಸಿದ್ದೇಗೌಡ, ಎಸ್.ಕೆ. ದೇವರಾಜು, ಎಂ. ಶೇಷಯ್ಯ, ಕೆ.ಆರ್. ಸತ್ಯನಾರಾಯಣ, ಕೆ.ಎಸ್. ರಮೇಶ್, ಎಸ್. ರಾಮಕೃಷ್ಣ, ಎಸ್. ಲಕ್ಕೇಗೌಡ, ಶಿ. ಕುಮಾರಸ್ವಾಮಿ, ಟಿ.ಆರ್.ರಾಮೇಗೌಡ, ಬಿ.ಎನ್. ರಾಮೇಗೌಡ, ಎಚ್.ಆರ್. ವೆಂಕಟೇಶಮೂರ್ತಿ ಅವರನ್ನು ಸನ್ಮಾನಿಸಲಾಯಿತು. ಶಿಷ್ಯರಾದ ಗಾಯಕ ಡಾ. ಕಿಕ್ಕೇರಿ ಕೃಷ್ಣಮೂರ್ತಿ, ಜೇನುಗೂಡು ಮಹೇಶ್ ಸೇರಿದಂತೆ ಇತರರು ಇದ್ದರು.

ಶಾ ಸಭೆಗೆ ಹೆಚ್ಚಿನ ಕಾರ್ಯಕರ್ತರು ಪಾಲ್ಗೊಳ್ಳಲು ಇಂದ್ರೇಶ್ ಮನವಿ



ಪಾಂಡವಪುರ, ಡಿ.28– ಮಂಡ್ಯಕ್ಕೆ ಡಿ.30ರಂದು ಕೇಂದ್ರ ಗೃಹ ಮಂತ್ರಿ ಅಮಿತ್ ಶಾ ಆಗಮಿಸಲಿದ್ದು, ಅಂದು ನಗರದಲ್ಲಿ ನಡೆಯುವ ಬಹಿರಂಗ ಸಭೆಯಲ್ಲಿ ಮೇಲುಕೋಟೆ ವಿಧಾನಸಭಾ ಕ್ಷೇತ್ರದಿಂದ ಅಧಿಕ ಸಂಖ್ಯೆಯ ಕಾರ್ಯಕರ್ತರು ಪಾಲ್ಗೊಳ್ಳುವಂತೆ ಬಿಜೆಪಿ ಮುಖಂಡ ಡಾ.ಎನ್. ಎಸ್.ಇಂದ್ರೇಶ್ ಕರೆ ನೀಡಿದರು.

ಪಟ್ಟಣದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಬಿಜೆಪಿ ಬಲಗೊಳಿಸಿ, ಮುಂದಿನ ಚುನಾವಣೆಯಲ್ಲಿ ಮಂಡ್ಯದಲ್ಲಿ ಏಳು ಕ್ಷೇತ್ರದಲ್ಲೂ ಸಹ ಬಿಜೆಪಿ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸುವುದು ಹಾಗೂ ಹಳೇ ಮೈಸೂರು ಭಾಗದಲ್ಲಿ ಬಿಜೆಪಿ ಪಕ್ಷದ ಶಾಸಕರನ್ನು ಅಧಿಕ ಸಂಖ್ಯೆಯಲ್ಲಿ ಗೆಲ್ಲಿಸಿಕೊಳ್ಳುವ ಉದ್ದೇಶದಿಂದ ಅಮಿತ್ ಶಾ ಆಗಮನ ಮಹತ್ವದ ಪಾತ್ರವಹಿಸಲಿದ್ದು ಬಿಜೆಪಿ ಬಲ ಹೆಚ್ಚಿಸಲಿದೆ ಎಂದು ತಿಳಿಸಿದರು.

ಅಮಿತ್ ಶಾ ಅವರ ಕಾರ್ಯಕ್ರಮಕ್ಕೆ ಮೇಲುಕೋಟೆ ವಿಧಾನಸಭಾ ಕ್ಷೇತ್ರದಿಂದ 12 ಸಾವಿರಕ್ಕೂ ಅಧಿಕ ಸಂಖ್ಯೆಯಲ್ಲಿ ಕಾರ್ಯಕರ್ತರು ಬರುವ ನಿರೀಕ್ಷೆ ಇದೆ. ಸಮಾವೇಶದಲ್ಲಿ ಒಂದು ಲಕ್ಷಕ್ಕೂ ಹೆಚ್ಚು ಕಾರ್ಯಕರ್ತರು ಪಾಲ್ಗೊಳ್ಳಬಹುದು ಎಂದು ಹೇಳಿದರು. ಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾ ಮಹಿಳಾ ಕಾರ್ಯದರ್ಶಿ ಮಂಗಳಾ, ನವೀನ್ ಕುಮಾರ್, ತಾಲೂಕು ಪ್ರಧಾನ ಕಾರ್ಯದರ್ಶಿ ಧನಂಜಯ್, ಮುಖಂಡ ಸಂದೇಶ್, ರಾಜೀವ್, ಜಯಣ್ಣಚಾರ್, ಸೇರಿದಂತೆ ಹಲವರು ಹಾಜರಿದ್ದರು.

ಅಮಿತ್ ಶಾ ಕಾರ್ಯಕ್ರಮದ ವೇಳಾಪಟ್ಟಿ ಬದಲು

• ಬೆಳಗ್ಗೆ 10.30ಕ್ಕೆ ಮೆಗಾ ಡೈರಿ ಉದ್ಘಾಟನೆ • ಮಧ್ಯಾಹ್ನ 12.30ಕ್ಕೆ ಬಹಿರಂಗ ಸಭೆ



ಮಂಡ್ಯ, ಡಿ.28– ಕೇಂದ್ರ ಗೃಹ ಸಚಿವ ಅಮಿತ್ ಶಾ ಮಂಡ್ಯ ಜಿಲ್ಲೆಯ ಪ್ರವಾಸದ ಸಮಯ ಬದಲಾವಣೆಯಾಗಿದ್ದು, ಡಿ.30ರ ಶುಕ್ರವಾರ ಮಧ್ಯಾಹ್ನದ ಬದಲು ಬೆಳಗ್ಗೆಯೇ ಮಂಡ್ಯಕ್ಕೆ ಆಗಮಿಸಲಿದ್ದು, ಅಂದು ಬೆಳಗ್ಗೆ 10.30ಕ್ಕೆ ಗೆಜ್ಜಲಗೆರೆಯ ಮನ್‌ಮುಲ್‌ನಲ್ಲಿ ಮೆಗಾ ಡೈರಿ ಉದ್ಘಾಟಿಸಿ, ಬಳಿಕ ಮಧ್ಯಾಹ್ನ 12.30ಕ್ಕೆ ಮಂಡ್ಯ ನಗರದ ಬಾಯ್ಸ್ ಕಾಲೇಜಿಗೆ ಆಗಮಿಸಿ ಬಹಿರಂಗ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಗೋಪಾಲಯ್ಯ ತಿಳಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೊದಲಿನ ವೇಳಾಪಟ್ಟಿಯಂತೆ ಅಮಿತ್ ಶಾ ಮಧ್ಯಾಹ್ನ ಮಂಡ್ಯ ನಗರಕ್ಕೆ ಆಗಮಿಸಿ, ಬಹಿರಂಗ ಸಮಾವೇಶದಲ್ಲಿ ಪಾಲ್ಗೊಂಡ ಬಳಿಕ ಮೆಗಾಡೈರಿ ಉದ್ಘಾಟನೆಗೆ ತೆರಳಬೇಕಿತ್ತು. ಆದರೆ ಬದಲಾದ ವೇಳಾಪಟ್ಟಿಯಲ್ಲಿ ಬೆಳಗ್ಗೆಯೇ ಮಂಡ್ಯ ಜಿಲ್ಲೆಗೆ ಆಗಮಿಸಲಿದ್ದಾರೆ ಎಂದು ವಿವರಿಸಿದರು. ಬೆಳಗ್ಗೆ 10.30ಕ್ಕೆ ಮನ್‌ಮುಲ್‌ನಲ್ಲಿ ಬೃಹತ್ ಮೆಗಾಡೈರಿ ಉದ್ಘಾಟನೆಯನ್ನು ಶಾ ನೆರವೇರಿಸಲಿದ್ದು, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಮಾಜಿ ಮುಖ್ಯಮಂತ್ರಿಗಳಾದ ಯಡಿಯೂರಪ್ಪ, ಕುಮಾರಸ್ವಾಮಿ, ಸಿದ್ದರಾಮಯ್ಯ ಸೇರಿದಂತೆ ಸಚಿವ ಸಂಪುಟದ ಸಹೋದ್ಯೋಗಿಗಳು, ಮಂಡ್ಯ ಜಿಲ್ಲೆ ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದರು. ಬಳಿಕ ಮಧ್ಯಾಹ್ನ 12.30ಕ್ಕೆ ಮಂಡ್ಯ ನಗರಕ್ಕೆ ಆಗಮಿಸಲಿದ್ದು, ನಗರದ ಸರ್ಕಾರಿ ಮಹಾವಿದ್ಯಾಲಯ (ಬಾಯ್ಸ್ ಕಾಲೇಜು)ದಲ್ಲಿ ನಡೆಯುವ ಬಿಜೆಪಿ ಪಕ್ಷದ ಬೃಹತ್ ಬಹಿರಂಗ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು. ಗೋಷ್ಠಿಯಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ಸಿ.ಪಿ.ಉಮೇಶ್, ವಿಧಾನ ಪರಿಷತ್ ಮಾಜಿ ಸದಸ್ಯ ಅಶ್ವತ್ಥ್ ನಾರಾಯಣ, ಪಕ್ಷದ ವಕ್ತಾರ ಮಹೇಶ್, ಕಾಳೇಗೌಡ, ಸಿ.ಟಿ.ಮಂಜುನಾಥ್ ಇದ್ದರು.

ಒಂದನೇ ಪುಟದಿಂದ

ಪ್ರಧಾನಿ ಮೋದಿ ಕರೆ ಮಾಡಿ ಆರೋಗ್ಯ ವಿಚಾರಣೆ

ದೇವರ ದಯೆಯಿಂದ ಎಲ್ಲರೂ ಚೆನ್ನಾಗಿದ್ದೇವೆ. ಅಪಘಾತವಾದಾಗ ಜೊತೆ ಯಲ್ಲಿದ್ದ ಪೈಲಟ್, ಪ್ರೋಟೋಕಾಲ್, ಎಸ್ಕಾರ್ಟ್ ವಾಹನಗಳ ಪೊಲೀಸರು ನಮ್ಮನ್ನು ತಕ್ಷಣ ಆಸ್ಪತ್ರೆಗೆ ಕರೆತಂದರು ಎಂದು ಪ್ರಹ್ಲಾದ್ ಮೋದಿ ನುಡಿದರು. ಆಸ್ಪತ್ರೆಗೆ ಬಂದಾಗ ಇಲ್ಲಿನ ವೈದ್ಯರು, ಸಿಬ್ಬಂದಿ ತ್ವರಿತವಾಗಿ ಚಿಕಿತ್ಸೆ ನೀಡಿ, ಪ್ರಯೋಗಾಲಯದಲ್ಲಿ ಎಲ್ಲಾ ಬಗೆಯ ಪರೀಕ್ಷೆ ಮಾಡಿದರು. ಸುತ್ತೂರು ಮಠಾಧೀಶರಾದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ ಅವರು ಬಂದು ಆರೋಗ್ಯ ವಿಚಾರಿಸಿ, ಶೀಘ್ರ ಗುಣಮುಖರಾಗುವಂತೆ ಆಶೀರ್ವದಿಸಿದರು. ಅವರ ಪ್ರೀತಿಯಿಂದ ನಮಗೆ ಆತ್ಮಸ್ಥೈರ್ಯ ಬಂದಿದೆ ಎಂದು ನುಡಿದರು. ಘಟನೆ ನಡೆದಾಗ ಸ್ಥಳದಲ್ಲಿದ್ದ ಜನರು ನಮ್ಮನ್ನು ಆಸ್ಪತ್ರೆಗೆ ಕರೆತರಲು ನೀಡಿದ ನೆರವು, ಆಸ್ಪತ್ರೆಯಲ್ಲಿ ನಮ್ಮನ್ನು ಮನೆಯವರಂತೆ ನೋಡಿಕೊಂಡು ಚಿಕಿತ್ಸೆ, ಆರೈಕೆ ಮಾಡಿದ ವೈದ್ಯರು, ಇತರ ಸಿಬ್ಬಂದಿ, ಬಿಜೆಪಿ ನಾಯಕರಲ್ಲದೆ ವಿರೋಧ ಪಕ್ಷಗಳ ಮುಖಂಡರೂ ಬಂದು ನಮ್ಮೆಲ್ಲರ ಆರೋಗ್ಯ ವಿಚಾರಿಸಿದ್ದು ನಮ್ಮಲ್ಲಿ ಆತ್ಮವಿಶ್ವಾಸ ಮೂಡಿಸಿದೆ. ಸರ್ಕಾರ ಮತ್ತು ಕರ್ನಾಟಕದ ಜನರು ನಮ್ಮವರೆಂಬ ಭಾವನೆ ಮೂಡಿದೆ. ಅವರೆಲ್ಲರಿಗೂ ನಮ್ಮ ಕುಟುಂಬ ಕೃತಜ್ಞತೆ ಸಲ್ಲಿಸುತ್ತದೆ ಎಂದು ಪ್ರಹ್ಲಾದ್ ಮೋದಿ ಅವರು ಇದೇ ಸಂದರ್ಭ ನುಡಿದರು. ಪೈಲಟ್, ಬೆಂಗಾವಲು ವಾಹನಗಳಿದ್ದರಿಂದ ನಾವು ಪ್ರಯಾಣಿ ಸುತ್ತಿದ್ದ ಕಾರೇನು ಅತೀ ವೇಗವಾಗಿ ಚಲಿಸುತ್ತಿರ ಲಿಲ್ಲ. ಚಾಲಕನ ನಿರ್ಲಕ್ಷ್ಯ ಎಂದೂ ಹೇಳಲಾಗದು. ಅದೊಂದು ಆಕಸ್ಮಿಕ ಅಷ್ಟೇ.

ದೇವರ ದಯೆ, ಕರ್ನಾಟಕದ ಜನರ ಪ್ರೀತಿಯಿಂದಾಗಿ ಯಾವುದೇ ತೊಂದರೆ ಆಗಿಲ್ಲ. ನಾವೆಲ್ಲರೂ ಚೆನ್ನಾಗಿದ್ದೇವೆ. ಸಂಕಷ್ಟ ಸ್ಥಿತಿಯಲ್ಲಿ ನೆರವಾದ ಎಲ್ಲರಿಗೂ ಧನ್ಯವಾದಗಳನ್ನು ಅರ್ಪಿಸುತ್ತೇವೆ ಎಂದು ನುಡಿದರು. ಸೀಟ್ ಬೆಲ್ಟ್ ಧರಿಸಿದ್ದರಿಂದ, ಕಾರಿನ ಎಲ್ಲಾ ಏರ್‌ಬ್ಯಾಗ್‌ಗಳೂ ತೆರೆದುಕೊಂಡ ಕಾರಣ ನಾವೆಲ್ಲರೂ ಪ್ರಾಣಾಪಾಯದಿಂದ ಪಾರಾಗಿದ್ದೇವೆ. ಎಲ್ಲರೂ ಸೀಟ್ ಬೆಲ್ಟ್ ಧರಿಸುವುದೂ ಸೇರಿದಂತೆ ಎಲ್ಲಾ ಸಂಚಾರ ನಿಯಮಗಳನ್ನೂ ಪಾಲಿಸಬೇಕೆಂದ ಅವರು, ತಂತ್ರಜ್ಞಾನ ಅಭಿವೃದ್ಧಿಯಿಂದಾಗಿ ಕಾರಿನಲ್ಲಿ ಇಂತಹ ಸುರಕ್ಷಾ ವ್ಯವಸ್ಥೆ ನಮಗೆ ಲಭ್ಯವಾಗಿದೆ ಎಂದರು.

ಜೆಎಸ್‌ಎಸ್ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ. ಮಧು ಮಾತನಾಡಿ, ಅಪಘಾತಕ್ಕೀಡಾಗಿದ್ದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಸಹೋದರ ಪ್ರಹ್ಲಾದ್ ಮೋದಿ ಹಾಗೂ ಕುಟುಂಬದವರು ಮಂಗಳವಾರ ಮಧ್ಯಾಹ್ನ ಸುಮಾರು 2 ಗಂಟೆ ವೇಳೆಗೆ ಆಸ್ಪತ್ರೆಗೆ ಬಂದರು. ತಕ್ಷಣ ನಾವು ಅವರಿಗೆ ಎಲ್ಲಾ ರೀತಿಯ ಪರೀಕ್ಷೆ ನಡೆಸಿದೆವು. ಸಣ್ಣಪುಟ್ಟ ಗಾಯಗಳಾಗಿದ್ದು, ಆತಂಕದ ಪರಿಸ್ಥಿತಿ ಇರಲಿಲ್ಲ ಎಂದರು.

ಮೊಮ್ಮಗನ ಎಡ ಮೊಣಕಾಲಿನ ಮೂಳೆ ಮುರಿದಿದೆ. ಮೂಳೆ ತಜ್ಞರು ಚಿಕಿತ್ಸೆ ನೀಡಿ ಪ್ಲಾಸ್ಟರ್ ಮಾಡಿರುವುದರಿಂದ ಬಾಲಕ ಚೇತರಿಸಿಕೊಳ್ಳುತ್ತಿದ್ದಾನೆ. ನಿನ್ನೆ ಸಂಜೆಯೇ ವಿಶೇಷ ತಜ್ಞರನ್ನು ಕರೆಸಿ ಅವರ ಆರೋಗ್ಯ ತಪಾಸಣೆ ನಡೆಸಿದ ಬಳಿಕ ವಾರ್ಡ್‌ಗೆ ಸ್ಥಳಾಂತರಿಸಲಾಗಿದೆ ಎಂದರು. ಶಾಸಕ ಎಸ್.ಎ.ರಾಮದಾಸ್, ಪ್ರಹಲ್ಲಾದ ಮೋದಿ ಅವರ ಮಗ ಮೆಹುಲ್ ಮೋದಿ, ಜೆಎಸ್‌ಎಸ್ ಮೆಡಿಕಲ್ ಕಾಲೇಜು ಪ್ರಾಂಶುಪಾಲ ಡಾ. ಹೆಚ್. ಬಸವನಗೌಡಪ್ಪ ಹಾಗೂ ಇತರರು ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಪ್ರಧಾನಿ ಮೋದಿ ತಾಯಿ ಆಸ್ಪತ್ರೆಗೆ ದಾಖಲು

ತಿಳಿಯುತ್ತಿದ್ದಂತೆಯೇ ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್, ಶಾಸಕ ದರ್ಶನಾ ಬೆನ್ ವಾಘೇಲಾ, ಕೌಶಿಕ್ ಜೈನ್ ಸೇರಿದಂತೆ ಅನೇಕ ಸಚಿವರು ಹಾಗೂ ಶಾಸಕರು ಆಸ್ಪತ್ರೆಗೆ ತೆರಳಿ ಹೀರಾಬೆನ್ ಚಿಕಿತ್ಸೆಗೆ ನೆರವಾಗುತ್ತಿದ್ದಾರೆ.

ತಾಯಿಯವರು 100ನೇ ವರ್ಷಕ್ಕೆ ಕಾಲಿಟ್ಟಾಗ ಪ್ರಧಾನಿ ಮೋದಿ ಗಾಂಧಿನಗರದ ಅವರ ನಿವಾಸಕ್ಕೆ ತೆರಳಿ ತಾಯಿಯ ಆಶೀರ್ವಾದ ಪಡೆದು, ಕೆಲಕಾಲ ಅವರೊಂದಿಗೆ ಕಾಲ ಕಳೆದಿದ್ದರು. ಅಲ್ಲದೇ, ತಮ್ಮ ತಾಯಿ 100ನೇ ವರ್ಷಕ್ಕೆ ಕಾಲಿರಿಸಿದ ಸಂದರ್ಭದ ಬಗ್ಗೆ ಮೋದಿ ತಮ್ಮ ಬ್ಲಾಗ್‌ನಲ್ಲಿ ಸುದೀರ್ಘವಾದ ಭಾವನಾತ್ಮಕ ಬರಹ ಬರೆದಿದ್ದರು. ಮೋದಿಯವರು ತಮ್ಮ ತಾಯಿ ಜೊತೆಗಿನ ಬಾಂಧವ್ಯದ ಬಗ್ಗೆ ಅನೇಕ ಬಾರಿ ಸಾರ್ವಜನಿಕವಾಗಿ ಮಾತನಾಡಿದ್ದರು. ಗುಜರಾತ್ ಚುನಾವಣೆ ವೇಳೆ ಅಹಮದಾಬಾದ್‌ಗೆ ಪ್ರಚಾರಕ್ಕಾಗಿ ತೆರಳಿದ್ದ ಮೋದಿಯವರು ಗಾಂಧಿನಗರದಲ್ಲಿರುವ ತಾಯಿ ಮನೆಗೆ ತೆರಳಿ, ಅವರೊಂದಿಗೆ ಚಹಾ ಸೇವಿಸುತ್ತಿರುವ ಚಿತ್ರ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿತ್ತು ನಿನ್ನೆ (ಮಂಗಳವಾರ) ಪ್ರಧಾನಿ ಮೋದಿಯವರ ಸಹೋದರ ಪ್ರಹ್ಲಾದ್ ಮೋದಿ ಮತ್ತು ಕುಟುಂಬದವರು ತೆರಳುತ್ತಿದ್ದ ಕಾರು ಬೆಂಗಳೂರು–ನೀಲಗಿರಿ ಹೆದ್ದಾರಿಯಲ್ಲಿ ಕಡಕೊಳ ಬಳಿ ಅಪಘಾತಕ್ಕೀಡಾಗಿತ್ತು. ಅದೃಷ್ಟವಶಾತ್ ಕಾರಿನಲ್ಲಿದ್ದ ಎಲ್ಲರೂ ಸಣ್ಣಪುಟ್ಟ ಗಾಯಗಳೊಂದಿಗೆ ಅಪಾಯದಿಂದ ಪಾರಾಗಿದ್ದರು. ಈ ಅಪಘಾತದ ಸುದ್ದಿಯ ಆಘಾತದಿಂದ ಹೀರಾಬೆನ್ ಅವರ ಆರೋಗ್ಯದಲ್ಲಿ ಏರುಪೇರಾಗಿರಬಹುದು ಎಂದು ಸಹ ಹೇಳಲಾಗುತ್ತಿದೆ. ರಾಹುಲ್ ಗಾಂಧಿ ಹಾರೈಕೆ: ಪ್ರಧಾನಿ ನರೇಂದ್ರ ಮೋದಿಯವರ ತಾಯಿ ಹೀರಾಬೆನ್ ಅವರು ಶೀಘ್ರವೇ ಚೇತರಿಸಿಕೊಳ್ಳಲಿ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹಾರೈಸಿದ್ದಾರೆ. ಈ ಸಂಬಂಧ ಟ್ವೀಟ್ ಮಾಡಿರುವ ಅವರು, ತಾಯಿ ಮತ್ತು ಮಗನ ನಡುವಿನ ಪ್ರೀತಿ ನಿರಂತರ ಮತ್ತು ಬೆಲೆ ಕಟ್ಟಲಾಗದಂತಹದ್ದು. ಮೋದಿಯವರೇ, ಈ ಸಂಕಷ್ಟದ ಸಮಯದಲ್ಲಿ ನನ್ನ ಪ್ರೀತಿ ಹಾಗೂ ಬೆಂಬಲ ನಿಮಗಿದೆ. ನಿಮ್ಮ ತಾಯಿ ಆದಷ್ಟು ಬೇಗನೆ ಚೇತರಿಸಿಕೊಳ್ಳುತ್ತಾರೆ ಎಂದು ನಾನು ಆಶಿಸುತ್ತೇನೆ ಎಂದು ರಾಹುಲ್ ಗಾಂಧಿ ಟ್ವೀಟ್ ಮಾಡಿದ್ದಾರೆ.

ಅಂಡರ್ ಪಾಸ್

ಜಂಕ್ಷನ್‌ಗಳಲ್ಲಿ ಸೂಕ್ತ ಸೌಲಭ್ಯ ಕಲ್ಪಿಸಿ ಅಪಘಾತ ಸಂಭವಿಸುವುದನ್ನು ತಪ್ಪಿಸಬೇಕು. ಅದಕ್ಕಾಗಿ ತ್ವರಿತಗತಿಯಲ್ಲಿ ಕಾರ್ಯೋನ್ಮುಖರಾಗುವಂತೆ ಪ್ರತಾಪ್ ಸಿಂಹ ಮುಡಾ ಅಧಿಕಾರಿಗಳಿಗೆ ತಾಕೀತು ಮಾಡಿದರು. ಅದೇ ರೀತಿ ರಿಂಗ್ ರಸ್ತೆಯ ದಟ್ಟಗಳ್ಳಿ ಕೆಇಬಿ ಜಂಕ್ಷನ್ ಸಮೀಪ ಕಡಿದಾದ ತಿರುವಿನಲ್ಲಿ ಅತೀ ಹೆಚ್ಚು ಅಪಘಾತಗಳು ಸಂಭವಿಸಿ ಸಾವುಗಳಾಗುತ್ತಿರುವುದರಿಂದ ಅದನ್ನು ತಡೆಯಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್‌ಹೆಚ್‌ಎಐ)ದಿಂದ ವಿನ್ಯಾಸ ಮಾಡಿ ಸೂಕ್ತವೆನಿಸುವ ಯೋಜನೆಯನ್ನು ಕೈಗೆತ್ತಿಕೊಳ್ಳುವಂತೆ ಅಲ್ಲಿನ ಅಧಿಕಾರಿಗಳಿಗೆ ಸೂಚನೆ ನೀಡುತ್ತೇನೆ ಎಂದು ಅವರು ಹೇಳಿದರು. ದಟ್ಟಗಳ್ಳಿ ಬ್ಲಾಕ್‌ಸ್ಪಾಟ್ ಯೋಜನೆಗೆ ರಾಷ್ಟ್ರೀಯ ಹೆದ್ದಾರಿ ಅಧಿಕಾರಿಗಳು ಡಿಪಿಆರ್ ಸಿದ್ಧಪಡಿಸಿ ಪ್ರಸ್ತಾವನೆ ಸಲ್ಲಿಸುವಂತೆ ಸೂಚಿಸಿ ಅತೀ ಶೀಘ್ರ ಅನುಮೋದನೆ ಪಡೆದು ಕಾಮಗಾರಿ ಜಾರಿಗೊಳಿಸಲು ಪ್ರಯತ್ನಿಸುತ್ತೇನೆ ಎಂದು ಪ್ರತಾಪ್ ಸಿಂಹ ಇದೇ ಸಂದರ್ಭ ತಿಳಿಸಿದರು. ಮುಡಾ ಸದಸ್ಯರಾದ ಲಕ್ಷ್ಮೀದೇವಿ, ಮಾದೇಶ, ನವೀನ, ಸೂಪರಿಂಟೆಂಡಿಂಗ್ ಇಂಜಿನಿಯರ್ ಚನ್ನಕೇಶವ, ಎಕ್ಸಿಕ್ಯೂಟಿವ್ ಇಂಜಿನಿಯರ್ ಮೋಹನ್, ನಗರ ಯೋಜಕ ಸದಸ್ಯ ಶೇಷ ಸೇರಿದಂತೆ ಹಲವು ಅಧಿಕಾರಿಗಳು ರಿಂಗ್ ರಸ್ತೆ ಜಂಕ್ಷನ್ ಪರಿಶೀಲನೆ ವೇಳೆ ಉಪಸ್ಥಿತರಿದ್ದರು.

ಆಂಧ್ರದಲ್ಲಿ ಮಾಜಿ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ರ‍್ಯಾಲಿಯಲ್ಲಿ ಕಾಲ್ತುಳಿತ: 8 ಮಂದಿ ಬಲಿ

ನೆಲ್ಲೂರು, ಡಿ.28– ಟಿಡಿಪಿ ಅಧ್ಯಕ್ಷ, ಮಾಜಿ ಮುಖ್ಯಮಂತ್ರಿ ಎಂ.ಚಂದ್ರಬಾಬು ನಾಯ್ಡು ಅವರ ಸಾರ್ವಜನಿಕ ಸಭೆಯಲ್ಲಿ ಕಾಲ್ತುಳಿತ ಸಂಭವಿಸಿ ಎಂಟು ಮಂದಿ ದುರ್ಮರಣ ಹೊಂದಿರುವ ಘಟನೆ ಬುಧವಾರ ಸಂಜೆ ನಡೆದಿದೆ. ಆಂಧ್ರಪ್ರದೇಶದ ನೆಲ್ಲೂರು ಜಿಲ್ಲೆಯ ಕಂದುಕೂರ್‌ನಲ್ಲಿ ಸಾರ್ವಜನಿಕ ಸಭೆಗೆ ಚಂದ್ರಬಾಬು ನಾಯ್ಡು ಆಗಮಿಸಿದಾಗ ಈ ದುರ್ಘಟನೆ ಸಂಭವಿಸಿದೆ. ಬೃಹತ್ ಸಮಾವೇಶದಲ್ಲಿ ನೆರೆದಿದ್ದ ಸಾವಿರಾರು ಟಿಡಿಪಿ ಕಾರ್ಯಕರ್ತರು ಮತ್ತು ಬೆಂಬಲಿಗರ ನಡುವೆ ತಳ್ಳಾಟ ಮತ್ತು ನೂಕಾಟ ನಡೆದಿದ್ದು, ಕೆಲವರು ಹತ್ತಿರದ ಒಳಚರಂಡಿ ಕಾಲುವೆಗೆ ಜಿಗಿದು ಕಾಲ್ತುಳಿತದಿಂದ ತಪ್ಪಿಸಿಕೊಂಡರೆ, ಮತ್ತೆ ಕೆಲವರು ಜನರ ಗುಂಪಿನಲ್ಲಿ ಸಿಲುಕಿ ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ತದನಂತರ ತನ್ನ ಪ್ರಚಾರ ಕಾರ್ಯಕ್ರಮವನ್ನು ರದ್ದುಗೊಳಿಸಿದ ಚಂದ್ರಬಾಬು ಸಂತ್ರಸ್ತರ ಕುಟುಂಬಗಳಿಗೆ ತಲಾ 10 ಲಕ್ಷರೂ. ಪರಿಹಾರ ಘೋಷಿಸಿದ್ದಾರೆ. 2024ರ ವಿಧಾನಸಭಾ ಚುನಾವಣೆ ಅಂಗವಾಗಿ ಚಂದ್ರಬಾಬು ನಾಯ್ಡು ಸಾರ್ವಜನಿಕ ಸಭೆ ಹಾಗೂ ರೋಡ್ ಶೋ ನಡೆಸುತ್ತಿದ್ದಾಗ ಈ ದುರಂತ ಸಂಭವಿಸಿದ್ದು, ಸಾವು ನೋವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆಯಿದೆ.

ಸಂಪುಟ ವಿಸ್ತರಣೆಗೆ ವರಿಷ್ಠರ ಅನುಮತಿಗೆ ರಾಜ್ಯ ಉಸ್ತುವಾರಿ ಅರುಣ್‌ಸಿಂಗ್ ಮೂಲಕ ಮುಖ್ಯಮಂತ್ರಿ ಲಾಬಿ!

● ಈಶ್ವರಪ್ಪ, ರಮೇಶ್ ಜಾರಕಿಹೊಳಿ ಸಂಪುಟಕ್ಕೆ ಸೇರಿಸಿಕೊಳ್ಳಲು ಸಿಎಂ ಹರಸಾಹಸ ● ಒಕ್ಕಲಿಗ, ಲಿಂಗಾಯಿತ ಪ್ರಾತಿನಿಧ್ಯಕ್ಕೆ ಬ್ರೇಕ್



ಬೆಂಗಳೂರು, ಡಿ.28 (ಕೆಎಂಶಿ)– ರಾಜ್ಯ ಉಸ್ತುವಾರಿ ಹೊಣೆ ಹೊತ್ತ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅರುಣ್‌ಸಿಂಗ್ ಮೂಲಕ ಸಂಪುಟ ವಿಸ್ತರಣೆಗೆ ಅವಕಾಶ ಮಾಡಿಕೊಡುವಂತೆ ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮನವಿ ಸಲ್ಲಿಸುತ್ತಿದ್ದಾರೆ.

ರಾಜ್ಯ ವಿಧಾನಸಭಾ ಚುನಾವಣೆಗೆ ಸಂಬಂಧಿಸಿದಂತೆ ವರಿಷ್ಠರ ಆಹ್ವಾನದ ಮೇರೆಗೆ ಕಳೆದ ಸೋಮವಾರ ದೆಹಲಿಗೆ ತೆರಳಿದ್ದ ಮುಖ್ಯಮಂತ್ರಿಯವರು ಮಂತ್ರಿಮಂಡಲ ವಿಸ್ತರಿಸುವ ಪ್ರಸ್ತಾವವನ್ನು ವರಿಷ್ಠರ ಮುಂದಿಟ್ಟಿದ್ದರೂ ಅದಕ್ಕೆ ಸಮರ್ಪಕ ಪ್ರತಿಕ್ರಿಯೆ ದೊರೆತಿರಲಿಲ್ಲ.

ಕಳಂಕ ಆರೋಪ ಹೊತ್ತು ಸಂಪುಟಕ್ಕೆ ರಾಜೀನಾಮೆ ನೀಡಿದ್ದ ಈಶ್ವರಪ್ಪ ಹಾಗೂ ರಮೇಶ್ ಜಾರಕಿಹೊಳಿ ಅವರನ್ನು ಮಂತ್ರಿಮಂಡಲಕ್ಕೆ ಸೇರ್ಪಡೆ ಮಾಡಿಕೊಳ್ಳುವುದು ಮುಖ್ಯಮಂತ್ರಿಯವರಿಗೆ ಅನಿವಾರ್ಯವಾಗಿದೆ.


ಇವರಿಬ್ಬರನ್ನು ಮಂತ್ರಿ ಮಾಡುವುದಾಗಿ ಬೊಮ್ಮಾಯಿ ಅವರು ಭರವಸೆ ನೀಡಿದ್ದಾರೆ. ಅದನ್ನು ಈಡೇರಿಸಲು ತಮ್ಮಿಂದ ಸಾಧ್ಯವಾಗದ ಕಾರಣ ಅರುಣ್ ಸಿಂಗ್ ಅವರ ಮೊರೆ ಹೋಗಿದ್ದಾರೆ. ಬೆಳಗಾವಿಯ ಸುವರ್ಣ ಸೌಧದಲ್ಲಿ ಈಶ್ವರಪ್ಪ ಹಾಗೂ ರಮೇಶ್ ಅವರನ್ನು ತಮ್ಮ ಕೊಠಡಿಗೆ ಕರೆಸಿಕೊಂಡು ಕೇಂದ್ರ ಗೃಹ ಸಚಿವರು ನಾಳೆಯಿಂದ ಮೂರು ದಿನಗಳ ಕಾಲ ರಾಜ್ಯ ಪ್ರವಾಸ ಕೈಗೊಳ್ಳುತ್ತಿದ್ದಾರೆ. ಅವರು ಸರ್ಕಾರಿ ಹಾಗೂ ಪಕ್ಷದ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಪಕ್ಷದ ಮುಖಂಡರ ಸಭೆಯನ್ನೂ ಕರೆದಿದ್ದು, ಈ ಸಂದರ್ಭದಲ್ಲಿ ಅರುಣ್‌ಸಿಂಗ್ ಅವರು ನಿಮ್ಮಿಬ್ಬರನ್ನು ಮಂತ್ರಿ ಮಾಡಬೇಕೆಂದು ಅವರಿಗೆ ಶಿಫಾರಸ್ಸು ಮಾಡಲಿದ್ದಾರೆ.

ಹೀಗೆ ವರಿಷ್ಠರ ತೀರ್ಮಾನದ ಅನುಸಾರ ಈಶ್ವರಪ್ಪ ಮತ್ತು ರಮೇಶ್ ಜಾರಕಿಹೊಳಿ ಸಚಿವ ಸಂಪುಟಕ್ಕೆ ಸೇರ್ಪಡೆಯಾದರು ಎಂದಾಗ, ಇತರ ಸಚಿವ ಪದವಿ ಆಕಾಂಕ್ಷಿಗಳು ವಿರೋಧದ ಧ್ವನಿ ಎತ್ತುವ ಸಾಧ್ಯತೆ ಕಡಿಮೆ ಎಂದು ಬಸವರಾಜ ಬೊಮ್ಮಾಯಿ ಅವರು ಈ ಇಬ್ಬರು ನಾಯಕರಿಗೆ ವಿವರಿಸಿದ್ದಾರೆ. ಅವರ ಭರವಸೆಯ ಹಿನ್ನೆಲೆಯಲ್ಲಿ ಈಶ್ವರಪ್ಪ ಮತ್ತು ರಮೇಶ್ ಜಾರಕಿಹೊಳಿ ಅವರು ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರ ರಾಜ್ಯ ಪ್ರವಾಸದ ಮೇಲೆ ಗಮನ ನೆಟ್ಟಿದ್ದು,ಅವರು ಬಂದು ಹೋದ ನಂತರ ಹೊಸ ವರ್ಷದ ಆರಂಭದಲ್ಲಿ ಮಂತ್ರಿ ಮಂಡಲಕ್ಕೆ ಸೇರ್ಪಡೆಯಾಗುವ ಲೆಕ್ಕಾಚಾರದಲ್ಲಿದ್ದಾರೆ.

ಈ ಮಧ್ಯೆ ರಾಜ್ಯ ವಿಧಾನಸಭೆ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಕೇಂದ್ರ ಗೃಹ ಸಚಿವ ಅಮಿತ್ ಶಾ ರಾಜ್ಯ ಪ್ರವಾಸ ಕೈಗೊಳ್ಳುತ್ತಿದ್ದಾರೆ. ಹಳೆ ಮೈಸೂರು ಭಾಗದಲ್ಲಿ ಪಕ್ಷದ ಬಲವರ್ಧನೆಗೆ ಪೂರಕವಾಗಿ ಮಂಡ್ಯದಲ್ಲಿ ನಡೆಯುತ್ತಿರುವ ಸಾರ್ವಜನಿಕ ಸಭೆ ಮತ್ತು ಬೆಂಗಳೂರಿನಲ್ಲಿ ಬೂತ್ ಅಧ್ಯಕ್ಷರ ಸಮಾವೇಶ ನಡೆಯುತ್ತಿದ್ದು, ಪಕ್ಷದ ನಾಯಕರ ಜೊತೆಯೂ ಸಭೆ ನಡೆಸಲು ಅಮಿತ್ ಷಾ ಸಮಯ ನಿಗದಿಪಡಿಸಿದ್ದಾರೆ.

ಡಿ.29ರಂದು ರಾತ್ರಿ 10.5ಕ್ಕೆ ಯಲಹಂಕ ವಾಯುನೆಲೆಗೆ ಆಗಮಿಸಲಿರುವ ಅಮಿತ್ ಶಾ ರಾತ್ರಿ ತಾಜ್ ವೆಸ್ಟ್ ಎಂಡ್ ಹೋಟೆಲ್‌ನಲ್ಲಿ ವಾಸ್ತವ್ಯ ಹೂಡಲಿದ್ದಾರೆ.

ಡಿ.30ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 12.15 ರವರೆಗೆ ಸಮಯವನ್ನು ಕಾಯ್ದಿರಿಸಲಾಗಿದೆ. ಮಧ್ಯಾಹ್ನ 1.10ಕ್ಕೆ ಯಲಹಂಕ ವಾಯುನೆಲೆಯಿಂದ ಭಾರತೀಯ ವಾಯುಪಡೆ ಹೆಲಿಕಾಪ್ಟರ್ ಮೂಲಕ ಮಂಡ್ಯಕ್ಕೆ ಪ್ರಯಾಣಿಸಲಿದ್ದಾರೆ. 1.45 ರಿಂದ 3.15 ರವರೆಗೆ ಮಂಡ್ಯದ ಸರ್ಕಾರಿ ಬಾಲಕರ ಕಾಲೇಜು ಆವರಣದಲ್ಲಿ ನಡೆಯಲಿರುವ ಸಾರ್ವಜನಿಕ ಸಮಾರಂಭದಲ್ಲಿ ಭಾಗಿಯಾಗಲಿದ್ದಾರೆ.



ಸಂಜೆ 5.20ಕ್ಕೆ ಯಲಹಂಕ ವಾಯುನೆಲೆಗೆ ಅಮಿತ್ ಶಾ ವಾಪಸಾಗಲಿದ್ದು, 5.40ಕ್ಕೆ ಅರಮನೆ ಮೈದಾನಕ್ಕೆ ಭೇಟಿ ನೀಡಲಿದ್ದಾರೆ. ಸಂಜೆ 6.45ರವರೆಗೆ ಸಹಕಾರಿ ಸಮಾರಂಭದಲ್ಲಿ ಭಾಗಿಯಾಗಲಿದ್ದಾರೆ. ಅಂದು ರಾತ್ರಿ 8 ರಿಂದ 9.30ರವರೆಗೆ ಪಕ್ಷದ ಮುಖಂಡರ ಜೊತೆ ಸಭೆ ನಡೆಸಲು ಸಮಯ ಕಾಯ್ದಿರಿಸಿದ್ದಾರೆ. ಈ ವೇಳೆ ಪಕ್ಷ ಸಂಘಟನೆ, ಪಕ್ಷಕ್ಕೆ ಎದುರಾಗಿರುವ ಸವಾಲುಗಳು ಸೇರಿದಂತೆ ಸಂಘಟನಾತ್ಮಕ ವಿಚಾರಗಳ ಕುರಿತು ರಾಜ್ಯ ನಾಯಕರ ಜೊತೆ ಮಾತುಕತೆ ನಡೆಸಲಿದ್ದಾರೆ. ಇದೇ ವೇಳೆ ಸಿಎಂ ಬಸವರಾಜ ಬೊಮ್ಮಾಯಿ ಪ್ರತ್ಯೇಕ ಮಾತುಕತೆ ನಡೆಸಿ ಸಚಿವ ಸಂಪುಟ ವಿಸ್ತರಣೆ ವಿಚಾರ ಕುರಿತು ಚರ್ಚಿಸಲಿದ್ದಾರೆ ಎಂದು ತಿಳಿದು ಬಂದಿದೆ.

ಡಿ.31ರಂದು ಬೆಳಗ್ಗೆ 8.30 ರಿಂದ 9.30ರವರೆಗೆ ಪಕ್ಷದ ಮುಖಂಡರ ಜೊತೆ ಉಪಹಾರ ಕೂಟ ನಡೆಸಲಿದ್ದಾರೆ. ಈ ವೇಳೆಯೂ ರಾಜಕೀಯ ವಿಚಾರಗಳ ಕುರಿತು ನಾಯಕರ ಜೊತೆ ಸಮಾಲೋಚನೆ ನಡೆಸಿ ಸದ್ಯದ ಪರಿಸ್ಥಿತಿಯ ಅವಲೋಕನ ಮಾಡಲಿದ್ದಾರೆ. ನಂತರ ದೇವನಹಳ್ಳಿ ತಾಲೂಕಿನ ಅವತಿ ಗ್ರಾಮಕ್ಕೆ ತೆರಳಲಿದ್ದು, 11ರಿಂದ 12.30 ರವರೆಗೆ ನಡೆಯಲಿರುವ ಭೂಮಿ ಪೂಜೆ ಕಾರ್ಯದಲ್ಲಿ ಭಾಗಿಯಾಗಲಿದ್ದಾರೆ.

ಮಧ್ಯಾಹ್ನ 1ರಿಂದ 2.30ರವರೆಗೆ ಮಲ್ಲೇಶ್ವರಂನ ಸೌಹಾರ್ದ ಸಹಕಾರಿ ಫೆಡರೇಷನ್‌ಗೆ ಭೇಟಿ ನೀಡಲಿದ್ದಾರೆ. ಮಧ್ಯಾಹ್ನ 3 ಗಂಟೆಯಿಂದ 4.30ರವರೆಗೆ ಬೂತ್ ಅಧ್ಯಕ್ಷರು ಮತ್ತು ಬೂತ್ ಮಟ್ಟದ ಏಜೆಂಟ್‌ಗಳ ಸಭೆಯನ್ನು ಅರಮನೆ ಮೈದಾನದಲ್ಲಿ ನಡೆಸಲಿದ್ದಾರೆ. ಸಂಜೆ 5.05 ಗಂಟೆಗೆ ಯಲಹಂಕ ವಾಯುನೆಲೆಯಿಂದ ದೆಹಲಿಗೆ ತೆರಳುವರು.

ಗಡಿ ಸಮಸ್ಯೆ: ಉಭಯ ರಾಜ್ಯಗಳ ಬಿಜೆಪಿ ಸರ್ಕಾರದ ರಾಜಕೀಯ ಕಣ್ಣಾಮುಚ್ಚಾಲೆ

ಬೆಂಗಳೂರು: ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳ ನಡುವೆ ಉದ್ಭವಿಸಿರುವ ಗಡಿ ಸಮಸ್ಯೆ ಉಲ್ಬಣಕ್ಕೆ ಉಭಯ ರಾಜ್ಯಗಳ ಬಿಜೆಪಿ ಸರ್ಕಾರವೇ ಕಾರಣ ಎಂದು ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವುದೇ ಗಡಿ ಸಮಸ್ಯೆ ಇಲ್ಲ, ಎರಡೂ ರಾಜ್ಯಗಳಲ್ಲಿ ಸಮಸ್ಯೆ ಸೃಷ್ಟಿಸಿದ್ದೇ ಅವರ ಟ್ರಿಪಲ್ ಎಂಜಿನ್ ಸರ್ಕಾರ. ಮಹಾರಾಷ್ಟ್ರ, ಕರ್ನಾಟಕ ಮತ್ತು ಕೇಂದ್ರದಲ್ಲಿ ಬಿಜೆಪಿ ಸರ್ಕಾರಗಳಿವೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಅವರನ್ನು ಮಾತನಾಡುವಂತೆ ಮಾಡಿದ್ದು, ಕೆಲವು ಸೂತ್ರಗಳೊಂದಿಗೆ ಹೊರಬರುವಂತೆ ಮಾಡಿದರು ಎಂದು ಆರೋಪಿಸಿದ್ದಾರೆ.

ಇದೇ ವೇಳೆ ಮಹಾರಾಷ್ಟ್ರಕ್ಕೆ ಒಂದೇ ಒಂದು ಗ್ರಾಮ ಅಥವಾ ಒಂದು ಇಂಚು ಭೂಮಿ ಕೂಡ ನೀಡುವುದಿಲ್ಲ. ಮಹಾರಾಷ್ಟ್ರ ಕೂಡ ನಮ್ಮೊಂದಿಗೆ ಇಂತಹ ಪ್ರಯತ್ನ ಮಾಡುವುದಿಲ್ಲ. ಆದರೆ ಅವರು ರಾಜಕೀಯ ಕಣ್ಣಾಮುಚ್ಚಾಲೆ ಆಡುತ್ತಿದ್ದು, ವಿವಾದವನ್ನು ಹಸಿರಾಗಿರಿಸಲು ಯತ್ನಿಸುತ್ತಿ ದ್ದಾರೆ. ಬಿಜೆಪಿ ಸಂಸದರು ಮತ್ತು ಶಾಸಕರಿಗೆ ತಮ್ಮ ಹೈಕಮಾಂಡ್ ಮುಂದೆ ಮಾತನಾಡುವ ಧೈರ್ಯವಿಲ್ಲ. ವಿಷಯವನ್ನು ಬಗೆಹರಿಸಲು ಅವರು ಇನ್ನೂ ನಿಯೋಗದಲ್ಲಿ ಹೋಗಬೇಕಾಗಿದೆ. ಇಡೀ ಮಹಾರಾಷ್ಟ್ರ ಸರ್ಕಾರವು ಕರ್ನಾಟಕ ಮತ್ತು ಅದರ ಜನರ ಭಾವನೆಗಳನ್ನು ನೋಯಿಸುತ್ತಿದೆ. ಗಡಿ ಸೀಲ್ ಮಾಡಲಾಗಿದೆ. ಇದಾಗಬಾರದು ಎಂದು ಡಿಕೆ ಶಿವಕುಮಾರ್ ಹೇಳಿದರು.

ಸೋಲಾರ್ ಹಗರಣ, ಲೈಂಗಿಕ ಶೋಷಣೆ ಆರೋಪ


ಕೇರಳ ಮಾಜಿ ಸಿಎಂ ಉಮ್ಮನ್ ಚಾಂಡಿಗೆ ಸಿಬಿಐ ಕ್ಲೀನ್ ಚಿಟ್

ತಿರುವನಂತಪುರ: ಸೋಲಾರ್ ಪ್ಯಾನಲ್ ಹಗರಣದ ಪ್ರಮುಖ ಆರೋಪಿ ಮಹಿಳೆ ಮಾಡಿದ್ದ ಲೈಂಗಿಕ ಶೋಷಣೆ ಆರೋಪಕ್ಕೆ ಸಂಬಂಧಿಸಿದಂತೆ ಕೇಂದ್ರೀಯ ತನಿಖಾ ದಳ (ಸಿಬಿಐ) ಕೇರಳದ ಮಾಜಿ ಮುಖ್ಯಮಂತ್ರಿ ಉಮ್ಮನ್ ಚಾಂಡಿ ಅವರಿಗೆ ಕ್ಲೀನ್ ಚಿಟ್ ನೀಡಿದೆ.

ತಿರುವನಂತಪುರದ ಮುಖ್ಯ ಜುಡಿಷಿಯಲ್ ಮ್ಯಾಜಿಸ್ಟ್ರೇಟ್ ಕೋರ್ಟ್‌ಗೆ ಸಿಬಿಐ ಮಂಗಳವಾರ ತನಿಖಾ ವರದಿ ಸಲ್ಲಿಸಿದೆ ಎಂದು ಮೂಲಗಳು ತಿಳಿಸಿವೆ. ಯುಡಿಎಫ್ ಸರ್ಕಾರದ ಅವಧಿಯ ಬಹುಕೋಟಿ ಸೋಲಾರ್ ಪ್ಯಾನಲ್ ಹಗರಣದ ಆರೋಪಿ ಮಹಿಳೆ ನೀಡಿದ್ದ ದೂರಿನ ಆಧಾರದ ಮೇಲೆ ಚಾಂಡಿ ಸೇರಿದಂತೆ ಆರು ಜನರ ವಿರುದ್ಧ ಕೇರಳ ಪೊಲೀಸರ ಅಪರಾಧ ವಿಭಾಗವು ಪ್ರಕರಣ ದಾಖಲಿಸಿಕೊಂಡಿತ್ತು. 2012ರಲ್ಲಿ ಈ ಆರೋಪಿಗಳು ನನ್ನ ಮೇಲೆ ಲೈಂಗಿಕ ಶೋಷಣೆ ನಡೆಸಿದ್ದಾರೆ ಎಂದು ಆರೋಪಿತ ಮಹಿಳೆ ಆರೋಪಿಸಿದ್ದರು. ಆದರೆ ದೂರುದಾರರು ಆರೋಪಿಸಿದಂತೆ ಅಪರಾಧ ನಡೆದ ದಿನದಂದು ಅಂದಿನ ಮುಖ್ಯಮಂತ್ರಿ ಕ್ಲಿಫ್ ಹೌಸ್‌ನಲ್ಲಿ (ಮುಖ್ಯಮಂತ್ರಿಯವರ ಅಧಿಕೃತ ನಿವಾಸ) ಇರಲಿಲ್ಲ. ದೂರುದಾರರ ಹೇಳಿಕೆಗಳಲ್ಲಿ ವ್ಯತ್ಯಾಸಗಳಿವೆ ಎಂದು ವರದಿಯಲ್ಲಿ ಹೇಳಲಾಗಿದೆ.

2021ರಲ್ಲಿ ಸಿಪಿಐ(ಎಂ) ನೇತೃತ್ವದ ಕೇರಳ ಸರ್ಕಾರ ಉಮ್ಮನ್ ಚಾಂಡಿ, ಮಾಜಿ ಕೇಂದ್ರ ಸಚಿವ ಕೆ.ಸಿ. ವೇಣುಗೋಪಾಲ್ ಮತ್ತು ಇತರ ರಾಜಕಾರಣಿಗಳ ವಿರುದ್ಧದ ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸಿತ್ತು. ಈ ಕ್ರಮವನ್ನು ಖಂಡಿಸಿದ್ದ ಪ್ರತಿಪಕ್ಷ ಕಾಂಗ್ರೆಸ್, ರಾಜಕೀಯ ಪ್ರೇರಿತ ಎಂದು ಕರೆದಿತ್ತು. ಎಲ್‌ಡಿಎಫ್ ಸರ್ಕಾರಕ್ಕೆ ಕಾಂಗ್ರೆಸ್ ನಾಯಕರ ವಿರುದ್ಧದ ಯಾವುದೇ ಆರೋಪ ಸಾಬೀತುಮಾಡಲು ಸಾಧ್ಯವಾಗಿಲ್ಲ. ಚುನಾವಣೆ ಹೊಸ್ತಿಲಲ್ಲಿ ರಾಜಕೀಯ ಉದ್ದೇಶದಿಂದ ತನಿಖೆಯನ್ನು ಸಿಬಿಐಗೆ ವಹಿಸಿದೆ ಎಂದು ಆರೋಪಿಸಿತ್ತು.

ಹಲವರಿಗೆ ಕೋಟ್ಯಂತರ ರೂ. ಪಂಗನಾಮ ಹಾಕಿದ್ದ ಆರೋಪಿ ರಾಜಸ್ತಾನದಲ್ಲಿ ಬಂಧನ



ಮೈಸೂರು, ಡಿ.28(ಎಂಕೆ)– ಒಡವೆಗಳ ಗಿರಿವಿ, ಲಕ್ಕಿಡಿಪ್ ಇತ್ಯಾದಿ ವ್ಯವಹಾರದಿಂದ ಕೋಟ್ಯಂತರ ರೂ. ವಂಚಿಸಿ ಪರಾರಿಯಾಗಿದ್ದ ಆರೋಪಿಯನ್ನು ಕುವೆಂಪುನಗರ ಠಾಣೆ ಪೊಲೀಸರು ರಾಜಸ್ತಾನದಲ್ಲಿ ಬಂಧಿಸಿದ್ದಾರೆ.

ಮೈಸೂರಿನ ವಿವೇಕಾನಂದನಗರ ವೃತ್ತದ ಬಳಿಯ ಮಾರುತಿ ಜ್ಯುವೆಲರ್ಸ್ ಮಾಲೀಕ ನೇಮಿಚಂದ್ ರಾಮ್ ಸಿರ್ವಿ ಬಂಧಿತ ಆರೋಪಿ. ಈತನ ಬಳಿ ಬಹಳಷ್ಟು ಜನರು ಚಿನ್ನದ ಒಡವೆಗಳನ್ನು ಗಿರವಿ ಇಟ್ಟಿದ್ದರು. ಅಲ್ಲದೆ ತಿಂಗಳ ಲಕ್ಕಿ ಡಿಪ್ ಲಾಟರಿ ಚೀಟಿಯನ್ನು ಹಾಕಿದ್ದರು. ಇದೇ ರೀತಿಯ ಹಲವು ವ್ಯವಹಾರದಿಂದ ಕೆಲವರಿಗೆ ವಂಚಿಸಿದ್ದ ಈತ ಕಳೆದ ಒಂದೂವರೆ ತಿಂಗಳ ಹಿಂದೆ ಜ್ಯುವೆಲರಿ ಶಾಪ್‌ಗೆ ಬೀಗ ಹಾಕಿಕೊಂಡು ಪರಾರಿಯಾಗಿದ್ದ.

ನ.9 ಮತ್ತು ನ.16 ರಂದು ಈತನಿಂದ ವಂಚನೆಗೆ ಒಳಗಾದವರು ನೀಡಿದ ದೂರು ದಾಖಲಿಸಿಕೊಂಡ ಕುವೆಂಪುನಗರ ಠಾಣೆ ಪೊಲೀಸರು, ಮೈಸೂರಿನಿಂದ ಬೆಂಗಳೂರಿಗೆ ಹೋಗಿ ಅಲ್ಲಿಂದ ರಾಜಸ್ತಾನಕ್ಕೆ ಹೋಗಿ ತಲೆ ಮರೆಸಿಕೊಂಡಿದ್ದ ಆರೋಪಿಯನ್ನು ಜೈಪುರದಲ್ಲಿ ಬಂಧಿಸಿ ಮೈಸೂರಿಗೆ ಕರೆತಂದು ಹೆಚ್ಚಿನ ವಿಚಾರಣೆಗೆ ಒಳಪಡಿಸಿದ್ದಾರೆ. ಕುವೆಂಪುನಗರ ಪೊಲೀಸ್ ಠಾಣೆ ಇನ್ಸ್‌ಸ್ಪೆಕ್ಟರ್ ಅರುಣ್ ಮಾರ್ಗದರ್ಶನದಲ್ಲಿ ನಡೆದ ಪತ್ತೆ ಕಾರ್ಯಾಚರಣೆಯಲ್ಲಿ ಪಿಎಸ್‌ಐ ರಾಧ, ಎಎಸ್‌ಐ ಮುರುಳಿಗೌಡ, ಕಾನ್‌ಸ್ಟೇಬಲ್‌ಗಳಾದ ಮಂಜು, ಪುಟ್ಟ ಭಾಗವಹಿಸಿದ್ದರು.

ಮೈಸೂರು ರಿಂಗ್ ರಸ್ತೆಯ ರೈಲ್ವೆ ಕೆಳ ಸೇತುವೆ ವಿಸ್ತರಣೆ ಕಾಮಗಾರಿ ತ್ವರಿತ



ಮೈಸೂರು, ಡಿ.28(ಎಸ್‌ಪಿಎನ್)–ಮೈಸೂರಿನ ರಿಂಗ್ ರಸ್ತೆಯ ವಿವಿಧೆಡೆ ನಡೆಯುತ್ತಿರುವ ರೈಲ್ವೆ ಕೆಳ ಸೇತುವೆ(ರೈಲ್ವೆ ಅಂಡರ್ ಬ್ರಿಡ್ಜ್)ಗಳ ವಿಸ್ತರಣಾ ಕಾಮಗಾರಿ ತ್ವರಿತಗತಿಯಲ್ಲಿ ಸಾಗಿದೆ. ಸುಮಾರು 76 ಕೋಟಿ ರೂ. ವೆಚ್ಚದ 4 ರೈಲ್ವೆ ಕೆಳ ಸೇತುವೆಗಳ ವಿಸ್ತರಣಾ ಕಾಮಗಾರಿ ಭರದಿಂದ ಸಾಗಿದ್ದು, ಈ ಸ್ಥಳಗಳಲ್ಲಿ ಉಂಟಾಗುತ್ತಿದ್ದ ಟ್ರಾಫಿಕ್ ಜಾಮ್ ಸಮಸ್ಯೆ ಸದ್ಯದಲ್ಲಿಯೇ ಬಗೆಹರಿಯಲಿದೆ.

ಜೆ.ಪಿ.ನಗರದ ಸಮೀಪದ ರೈಲ್ವೆ ಟ್ರಾಕ್ ಬಳಿ ಒಂದು ಬದಿಯಲ್ಲಿ ಮಾತ್ರ ವಾಹನಗಳ ಸಂಚಾರವಿತ್ತು. ಇದೀಗ ಸರ್ವಿಸ್ ರೋಡ್‌ಗೆ ಹೊಂದಿಕೊಂಡಂತಿದ್ದ ರೈಲ್ವೆ ಕೆಳ ಸೇತುವೆಯನ್ನು 12 ಮೀಟರ್ ಅಗಲ, 6 ಮೀಟರ್ ಉದ್ದ ಹಾಗೂ ಅದರ ಅಕ್ಕ–ಪಕ್ಕ 6 ಮೀಟರ್ ಅಗಲ ಮತ್ತು 6 ಮೀಟರ್ ಉದ್ದ ಹೆಚ್ಚಿಸುವ ಕಾಮಗಾರಿ ಆರಂಭವಾಗಿದೆ.

ಹಾಗೆಯೇ ಆರ್‌ಬಿಐ ಸಮೀಪದ 2 ರೈಲ್ವೆ ಕೆಳ ಸೇತುವೆ, ಮೇಟಗಳ್ಳಿ ಸಮೀಪದ ರೈಲ್ವೆ ಕೆಳ ಸೇತುವೆ ಸೇರಿ ಒಟ್ಟು ನಾಲ್ಕು ರೈಲ್ವೆ ಕೆಳ ಸೇತುವೆಗಳ ವಿಸ್ತರಣೆ ಕಾಮಗಾರಿ ಸಾಗಿದ್ದು, 8–9 ತಿಂಗಳಲ್ಲಿ ಕಾಮಗಾರಿ ಮುಕ್ತಾಯಗೊಳಿಸಲಾಗುವುದು ಎಂದು ಹೆದ್ದಾರಿ ಪ್ರಾಧಿಕಾರದ ಎಇಇ ರಾಜೇಂದ್ರ ಕುಮಾರ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಹಲವು ವರ್ಷಗಳಿಂದ ಈ ನಾಲ್ಕು ಸ್ಥಳಗಳಲ್ಲಿ ಸೇತುವೆ ಕಿರಿದಾಗಿದ್ದರಿಂದ ಬೃಹತ್ ವಾಹನಗಳ ಸಂಚಾರಕ್ಕೆ ಬಾರೀ ತೊಂದರೆ ಉಂಟಾಗುತ್ತಿತ್ತು. ಸದ್ಯದಲ್ಲೇ ಸಮಸ್ಯೆ ಬಗೆಹರಿಯಲಿದೆ. ನಾಲ್ಕು ಕಡೆಗಳಲ್ಲಿನ ರೈಲ್ವೆ ಕೆಳ ಸೇತುವೆ ವಿಸ್ತರಣಾ ಕಾಮಗಾರಿ ಅನುದಾನ ಬಿಡುಗಡೆಗೊಳಿಸಲಾಗಿದೆ ಎಂದರು. ಮೈಸೂರು ಜೆಪಿ ನಗರದ ಬಳಿ ರಿಂಗ್ ರೋಡ್(ಪರಸಯ್ಯನಹುಂಡಿ–ಎಪಿಎಂಸಿ ನಡುವೆ)ನಲ್ಲಿ ರೈಲ್ವೆ ಕೆಳ ಸೇತುವೆ ವಿಸ್ತರಣಾ ಕಾಮಗಾರಿ ತ್ವರಿತವಾಗಿ ಸಾಗಿದೆ. ಈ ಕಾಮಗಾರಿ ಬೇಗ ಮುಗಿಸುವಂತೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ ಎಂದು ಕಾರ್ಮಿಕರೊಬ್ಬರು ಮಾಹಿತಿ ನೀಡಿದರು.

ಡಿ.31ರ ರಾತ್ರಿ ಟೈಟಾದವರಿಗೆ ಪೊಲೀಸರಿಂದ ಆಂಬುಲೆನ್ಸ್ ವ್ಯವಸ್ಥೆ!

ಬೆಂಗಳೂರು: ಹೊಸ ವರ್ಷಾಚರಣೆ ವೇಳೆ ಎದುರಾಗುವ ಸಮಸ್ಯೆಗಳನ್ನು ನಿಭಾಯಿಸಲು ಬೆಂಗಳೂರು ಪೊಲೀಸರು ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ. ಡಿಸೆಂಬರ್ 31ರ ರಾತ್ರಿ ಹೊಸ ವರ್ಷಾಚರಣೆ ಸಂಭ್ರಮದಲ್ಲಿ ಮುಳುಗಿ ತೇಲಾಡುವ ಮಂದಿಯ ಸೇಫ್ಟಿಗೆ ಬೆಂಗಳೂರು ಪೊಲೀಸ್ ಇಲಾಖೆ ಹೊಸ ಪ್ರಯೋಗಕ್ಕೆ ಮುಂದಾಗಿದೆ.



ಯುವಕ, ಯುವತಿ ಸೇರಿದಂತೆ ಯಾರೇ ಕುಡಿದು ಟೈಟಾದರೂ ಅವರಿಗೆ ಆಂಬುಲೆನ್ಸ್ ವ್ಯವಸ್ಥೆ ಮಾಡಲಾಗುತ್ತಿದೆ. ಡಿ. 31ರ ರಾತ್ರಿ ಮಾತ್ರ ಈ ಸೇವೆ ಲಭ್ಯವಿರಲಿದೆ. ಆಗ್ನೇಯ ವಿಭಾಗ ಡಿಸಿಪಿ ಸಿಕೆ ಬಾಬಾ ಅವರು ಈ ಮೂಲಕ ಮತ್ತೊಂದು ವಿನೂತನ ಪ್ರಯತ್ನಕ್ಕೆ ಮುಂದಾಗಿದ್ದಾರೆ. ಕೋರಮಂಗಲ, ಮಡಿವಾಳ, ಎಲೆಕ್ಟ್ರಾನಿಕ್ ಸಿಟಿ, ಹೆಚ್‌ಎಸ್‌ಆರ್ ಲೇಔಟ್‌ನಲ್ಲಿ ಸಂಪೂರ್ಣ ಭದ್ರತೆಗೆ ಸಿದ್ಧತೆ ಮಾಡಿಕೊಳ್ಳಲಾಗಿದೆ. ಆಗ್ನೇಯ ವಿಭಾಗದಲ್ಲಿ 108 ಪಬ್, ರೆಸ್ಟೋರೆಂಟ್‌ಗಳಿವೆ, ಪ್ರತಿಯೊಂದು ಪಬ್, ರೆಸ್ಟೋರೆಂಟ್ ಮುಂದೆಯೂ ಪೊಲೀಸ್ ಸಿಬ್ಬಂದಿ ನಿಯೋಜನೆ ಮಾಡಲಾಗುತ್ತಿದೆ. ಎಣ್ಣೆ ಹೊಡೆದು ಫುಲ್ ಟೈಟಾಗಿ ಪ್ರಜ್ಞೆ ತಪ್ಪಿ ಬೀಳುವವರಿಗೆ ಆಂಬುಲೆನ್ಸ್ ವ್ಯವಸ್ಥೆ ಮಾಡಲಾಗುತ್ತಿದೆ. ಅಥವಾ ಆಕಸ್ಮಿಕವಾಗಿ ಸೆಲೆಬ್ರೇಷನ್ ವೇಳೆ ಯಾರಿಗಾದರೂ ಆರೋಗ್ಯ ತಪ್ಪಿದರೆ ಪೊಲೀಸರಿಂದಲೇ ಆಂಬುಲೆನ್ಸ್ ವ್ಯವಸ್ಥೆ ಮಾಡಲಾಗುತ್ತೆ. ಕೂಡಲೇ ಆಂಬುಲೆನ್ಸ್‌ನಲ್ಲಿ ಬಿದ್ದ ಕುಡುಕರನ್ನು ಸಾಗಿಸಿ ಆಸ್ಪತ್ರೆಗೆ ದಾಖಲಿಸಲಾಗುತ್ತದೆ.

ರಾಂಚಿ ಹೈವೇಯಲ್ಲಿ ಜಾರ್ಖಂಡ್‌ನ ನಟಿ ರಿಯಾ ಕುಮಾರಿ ಗುಂಡಿಟ್ಟು ಹತ್ಯೆ

ಕೋಲ್ಕತ್ತಾ: ದರೋಡೆಕೋರರ ತಂಡ ರಾಂಚಿ ಹೈವೇಯಲ್ಲಿ ಜಾರ್ಖಂಡ್‌ನ ನಟಿ ರಿಯಾ ಕುಮಾರಿ(30) ಅವರನ್ನು ಗುಂಡಿಟ್ಟು ಹತ್ಯೆ ಮಾಡಿದೆ. ಬುಧವಾರ



ಬೆಳಿಗ್ಗೆ 6 ಗಂಟೆಯ ಸುಮಾರು ಹೌರಾ ಜಿಲ್ಲೆಯ ಮಹೀಶ್‌ರೇಖಾ ಸೇತುವೆ ಬಳಿ ಈ ಘಟನೆ ನಡೆದಿದೆ ಎಂದು ಬಂಗಾಳಿ ಮಾಧ್ಯಮಗಳು ವರದಿ ಮಾಡಿವೆ.

ರಿಯಾ ಕುಮಾರಿ ಅವರು ತಮ್ಮ ಮೂರು ವರ್ಷದ ಮಗಳು ಹಾಗೂ ಗಂಡ ಪ್ರಕಾಶ್ ಕುಮಾರ್ ಅವರೊಡನೆ ರಾಂಚಿಯಿಂದ ಕೋಲ್ಕತ್ತಕ್ಕೆ ಕಾರಿನಲ್ಲಿ ತೆರಳುತ್ತಿದ್ದರು. ಮಹೀಶ್‌ರೇಖಾ ಸೇತುವೆ ಬಳಿ ಮೂತ್ರ ವಿಸರ್ಜನೆಗೆಂದು ಕಾರು ನಿಲ್ಲಿಸಿದಾಗ ಮೂವರು ದುಷ್ಕರ್ಮಿಗಳು ನಮ್ಮ ಬಳಿ ಬಂದು ದರೋಡೆ ಮಾಡುವ ಉದ್ದೇಶದಿಂದ ಹಲ್ಲೆಗೆ ಯತ್ನಿಸಿದರು. ಈ ವೇಳೆ ವಿರೋಧಿಸಲು ಹೋದ ರಿಯಾ ಕುಮಾರಿಗೆ ದುಷ್ಕರ್ಮಿಗಳು ಅತ್ಯಂತ ಸನಿಹದಿಂದ ಗುಂಡು ಹಾರಿಸಿದರು. ಇದರಿಂದ ತೀವ್ರ ರಕ್ತಸ್ರಾವವಾಗಿ ರಿಯಾ ಆಸ್ಪತ್ರೆಗೆ ತೆಗದುಕೊಂಡು ಹೋಗುವ ಮಾರ್ಗದಲ್ಲಿ ಮೃತಪಟ್ಟಳು ಎಂದು ರಿಯಾರ ಗಂಡ ಪ್ರಕಾಶ್ ಕುಮಾರ್ ಪೊಲೀಸರಿಗೆ ಹೇಳಿಕೆ ನೀಡಿದ್ದಾರೆ.

ಆದರೆ, ಈ ಬಗ್ಗೆ ಪ್ರಕಾಶ್ ಕುಮಾರ್ ಅವರ ಮೇಲೂ ಹೌರಾ ಪೊಲೀಸರಿಗೆ ಅನುಮಾನ ಮೂಡಿದ್ದು, ಪ್ರಕಾಶ್ ಕುಮಾರ್ ಹೇಳಿಕೆಗಳು ಅನುಮಾನಾಸ್ಪದವಾಗಿವೆ ಎಂದಿದ್ದಾರೆ. ಈ ಬಗ್ಗೆ ಸಮಗ್ರ ತನಿಖೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ರಿಯಾ ಕುಮಾರಿ ಜಾರ್ಖಂಡ್‌ನ ಕೆಲ ಧಾರಾವಾಹಿಗಳಲ್ಲಿ ನಟಿಸಿದ್ದರು.

'ಲವ್‌ಸ್ಟೋರಿ 1998' ಚಿತ್ರ ನಾಳೆ ತೆರೆಗೆ

ಮೈಸೂರು,ಡಿ.28(ಆರ್‌ಕೆಬಿ)–ಮೈಸೂರಿನ ಯಶ್ವಿನ್ ಸಿನಿ ಪ್ರೊಡಕ್ಷನ್ ಹೌಸ್ ಬ್ಯಾನರ್ ಅಡಿಯಲ್ಲಿ ನಿರ್ಮಿಸಲಾಗಿರುವ 'ಲವ್ ಸ್ಟೋರಿ 1998' ಚಿತ್ರವು ಡಿ.30ರಂದು ರಾಜ್ಯಾದ್ಯಂತ ತೆರೆಕಾಣಲಿದೆ ಎಂದು ಚಿತ್ರದ ನಿರ್ದೇಶಕ ನಾಗರಾಜ್ ತಗಡೂರು ತಿಳಿಸಿದರು.

ಮೈಸೂರು ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಬಿಇಡಿ ಕಾಲೇಜೊಂದರಲ್ಲಿ ನಡೆಯುವ ನೈಜ ಘಟನೆಯನ್ನು ಆಧರಿಸಿದ ಪ್ರೇಮ ಕತೆ ಹೊಂದಿರುವ ಚಿತ್ರವನ್ನು ಮನೆ ಮಂದಿಯೆಲ್ಲಾ ಒಟ್ಟಿಗೆ ಕುಳಿತು ಯಾವುದೇ ಮುಜುಗರವಿಲ್ಲದೇ ನೋಡಬಹುದಾಗಿದೆ. ಚಿತ್ರದಲ್ಲಿ ಮಿಥುನ್ ನಾಯಕ, ಕೃತಿಕ ನಾಯಕಿಯಾಗಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಚಿತ್ರದ ನಾಯಕ ನಟ ಮಿಥುನ್, ನಿರ್ಮಾಪಕರಾದ ಆರ್.ಜಗದೀಶ್, ಕುಮಾರಸ್ವಾಮಿ, ಹರೀಶ್‌ಗೌಡ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಏರ್ ಪೋರ್ಟ್ ರನ್ ವೇ ವಿಸ್ತರಣೆಗೆ ಜನವರಿ ಅಂತ್ಯಕ್ಕೆ ಭೂಸ್ವಾಧೀನ; ಮಾರ್ಚ್‌ನಲ್ಲಿ ಕಾಮಗಾರಿ ಆರಂಭ

● ಸಂಸದ ಪ್ರತಾಪ್ ಸಿಂಹ ಮಾಹಿತಿ ● ಭೂ ಸ್ವಾಧೀನ ಅಧಿಕಾರಿಗಳೊಂದಿಗೆ ಸಭೆ





ಮೈಸೂರು,ಡಿ.28(ಜಿಎ)–ಮೈಸೂರು ಏರ್ ಪೋರ್ಟ್ ರನ್ ವೇ ವಿಸ್ತರಣೆಗೆ ಸಂಬಂಧಪಟ್ಟಂತೆ ಭೂ ಸ್ವಾಧೀನ ಪ್ರಕ್ರಿಯೆ ಜಾರಿಯಲ್ಲಿದ್ದು, ಜನವರಿ ಅಂತ್ಯದೊಳಗೆ ಪೂರ್ಣಗೊಳಿಸಿ, ಮಾರ್ಚ್‌ನಲ್ಲಿ ರನ್ ವೇ ಕಾಮಗಾರಿಗೆ ಚಾಲನೆ ದೊರೆಯುವ ಸಾಧ್ಯತೆ ಇದೆ.

ಬಹು ನಿರೀಕ್ಷಿತ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆಗೆ ಸಂಬಂಧಿಸಿದಂತೆ ಮೈಸೂರು–ಕೊಡಗು ಸಂಸದ ಪ್ರತಾಪ್ ಸಿಂಹ ಭೂ ಸ್ವಾಧೀನ ಕುರಿತು ವಿಶೇಷ ಭೂಸ್ವಾಧೀನ ಅಧಿಕಾರಿ ಪ್ರಿಯದರ್ಶಿನಿ ಹಾಗೂ ಇತರೆ ಅಧಿಕಾರಿಗಳೊಂದಿಗೆ ಮಂಗಳವಾರ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ರನ್ ವೇ ವಿಸ್ತರಣೆಗಾಗಿ ಕರ್ನಾಟಕ ಸರ್ಕಾರವು 319 ಕೋಟಿ ರೂ. ಬಿಡುಗಡೆ ಮಾಡಿದೆ. 1740 ಮೀ ಇರುವ ರನ್ ವೇಯನ್ನು 2400 ಮೀ.ಗೆ ವಿಸ್ತರಣೆ ಮಾಡಲಾಗುತ್ತದೆ. ಬಹಳ ವರ್ಷಗಳಿಂದ ರನ್ ವೇ ವಿಸ್ತರಣೆ ಬೇಡಿಕೆ ಇತ್ತು. ಇದಕ್ಕಾಗಿ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮದಿಂದ (ಕೆಎಸ್‌ಐಐಡಿಸಿ) ನೋಡಲ್ ಅಧಿಕಾರಿ ನೇಮಿಸಲಾಗಿದ್ದು, ಮೊದಲ ಹಂತದಲ್ಲಿ ರನ್‌ವೇ ವಿಸ್ತರಣೆಗೆ 240 ಎಕರೆ ಜಮೀನು ಅಗತ್ಯವಿದೆ ಎಂದು ಬೇಡಿಕೆ ಸಲ್ಲಿಸಲಾಗಿತ್ತು. ಇದರಲ್ಲಿ 22.9 ಎಕರೆ ಜಮೀನು ಈಗಾಗಲೇ ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರದ ಸ್ವಾಧೀನದಲ್ಲಿದೆ.11.09 ಎಕರೆ ಜಮೀನು ಎಣ್ಣೆ ಹೊಳೆ ಕಾಲುವೆಯಾಗಿದ್ದು, ಅದು ಸರ್ಕಾರದ ಜಮೀನು. ಭೂ ಮಾಲೀಕರಿಂದ ಪಡೆಯಬೇಕಿರುವ 206 ಎಕರೆ ಪೈಕಿ 160 ಎಕರೆಗೆ ಸರ್ಕಾರ ಇದೀಗ ಅಂತಿಮ ಅಧಿಸೂಚನೆ ಹೊರಡಿಸಿದೆ. ಉಳಿದಂತೆ 46.22 ಎಕರೆ ಅಧಿಸೂಚನೆ ಬಾಕಿ ಇದೆ.

> ರನ್ ವೇ ವಿಸ್ತರಣೆಗಾಗಿ ಭೂಸ್ವಾಧೀನ ಪಡಿಸಿಕೊಳ್ಳಲು ಈಗಾಗಲೇ 100 ಕೋಟಿ ರೂ. ಬಿಡುಗಡೆಯಾಗಿದ್ದು, 240 ಎಕರೆಯಲ್ಲಿ ತಕರಾರಿರುವ ಜಮೀನಿಗೆ ನೀಡಬೇಕಿರುವ ಹಣವನ್ನು ಕೋರ್ಟ್‌ನಲ್ಲಿ ಜಮೆ ಮಾಡಿ, ಭೂಸ್ವಾಧೀನ ಪಡೆಸಿಕೊಳ್ಳಿ ಎಂದು ಅಧಿಕಾರಿಗಳಿಗೆ ಸಭೆಯಲ್ಲಿ ಸೂಚಿಸಿದ್ದೇನೆ. ಜ.20ರ ಒಳಗೆ ಇದರ ಫಲಿತಾಂಶ ನೀಡಬೇಕು ಹಾಗೂ ಮಾರ್ಚ್ ತಿಂಗಳಿನಲ್ಲಿ ಭೂಮಿ ಪೂಜೆ ಮಾಡುವ ಉದ್ದೇಶವನ್ನು ಹೊಂದಲಾಗಿದೆ. **–ಪ್ರತಾಪ್ ಸಿಂಹ, ಸಂಸದ, ಮೈಸೂರು–ಕೊಡಗು**

ಮೈಸೂರು ವಿಮಾನ ನಿಲ್ದಾಣದ ರನ್‌ವೇ ವಿಸ್ತರಣೆಗೆ ಸಂಬಂಧಿಸಿದಂತೆ ಸಂಸದ ಪ್ರತಾಪ್ ಸಿಂಹ, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರನ್ನು ಈ ಹಿಂದೆ ಭೇಟಿಯಾಗಿ ಮನವಿ ಸಲ್ಲಿಸಿದ್ದರು. 2022–23ನೇ ಸಾಲಿನ ಬಜೆಟ್‌ನಲ್ಲಿ ಕೇಂದ್ರ ಸರ್ಕಾರದ ನೆರವಿನೊಂದಿಗೆ ಏರ್ ಪೋರ್ಟ್ ಅಭಿವೃದ್ಧಿಗೆ ಕ್ರಮಕೈಗೊಳ್ಳುವ ಭರವಸೆಯನ್ನು ಸಿಎಂ ನೀಡಿದ್ದರು. ಮೈಸೂರಿನ ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆಗೆ ಈಗಾಗಲೇ ಕೇಂದ್ರ ಸರ್ಕಾರ 700 ಕೋಟಿ ಮೀಸಲಿಟ್ಟಿದೆ. ಅಂಡರ್ ಪಾಸ್ ನಿರ್ಮಾಣಕ್ಕೆ ಹೆಚ್ಚುವರಿಯಾಗಿ 400 ಕೋಟಿ ಬೇಕಾಗುತ್ತದೆ. ಹೀಗಾಗಿ ಅಂಡರ್ ಪಾಸ್ ನಿರ್ಮಾಣದ ಬದಲು ರಾಷ್ಟ್ರೀಯ ಹೆದ್ದಾರಿಯನ್ನೇ ಡಿವಿಯೇಷನ್ ಇಲ್ಲವೇ ಅಂಡರ್ ಪಾಸ್ ಮಾಡುವ ಚಿಂತನೆ ಇದೆ.

ಈಗ ರನ್‌ವೇ ಕೇವಲ 1740 ಮೀಟರ್ ಇದ್ದು, ಇದರಿಂದ ಸಣ್ಣ ವಿಮಾನಗಳು ಮಾತ್ರ ಹಾರಾಟ ನಡೆಸಬಹುದಾಗಿದೆ. 240 ಎಕರೆ ಭೂ ಸ್ವಾಧೀನಗೊಂಡು ಮೈಸೂರು ವಿಮಾನ ನಿಲ್ದಾಣದಲ್ಲಿ ರನ್ ವೇ ವಿಸ್ತರಣೆ ಪೂರ್ಣವಾದ ಬಳಿಕ ಬಾರೀ ವಿಮಾನ 'ಏರ್ ಬಸ್–320', ಕಾರ್ಗೋ ಮೊದಲಾದವುಗಳ ಕಾರ್ಯಾಚರಣೆ ನಡೆಸಬಹುದಾಗಿದೆ. ಇದರಿಂದ ಈ ಭಾಗದ ಆರ್ಥಿಕ ಅಭಿವೃದ್ಧಿಯಾಗುವ ನಿರೀಕ್ಷೆಗಳಿವೆ.

ಮೈಸೂರು–ನಂಜನಗೂಡು ರಾಷ್ಟ್ರೀಯ ಹೆದ್ದಾರಿಯನ್ನು ವಿಮಾನ ನಿಲ್ದಾಣದ ಬಳಿ ಸ್ಥಳಾಂತರಿಸುವ ಇಲ್ಲವೆ ಅಂಡರ್‌ಪಾಸ್ ಮಾಡಲು ಉದ್ದೇಶಿಸಲಾಗಿದೆ ಆಗೊಂದು ವೇಳೆ ಅಂಡರ್ ಪಾಸ್ ಮಾಡುವುದಾದರೆ, 'ಸ್ಫೋಟ ನಿರೋಧಕ ಅಂಡರ್‌ಪಾಸ್' ಆಗಿ ವಿನ್ಯಾಸ ಮಾಡಲಾಗುತ್ತದೆ. ಇದು ಭಾರತದಲ್ಲೇ ಮೊದಲ ಪ್ರಯತ್ನ

ಪರಿಶಿಷ್ಟರ ಮೀಸಲಾತಿ ಹೆಚ್ಚಳ ಮಾಡಿದ ಬಿಜೆಪಿ ಶೋಷಿತರ, ಹಿಂದುಳಿದವರ ಹಿತಚಿಂತಕ

ಬಿಜೆಪಿ ಪ್ರಧಾನ ಕಾರ್ಯದರ್ಶಿ ದೇವನೂರು ಪ್ರತಾಪ್ ಅಭಿಮತ



ಮೈಸೂರು, ಡಿ.28– ಶೋಷಿತರು, ಹಿಂದುಳಿದ ವರ್ಗದವರ ಹೆಸರೇಳಿಕೊಂಡು ಐದು ವರ್ಷ ಅಧಿಕಾರ ಅನುಭವಿಸಿ ಆ ವರ್ಗಕ್ಕೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಏನನ್ನೂ ಮಾಡಿಲ್ಲ ಎಂದು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ದೇವನೂರು ಪ್ರತಾಪ್ ವಾಗ್ದಾಳಿ ನಡೆಸಿದರು.

ಮೈಸೂರಿನ ವರುಣಾ ಕ್ಷೇತ್ರದ ವರುಣಾ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರಿಗಾಗಿ ಆಯೋಜಿಸಿದ್ದ ವಿಧಾನಸಭಾ ಚುನಾವಣೆ 2023 ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಒಳ ಮೀಸಲಾತಿ ಕೊಡುತ್ತೇನೆಂದು ಜಾತಿ ಗಣತಿ ಮಾಡಿ ಅದನ್ನು ಬಿಡುಗಡೆ ಮಾಡದೇ ಮೋಸ ಮಾಡಿ, ಮಲ್ಲಿಕಾರ್ಜುನ ಖರ್ಗೆ, ಪರಮೇಶ್ವರ್‌ಗೆ ಸಿಎಂ ಸ್ಥಾನ ತಪ್ಪಿಸಿದ ಸಿದ್ದರಾಮಯ್ಯ ಅವರು ದಲಿತರ ವಿರೋಧಿ ಎಂದರು.

ಮಾಂಸ ತಿಂದು ದೇವಸ್ಥಾನಕ್ಕೆ ಹೋಗುವ, ಕೇಸರಿ ಕಂಡರೆ ಉರಿದು ಬೀಳುವ, ಮುಸಲ್ಮಾನ ಧರ್ಮದಲ್ಲೇ ಪ್ರತಿಮೆಗೆ ವಿರೋಧವಿದ್ದರೂ ಟಿಪ್ಪು ಸುಲ್ತಾನ್ ಪ್ರತಿಮೆ ಮಾಡುತ್ತೇವೆ ಎಂದು ಹೇಳುವ ಸಿದ್ದರಾಮಯ್ಯ ನಿಜವಾದ ಹಿಂದೂ ವಿರೋಧಿ ಎಂದರು.

ಪರಿಶಿಷ್ಟ ಜಾತಿಗೆ ಎರಡು ಪರ್ಸೆಂಟ್ ಪರಿಶಿಷ್ಟ ಪಂಗಡಕ್ಕೆ ನಾಲ್ಕು ಪರ್ಸೆಂಟ್ ಮೀಸಲಾತಿ ಹೆಚ್ಚಳ ಮಾಡಿದ ಬಿಜೆಪಿ ನಿಜವಾಗಿಯೂ ಶೋಷಿತರ ಮತ್ತು ಹಿಂದುಳಿದ ವರ್ಗಗಳ ಪರವಾಗಿ ಕೆಲಸ ಮಾಡುತ್ತಿದೆ. ಹನ್ನೊಂದು ಸಾವಿರ ಪೌರ ಕಾರ್ಮಿಕರ ಕಾಯಂ ಮಾಡಿ ಅವರ ಪರವಾಗಿಯೂ ನಮ್ಮ ಸರ್ಕಾರ ನಿಂತಿದೆ. ರಾಜ್ಯ ರಾಷ್ಟ್ರದ ಡಬಲ್ ಇಂಜಿನ್ ಸರ್ಕಾರ ಬಡವರ, ರೈತರ ಮತ್ತು ಶೋಷಿತರ ಪರವಾಗಿ ಹಲವಾರು ಯೋಜನೆಗಳನ್ನು ರೂಪಿಸಿದೆ. ವರುಣ ವಿಧಾನಸಭಾ ಕ್ಷೇತ್ರದ ಎಲ್ಲಾ ಮುಖಂಡರು ಕಾರ್ಯಕರ್ತರು ಒಗ್ಗಟ್ಟಾಗಿ ಕೆಲಸ ಮಾಡುವ ಮುಖಾಂತರ ಮುಂಬರುವ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯನ್ನು ಗೆಲ್ಲಿಸಲು ಪಣ ತೊಡಬೇಕೆಂದು ಕರೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಅಧ್ಯಕ್ಷೆ ಮಂಗಳಾ ಸೋಮಶೇಖರ್, ಮಂಡಲ ಅಧ್ಯಕ್ಷ ವಿಜಯಕುಮಾರ್, ಪ್ರವಾಸೋದ್ಯಮ ನಿಗಮ ಅಧ್ಯಕ್ಷ ಕಾಪು ಸಿದ್ದಲಿಂಗಸ್ವಾಮಿ, ತೋಟದಪ್ಪ ಬಸವರಾಜು, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರಾದ ಸದಾನಂದ, ಗುರುಸ್ವಾಮಿ, ಉಸ್ತುವಾರಿ ಪ್ರಫುಲ್ಲ ಮಲ್ಲಾಡಿ, ಮಹಾಶಕ್ತಿ ಕೇಂದ್ರ ಅಧ್ಯಕ್ಷ ಸೋಮಶೇಖರ್, ರೇಚಣ್ಣ ಮುಳ್ಳೂರು, ಕೃಷ್ಣಮೂರ್ತಿ, ಸೋಮಣ್ಣ, ಗುರುಮೂರ್ತಿ, ಮಧು, ಪ್ರಕಾಶ್, ಶಿವಣ್ಣ, ಶರತ್, ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.


ಮಾಹಿತಿ ನೀಡದ ತಹಶೀಲ್ದಾರ್ ಗಿರೀಶ್‌ಗೆ 25 ಸಾವಿರ ದಂಡ

ಮೈಸೂರು, ಡಿ.28(ಎಂಕೆ)– ಮಾಹಿತಿ ಹಕ್ಕು ಕಾಯ್ದೆ ಅಡಿ ಸಾರ್ವಜನಿಕರೊಬ್ಬರು ಕೇಳಿದ್ದ ಮಾಹಿತಿ ನೀಡದೆ, ಆಯೋಗದ ಆದೇಶವನ್ನು ಕಡೆಗಣಿಸಿದ ಮೈಸೂರು ತಾಲೂಕು ತಹಸೀಲ್ದಾರ್ ಬಿ.ಎಲ್.ಗಿರೀಶ್ ಅವರಿಗೆ ಕರ್ನಾಟಕ ಮಾಹಿತಿ ಆಯೋಗವು 25 ಸಾವಿರ ರೂ.ದಂಡ ವಿಧಿಸಿದೆ. ವಕೀಲ ಸಾ.ತಿ.ಸದಾನಂದಗೌಡ ಅವರು ವಿಕಲ ಚೇತನ ವ್ಯಕ್ತಿಯೊಬ್ಬರ ತಂದೆಯ ಮರಣಕ್ಕೆ ಸಂಬಂಧಿಸಿದಂತೆ 2019 ಅ.20ರಂದು ಅಲಭ್ಯ ಪ್ರಮಾಣ ಪತ್ರ ನೀಡುವಂತೆ ಕೋರಿ ಮೈಸೂರು ತಹಸೀಲ್ದಾರ್ ಅವರಿಗೆ ಅರ್ಜಿ ನೀಡಿದ್ದರು. ಇದಕ್ಕೆ 2020ರ ಫೆ.9ರವರೆಗೆ ಯಾವುದೇ ಉತ್ತರ ನೀಡಿರಲಿಲ್ಲ. 2020ರ ಫೆ.10ರಂದು ಈ ಅರ್ಜಿ ಕುರಿತು ತಾಲೂಕು ಕಚೇರಿಗೆ ಹೋಗಿ ವಿಚಾರಿಸಿದ ವೇಳೆ ಸಂಬಂಧಿಸಿದ ಕಚೇರಿಗೆ ವರ್ಗಾಯಿಸಿರುವುದಾಗಿ ತಿಳಿಸಿದ್ದರು.

ಮಾಹಿತಿ ಹಕ್ಕು ಕಾಯಿದೆಯಂತೆ 30 ದಿನಗಳ ಒಳಗೆ ಯಾವುದೇ ಮಾಹಿತಿಯನ್ನು ನೀಡದ ಸಾರ್ವಜನಿಕರ ಮಾಹಿತಿ ಅಧಿಕಾರಿ ಮತ್ತು ತಹಸೀಲ್ದಾರ್ ವಿರುದ್ಧ ಮಾಹಿತಿ ಆಯೋಗಕ್ಕೆ ಅರ್ಜಿ ಸಲ್ಲಿಸಿದ್ದರು. ಇದರ ಅನ್ವಯ ಮಾಹಿತಿ ನೀಡುವಂತೆ ತಹಸೀಲ್ದಾರ್ ಬಿ.ಎಲ್.ಗಿರೀಶ್ ಅವರಿಗೆ ಆಯೋಗವು ಆದೇಶಿಸಿತ್ತು. ಆದರೆ, ಆಯೋಗದ ಆದೇಶವನ್ನು ಪಾಲನೆ ಮಾಡದೇ, ಮೇಲ್ಮನವಿದಾರ ಸಾ.ತಿ.ಸದಾನಂದಗೌಡ ಅವರಿಗೆ ನಿಯಮಾನುಸಾರ ನಿಗಧಿತ ಸಮಯದಲ್ಲಿ ಮಾಹಿತಿಯನ್ನು ನೀಡದೆ ನಿರ್ಲಕ್ಷ್ಯ ವಹಿಸಿದ್ದರಿಂದ ತಹಸೀಲ್ದಾರ್ ಬಿ.ಎಲ್.ಗಿರೀಶ್ ಅವರಿಗೆ 25 ಸಾವಿರ ದಂಡ ವಿಧಿಸಿ ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತ ಹೆಚ್.ಸಿ.ಸತ್ಯನ್ ಆದೇಶಿಸಿದ್ದಾರೆ.

ಕುವೆಂಪು ಕುರಿತ ಅಧ್ಯಾಪಕ ರವಿ ರಚಿತ 120 ಅಪ್ರಕಟಿತ ಕವನ ಸಂಕಲನ ದಾಖಲೆ

ಮೈಸೂರು, ಡಿ.28(ಎಸ್‌ಪಿಎನ್)– ರಾಷ್ಟ್ರಕವಿ ಕುವೆಂಪು ಅವರ ಜನ್ಮ ದಿನಾಚರಣೆ ಹಿನ್ನೆಲೆಯಲ್ಲಿ ಕವಿ ಹಾಗೂ ಕನ್ನಡ ಅಧ್ಯಾಪಕ ಎಂ.ರವಿ ರಚಿಸಿರುವ 120 ಕವಿತೆಗಳ ಅಪ್ರಕಟಿತ ಕವನ ಸಂಕಲನ 3 ದಾಖಲೆ ನಿರ್ಮಿಸಿದ್ದು, ಇದೀಗ 'ವರ್ಲ್ಡ್ ಬುಕ್ ಆಫ್ ರೆಕಾರ್ಡ್ ಲಂಡನ್' ಪುಟ ಸೇರುವ ಪ್ರಕ್ರಿಯೆ ಮುಂದುವರೆದಿದೆ.



ಕುವೆಂಪು ಕುರಿತು ರಚಿಸಿರುವ 120 ಕವಿತೆಗಳ ಕವನ ಸಂಕಲನ ಈಗಾಗಲೇ ಕರ್ನಾಟಕ ಅಚೀವರ್ಸ್ ಬುಕ್ ಆಫ್ ರೆಕಾರ್ಡ್, ಇಂಡಿಯಾ ಬುಕ್ ಆಫ್ ರೆಕಾರ್ಡ್, ನೊಬೆಲ್ ಬುಕ್ ಆಫ್ ರೆಕಾರ್ಡ್ ದಾಖಲೆ ಪುಟ ಸೇರಿದೆ. ಈಗ 'ವರ್ಲ್ಡ್ ಬುಕ್ ಆಫ್ ರೆಕಾರ್ಡ್ ಲಂಡನ್' ಪುಟ ಸೇರುವ ಸನಿಹದಲ್ಲಿದೆ.

ಹುಣಸೂರು ತಾಲೂಕು ಕುಡಿನೀರು ಮುದ್ದನಹಳ್ಳಿ ನಿವಾಸಿಯೂ ಆದ ರತ್ನಪುರಿ ವಿ.ಎಸ್.ಎಸ್.ಪ್ರಥಮ ದರ್ಜೆ ಖಾಸಗಿ ಕಾಲೇಜಿನ ಕನ್ನಡ ಅಧ್ಯಾಪಕ ಎಂ.ರವಿ ಕವಿತೆಗಳನ್ನು ರಚಿಸಿದ್ದಾರೆ. ಈಗಾಗಲೇ ರವಿಯವರು 80ಕ್ಕೂ ಹೆಚ್ಚು ಕನ್ನಡ ಸಿನಿಮಾ, ಭಕ್ತಿಗೀತೆಗಳನ್ನು ರಚಿಸಿ, ಹಾಡಿರುವುದು ವಿಶೇಷ. ಬೋಧನೆಯ ಜೊತೆಗೆ ಪ್ರಗತಿಪರ ಕೃಷಿಕ ರಾಗಿಯೂ ಗುರುತಿಸಿಕೊಂಡಿರುವುದಾಗಿ ಎಂ.ರವಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

42,000 ಪೌರಕಾರ್ಮಿಕರ ಖಾಯಂಗೊಳಿಸಲು ಕ್ರಮ



ಬೆಳಗಾವಿ: ರಾಜ್ಯದಲ್ಲಿ ಸುಮಾರು 42 ಸಾವಿರ ಪೌರಕಾರ್ಮಿಕರಿದ್ದು, ಮುಂದಿನ ದಿನಗಳಲ್ಲಿ ಇವರೆಲ್ಲರಿಗೂ ಖಾಯಂ ನೇಮಕಾತಿ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ವಿವಿಧ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇಮಕವಾದ ಪೌರಕಾರ್ಮಿಕರಿಗೆ ನೇಮಕಾತಿ ಆದೇಶ ಪತ್ರ ವಿತರಿಸಿ ಮಾತನಾಡಿದ ಅವರು, ಪೌರ ಕಾರ್ಮಿಕರಿಗೆ 2000 ರೂ. ಸಂಕಷ್ಟ ಭತ್ಯೆ ನೀಡಲಾಗುತ್ತಿದ್ದು, ಅವರ ಆರೋಗ್ಯ, ಅವರ ಮಕ್ಕಳ ಆರೋಗ್ಯ ಹಿತರಕ್ಷಣೆಗೆ ಆದ್ಯತೆ ನೀಡಲಾಗಿದೆ ಎಂದು ಹೇಳಿದರು.

ಎಸ್‌ಸಿ/ಎಸ್‌ಟಿ ಜನಾಂಗಕ್ಕೆ ಮೀಸಲಾತಿ ಹೆಚ್ಚಳ ಮಾಡಲಾಗಿದೆ. ಈ ನಿರ್ಣಯಕ್ಕೆ ಗಟ್ಟಿಯಾಗಿ ನಿಲ್ಲಲು ಸರ್ಕಾರ ಎಲ್ಲ ಕ್ರಮಗಳನ್ನು ತೆಗೆದುಕೊಳ್ಳುತ್ತದೆ. ಪೌರ ನೌಕರರ ಸೇವೆಯನ್ನು ಸರ್ಕಾರ ಗುರುತಿಸಿದೆ. ಬರುವ ದಿನಗಳಲ್ಲಿ ಪೌರನೌಕರರ ಮಕ್ಕಳಿಗೆ ಉತ್ತಮ ವಿದ್ಯೆ ನೀಡಿ, ಅವರ ಭವಿಷ್ಯವನ್ನು ಉಜ್ವಲಗೊಳಿಸಬೇಕು. ಇದಕ್ಕೆ ಸರ್ಕಾರ ಎಲ್ಲ ಸಹಕಾರ ನೀಡುತ್ತದೆ ಎಂದು ತಿಳಿಸಿದರು. ಎಸ್‌ಸಿಎಸ್‌ಟಿ ಮಕ್ಕಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ವಿಶೇಷ ತರಬೇತಿಯನ್ನು ನೀಡುವಂತೆ, ಪೌರನೌಕರರ ಮಕ್ಕಳು ಸಿಇಟಿ ಸೇರಿದಂತೆ ಇನ್ನಿತರ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು ವಿಶೇಷ ತರಬೇತಿಯನ್ನು ನೀಡಲು ಸರ್ಕಾರ ಸಿದ್ಧವಿದೆ. ಪೌರಕಾರ್ಮಿಕರ ಆರೋಗ್ಯ ರಕ್ಷಣೆ, ಮಕ್ಕಳ ಶಿಕ್ಷಣ, ಮನೆ ನಿರ್ಮಾಣಗಳಿಗೆ ವಿಶೇಷ ಕಾರ್ಯಕ್ರಮವನ್ನು ರೂಪಿಸಲಾಗಿದ್ದು, ಪೌರಕಾರ್ಮಿಕರ ಇವುಗಳ ಲಾಭವನ್ನು ಪಡೆಯಬೇಕು ಎಂದರು.

ನಂ.ಗೂಡು ತಾಲೂಕು ಹಿಮ್ಮಾವಲ್ಲಿ ಕೆಐಎಡಿಬಿ ಸ್ವಾಧೀನಪಡಿಸಿಕೊಂಡ ಭೂಮಿಗೆ ಅನರ್ಹ 9 ಮಂದಿಗೆ ಪರಿಹಾರ; ಸಿಐಡಿ ತನಿಖೆಗೆ ಆದೇಶ

ಹಿಂದಿನ ನಂ.ಗೂಡು ತಹಸೀಲ್ದಾರ್ ನವೀನ್ ಜೋಸೆಫ್ ಸೇರಿ 16 ಮಂದಿ ವಿರುದ್ಧ ಪ್ರಕರಣ ದಾಖಲು

ನಂಜನಗೂಡು,ಡಿ.28–ನಂಜನಗೂಡು ತಾಲೂಕು ಹಿಮ್ಮಾವು ಗ್ರಾಮದಲ್ಲಿ ಕೆಐಎಡಿಬಿ ವಶಪಡಿಸಿಕೊಂಡ ಭೂಮಿಗೆ 9 ಮಂದಿ ಅನರ್ಹರಿಗೆ ಭೂ ಪರಿಹಾರ ನೀಡಿದ ಪ್ರಕರಣವನ್ನು ರಾಜ್ಯ ಸರ್ಕಾರ ಸಿಐಡಿ ತನಿಖೆಗೆ ವಹಿಸಿದ್ದು, ಅದಕ್ಕೆ ಪೂರಕವಾಗಿ ನಂಜನಗೂಡು ತಾಲೂಕಿನ ಹಿಂದಿನ ತಹಸೀಲ್ದಾರ್ ನವೀನ್ ಜೋಸೆಫ್ ಸೇರಿದಂತೆ 16 ಮಂದಿ ವಿರುದ್ಧ ನಂಜನಗೂಡು ಟೌನ್ ಠಾಣೆಯಲ್ಲಿ ಕ್ರಿಮಿನಲ್ ಕೇಸ್ ದಾಖಲಾಗಿದೆ.

ನಂಜನಗೂಡು ಹಾಲಿ ತಹಸೀಲ್ದಾರ್ ಶಿವಮೂರ್ತಿ ನೀಡಿದ ದೂರಿನನ್ವಯ ಪೊಲೀಸರು, ಭೂ ನ್ಯಾಯಮಂಡಳಿ ಹಿಂದಿನ ಅಧ್ಯಕ್ಷ ಕೃಷ್ಣಮೂರ್ತಿ, ಭೂ ನ್ಯಾಯ ಮಂಡಳಿಯ ಸದಸ್ಯ ಕಾರ್ಯದರ್ಶಿಯೂ ಆಗಿದ್ದ ನಂಜನಗೂಡು ತಾಲೂಕಿನ ಹಿಂದಿನ ತಹಸೀಲ್ದಾರ್ ನವೀನ್ ಜೋಸೆಫ್, ಹಿಂದಿನ ಅಧಿಕಾರಿಗಳಾದ ಆರ್‌ಆರ್‌ಟಿ ಶಿರಸ್ತೇದಾರ್ ರಮೇಶ್‌ಬಾಬು, ರಾಜಸ್ವ ನಿರೀಕ್ಷಕ ಶಿವರಾಜು, ಗ್ರಾಮ ಲೆಕ್ಕಿಗ ವೆಂಕಟೇಶ್, ಸುಳ್ಳು ದಾಖಲೆಗಳನ್ನು ನೀಡಿ ಭೂ ಮಂಜೂರಾತಿ ಮಾಡಿಸಿಕೊಂಡಿರುವ ಪಿ. ಕೃಷ್ಣಾನಂದ ಗಿರಿಗೋಸ್ವಾಮಿ, ಭೀಷ್ಮ ಪಿತಾಮಹ, ಶ್ರೀಮತಿ ಸತ್ಯಭಾಮ, ಕುಲದೀಪ್ ಪ್ರಕಾಶ್, ಭೀಷ್ಮ ಪಿತಾಮಹಾರವರ ಪುತ್ರಿಯರಾದ ಶೋಭಾದೇವಿ, ಹೇಮಲತಾ, ನಿಷಾ ಶರ್ಮ, ಅಂಜನಾ ಶರ್ಮ, ವಿಜಯಲಕ್ಷ್ಮಿ, ಸುಳ್ಳು ವಂಶವೃಕ್ಷ ನೀಡಿ ಖಾತೆ ಮಾಡಿಸಿಕೊಂಡಿರುವ ಪ್ರತಿಫ್ ಮಗ್ಗು ಎಂಬುವರ ವಿರುದ್ಧ ಭಾರತೀಯ ದಂಡ ಸಂಹಿತೆ 406, 409, 420, 465, 468, 471, 120 ಬಿ, 149, ಕರ್ನಾಟಕ ಲ್ಯಾಂಡ್, ರೆವಿನ್ಯೂ ಆಕ್ಟ್ 1964ರ ಸೆಕ್ಷನ್ 192ರಡಿ ಪ್ರಕರಣ ದಾಖಲಿಸಕೊಂಡಿದ್ದಾರೆ. ಈ ಪ್ರಕರಣದ ತನಿಖೆಯನ್ನು ಸಿಐಡಿ ಪೊಲೀಸರು ನಡೆಸಲಿದ್ದಾರೆ.

ವಿವರ: ನಂಜನಗೂಡು ತಾಲೂಕು ಚಿಕ್ಕಯ್ಯನ ಛತ್ರ ಹೋಬಳಿ ಹಿಮ್ಮಾವು ಗ್ರಾಮದ ಸರ್ವೆ ನಂಬರ್ 390 ರಿಂದ 422ರವರೆಗೆ ಮತ್ತು 424 ಜಮೀನುಗಳು ಮೂಲತಃ ಕೃಷ್ಣಾನಂದ ಗಿರಿಗೋಸ್ವಾಮಿ ಅವರ ಹೆಸರಿನಲ್ಲಿದೆ. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಜಾರಿಗೆ ಬಂದ ನಂತರ ಕೃಷ್ಣಾನಂದ ಗಿರಿಗೋಸ್ವಾಮಿಯವರು ಸರ್ಕಾರಕ್ಕೆ ಘೋಷಣಾ ಪತ್ರ ಸಲ್ಲಿಸಿದ್ದರು. ಅದರನ್ವಯ ಅವರ ಕುಟುಂಬಕ್ಕೆ ಜಮೀನು ನಿಗದಿಪಡಿಸುವ ಸಂಬಂಧ ಪ್ರಕರಣ ಭೂ ನ್ಯಾಯ ಮಂಡಳಿಯಲ್ಲಿ ದಾಖಲಾಗಿತ್ತು.

ಮಂಡಳಿಯು 1993ರ ಆಗಸ್ಟ್ 6ರಂದು ಕೃಷ್ಣಾನಂದ ಗಿರಿಗೋಸ್ವಾಮಿ, ಭೀಷ್ಮ ಪಿತಾಮಹಾ, ಶ್ರೀಮತಿ ಸತ್ಯಭಾಮಾ ಮತ್ತು ಕುಲದೀಪ್ ಪ್ರಕಾಶ್ ಅವರಿಗೆ ತಲಾ 10 ಯೂನಿಟ್‌ನಂತೆ ಒಟ್ಟು 40 ಯೂನಿಟ್‌ಗಳನ್ನು ನಿಗದಿಪಡಿಸಿ ಆದೇಶ ಹೊರಡಿಸಿತ್ತು. ಈ ಆದೇಶವನ್ನು ರದ್ದುಪಡಿಸಿದ್ದ ಹೈಕೋರ್ಟ್ ಮರು ವಿಚಾರಣೆ ನಡೆಸುವಂತೆ ಆದೇಶಿಸಿತ್ತು. ಭೂ ನ್ಯಾಯ ಮಂಡಳಿಯು ಮರು ವಿಚಾರಣೆ ನಡೆಸಿ, 1999 ಮೇ 28ರಂದು ತನ್ನ ಹಿಂದಿನ ಆದೇಶವನ್ನೇ ಮತ್ತೇ ಹೊರಡಿಸಿತ್ತು. ಈ ಆದೇಶವನ್ನೂ ಕೂಡ ಹೈಕೋರ್ಟ್ 2006 ಡಿಸೆಂಬರ್ 18ರಂದು ರದ್ದುಪಡಿಸಿ, ಮತ್ತೆ ಮರುವಿಚಾರಣೆ ನಡೆಸುವಂತೆ ಆದೇಶಿಸಿತ್ತು. ವಿಶೇಷವೆಂದರೆ ಈ ಪ್ರಕರಣವನ್ನು ಮತ್ತೇ ವಿಚಾರಣೆ ನಡೆಸಿದ ಭೂ ನ್ಯಾಯಮಂಡಳಿಯೂ ಈ ಹಿಂದೆ ತಾನು ನಿಗದಿಪಡಿಸಿದ್ದ ಐವರ ಜೊತೆಗೆ ಭೀಷ್ಮ ಪಿತಾಮಹಾ ಅವರ ಪುತ್ರಿಯರಾದ ಶೋಭಾದೇವಿ, ಹೇಮಲತಾ, ನಿಶಾ ಶರ್ಮ, ಅಂಜನಾ ಶರ್ಮ ಮತ್ತು ವಿಜಯಲಕ್ಷ್ಮಿ ಅವರಿಗೆ ತಲಾ 10 ಯೂನಿಟ್‌ನಂತೆ ಒಟ್ಟಾರೆ 90 ಯೂನಿಟ್‌ಗಳನ್ನು ಈ ಎಲ್ಲಾ ಒಂಭತ್ತು ಮಂದಿಗೆ ಮಂಜೂರು ಮಾಡಿತ್ತು.

ಈ ಭೂಮಿಯನ್ನು ವಶಪಡಿಸಿಕೊಂಡಿದ್ದ ಕೆಐಎಡಿಬಿ ಇವರೆಲ್ಲರಿಗೂ ಭೂ ಪರಿಹಾರ ನೀಡಿತ್ತು. 2015ರಲ್ಲಿ ಭಾರತ ಲೆಕ್ಕ ನಿಯಂತ್ರಕರು ಹಾಗೂ ಮಹಾ ಲೆಕ್ಕ ಪರಿಶೋಧಕರು (ಎಜಿ ಆಡಿಟ್) ಅವರು ಆಕ್ಷೇಪ ವ್ಯಕ್ತಪಡಿಸಿ, ಅನರ್ಹ ವ್ಯಕ್ತಿಗಳಿಗೆ ಭೂ ಪರಿಹಾರ ನೀಡಲಾಗಿದೆ ಎಂದು ತಿಳಿಸಿದ್ದರು. ಇದರನ್ವಯ ಈ ಪ್ರಕರಣವನ್ನು ಸಿಐಡಿ ತನಿಖೆಗೆ ಒಪ್ಪಿಸಿ ಸರ್ಕಾರ ಇದೇ ಡಿಸೆಂಬರ್ 7ರಂದು ಆದೇಶ ಹೊರಡಿಸಿದೆ.

ಯಾವುದೇ ಪ್ರಕರಣವನ್ನು ಸಿಐಡಿ ತನಿಖೆ ನಡೆಸಬೇಕಾದರೆ ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ನಂಜನಗೂಡು ತಹಸೀಲ್ದಾರ್ ಶಿವಮೂರ್ತಿಯವರು ನಂಜನಗೂಡು ಟೌನ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ಕಾಫಿ ಬೆಳೆಗಾರರಿಗೆ 10 ಹೆಚ್‌ಪಿವರೆಗಿನ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡಲು ಸರ್ಕಾರದಿಂದ ಕ್ರಮ

ಬೆಳಗಾವಿ ಅಧಿವೇಶನದಲ್ಲಿ ಇಂಧನ ಸಚಿವ ಸುನೀಲ್ ಕುಮಾರ್ ಭರವಸೆ

ಮಡಿಕೇರಿ, ಡಿ.28– ಕಾಫಿ ಬೆಳೆಗಾರರಿಗೆ 10 ಹೆಚ್.ಪಿ. ವರೆಗಿನ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡಲು ಸರ್ಕಾರ ಎಲ್ಲಾ ರೀತಿಯ ಕ್ರಮ ಕೈಗೊಳ್ಳಲಿದೆ ಎಂದು ಇಂಧನ ಸಚಿವ ಸುನೀಲ್ ಕುಮಾರ್ ಭರವಸೆ ನೀಡಿದ್ದಾರೆ.


ಅಪ್ಪಚ್ಚುರಂಜನ್


ಸುನೀಲ್‌ಕುಮಾರ್

ಬೆಳಗಾವಿ ಸುವರ್ಣ ಸೌಧದಲ್ಲಿ ನಡೆಯುತ್ತಿರುವ ಅಧಿವೇಶನದ ಪ್ರಶ್ನೋತ್ತರ ವೇಳೆ ಮಡಿಕೇರಿ ಶಾಸಕ ಅಪ್ಪಚ್ಚು ರಂಜನ್ ಅವರ ಪ್ರಶ್ನೆಗೆ ಅವರು ಉತ್ತರ ನೀಡಿದರು.

ಕಾಫಿ ಬೆಳೆಗಾರರಿಗೆ 10 ಹೆಚ್.ಪಿ.ವರೆಗಿನ ಪಂಪ್ ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡಬೇಕು ಎಂದು ಮನವಿ ಮಾಡಿದ ಹಿನ್ನೆಲೆಯಲ್ಲಿ ಸಚಿವರು ಈ ಮಾಹಿತಿ ನೀಡಿದರು.


ಹಾಸನ, ದಕ್ಷಿಣ ಕನ್ನಡ, ಕಾರವಾರ ಸೇರಿದಂತೆ ಬೇರೆ ಜಿಲ್ಲೆಗಳಲ್ಲಿ ಅಡಿಕೆ ಹಾಗೂ ಇತರ ಬೆಳೆಗಳಿಗೆ ಉಚಿತ ವಿದ್ಯುತ್ ನೀಡಲಾಗುತ್ತಿದೆ. ಯಡಿಯೂರಪ್ಪ ಅವರು ಮುಖ್ಯಮಂತ್ರಿಗಳಾಗಿದ್ದ ಸಂದರ್ಭ ಇದೇ ವಿಚಾರಕ್ಕೆ ಸಂಬಂಧಿಸಿದಂತೆ ಬಜೆಟ್‌ನಲ್ಲಿ ಉಚಿತ ವಿದ್ಯುತ್ ನೀಡುವುದನ್ನು ಸೇರ್ಪಡೆ ಮಾಡುವುದಾಗಿ ಆಶ್ವಾಸನೆ ನೀಡಿದ್ದರು. ಆ ಆಶ್ವಾಸನೆಯಂತೆ ಕಾಫಿ ಬೆಳೆಗಾರರು ಬಿಲ್ ಪಾವತಿಸುವುದನ್ನು ಬಾಕಿ ಉಳಿಸಿಕೊಂಡಿದ್ದಾರೆ. ಅದರ ಮೊತ್ತ 45 ಕೋಟಿ ರೂ.ಗಳಾಗಿದ್ದು, ಕಾಫಿ ಬೆಳೆಗಾರರಿಗೆ ತೊಂದರೆಯಾಗದಂತೆ ಈ ಬಾಕಿ ಮೊತ್ತವನ್ನು ಕೂಡ ಮನ್ನಾ ಮಾಡಬೇಕೆಂದು ಶಾಸಕರು ಸರ್ಕಾರವನ್ನು ಒತ್ತಾಯಿಸಿದರು.

ಉಚಿತ ವಿದ್ಯುತ್‌ಗೆ ಕ್ರಮ: ಇಂಧನ ಸಚಿವ ಸುನೀಲ್ ಕುಮಾರ್ ಮಾತನಾಡಿ, ಶಾಸಕ ಅಪ್ಪಚ್ಚು ರಂಜನ್ ಹಾಗೂ ಕಾಫಿ ಬೆಳೆಗಾರರ ಸಂಘ ಕೂಡ ಹಲವು ತಿಂಗಳಿಂದ 10ಹೆಚ್.ಪಿ.ವರೆಗಿನ ಪಂಪ್ ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡುವಂತೆ ಮನವಿ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ನಿಯಮಾವಳಿಯಂತೆ ಮುಖ್ಯಮಂತ್ರಿಗಳು ಸಣ್ಣ ಮತ್ತು ಅತಿ ಸಣ್ಣ ಕಾಫಿ ಬೆಳೆಗಾರರಿಗೆ 10 ಹೆಚ್.ಪಿ.ವರೆಗೆ ಉಚಿತ ವಿದ್ಯುತ್ ನೀಡಲು ನಿರ್ಧರಿಸಿದ್ದಾರೆ. ಬಳಿಕ ಶಾಸಕ ಅಪ್ಪಚ್ಚು ರಂಜನ್ ಅವರು ಎಲ್ಲಾ ಕಾಫಿ ಬೆಳೆಗಾರರಿಗೆ ಈ ಯೋಜನೆ ವಿಸ್ತರಿಸುವಂತೆ ಮನವಿ ಮಾಡಿದ್ದರು. ಈ ಮನವಿಯನ್ನು ಇದೀಗ ಅನುಮೋದಿಸಿ ಆರ್ಥಿಕ ಇಲಾಖೆಗೆ ಕಳುಹಿಸಲಾಗಿದೆ ಎಂದು ತಿಳಿಸಿದರು. ಕೊಡಗು, ಹಾಸನ, ಚಿಕ್ಕಮಗಳೂರು ಈ ಮೂರು ಜಿಲ್ಲೆಗಳ ಕಾಫಿ ಬೆಳೆಗಾರರ ಜೊತೆ ಸರ್ಕಾರ ನಿಲ್ಲುತ್ತದೆ. 10 ಹೆಚ್.ಪಿ.ವರೆಗೆ ಉಚಿತವಾಗಿ ವಿದ್ಯುತ್ ನೀಡಲು ಸರಕಾರ ಎಲ್ಲಾ ರೀತಿಯ ಕ್ರಮ ಕೈಗೊಳ್ಳುತ್ತದೆ ಎಂದು ಸಚಿವ ಸುನೀಲ್ ಕುಮಾರ್ ಸದನದಲ್ಲಿ ಘೋಷಿಸಿದರು.

ಬಾಕಿ ಮನ್ನಾಗೂ ಕ್ರಮ: ಹಳೆ ವಿದ್ಯುತ್ ಬಿಲ್ 45 ಕೋಟಿ ರೂಗಳನ್ನು ಮನ್ನಾ ಮಾಡುವ ಕುರಿತು ಮುಖ್ಯಮಂತ್ರಿಗಳ ಜೊತೆ ಚರ್ಚಿಸಲಾಗಿದೆ. ಚೆಸ್ಕಾಂ ಒಂದು ಸಂಸ್ಥೆಯಾಗಿರುವ ಕಾರಣ ಬಾಕಿ ಹಣ ಮನ್ನಾ ಮಾಡಲು ಆರ್ಥಿಕ ಇಲಾಖೆ ಸಮ್ಮತಿ ನೀಡಬೇಕಿದೆ. 45 ಕೋಟಿ ರೂ.ಗಳನ್ನು ಮನ್ನಾ ಮಾಡಲು ಏನೇನು ಕ್ರಮ ಕೈಗೊಳ್ಳಬೇಕು ಎಂಬುದರ ಬಗ್ಗೆಯೂ ಸಿ.ಎಂ. ಜೊತೆ ಚರ್ಚಿಸಿ ಕ್ರಮವಹಿಸುವುದಾಗಿ ಸಚಿವ ಸುನೀಲ್ ಕುಮಾರ್ ಸದನದಲ್ಲಿ ವಿವರಿಸಿದರು.

ಸಿದ್ದಾಪುರ ಬಳಿ ಪುಂಡಾನೆ ಸೆರೆ

ಎರಡು ದಿನಗಳ ಕಾರ್ಯಾಚರಣೆ ಯಶಸ್ವಿ



2 ದಿನಗಳ ನಂತರ ಮತ್ತೆ ಕಾರ್ಯಾಚರಣೆ, ಇನ್ನೊಂದು ಪುಂಡಾನೆ ಸೆರೆ

ಮಡಿಕೇರಿ/ಸಿದ್ದಾಪುರ, ಡಿ.28– ಸಿದ್ದಾಪುರ ವ್ಯಾಪ್ತಿಯಲ್ಲಿ ವ್ಯಾಪಕ ಕೃಷಿ ಹಾನಿಗೆ ಕಾರಣವಾಗಿ ಗ್ರಾಮೀಣ ಪ್ರದೇಶದ ಜನರಿಗೆ ಉಪಟಳ ನೀಡುತ್ತಿದ್ದ ಪುಂಡಾನೆ ಒಂದನ್ನು ಕರಡಿಗೋಡಿನ ಭುವನಹಳ್ಳಿ ಕಾಫಿ ತೋಟದಲ್ಲಿ ಅರಣ್ಯ ಇಲಾಖೆಯ ತಂಡ ಸೆರೆ ಹಿಡಿಯುವಲ್ಲಿ ಯಶಸ್ವಿಯಾಗಿದೆ.

ಕಳೆದ 2 ದಿನಗಳ ಕಾಲ ಅರಣ್ಯ ಇಲಾಖೆಯ ತಂಡ ನಡೆಸಿದ ವ್ಯಾಪಕ ಕಾರ್ಯಾಚರಣೆ ಇಂದು ಬೆಳಗ್ಗೆ 10.30ರ ಸುಮಾರಿಗೆ ಪುಂಡಾನೆಯನ್ನು ಸೆರೆಯೊಂದಿಗೆ ಮುಕ್ತಾಯವಾಗಿದ್ದು, ಸೆರೆಯಾಗಿರುವ ಕಾಡಾನೆ ಸುಮಾರು 22 ವರ್ಷ ವಿರಬಹುದು.

ತೀವ್ರ ಕಾರ್ಯಾಚರಣೆ: ಕರಡಿಗೋಡು ಗ್ರಾಮ ವ್ಯಾಪ್ತಿಯಲ್ಲಿ ಕಾಡಾನೆಗಳ ಹಿಂಡು ಇರುವುದನ್ನು ಅರಣ್ಯ ಇಲಾಖಾ ತಂಡ ಗುರುತಿಸಿ, ಎರಡು ದಿನಗಳ ಹಿಂದೆಯೇ ಅವುಗಳ ಜಾಡು ಹಿಡಿದಿತ್ತು ಮಂಗಳವಾರ ಇನ್ನೇನು ಕಾಡಾನೆ ಸೆರೆಯಾಯಿತು ಎನ್ನುವಷ್ಟರಲ್ಲೇ ಕಾಡಾನೆಗಳ ಹಿಂಡಿನ ಕೆಲ ಆನೆಗಳು ಅರಣ್ಯ ಸಿಬ್ಬಂದಿಗಳ ಮೇಲೆ ತಿರುಗಿಬಿದ್ದ ಕಾರಣ ಯೋಜನೆ ವಿಫಲವಾಗಿತ್ತು. ಈ ಹಿನ್ನೆಲೆಯಲ್ಲಿ ಬುಧವಾರ ಬೆಳಗ್ಗಿನಿಂದಲೇ ಕಾರ್ಯಾಚರಣೆಗಿಳಿದ ಅರಣ್ಯ ಇಲಾಖಾ ತಂಡ ಕರಡಿಗೋಡಿನ ಭುವನಳ್ಳಿ ಕಾಫಿ ತೋಟವೊಂದರಲ್ಲಿ ಕಾಡಾನೆಗಳು ಇರುವುದನ್ನು ಪತ್ತೆ ಹಚ್ಚಿತ್ತು ಮಾತ್ರವಲ್ಲದೇ ಕಾಡಾನೆ ಸೆರೆ ಹಿಡಿಯುವ ಕಾರ್ಯ ಯೋಜನೆಯ ಫಲಪ್ರದಗೊಳಿಸಲು ಎಚ್ಚರಿಕೆಯ ಹೆಜ್ಜೆಯನ್ನಿರಿಸಿತು. ಕಾಡಾನೆಗಳ ಹಿಂಡಿನಲ್ಲಿದ್ದ, ಕಾಡಿಗೋಣ ವ್ಯಾಪ್ತಿಯಲ್ಲಿ ದಾಂಧಲೆ ನಡೆಸುತ್ತಿದ್ದ ಪುಂಡಾನೆಯನ್ನು ಗುರುತಿಸಿ ಶಾರ್ಪ್ ಶೂಟರ್ ಅಕ್ರಂ ಅವರು ಅರವಳಿಕೆಯನ್ನು ಹೊಂದಿದ ಗುಂಡು ಹಾರಿಸಿದರು.

ಕೆಲ ನಿಮಿಷಗಳ ಬಳಿಕ ಅರಿವಳಿಕೆಯ ಪ್ರಭಾವಕ್ಕೆ ಪುಂಡಾನೆ ಸಿಲುಕಿದ್ದನ್ನು ಖಾತರಿ ಪಡಿಸಿಕೊಂಡ ಅರಣ್ಯ ಇಲಾಖಾ ತಂಡ, ಕಾರ್ಯಾಚರಣೆಗೆ ದುಬಾರೆ ಮತ್ತು ಮತ್ತಿಗೋಡಿನಿಂದ ಕರೆಸಿಕೊಳ್ಳಲಾಗಿದ್ದ ಪ್ರಶಾಂತ, ಸುಗ್ರೀವ, ಧನಂಜಯ, ಅಭಿಮನ್ಯು ಮತ್ತು ಭೀಮನ ಸಹಕಾರದಿಂದ ಪುಂಡಾನೆಯನ್ನು ಹಗ್ಗದಿಂದ ಬಂಧಿಸಲಾಯಿತು. ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಪುಂಡಾನೆಯನ್ನು ಅಲ್ಲೇ ಸಮೀಪದ ಚಿಕ್ಕನಲ್ಲಿ ತೋಟದವರೆಗೆ ಕರೆತರಲಾಯಿತು. ಬಳಿಕ ಚಿಕ್ಕನಲ್ಲಿ ತೋಟದ ಹಾದಿಯಲ್ಲಿ ಪುಂಡಾನೆಯನ್ನು ಬಲವಾದ ಹಗ್ಗಗಳಿಂದ ಬಿಗಿದು ಕ್ರೇನ್ ಸಹಕಾರದಿಂದ ಲಾರಿಯನ್ನೇರಿಸಿ, ದುಬಾರೆ ಸಾಕಾನೆ ಶಿಬಿರಕ್ಕೆ ಕರೆದೊಯ್ಯಲಾಯಿತು.

ಅಮ್ಮತ್ತಿಯಲ್ಲೂ ಕಾರ್ಯಾಚರಣೆ: ಕಾಡಾನೆ ಸೆರೆ ಕಾರ್ಯಾಚರಣೆ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಎಸಿಎಫ್ ನೆಹರು, ಸರ್ಕಾರದ ಅನುಮತಿಯಂತೆ ಒಂದು ಕಾಡಾನೆಯನ್ನು ಸೆರೆ ಹಿಡಿಯಲಾಗಿದೆ. 2 ದಿನಗಳ ನಂತರ ಅಮ್ಮತ್ತಿ ಭಾಗದಲ್ಲಿರುವ ಮತ್ತೊಂದು ಪುಂಡಾನೆಯನ್ನು ಸೆರೆ ಹಿಡಿಯಲು ಕಾರ್ಯಾಚರಣೆ ನಡೆಸಲಾಗುತ್ತದೆಂದು ತಿಳಿಸಿದರು.

ಜಿಲ್ಲಾ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮೂರ್ತಿ ಮಾರ್ಗದರ್ಶನದಲ್ಲಿ ವಿರಾಜಪೇಟೆ ತಾಲೂಕು ಡಿ.ಸಿ.ಎಫ್. ಚಕ್ರಪಾಣಿ, ಎಸಿಎಫ್ ನೆಹರು ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ವಲಯ ಅರಣ್ಯಾಧಿಕಾರಿ ಕಳ್ಳಿರ ದೇವಯ್ಯ, ಉಪವಲಯ ಅರಣ್ಯಾಧಿಕಾರಿ ಸಂಜಿತ್ ಪೂವಯ್ಯ, ಕುಶಾಲನಗರ ವಲಯ ಎಸಿಎಫ್ ಗೋಪಾಲ್, ಆರ್‌ಎಫ್‌ಒ ಶಿವಾನಂದ, ಶಾರ್ಪ್‌ಶೂಟರ್ ಅಕ್ರಂ, ವನ್ಯಜೀವಿ ವೈದ್ಯಾಧಿಕಾರಿ ಡಾ. ರಮೇಶ್ ಮತ್ತು ಡಾ. ಚಿಟ್ಟಿಯಪ್ಪ, ಮಡಿಕೇರಿ ಮತ್ತು ಸೋಮವಾರಪೇಟೆ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು ಮತ್ತು ಸುಮಾರು 50ಕ್ಕೂ ಹೆಚ್ಚಿನ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

ಗ್ರಾಮಸ್ಥರ ನಿಟ್ಟುಸಿರು: ಕಳೆದ ಹಲ ಸಮಯಗಳಿಂದ ಕರಡಿಗೋಡು ಸುತ್ತಮುತ್ತ ವ್ಯಾಪ್ತಿಯಲ್ಲಿ ಪುಂಡಾನೆಗಳ ಹಾವಳಿಯಿಂದ ವ್ಯಾಪಕ ಕೃಷಿ ಹಾನಿಯಾಗಿದ್ದು, ಬೆಳೆಗಾರರು ಮತ್ತು ಕೃಷಿಕರು ತೋಟಗಳಿಗೆ ತೆರಳಲಾಗದ ಪರಿಸ್ಥಿತಿ ನಿರ್ಮಾಣವಾಗಿತ್ತು. ಇದೀಗ ಪುಂಡಾನೆಯ ಸೆರೆಯಿಂದ ಈ ವಿಭಾಗದ ಗ್ರಾಮಸ್ಥರು ಒಂದಷ್ಟು ನಿಟ್ಟುಸಿರು ಬಿಡುವಂತಾಗಿದೆ.

ಮತ್ತೊಂದು ಗೋಶಾಲೆ ಆರಂಭಕ್ಕೆ ಪ್ರಸ್ತಾವನೆ ಸಲ್ಲಿಸಿ: ಡಿಸಿ ಸತೀಶ



ಮಡಿಕೇರಿ, ಡಿ.28– ಪ್ರಾಣಿ ದಯಾ ಸಂಘದ ವಾರ್ಷಿಕ ಮಹಾಸಭೆಯು ಜಿಲ್ಲಾಧಿಕಾರಿ ಡಾ.ಬಿ.ಸಿ.ಸತೀಶ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಕೊಡಗು ಜಿಲ್ಲೆಯಲ್ಲಿ ಮತ್ತೊಂದು ಗೋಶಾಲೆ ತೆರೆಯಲು ಭೂಮಿ ಕಾಯ್ದಿರಿಸಲು ಅಗತ್ಯ ಪ್ರಸ್ತಾವನೆ ಸಲ್ಲಿಸುವಂತೆ ಪಶುಪಾಲನೆ ಇಲಾಖೆ ಉಪ ನಿರ್ದೇಶಕರಿಗೆ ಜಿಲ್ಲಾಧಿಕಾರಿ ಡಾ.ಬಿ.ಸಿ. ಸತೀಶ ಅವರು ಸೂಚಿಸಿದರು.

ಈ ಕುರಿತು ಮಾಹಿತಿ ನೀಡಿದ ಪಶುಪಾಲನಾ ಇಲಾಖೆ ಉಪ ನಿರ್ದೇಶಕರಾದ ಸುರೇಶ್ ಭಟ್ ಅವರು ಜಿಲ್ಲೆಯ ಸೋಮವಾರಪೇಟೆ ತಾಲೂಕಿನ ನಾಗವಾರ ಗ್ರಾಮದ 1/1 ಸರ್ವೇ ನಂಬರಿನಲ್ಲಿ 40 ಎಕರೆ ಗೋಮಾಳ ಜಾಗವಿದ್ದು, ಅದನ್ನು ಕಾಯ್ದಿರಿಸಬೇಕಾಗಿ ಕೋರಿದರು.

ಪಶುಪಾಲನಾ ಇಲಾಖೆ ಉಪ ನಿರ್ದೇಶಕರಾದ ಡಾ.ಸುರೇಶ್ ಭಟ್ ಅವರು ಕರ್ನಾಟಕ ಜಾನುವಾರು ಪ್ರತಿಬಂಧಕ ಹಾಗೂ ಸಂರಕ್ಷಣಾ ನಿಯಮ ಅನುಷ್ಠಾನ, ತಾಲೂಕು ಪ್ರಾಣಿ ಮಿತ್ರ ಮಂಡಳಿ ರಚನೆ, ಪ್ರಾಣಿ ಸಹಾಯಕರ ಮತ್ತು ಪ್ರಾಣಿ ರಕ್ಷಕರನ್ನು ನೇಮಿಸುವುದು, ಪ್ರಾಣಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ವಿವಿಧ ಕಾಯ್ದೆ ಮತ್ತು ನಿಯಮಗಳ ಬಗ್ಗೆ ಅರಿವು ಮೂಡಿಸುವುದು, ಸರ್ಕಾರಿ ಗೋಶಾಲೆ ನಿರ್ವಹಣೆ ಮಾರ್ಗದರ್ಶಿ ನಿಯಮಗಳು, ನಿರ್ವಹಣಾ ಸಮಿತಿ, ಒಣ ಹುಲ್ಲು ಖರೀದಿ, ಪುಣ್ಯಕೋಟಿ ದತ್ತು ಯೋಜನೆ ಅನುಷ್ಠಾನ ಮತ್ತಿತರ ವಿಷಯಗಳ ಕುರಿತು ಸಭೆಯಲ್ಲಿ ಜಿಲ್ಲಾಧಿಕಾರಿ ಅವರ ಗಮನಕ್ಕೆ ತಂದರು.

ಕರ್ನಾಟಕ ಪ್ರಾಣಿ ಕಲ್ಯಾಣ ಮಂಡಳಿಯ ಸಂಯೋಜಕರಾದ ರಶ್ಮಿ ಡಿಸೋಜ, ಚಿಕ್ಕತೋಳೂರು ಕೃಷ್ಣ ಗೋಶಾಲೆಯ ಹರೀಶ್ ಆಚಾರ್ಯ ಮಾತನಾಡಿದರು.

ಜಿಪಂ ಸಿಇಒ ಡಾ.ಎಸ್.ಆಕಾಶ್ ಅವರು ಜಾನುವಾರು ಸಂರಕ್ಷಣೆ ಮತ್ತು ಗೋಶಾಲೆ ಆರಂಭ ಸಂಬಂಧಿಸಿದಂತೆ ಹಲವು ಮಾಹಿತಿ ನೀಡಿದರು. ಪ್ರಾಣಿದಯಾ ಸಂಘದ ಉಪಾಧ್ಯಕ್ಷರಾದ ಡಾ.ಕೆ.ಪಿ.ಅಯ್ಯಪ್ಪ, ಪ್ರಾದೇಶಿಕ ಸಾರಿಗೆ ಅಧಿಕಾರಿ ಎಸ್.ಎನ್.ಮಧುರ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ರಂಗಧಾಮಯ್ಯ, ಶಿವಶಂಕರ್, ಪಶುಪಾಲನಾ ಇಲಾಖೆಯ ಪಾಲಿಕ್ಲಿನಿಕ್ ವಿಭಾಗದ ಉಪ ನಿರ್ದೇಶಕ ಡಾ.ಚಿದಾನಂದ, ಪಶುಪಾಲನಾ ಇಲಾಖೆಯ ಸಹಾಯಕ ನಿರ್ದೇಶಕರಾದ ಪ್ರಸನ್ನ(ಮಡಿಕೇರಿ), ಬಾದಾಮಿ (ಸೋಮವಾರಪೇಟೆ), ಶ್ರೀದೇವ(ಕುಶಾಲನಗರ), ಡಾ.ಶಾಂತೇಶ್ (ಪೊನ್ನಂಪೇಟೆ), ಡಾ.ನವೀನ್ ಕುಮಾರ್ (ವಿರಾಜಪೇಟೆ), ಪೊಲೀಸ್ ಇನ್ಸ್‌ಪೆಕ್ಟರ್ ಮೇದಪ್ಪ ಅನೂಪ್ ಮಾದಪ್ಪ, ನಗರಸಭೆ ಎಂಜಿನಿಯರ್ ಸೌಮ್ಯ, ರಂಜಿತ್ ಕವಲಪಾರ ಇತರರು ಇದ್ದರು.

ಕೋವಿಡ್ ರೂಪಾಂತರಿ ವೈರಸ್ ಅಪಾಯಕಾರಿ ಅಲ್ಲ, ಆದರೂ ಬೂಸ್ಟರ್ ಡೋಸ್ ಅಗತ್ಯ

ವಿರಾಜಪೇಟೆ, ಡಿ.28– ಕೋವಿಡ್ ರೂಪಾಂತರಿ ವೈರಾಣು ತೀರಾ ಅಪಾಯಕಾರಿಯಲ್ಲವಾದರೂ ಜನರು ಜಾಗೃತಿ ವಹಿಸಬೇಕು. ಬೂಸ್ಟರ್ ಡೋಸ್ ಲಸಿಕೆ ಪಡೆಯದವರು ತಕ್ಷಣ ಲಸಿಕೆ ಪಡೆಯುವುದು ಉತ್ತಮ ಎಂದು ಸಾರ್ವಜನಿಕ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ. ಜೆ. ಶ್ರೀನಿವಾಸ್ ತಿಳಿಸಿದರು.



ಸರ್ಕಾರಿ ಆಸ್ಪತ್ರೆಯಲ್ಲಿ ಕೋವಿಡ್ ಚಿಕಿತ್ಸೆಗೆ ಎಲ್ಲಾ ವ್ಯವಸ್ಥೆ ಮಾಡಲಾಗಿದ್ದು, ಈಗಾಗಲೇ ಕೋವ್ಯಾಕ್ಸಿನ್ ಲಸಿಕೆ ಲಭ್ಯವಿದೆ. ಈ ಲಸಿಕೆ ಪಡೆದವರು ಬೂಸ್ಟರ್ ಡೋಸ್ ಪಡೆಯಬಹುದು. ಕೋವಿಶೀಲ್ಡ್ ಲಸಿಕೆಯನ್ನು ಶೀಘ್ರವಾಗಿ ಪೂರೈಕೆ ಮಾಡುವುದಾಗಿ ಜಿಲ್ಲಾಡಳಿತ ಭರವಸೆ ನೀಡಿದೆ. ಲಭ್ಯವಾದ ಬಳಿಕ ಇದನ್ನು ಪಡೆದವರು ಬೂಸ್ಟರ್ ಡೋಸ್ ಪಡೆಯಬಹುದು ಎಂದು ಅವರು ತಿಳಿಸಿದರು.

ಐಸಿಯುನಲ್ಲಿ 24 ಆಕ್ಸಿಜನ್ ಘಟಕ, ಸಾಮಾನ್ಯ ವಾರ್ಡಿನಲ್ಲಿ 72 ಆಕ್ಸಿಜನ್‌ಯುಕ್ತ ಹಾಸಿಗೆ ಸಜ್ಜಕ್ಕೆ ಮೀಸಲಿಡಲಾಗಿದೆ. ಆಕ್ಸಿಜನ್‌ಗಾಗಿ ಘಟಕಕ್ಕೆ ಚಾಲನೆ ನೀಡಲಾಗಿದೆ. ಇದರ ಕೊರತೆ ಇಲ್ಲ. ಜೊತೆಗೆ 448 ಪಿಪಿಇ ಕಿಟ್, ಮಾಸ್ಕ್ ಸೇರಿದಂತೆ ಅಗತ್ಯ ಪರಿಕರ, ಔಷಧಿಗಳೆಲ್ಲವೂ ಲಭ್ಯ ಇದ್ದು, ಒಂದು ತಿಂಗಳ ಬಳಕೆಗೆ ಅಗತ್ಯ ದಾಸ್ತಾನು ಇರುವುದಾಗಿ ತಿಳಿಸಿದರಲ್ಲದೆ, ಇಲ್ಲಿ ಕೋವಿಡ್ ರೋಗಿಗಳಿಗೆ ಅಗತ್ಯ ಸೇವೆ ಇದ್ದು, ನಿತ್ಯ ಬಳಕೆ ತುರ್ತು ಚಿಕಿತ್ಸಾ ವಾಹನ 108 ಸೇವೆಯ ಹಾಗೂ ನಗು–ಮಗು ವಾಹನ ಸೇರಿದಂತೆ ಮೂರು ತುರ್ತು ಚಿಕಿತ್ಸ ವಾಹನಗಳು ಲಭ್ಯವಿರುವುದಾಗಿ ತಿಳಿಸಿದರು.


ಈಗ ಸಾಮಾನ್ಯ ತಜ್ಞ ವೈದ್ಯರು ಹಾಗೂ ಅರವಳಿಕೆ ತಜ್ಞ ವೈದ್ಯರ ಅಗತ್ಯ ಇರುವುದರಿಂದ ಈ ಸಂಬಂಧ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಈಗಿನ ರೂಪಾಂತರಿ ವೈರಸ್ ಬೇಗನೆ ಹರಡಿದರು ಸಹ ತೀವ್ರತೆ ಇಲ್ಲವಾದರು ಸರ್ಕಾರದ ನಿಯಮದಂತೆ ಅಂತರ ಪಾಲನೆ ಮಾಡುವುದು ಹಾಗೂ ಸಭೆ ಸಮಾರಂಭಗಳಲ್ಲಿ ಮಾಸ್ಕ್ ಧರಿಸಬೇಕು. ಆರೋಗ್ಯದಲ್ಲಿ ಯಾವುದೇ ತೊಂದರೆ ಕಾಣಿಸಿಕೊಂಡರು ತಕ್ಷಣ ವೈದ್ಯರ ಸಲಹೆ ಪಡೆಯುವಂತೆ ತಮ್ಮನ್ನು ಭೇಟಿ ಮಾಡಿದ ಪತ್ರಕರ್ತರಿಗೆ ತಿಳಿಸಿದರು.

ಇಂದು ವಿಶ್ವ ಮಾನವ ದಿನಾಚರಣೆ

ಮಡಿಕೇರಿ, ಡಿ.28– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕ ಹಾಗೂ ಕೊಡಗು ಜಿಲ್ಲಾ ಜಾನಪದ ಪರಿಷತ್ ಸಹಕಾರದಲ್ಲಿ 'ವಿಶ್ವ ಮಾನವ ದಿನಾಚರಣೆ'ಯು ಡಿ.29 ರಂದು ಬೆಳಗ್ಗೆ 10.30 ಗಂಟೆಗೆ ನಗರದ 'ಕುವೆಂಪು ಪುತ್ಥಳಿ' ಆವರಣದಲ್ಲಿ ನಡೆಯಲಿದೆ. ಗಣ್ಯರು ಪಾಲ್ಗೊಳ್ಳಲಿದ್ದಾರೆ.

ಅಮ್ಮಣಮ್ಮ ನಿಧನ

ಕುಶಾಲನಗರ, ಡಿ.28– ಸಮೀಪದ ಹೆಬ್ಬಾಲೆ ಗ್ರಾಮದ ಕನಕ ಬ್ಲಾಕ್ ನಿವಾಸಿ ದಿ.ಮರಿಯಪ್ಪ ಮಾಸ್ಟರ್ ಅವರ ಧರ್ಮಪತ್ನಿ ಅಮ್ಮಣಮ್ಮ (82) ಬುಧವಾರ ಬೆಳಗ್ಗೆ ಅನಾರೋಗ್ಯದಿಂದ ನಿಧನರಾಗಿದ್ದಾರೆ. ಮೃತರು ಇಬ್ಬರು ಪುತ್ರರು ಹಾಗೂ ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಮೃತರ ಅಂತ್ಯ ಸಂಸ್ಕಾರವು ಸ್ವಗ್ರಾಮ ಹೆಬ್ಬಾಲೆಯಲ್ಲಿ ನಡೆಯಿತು.



ಅಪರಿಚಿತ ವಾಹನ ಡಿಕ್ಕಿ: ಬೈಕ್ ಸವಾರ ಸಾವು

ಬೇಗೂರು(ಗುಂಡ್ಲುಪೇಟೆ), ಡಿ.28– ಸಮೀಪದ ಅರೇಪುರ ಗೇಟ್‌ನ ರಾಷ್ಟ್ರೀಯ ಹೆದ್ದಾರಿ (766) ಬಳಿ ಬೈಕ್‌ವೊಂದಕ್ಕೆ ಅಪರಿಚಿತ ವಾಹನ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸ್ಥಳದಲ್ಲೇ ಸಾವಿಗೀಡಾದ ಘಟನೆ ಮಂಗಳವಾರ ರಾತ್ರಿ ನಡೆದಿದೆ.



ನಂಜನಗೂಡಿನಿಂದ ಬರಗಿ ಗ್ರಾಮಕ್ಕೆ ತೆರಳುತ್ತಿದ್ದ ಬರಗಿ ಗ್ರಾಮದ ನಿವಾಸಿ ಚೇತು (30) ಎಂಬಾತನೇ ಸಾವನ್ನಪ್ಪಿದ ಸವಾರ. ಅರೇಪುರ ಗೇಟ್‌ನ ಬಳಿ ಬೈಕ್‌ನಲ್ಲಿ ಬರುತ್ತಿದ್ದ ಸಂದರ್ಭ ಅಪರಿಚಿತ ವಾಹನವೊಂದು ಡಿಕ್ಕಿಯಾಗಿ ಸ್ಥಳದಲ್ಲೇ ಸಾವಿಗೀಡಾಗಿದ್ದಾನೆ. ವಿಷಯ ತಿಳಿದ ಬೇಗೂರು ಪೊಲೀಸರು ಸ್ಥಳಕ್ಕೆ ತೆರಳಿ ಶವವನ್ನು ಬೇಗೂರಿನ ಸಮುದಾಯ ಆರೋಗ್ಯ ಕೇಂದ್ರದ ಶವಾಗಾರಕ್ಕೆ ಸಾಗಿಸಿದ್ದು, ಮುಂದಿನ ತನಿಖೆ ಕೈಗೊಂಡಿದ್ದಾರೆ.

ಸಕ್ಕರೆ ಕಾರ್ಖಾನೆ ನೌಕರರ ಪ್ರತಿಭಟನೆ



ಚಾಮರಾಜನಗರ, ಡಿ.28– ಸಕ್ಕರೆ ಉದ್ದಿಮೆಗಳ ಏಳನೇ ತ್ರಿಪಕ್ಷೀಯ ವೇತನ ಒಪ್ಪಂದದ ಪ್ರಕಾರ ಸರ್ಕಾರದ ಆದೇಶವನ್ನು ಜಾರಿ ಮಾಡಿ ಹಿಂಬಾಕಿ ಪಾವತಿಸಬೇಕು ಎಂಬ ಬೇಡಿಕೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ನಗರದಲ್ಲಿ ಬಣ್ಣಾರಿ ಅಮ್ಮನ್ ಸಕ್ಕರೆ ಕಾರ್ಖಾನೆ ಕಾರ್ಮಿಕರ ಸಂಘದಿಂದ ಪ್ರತಿಭಟನೆ ನಡೆಯಿತು.

ಇಲ್ಲಿನ ಶ್ರೀಚಾಮರಾಜೇಶ್ವರಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು ಅಲ್ಲಿಂದ ಭುವನೇಶ್ವರಿ ವೃತ್ತ, ಬಿ.ರಾಚಯ್ಯ ಜೋಡಿ ರಸ್ತೆ ಮೂಲಕ ಜಿಲ್ಲಾಡಳಿತ ಭವನಕ್ಕೆ ತೆರಳಿ ಕೆಲಕಾಲ ಪ್ರತಿಭಟನೆ ನಡೆಸಿ, ಬೇಡಿಕೆ ಈಡೇರಿಸುವಂತೆ ಘೋಷಣೆ ಕೂಗಿದರು.

ಬಣ್ಣಾರಿ ಅಮ್ಮನ್ ಸಕ್ಕರೆ ಕಂಪನಿಗಳ ಇತರೆ ಘಟಕಗಳಲ್ಲಿ ನೀಡಿರುವಂತೆ ಎಲ್ಲಾ ಕಾರ್ಮಿಕರಿಗೆ ವಸತಿ (ಕ್ವಾರ್ಟರ್ಸ್) ಸೌಕರ್ಯವನ್ನು ನೀಡಬೇಕು. ಅಲ್ಲಿಯವರೆಗೂ ಮಾರುಕಟ್ಟೆ ದರಕ್ಕೆ ಅನುಗುಣವಾಗಿ ಮನೆ ಬಾಡಿಗೆ ಭತ್ಯೆ ನೀಡಬೇಕು ಎಂದು ಆಗ್ರಹಿಸಿದರು.

ದೂರದ ಊರು ಹಾಗೂ ಪಟ್ಟಣಗಳಿಂದ ಕಾರ್ಖಾನೆಗೆ ಕೆಲಸಕ್ಕೆ ಬರುವ ಕಾರ್ಮಿಕರಿಗೆ ಕಂಪನಿಯಿಂದ ಸಾರಿಗೆ ವ್ಯವಸ್ಥೆ ಕಲ್ಪಿಸಬೇಕು. ತರಬೇತಿ ಅವಧಿ ಮುಗಿದಿರುವ 20 ಕಾರ್ಮಿಕರನ್ನು ಖಾಯಂಗೊಳಿಸಬೇಕು ಎಂದು ಒತ್ತಾಯಿಸಿದರು.

ಕಾರ್ಖಾನೆಯ ಮುಂದಿನ ಎಲ್ಲಾ ಹಂತದ ನೇಮಕಾತಿಗಳಲ್ಲಿ ಸ್ಥಳೀಯರನ್ನೇ (ಕಬ್ಬು ಬೆಳೆಗಾರರ ಮಕ್ಕಳಿಗೆ ಆದ್ಯತೆ ಮೇರೆಗೆ) ನೇಮಕ ಮಾಡಿಕೊಳ್ಳಬೇಕು. ಕಾರ್ಖಾನೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ಕಾರ್ಮಿಕರಿಗೆ ಕಾರ್ಮಿಕ ಕಾಯ್ದೆಗಳ ಪ್ರಕಾರ ಕನಿಷ್ಠ ವೇತನ, ಪಿಎಫ್, ಇಎಸ್‌ಐ, ಬೋನಸ್, ಸಮವಸ್ತ್ರ, ಶೂ ಮತ್ತು ಕ್ಯಾಂಟೀನ್ ವ್ಯವಸ್ಥೆಯನ್ನು ಜಾರಿ ಮಾಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಕಾರ್ಮಿಕರ ಸಂಘದ ಅಧ್ಯಕ್ಷ ಕೆ.ಎಸ್. ಭೃಂಗೇಶ್, ಪ್ರಧಾನ ಕಾರ್ಯದರ್ಶಿ ಎಂ. ರಾಜಶೇಖರ ಮೂರ್ತಿ, ಉಪಾಧ್ಯಕ್ಷ ಪುಟ್ಟಸ್ವಾಮಿ, ಜಂಟಿ ಕಾರ್ಯದರ್ಶಿ ಹರೀಶ್, ಖಜಾಂಚಿ ಬಸವರಾಜು, ಕಾರ್ಯಕಾರಿ ಸಮಿತಿ ಸದಸ್ಯರಾದ ಸ್ವಾಮಿ, ಗಿರೀಶ್, ನಿಂಗರಾಜು, ನಾರಾಯಣ, ರಘು, ಯೋಗೇಶ್ ನಾಯಕ, ನಟರಾಜು, ಮೋಹನ್, ಮಹೇಶ್, ಎಐಯುಟಿಯುಸಿ ರಾಜ್ಯ ಜಂಟಿ ಕಾರ್ಯದರ್ಶಿ ಚಂದ್ರಶೇಖರ್ ಮೇಟಿ, ಮುಖಂಡರಾದ ಯಶೋಧರ್ ವಿ. ಮುದ್ದುಕೃಷ್ಣ, ಪುಟ್ಟರಾಜು ಸೇರಿದಂತೆ ಇತರರಿದ್ದರು.

ಕೊಳ್ಳೇಗಾಲ ನನಗೆ ಅಚ್ಚುಮೆಚ್ಚು

ವೇದ ಚಿತ್ರ ನೋಡಿ, ಆಶೀರ್ವದಿಸಲು ಶಿವಣ್ಣ ಮನವಿ

ಕೊಳ್ಳೇಗಾಲ, ಡಿ.28– ವೇದ ಚಿತ್ರದ ಪ್ರಮೋಷನ್‌ಗಾಗಿ ಕೊಳ್ಳೇಗಾಲದ ಕೃಷ್ಣ ಚಿತ್ರಮಂದಿರಕ್ಕೆ ಹ್ಯಾಟ್ರಿಕ್ ಹೀರೋ ಶಿವರಾಜ್‌ಕುಮಾರ್ ಅವರು ತಮ್ಮ ಚಿತ್ರ ತಂಡದೊಂದಿಗೆ ಭೇಟಿ ನೀಡಿದ್ದರು.



ಈ ವೇಳೆ ಶಿವರಾಜ್ ಕುಮಾರ್ ಅವರನ್ನು ನೋಡಲು ಅಭಿಮಾನಿಗಳ ಸಾಗರವೇ ಸೇರಿತ್ತು. ಜಯಘೋಷ, ಹೂವಿನ ಮಳೆ ಸುರಿಸಿದ ಅಭಿಮಾನಿಗಳು ಜೈಕಾರ ಹಾಕಿ ಸಂಭ್ರಮಿಸಿದರು. ಅಭಿಮಾನಿಗಳನ್ನು ನಿಯಂತ್ರಿಸಲು ಪೊಲೀಸರು ಹರಸಾಹಸಪಟ್ಟರು. ಈ ವೇಳೆ ನೂಕು–ನುಗ್ಗಲು ನಿಯಂತ್ರಿಸಲು ಲಘು ಲಾಠಿ ಪ್ರಹಾರ ನಡೆಸಬೇಕಾಯಿತು. ಈ ವೇಳೆ ಮಾತನಾಡಿದ ಶಿವರಾಜ್ ಕುಮಾರ್, ಚಾ.ನಗರ ನನ್ನ ತವರು ಜಿಲ್ಲೆ, ಕೊಳ್ಳೇಗಾಲ ನನಗೆ ಹೆಚ್ಚು ಇಷ್ಟವಾದ ತಾಲೂಕು, ಅಂದು ಮಾದೇಶ, ಇಂದು ವೇದ. ವೇದ ಚಿತ್ರವನ್ನು ನೋಡಿ ಆಶೀರ್ವದಿಸಿ, ಪುನೀತ್ ಮನಸ್ಸಲ್ಲಿರಲಿ, ದೇವರು ದೇವಸ್ಥಾನದಲ್ಲಿರಲಿ ಹಾಗೆಯೇ ಪುನೀತ್ ನಮ್ಮ ಮನಸ್ಸಿನಲ್ಲಿರಲಿ, ನಾನು ಅವನ ಅಣ್ಣ, ನನಗೂ ಅಗಲಿಕೆಗಾಗಿ ನೋವಿದೆ. ಅಭಿಮಾನಿಗಳು ಅರ್ಥಮಾಡಿಕೊಳ್ಳಿ ಎಂದು ಮನವಿ ಮಾಡಿದರು.

ಇದೇ ವೇಳೆ ವೇದ ಹೇಗಿದೆ ಎಂಬ ಶಿವರಾಜ್ ಕುಮಾರ್ ಅವರ ಪ್ರಶ್ನೆಗೆ ಅಭಿಮಾನಿಗಳು ಸೂಪರ್, ಸೂಪರ್ ಎನ್ನುವ ಮೂಲಕ ಉತ್ತರಿಸಿದರು. ಈ ಸಂದರ್ಭದಲ್ಲಿ ವೇದ ಚಿತ್ರದ 2 ಹಾಡುಗಳನ್ನು ಹಾಡಿ ನರ್ತಿಸಿ ರಂಜಿಸಿದರು.


ಇಂದು ನಗರದಲ್ಲಿ ವಿಶ್ವಮಾನವ ದಿನಾಚರಣೆ

ಚಾಮರಾಜನಗರ, ಡಿ.28– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ರಾಷ್ಟ್ರಕವಿ ಕುವೆಂಪು ಅವರ ಜನ್ಮದಿನದ ಅಂಗವಾಗಿ ವಿಶ್ವಮಾನವ ದಿನಾಚರಣೆ ಕಾರ್ಯಕ್ರಮವನ್ನು ಡಿ.29ರಂದು ಬೆಳಿಗ್ಗೆ 11 ಗಂಟೆಗೆ ನಗರದ ವರನಟ ಡಾ. ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ವಸತಿ, ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ವಿ. ಸೋಮಣ್ಣ ಅವರು ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಸಿ. ಪುಟ್ಟರಂಗಶೆಟ್ಟಿ ಅಧ್ಯಕ್ಷತೆ ವಹಿಸುವರು. ಲೋಕಸಭಾ ಸದಸ್ಯ ವಿ. ಶ್ರೀನಿವಾಸ ಪ್ರಸಾದ್, ಶಾಸಕರಾದ ಆರ್. ನರೇಂದ್ರ, ಎನ್. ಮಹೇಶ್, ಸಿ.ಎಸ್. ನಿರಂಜನ ಕುಮಾರ್, ಮರಿತಿಬ್ಬೇಗೌಡ, ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ. ಮಾದೇಗೌಡ, ಕಾವೇರಿ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜಿ. ನಿಜಗುಣರಾಜು, ನಗರಸಭೆ ಅಧ್ಯಕ್ಷೆ ಸಿ.ಎಂ. ಆಶಾ, ಉಪಾಧ್ಯಕ್ಷೆ ಪಿ. ಸುಧಾ, ಸದಸ್ಯೆ ಹೆಚ್.ಎಸ್. ಮಮತ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಗುಂಡ್ಲುಪೇಟೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಉಮೇಶ್ ಅವರು ಮುಖ್ಯ ಭಾಷಣ ಮಾಡುವರು.

ಮಾಜಿ ಶಾಸಕ ಎಸ್ ಬಾಲರಾಜುಗೆ ಮಾತೃವಿಯೋಗ

ಯಳಂದೂರು ಡಿ.28– ತಾಲೂಕಿನ ಮದ್ದೂರು ಗ್ರಾಮದ ನಿವಾಸಿ, ಮಾಜಿ ಶಾಸಕ ಎಸ್. ಬಾಲರಾಜು ಅವರ ತಾಯಿ ಲಕ್ಷ್ಮಮ್ಮ ಸಂಜೀವಯ್ಯ (78) ಅವರು ಇಂದು (ಬುಧವಾರ) ನಿಧನರಾದರು.ಮೃತರ ಅಂತ್ಯಕ್ರಿಯೆ ಸ್ವಗ್ರಾಮ ಮದ್ದೂರಿನಲ್ಲಿ ನಡೆಯಿತು.



ಅರಣ್ಯ ಇಲಾಖೆಯ ನೌಕರರಾಗಿದ್ದ ಸಂಜೀವಯ್ಯ ಅವರನ್ನು ವಿವಾಹವಾಗಿದ್ದ ಲಕ್ಷ್ಮಮ್ಮನವರು 1966ರಲ್ಲಿ ಆರೋಗ್ಯ ಇಲಾಖೆಯಲ್ಲಿ ಎಎನ್‌ಎಂ ಆಗಿ 38 ವರ್ಷಗಳ ಕಾಲ ಸೇವೆ ಸಲ್ಲಿಸಿದ್ದರು. ಸುತ್ತಮುತ್ತಲಿನ ಜನರಲ್ಲಿ ನರ್ಸಮ್ಮ ಎಂದೇ ಎಂಬ ಖ್ಯಾತರಾಗಿದ್ದ ಇವರು ಯಳಂದೂರಿನ ಬಹುತೇಕ ಹಳ್ಳಿಯಲ್ಲಿ ಸೇವೆ ಸಲ್ಲಿಸಿ 13000ಕ್ಕೂ ಹೆಚ್ಚು ಸಾಮಾನ್ಯ ಹೆರಿಗೆಯನ್ನು ಮಾಡಿಸಿದ್ದು ಇತಿಹಾಸ. ವಾಹನ ಸೌಲಭ್ಯ ಇಲ್ಲದ ಕಾಲದಲ್ಲಿ ಊರಿನಿಂದ ಊರಿಗೆ ನಡೆದು ಅವರ ಸಂಕಷ್ಟಕ್ಕೆ ನೆರವಾಗುತ್ತಿದ್ದ ಇವರು ಎಲ್ಲರ ಪ್ರೀತಿಪಾತ್ರರಾಗಿದ್ದರು.

ಮೃತರಿಗೆ ನಾಲ್ವರು ಮಕ್ಕಳಿದ್ದು, ಕಿರಿಯ ಪುತ್ರ ಮಾಜಿ ಶಾಸಕ ಎಸ್.ಬಾಲರಾಜ್ ಸೇರಿದಂತೆ ಯುವರಾಜ ಕಾಲೇಜು ನಿವೃತ್ತ ಪ್ರಾಂಶುಪಾಲ ಡಾ. ರುದ್ರಯ್ಯ, ರೇಷ್ಮೆ ಇಲಾಖೆ ನಿರ್ದೇಶನಾಲಯದ ನಿವೃತ್ತ ಅಧಿಕಾರಿ ಎಸ್. ಸುರೇಶ್, ಮಗಳು ಅನ್ನಪೂರ್ಣ, ಅಳಿಯ ಸಾರ್ವಜನಿಕ ಶಿಕ್ಷಣ ಇಲಾಖೆಯ ನಿರ್ದೇಶಕರಾಗಿದ್ದ ಕೆ. ರಾಮಯ್ಯ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಪ್ರತ್ಯೇಕ ಮಾದಿಗ ಜಾತಿ ಪ್ರಮಾಣಪತ್ರಕ್ಕೆ ಆಗ್ರಹಿಸಿ ಸಿಎಂಗೆ ಮನವಿ

ಚಾಮರಾಜನಗರ, ಡಿ.28– ಪರಿಶಿಷ್ಟ ಜಾತಿ, ಆದಿ ಕರ್ನಾಟಕ, ಆದಿದ್ರಾವಿಡ, ಜಾತಿ ಗುಂಪು ಗೊಂದಲ ನಿವಾರಣೆಗಾಗಿ ಪ್ರತ್ಯೇಕ ಮಾದಿಗ ಜಾತಿ ಪ್ರಮಾಣಪತ್ರ ನೀಡುವಂತೆ ಒತ್ತಾಯಿಸಿ ಪ್ರಗತಿಪರ ಮಾದಿಗ ಸಂಘಟನೆಗಳ ಒಕ್ಕೂಟದ ವತಿಯಿಂದ ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿ ರಮೇಶ್ ಅವರ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.



ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿರುವ ಅಸ್ಪೃಶ್ಯತೆ ಜಾತಿಗಳಲ್ಲಿ ಮಾದಿಗ ಸಮುದಾಯವು ಪ್ರಮುಖವಾದ ಜಾತಿಗಳಲ್ಲಿ ಒಂದಾಗಿದೆ. ಇಡೀ ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳಲ್ಲಿ ಅತಿ ಹೆಚ್ಚು ಜನಸಂಖ್ಯೆಯನ್ನು ಹೊಂದಿದೆ. ಹಾವನೂರು ವರದಿ ಪ್ರಕಾರ ಮಾದಿಗ ಮತ್ತು ಮಾದಿಗ ಸಂಬಂಧಿತ ಜಾತಿಗಳು ಒಟ್ಟು ಜನಸಂಖ್ಯೆಯಲ್ಲಿ ಶೇ.57.2 ರಷ್ಟು ಜನಸಂಖ್ಯೆಯನ್ನು ಹೊಂದಿದೆ. ರಾಜ್ಯದ ಹಳೇ ಮೈಸೂರು ಪ್ರಾಂತ್ಯದ ಜಿಲ್ಲೆಗಳಲ್ಲಿ ಈ ಮಾದಿಗ ಮತ್ತು ಮಾದಿಗ ಸಂಬಂಧಿತ ಜಾತಿಯ ಜನರು ಹೊಂದಿರುವ ಜಾತಿ ಪ್ರಮಾಣಪತ್ರವು 1925 ಅಕ್ಟೋಬರ್ 23 ರ ಮೈಸೂರು ಪತ್ರದ ಆದೇಶದ ಪ್ರಕಾರ ಆದಿಕರ್ನಾಟಕ ಹಾಗೂ ಆದಿದ್ರಾವಿಡ ಎಂದು ಒಂದಕ್ಕಿಂತಲ್ಲೂ ಹೆಚ್ಚಿರುವ ಜಾತಿಯ ಗುಂಪುಗಳ ಹೆಸರಿನಿಂದ ಪಡೆದುಕೊಳ್ಳಲಾಗುತ್ತಿದೆ.

ಕರ್ನಾಟಕ ಸರ್ಕಾರವು ಪರಿಶಿಷ್ಟ ಜಾತಿಗಳ ಅಭಿವೃದ್ಧಿ ದೃಷ್ಟಿಯಿಂದ ಅನೇಕ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿ ಗೊಳಿಸಿರುತ್ತದೆ. ಅದರಲ್ಲೂ ಪ್ರಮುಖ ಜಾತಿಗಳ ಹೆಸರಿನಲ್ಲಿ ನಿಗಮಗಳನ್ನು ಸ್ಥಾಪಿಸಿ ನಿರ್ದಿಷ್ಟ ಜಾತಿ ಅಥವಾ ಜಾತಿಗಳ ಗುಂಪಿಗೆ ಸೀಮಿತಗೊಳಿಸಿರುತ್ತದೆ. ಸರ್ಕಾರದ ನಿಗಮದಿಂದ ಸೌಲಭ್ಯ ಪಡೆಯಲು ಮತ್ತು ನಮ್ಮ ಜನಸಂಖ್ಯೆ ನಿರ್ದಿಷ್ಟವಾಗಿ ತಿಳಿಯಲು ಪರಿಶಿಷ್ಟ ಜಾತಿಯಲ್ಲಿನ ಉಪ ಜಾತಿ ಕಾಲಂಗಳಲ್ಲಿ ಆದಿಕರ್ನಾಟಕ/ ಆದಿದ್ರಾವಿಡ/ ಆದಿಆಂಧ್ರ ಬದಲಿಗೆ ಮಾದಿಗ ಎಂದು ಜಾತಿ ಪ್ರಮಾಣಪತ್ರ ನೀಡಿ ಪರಿಶಿಷ್ಟ ಜಾತಿಗಳಲ್ಲಿ ಉಂಟಾಗಿರುವ ಗೊಂದಲ ನಿವಾರಿಸಿಕೊಡಬೇಕು ಎಂದು ಮನವಿಯಲ್ಲಿ ಪ್ರಗತಿಪರ ಮಾದಿಗ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ, ನಗರಸಭಾ ಸದಸ್ಯ ಮಹದೇವಯ್ಯ ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಒಕ್ಕೂಟದ ಕಾನೂನು ಸಲಹೆಗಾರ ಬೂದಿತಿಟ್ಟು ಎಲ್. ರಾಜೇಂದ್ರ, ಗೌರವಾಧ್ಯಕ್ಷ ಹೆಚ್.ಮೂರ್ತಿ, ಸಂಚಾಲಕ ನಾಗರಾಜು, ಪ್ರಧಾನ ಕಾರ್ಯದರ್ಶಿ ರಾಮಸಮುದ್ರ ಶಿವಕುಮಾರ್, ಖಜಾಂಚಿ ಸಿ.ಚನ್ನಬಸಯ್ಯ, ಸದಸ್ಯರಾದ ಅರಕಲವಾಡಿ ಮಹದೇವಯ್ಯ, ಆರ್.ಎನ್.ಶಿವಣ್ಣ, ಶಿವಮಲ್ಲು, ಬಿ.ಸಿದ್ದರಾಜು, ಯಜಮಾನರಾದ ಎಂ.ಲಿಂಗಯ್ಯ, ನಿಂಗಣ್ಣ, ಮಹದೇವಯ್ಯ, ನಿಂಗಯ್ಯ ಹಾಜರಿದ್ದರು.

ಗಣಿ ಇಲಾಖೆ ಡಿಡಿ ಎತ್ತಂಗಡಿ

ಚಾಮರಾಜನಗರ, ಡಿ.28– ತಾಲೂಕಿನ ಬಿಸಲವಾಡಿ ಗ್ರಾಮದ ಬಳಿ ಬಿಳಿಕಲ್ಲು ಕ್ವಾರಿಯಲ್ಲಿ ಗುಡ್ಡ ಕುಸಿದು ಮೂವರು ಕಾರ್ಮಿಕರು ಮೃತಪಟ್ಟ ಘಟನೆಯ ಬೆನ್ನಲ್ಲೇ ಜಿಲ್ಲೆಯ ಗಣಿ ಮತ್ತು ಭೂವಿಜ್ಞಾನ ಇಲಾಖೆ ಉಪನಿರ್ದೇಶಕ ಕೆ.ಎಂ. ನಂಜುಂಡಸ್ವಾಮಿ ಅವರನ್ನು ಎತ್ತಂಗಡಿ ಮಾಡಲಾಗಿದೆ.

ಈ ಬಗ್ಗೆ ಸರ್ಕಾರದ ಕಾರ್ಯದರ್ಶಿ ಆದೇಶ ಹೊರಡಿಸಿದ್ದಾರೆ. ತೆರವಾದ ಜಿಲ್ಲೆಯ ಗಣಿ ಮತ್ತು ಭೂವಿಜ್ಞಾನ ಇಲಾಖೆ ಉಪನಿರ್ದೇಶಕ ಸ್ಥಾನಕ್ಕೆ ಮೈಸೂರು ಜಿಲ್ಲೆಯ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಭೂವಿಜ್ಞಾನಿಗಳಾದ ರಶ್ಮಿ ಅವರಿಗೆ ಹೆಚ್ಚುವರಿ ಪ್ರಭಾರ ವಹಿಸಲಾಗಿದೆ.

ಜಿಲ್ಲೆಯಿಂದ ಎತ್ತಂಗಡಿಯಾದ ನಂಜುಂಡಸ್ವಾಮಿ ಅವರನ್ನು ಮೈಸೂರಿನ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಜಾಗೃತಿ ದಳಕ್ಕೆ ನಿಯೋಜಿಸಲಾಗಿದೆ.

ಸಫಾಯಿ ಕರ್ಮಚಾರಿಗಳಿಗೆ ನಿಗದಿತ ಅವಧಿಯಲ್ಲಿ ವೇತನ ಪಾವತಿಗೆ ಡಿಸಿ ರಮೇಶ್ ಸೂಚನೆ

ಚಾಮರಾಜನಗರ, ಡಿ.28– ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಫಾಯಿ ಕರ್ಮಚಾರಿಗಳಿಗೆ ಪ್ರತಿ ಮಾಹೆ ನಿಗದಿಪಡಿಸಲಾಗಿರುವ ವೇತನವನ್ನು ನಿಗದಿತ ಅವಧಿಯಲ್ಲಿಯೇ ಪಾವತಿಸುವಂತೆ ಜಿಲ್ಲಾಧಿಕಾರಿ ಡಿ.ಎಸ್. ರಮೇಶ್ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಡೆದ ಮ್ಯಾನುವೆಲ್ ಸ್ಕ್ಯಾವೆಂಜಿಂಗ್ ನಿಷೇಧ ಮತ್ತು ಪುನರ್ವಸತಿ ಕಾಯ್ದೆ ಅನುಷ್ಠಾನದ ಜಿಲ್ಲಾ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿನ ಗ್ರಾಮ ಪಂಚಾಯಿತಿಗಳು ಹಾಗೂ ನಗರ, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಫಾಯಿ ಕರ್ಮಚಾರಿಗಳಿಗೆ ಪ್ರತಿ ಮಾಹೆ ವೇತನ ಪಾವತಿಯಾಗದೇ ಸಫಾಯಿ ಕರ್ಮಚಾರಿಗಳು ತೊಂದರೆಗೀಡಾಗಿರುವುದು ಗಮನಕ್ಕೆ ಬಂದಿದೆ. ಮುಂದಿನ ದಿನಗಳಲ್ಲಿ ಯಾವುದೇ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿಗಳು ವೇತನ ಪಾವತಿಯಲ್ಲಿ ವಿಳಂಬ ಧೋರಣೆ ಅನುಸರಿಸಬಾರದು. ಇದನ್ನು ಸಹಿಸಲಾಗುವುದಿಲ್ಲ ಎಂದು ತಿಳಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಎಸ್. ಕಾತ್ಯಾಯಿನಿ ದೇವಿ, ಜಿಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ. ಗಾಯತ್ರಿ, ಮ್ಯಾನುವೆಲ್ ಸ್ಕ್ಯಾವೆಂಜಿಂಗ್ ನಿಷೇಧ ಮತ್ತು ಪುನರ್ವಸತಿ ಕಾಯ್ದೆ ಅನುಷ್ಠಾನದ ಜಿಲ್ಲಾ ಜಾಗೃತಿ ಸಮಿತಿಯ ಸದಸ್ಯ ಶಂಕರ್, ಪುಷ್ಪಲತ, ಭಾಗ್ಯ, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಮಲ್ಲಿಕಾರ್ಜುನ, ನಗರಸಭೆ ಪೌರಾಯುಕ್ತ ರಾಮದಾಸ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ಸುಧಾ, ಎಲ್ಲಾ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲೂಕು ಸಮಾಜ ಕಲ್ಯಾಣಾಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

ಒಂದನೇ ಪುಟದಿಂದ

ವ್ಯವಸ್ಥೆ ವಿರುದ್ಧ ಭಾರಿ ಆಕ್ರೋಶ

ಪರದಾಡುತ್ತಿದ್ದಾರೆ. ಅವ್ಯವಸ್ಥೆ ಸರಿಪಡಿಸುವಂತೆ ಎಷ್ಟೇ ಮನವಿ ಮಾಡಿದರೂ, ಆಡಳಿತ ಮಂಡಳಿ ಸ್ಪಂದಿಸುತ್ತಿಲ್ಲ ಎಂದು ವಿದ್ಯಾರ್ಥಿಗಳು ದೂರಿದರು. ಮಾನಸ ಗಂಗೋತ್ರಿ ಸಂಶೋಧಕರ ವಿದ್ಯಾರ್ಥಿ ಸಂಘದ ಅಧ್ಯಕ್ಷ ನಟರಾಜ್ ಶಿವಣ್ಣ ಮಾತನಾಡಿ, ಮೈಸೂರು ವಿವಿಯ ನ್ಯೂಬ್ಲಾಕ್‌ನಲ್ಲಿರುವ ವಿದ್ಯಾರ್ಥಿನಿಲಯದಲ್ಲಿ ವಿದ್ಯಾರ್ಥಿಗಳು ಉಪಾಹಾರ ಸೇವಿಸುತ್ತಿದ್ದಾಗ, ಸತ್ತ ಇಲಿ ಪತ್ತೆಯಾಗಿದೆ. ಇದನ್ನು ನೋಡಿದ ಕೆಲ ವಿದ್ಯಾರ್ಥಿಗಳು ಅಸ್ವಸ್ಥರಾಗಿದ್ದಾರೆ. ಸದ್ಯ ಯಾವುದೇ ಅಪಾಯವಾಗಿಲ್ಲ. ವಿದ್ಯಾರ್ಥಿ ನಿಲಯದಲ್ಲಿ ಶುದ್ಧ ಆಹಾರ ನೀಡಲು ವಿವಿ ಮುಂದಾಗಬೇಕು. ವಿದ್ಯಾರ್ಥಿನಿಲಯ ದಲ್ಲಿರುವವರೆಲ್ಲರೂ ಬಡ ಕುಟುಂಬದ ವಿದ್ಯಾರ್ಥಿಗಳಾಗಿದ್ದು, ಅಧಿಕಾರಿಗಳು ಹಾಸ್ಟೆಲ್‌ನಲ್ಲಿನ ಅವ್ಯವಸ್ಥೆ ಸರಿಪಡಿಸಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.
ಸ್ಥಳಕ್ಕೆ ಆಗಮಿಸಿದ ಪ್ರಭಾರ ಕುಲಪತಿ ಪ್ರೊ.ರಾಜಶೇಖರ್ ವಿದ್ಯಾರ್ಥಿಗಳ ಸಮಸ್ಯೆ ಆಲಿಸಿದರು. ಅಲ್ಲದೆ, ಶೀಘ್ರದಲ್ಲೇ ಹಾಸ್ಟೆಲ್‌ನಲ್ಲಿನ ಪರಿಸ್ಥಿತಿ ಸುಧಾರಿಸಲು ಕ್ರಮ ಕೈಗೊಂಡು, ಸಮಸ್ಯೆಗಳ ಪರಿಹರಿಸುವುದಾಗಿ ಭರವಸೆ ನೀಡಿದ ಬಳಿಕ ವಿದ್ಯಾರ್ಥಿಗಳು ಪ್ರತಿಭಟನೆ ಕೈಬಿಟ್ಟರು. ಪ್ರತಿಭಟನೆಯಲ್ಲಿ ಮಾನಸ ಗಂಗೋತ್ರಿ ಸಂಶೋಧಕರ ವಿದ್ಯಾರ್ಥಿ ಸಂಘದ ಅಧ್ಯಕ್ಷ ನಟರಾಜ್ ಶಿವಣ್ಣ, ಪರಮಜ್ಯೋತಿ, ಗೌತಮ್, ಚೇತನ್, ಕಿರಣ್, ಮೋಹನ್, ರೋಹನ್ ಸೇರಿದಂತೆ ಹಲವು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಜನವರಿಯಲ್ಲಿ ಕೊರೊನಾ ಹೆಚ್ಚಳ ಸಾಧ್ಯತೆ

ಕೋವಿಡ್ ತಜ್ಞರ ಸಲಹಾ ಸಮಿತಿಯಲ್ಲಿ ನಡೆದ ಸಭೆಯ ಬಳಿಕ ಈ ಮಾಹಿತಿ ಹೊರಬಿದ್ದಿದ್ದು, ಮುಂದಿನ ತಿಂಗಳು ದೇಶದಲ್ಲಿ ಸೋಂಕು ಉತ್ತುಂಗಕ್ಕೇರಲಿದ್ದು ಎಚ್ಚರಿಕೆ ವಹಿಸು ವಂತೆ ಕೇಂದ್ರ ಸರ್ಕಾರ ಮುನ್ನೆಚ್ಚರಿಕೆ ನೀಡಿದೆ. ಜನವರಿಯಲ್ಲಿ ದೇಶದಲ್ಲಿ ಕೋವಿಡ್ ಪ್ರಕರಣಗಳ ಉಲ್ಬಣ ಹೆಚ್ಚಾಗಲಿದ್ದು ಮುಂದಿನ 40 ದಿನಗಳು ನಿರ್ಣಾಯಕ. ದೇಶದಲ್ಲಿ ಸೋಂಕು ಉತ್ತುಂಗಕ್ಕೇರಿದರೂ ಸಾವು ಮತ್ತು ಆಸ್ಪತ್ರೆಗೆ ದಾಖಲಾಗುವವರ ಸಂಖ್ಯೆ ತೀರಾ ಕಡಿಮೆ ಇರುತ್ತದೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ಹೇಳಿದೆ. ಈ ಹಿಂದೆ, ಕೋವಿಡ್–19 ರ ಹೊಸ ಅಲೆಯು ಪೂರ್ವ ಏಷ್ಯಾಕ್ಕೆ ಅಪ್ಪಳಿಸಿದ 30–35 ದಿನಗಳ ನಂತರ ಭಾರತ ಪ್ರವೇಶಿಸಿದ ಉದಾಹರಣ ಇದೆ. ಅದನ್ನು ಆದರಿಸಿ ತಜ್ಞರು ಈ ಎಚ್ಚರಿಕೆ ನೀಡಿದ್ದಾರೆ. ನಿರ್ಲಕ್ಷ್ಯ ವಹಿಸದೆ ಕೋವಿಡ್ ಮುನ್ನೆಚ್ಚರಿಕೆ ನಿರ್ವಹಿಸಿದರೆ ಪರಿಣಾಮಕಾರಿಯಾಗಿ ಪರಿಸ್ಥಿತಿ ಎದುರಿಸಬಹುದು. ಕೋವಿಡ್ ಉಪ ತಳಿ ಹೆಚ್ಚಳದಿಂದ ಸೋಂಕು ಹೆಚ್ಚಳ ನಿರೀಕ್ಷೆ ಇದೆ ಎಂದು ಆರೋಗ್ಯ ಸಚಿವಾಲಯ ಹೇಳಿದೆ. ಸೋಂಕಿನ ಅಲೆ ಹೆಚ್ಚಾದರೂ ಸೋಂಕಿನ ತೀವ್ರತೆ ಕಡಿಮೆಯಾಗಿದೆ ಎಂದು ಆರೋಗ್ಯ ಸಚಿವಾಲಯದ ಮೂಲಗಳು ತಿಳಿಸಿವೆ. ಕೋವಿಡ್ ಪ್ರಕರಣಗಳ ಹೊಸ ಉಲ್ಬಣ ಮತ್ತು ದೇಶದ ಸನ್ನದ್ಧತೆ ಎದುರಿಸಲು ಪ್ರಧಾನಿ ನರೇಂದ್ರ ಮೋದಿ ಮತ್ತು ಆರೋಗ್ಯ ಸಚಿವ ಮನ್ಸುಖ್ ಮಾಂಡವಿಯಾ ಮಹತ್ವದ ಸಭೆ ನಡೆಸಿದ್ದಾರೆ.

ಜ.5ರಂದು ಗಡ್ಕರಿ ಪರಿಶೀಲನೆ

ಹಿಡಿದಿವೆ. ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳ ಹೊರ ವಲಯದ ಬೈಪಾಸ್‌ನಲ್ಲಿ ವಾಹನಗಳು ಹಾದು ಹೋಗುತ್ತವೆ. ರಾಮನಗರ, ಚನ್ನಪಟ್ಟಣ, ಮದ್ದೂರು, ಮಂಡ್ಯಗಳ ಜನ ರಸ್ತೆ ಬಳಸಲು ಸಾಧ್ಯವಾಗುತ್ತಿಲ್ಲ. ಎಲ್ಲಿಯೂ ಎಂಟ್ರಿ–ಎಕ್ಸಿಟ್ ನಂತಹ ಸಂಪರ್ಕ ಕಲ್ಪಿಸಲಾಗಿಲ್ಲ. ಯೋಜನೆಯ ಉಸ್ತುವಾರಿ ಅಧಿಕಾರಿ ಯಾರಿಗೂ ಸಿಗುತ್ತಿಲ್ಲ. ಅವರೇನಾದರೂ ಮಂಡ್ಯದವರಿಗೆ ಸಿಕ್ಕರೆ ಕಟ್ಟಿ ಹಾಕಿ ಚಾಟಿಯಲ್ಲಿ ಹೊಡೆಯುತ್ತಾರೆ. ಮಂಡ್ಯ ಭಾಗದಲ್ಲಿ ಸಾವಿರಾರು ಎಕರೆ ಭೂಮಿ ಸ್ವಾಧೀನವಾಗಿದೆ. ಆ ಭಾಗದ ರೈತರು ರಸ್ತೆ ಬಳಸುವ ಹಾಗಿಲ್ಲ ಎಂದರೆ ಹೇಗೆ ಆ ಭಾಗ ಅಭಿವೃದ್ಧಿಯಾಗುವುದು ಹೇಗೆ ಎಂದು ಪ್ರಶ್ನಿಸಿದರು.

ಪುತ್ಥಳಿಗೆ ರೈತರ ರಕ್ತಾಭಿಷೇಕ

ಪ್ರತಿಭಟನಾ ಸ್ಥಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪೊಲೀಸರನ್ನು ನಿಯೋಜಿಸಲಾಗಿತ್ತು. ಇನ್ಸ್‌ಪೆಕ್ಟರ್ ಸಂತೋಷ್‌ಕುಮಾರ್ ನೇತೃತ್ವ ವಹಿಸಿದ್ದರು. ಮೀಸಲು ಪೊಲೀಸ್ ಪಡೆಯನ್ನು ಕೂಡ ನಿಯೋಜಿಸಲಾಗಿತ್ತು. ಶಾಂತಿಯುತವಾಗಿಯೇ ನಡೆಯುತ್ತಿದ್ದ ಪ್ರತಿಭಟನೆ ಮಧ್ಯಾಹ್ನ 12.30ರ ಸುಮಾರಿನಲ್ಲಿ ಅನಿರೀಕ್ಷಿತವಾಗಿ ತಿರುವು ಪಡೆಯಿತು. ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರ ಪ್ರತಿಕೃತಿಯನ್ನು ಪ್ರತಿಭಟನಾ ಸ್ಥಳಕ್ಕೆ ತಂದ ರೈತರು, ಸಿರಿಂಜ್‌ಗಳಲ್ಲಿ ಸಂಗ್ರಹಿಸಿದ್ದ ತಮ್ಮ ರಕ್ತವನ್ನು ಮುಖ್ಯಮಂತ್ರಿಗಳ ಪುತ್ಥಳಿಗೆ ಅಭಿಷೇಕ ಮಾಡಿದರು.
ತಕ್ಷಣವೇ ಕಾರ್ಯಪ್ರವೃತ್ತರಾದ ಪೊಲೀಸರು, ರೈತರನ್ನು ಬಂಧಿಸಿ, ಕರೆದೊಯ್ದು ಕೆಲಕಾಲದ ನಂತರ ಬಿಡುಗಡೆ ಮಾಡಿದರು. ಈ ನಡುವೆ ಪೊಲೀಸರು ಪ್ರತಿಭಟನಾಕಾರರು ಹಾಕಿದ್ದ ಶಾಮಿಯಾನಾ ಮತ್ತು ವೇದಿಕೆಯನ್ನು ತೆರವುಗೊಳಿಸಿದರು.
ಸಂಜೆ ವೇಳೆಗೆ ಸಂಜಯ್ ಸರ್ಕಲ್‌ನಲ್ಲಿ ಜಮಾವಣೆಗೊಂಡ ರೈತ ಸಂಘದ ಜಿಲ್ಲಾಧ್ಯಕ್ಷ ಕೆಂಪುಗೌಡ, ಮಧು ಚಂದನ್, ವಿನಯ್‌ಕುಮಾರ್ ನೇತೃತ್ವದ ರೈತರು, ತಮ್ಮ ಪ್ರತಿಭಟನೆಯನ್ನು ಪೊಲೀಸರನ್ನು ಬಳಸಿಕೊಂಡು ಸರ್ಕಾರ ಹತ್ತಿಕ್ಕುತ್ತಿದೆ ಎಂದು ಆರೋಪಿಸಿದರು. ಪ್ರತಿಭಟನೆಗಾಗಿ ಹಾಕಿದ್ದ ಶಾಮಿಯಾನಾ ಮತ್ತು ವೇದಿಕೆಯನ್ನು ತೆರವುಗೊಳಿಸುವ ವೇಳೆ ಪೊಲೀಸರು ಮಹಾತ್ಮಾ ಗಾಂಧೀಜಿ, ಡಾ. ಬಿ.ಆರ್. ಅಂಬೇಡ್ಕರ್, ರೈತ ಮುಖಂಡರಾದ ದಿವಂಗತ ಪ್ರೊ. ಎಂ.ಡಿ. ನಂಜುಂಡ ಸ್ವಾಮಿ, ದಿವಂಗತ ಕೆ.ಎಸ್.ಪುಟ್ಟಣ್ಣಯ್ಯ ಅವರ ಭಾವಚಿತ್ರಗಳಿಗೆ ಅವಮಾನ ಮಾಡ ಲಾಗಿದೆ ಎಂದು ದೂರಿದ ರೈತರು, ಪೊಲೀಸ್ ಇನ್ಸ್‌ಪೆಕ್ಟರ್ ಸಂತೋಷ್‌ಕುಮಾರ್ ಅವರನ್ನು ಅಮಾನತುಪಡಿಸಬೇಕು ಎಂದು ಆಗ್ರಹಿಸಿದರು.

" ಪ್ರತಿಭಟನಾ ಸ್ಥಳದಲ್ಲಿ ಮುಖ್ಯಮಂತ್ರಿಗಳ ಪುತ್ಥಳಿಗೆ ರಕ್ತಾಭಿಷೇಕ ಮಾಡಿ ಅಶಾಂತಿ ಸೃಷ್ಟಿಸಿದ ಕಾರಣಕ್ಕಾಗಿ ಮುಂಜಾಗ್ರತಾ ಕ್ರಮವಾಗಿ ಪೊಲೀಸರು ರೈತರನ್ನು ವಶಕ್ಕೆ ಪಡೆದಿದ್ದಾರೆಯೇ ಹೊರತು, ರೈತರ ಪ್ರತಿಭಟನೆಯನ್ನು ಹತ್ತಿಕ್ಕುವ ಉದ್ದೇಶವಿಲ್ಲ. ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿದ್ದ ರೈತರು, ಮುಖ್ಯಮಂತ್ರಿಗಳ ಪುತ್ಥಳಿಗೆ ರಕ್ತಾಭಿಷೇಕ ಮಾಡಿದ್ದು, ಕಾನೂನಾತ್ಮಕವಾಗಿ ತಪ್ಪಾಗಿದ್ದು, ಈ ನಿಟ್ಟಿನಲ್ಲಿ ಅವರ ಪ್ರತಿಭಟನೆಯನ್ನು ನಿಲ್ಲಿಸಲಾಗಿದೆ. ರೈತರು ಒತ್ತಾಯಿಸುತ್ತಿರುವ ಕಬ್ಬಿಗೆ ಎಫ್‌ಆರ್‌ಪಿ ದರ ನಿಗದಿಪಡಿಸಬೇಕಾಗಿರುವುದು ಕೇಂದ್ರ ಸರ್ಕಾರವೇ ಹೊರತು ರಾಜ್ಯ ಸರ್ಕಾರವಲ್ಲ. ಶೀಘ್ರದಲ್ಲೇ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರು ಪ್ರಧಾನಿ ನರೇಂದ್ರ ಮೋದಿಯವರ ಜೊತೆ ಚರ್ಚಿಸಲಿದ್ದಾರೆ. ಕಬ್ಬಿನ ದರ ನಿಗದಿ ಕೇವಲ ನಮ್ಮ ರಾಜ್ಯದ ಸಮಸ್ಯೆಯಲ್ಲ. ಇದು ದೇಶದ ಸಮಸ್ಯೆಯಾಗಿದ್ದು, ಶೀಘ್ರದಲ್ಲೇ ಬಗೆಹರಿಯಲಿದೆ. ಅಲ್ಲಿಯವರೆಗೂ ರೈತರು ತಾಳ್ಮೆ ಕಳೆದುಕೊಳ್ಳಬಾರದು. **– ಗೋಪಾಲಯ್ಯ, ಜಿಲ್ಲಾ ಉಸ್ತುವಾರಿ ಸಚಿವ**

ಪಟ್ಟಿ ಬಿಡುಗಡೆಗೆ ಹೈಕಮಾಂಡ್ ನಿರ್ಧಾರ

ದೇಶ ಹಾಗೂ ಸಂಪತ್ತಿನ ರಕ್ಷಣೆಗೆ ಕಾಂಗ್ರೆಸ್ ಅವಶ್ಯಕತೆ ಜನರಿಗೆ ಮನವರಿಕೆಯಾಗುತ್ತಿದೆ. ಕಾಂಗ್ರೆಸ್ ಸರ್ಕಾರ ಈ ಹಿಂದೆ ನೀಡಿದ್ದ ಕಾರ್ಯಕ್ರಮಗಳು ಇಂದಿಗೂ ಪ್ರಸ್ತುತ ಎನಿಸಿವೆ. ಅದಕ್ಕಾಗಿಯೇ ಜನರ ಒಲವು ಕಾಂಗ್ರೆಸ್ ಮೇಲೆ ಹೆಚ್ಚಾಗಿದೆ. ಇದನ್ನು ಸಹಿಸದ ಬಿಜೆಪಿ ನಾಯಕರು ಮತದಾರರ ಪಟ್ಟಿ ಪರಿಷ್ಕರಣೆ ನೆಪದಲ್ಲಿ ಕಾಂಗ್ರೆಸ್ ಬೆಂಬಲಿತ ಮತದಾರರು ಹಾಗೂ ದಲಿತರು, ಹಿಂದುಳಿದ ವರ್ಗ, ಅಲ್ಪಸಂಖ್ಯಾತ ಸಮುದಾಯ ದವರ ಹೆಸರನ್ನು ಮತದಾರರ ಪಟ್ಟಿಯಿಂದ ಡಿಲೀಟ್ ಮಾಡುವ ಮೂಲಕ ವಾಮಮಾರ್ಗದಿಂದ ಚುನಾವಣೆ ಗೆಲ್ಲಲು ಸಂಚು ನಡೆಸಿದ್ದಾರೆ. ಆದರೆ, ರಾಜ್ಯದ ಜನತೆ ಬುದ್ಧಿವಂತರಿದ್ದು, ಬಿಜೆಪಿಗೆ ತಕ್ಕ ಪಾಠ ಕಲಿಸಲು ಉತ್ಸುಕರಾಗಿದ್ದಾರೆ ಎಂದರು.
ಮುಂಬರುವ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳಾಗಿ ಸ್ಪರ್ಧಿಸಲಿರುವ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಜನವರಿ 15ರೊಳಗೆ ಪ್ರಕಟಿಸಲು ಹೈಕಮಾಂಡ್ ಚಿಂತನೆ ನಡೆಸಿದೆ. ಈಗಾಗಲೇ ಆಯಾಯ ಜಿಲ್ಲೆಗಳ ವೀಕ್ಷಕರು ಅಭ್ಯರ್ಥಿಗಳ ಆಯ್ಕೆಗೆ ಸಂಬಂಧಿಸಿದಂತೆ ಅಭಿಪ್ರಾಯ ಸಂಗ್ರಹಿಸಿ ಡಿ.31ರೊಳಗೆ ವರದಿ ಕೊಡಲಿದ್ದಾರೆ. ಮೈಸೂರು ಭಾಗದಲ್ಲಿ ಹಾಸನ, ಕೊಡಗು, ಮಂಡ್ಯ, ಮೈಸೂರು ಗ್ರಾಮಾಂತರ ಮುಗಿದಿದ್ದು, ಚಾಮರಾಜನಗರ, ಮೈಸೂರು ನಗರ ಮುಗಿದ ಮೇಲೆ ಕೆಪಿಸಿಸಿ ಅಧ್ಯಕ್ಷರು ಮತ್ತು ಪ್ರತಿಪಕ್ಷದ ನಾಯಕರಿಗೆ ವರದಿ ಕೊಡಲಿದ್ದಾರೆ. ನಂತರ ಕೆಪಿಸಿಸಿ ಸ್ಕ್ರೀನಿಂಗ್ ಕಮಿಟಿ ಸಭೆಯ ಬಳಿಕ ಹೈಕಮಾಂಡ್‌ಗೆ ಪಟ್ಟಿ ಕಳುಹಿಸಲಾಗುತ್ತದೆ ಎಂದು ವಿವರಿಸಿದರು.
ಮಾತಿನ ಚಕಮಕಿಗೆ ಬೇಸರವಿದೆ: ನಂಜನಗೂಡು ಕ್ಷೇತ್ರದ ಟಿಕೆಟ್‌ಗೆ ಸಂಬಂಧಿಸಿದಂತೆ ಎರಡು ಗುಂಪಿನ ಕಾರ್ಯಕರ್ತರು ಪರಸ್ಪರ ಮಾತಿನ ಚಕಮಕಿ ನಡೆಸಿದ್ದು ಬೇಸರವಾಗಿದೆ. ಈ ವಿಚಾರಕ್ಕೆ ವಿಷಾದ ವ್ಯಕ್ತಪಡಿಸುತ್ತೇನೆ. ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಕಟ್ಟೆಚ್ಚರ ವಹಿಸುವುದಾಗಿ ಸ್ಪಷ್ಟಪಡಿಸಿದರು.

ಮೈಸೂರಿನ ಮೂರು ಕ್ಷೇತ್ರದ ಟಿಕೆಟ್ ಅಕಾಂಕ್ಷಿಗಳ ಬಗ್ಗೆ ಮುಖಂಡರಿಂದ ಅಭಿಪ್ರಾಯ ಸಂಗ್ರಹ

ಮುಂಬರುವ ವಿಧಾನಸಭಾ ಚುನಾವಣೆಗೆ ಕಾಂಗ್ರೆಸ್ ಸಿದ್ಧತೆ ಮಾಡಿಕೊಳ್ಳುತ್ತಿದ್ದು, ಈಗಾಗಲೇ ರಾಜ್ಯದ 224 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿಗಳಿಂದ ಅರ್ಜಿ ಸ್ವೀಕರಿಸಿರುವ ಕೆಪಿಸಿಸಿ, ಪ್ರತಿ ಜಿಲೆಗೆ ವೀಕ್ಷಕರನ್ನು ನಿಯೋಜಿಸಿದ್ದು, ಅರ್ಜಿ ಸಲ್ಲಿಸಿರು ವವರಲ್ಲಿ ಗೆಲ್ಲುವ ಅಭ್ಯರ್ಥಿ ಯಾರೆಂದು ಮಾಹಿತಿ ಕಲೆ ಹಾಕಲು ಮುಂದಾಗಿದೆ.
ಮೈಸೂರು ನಗರ ವ್ಯಾಪ್ತಿಗೆ ಬರುವ ಕೆ.ಆರ್.ವಿಧಾನಸಭಾ ಕ್ಷೇತ್ರ, ಚಾಮರಾಜ ಕ್ಷೇತ್ರ, ಎನ್.ಆರ್.ಕ್ಷೇತ್ರದಿಂದ ಟಿಕೆಟ್ ಬಯಸಿ ಅರ್ಜಿ ಸಲ್ಲಿಸಿರುವವರ ಬಗ್ಗೆ ಕೆಪಿಸಿಸಿ ಚುನಾವಣಾ ಉಸ್ತುವಾರಿಯಾಗಿರುವ ಮಾಜಿ ಸಚಿವ ರಮಾನಾಥ್ ರೈ ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ ಬುಧವಾರ ಅಭಿಪ್ರಾಯ ಸಂಗ್ರಹಿಸಿದರು. ಗೌಪ್ಯತೆ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಒಬ್ಬೊಬ್ಬರನ್ನೇ ಕರೆದು ಅಭಿಪ್ರಾಯ ಸಂಗ್ರಹಿಸಲಾಯಿತು.
ಉಭಯ ನಾಯಕರು ಮೈಸೂರಿನ ಮೂರು ಕ್ಷೇತ್ರ ವ್ಯಾಪ್ತಿಯಲ್ಲಿರುವ ಮಾಜಿ ಮೇಯರ್, ಮಾಜಿ ಉಪಮೇಯರ್‌ಗಳು, ಪಾಲಿಕೆ ಸದಸ್ಯರು, ಮಾಜಿ ಸದಸ್ಯರು, ವಿವಿಧ ಬ್ಲಾಕ್ ಅಧ್ಯಕ್ಷರುಗಳಿಂದ ಅಭ್ಯರ್ಥಿಗಳು ಯಾರಾದರೆ ಗೆಲ್ಲಬಹುದು ಎಂಬ ಮಾಹಿತಿ ಕಲೆ ಹಾಕಿದರು. ಕೆ.ಆರ್.ಕ್ಷೇತ್ರದಿಂದ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಸೇರಿದಂತೆ ಟಿಕೆಟ್ ಆಕಾಂಕ್ಷಿಗಳು ಪಾಲ್ಗೊಂಡಿದ್ದರೆ, ಚಾಮರಾಜ ಕ್ಷೇತ್ರದಿಂದ ಮಾಜಿ ಶಾಸಕ ವಾಸು, ಮುಖಂಡ ಕೆ.ಹರೀಶ್‌ಗೌಡ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು. ಎನ್.ಆರ್.ಕ್ಷೇತ್ರದ ಶಾಸಕ ತನ್ವೀರ್ ಸೇಠ್ ಬೆಳಗಾವಿ ಅಧಿವೇಶನದಲ್ಲಿ ಪಾಲ್ಗೊಂಡಿರುವುದರಿಂದ ಅಭಿಪ್ರಾಯ ಸಭೆಗೆ ಆಗಮಿಸಿರಲಿಲ್ಲ. ಆದರೆ, ಕ್ಷೇತ್ರದ ವಿವಿಧ ಘಟಕಗಳ ಮುಖಂಡರು ಪಾಲ್ಗೊಂಡಿದ್ದರು. ಎಲ್ಲರೂ ತಮ್ಮ ಅಭಿಪ್ರಾಯವನ್ನು ಈ ಇಬ್ಬರು ನಾಯಕರ ಮುಂದೆ ಮಂಡಿಸಿದರು.

ಖಾಯಮಾತಿಯೂ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ

ಬಿಸಿಯೂಟ ತಯಾರಕರ ಪ್ರತಿಭಟನೆ

ಮೈಸೂರು,ಡಿ.28(ಎಂಟಿವೈ)– ಖಾಯಮಾತಿಯೂ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಬಿಸಿಯೂಟ ತಯಾರಕರು ಪ್ರತಿಭಟನೆ ನಡೆಸಿ, ಆಕ್ರೋಶ ವ್ಯಕ್ತಪಡಿಸಿದರು.
ಮೈಸೂರಿನ ಜಿಲ್ಲಾಧಿಕಾರಿ ಕಚೇರಿ ಬಳಿ ಕರ್ನಾಟಕ ರಾಜ್ಯ ಸಂಯುಕ್ತ ಅಕ್ಷರ ದಾಸೋಹ ಕಾರ್ಮಿಕರ ಸಂಘದ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದ ಬಿಸಿಯೂಟ ತಯಾರಕರು, ರಾಜ್ಯಾದ್ಯಂತ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವಿದ್ಯಾರ್ಥಿಗಳ ಅಪೌಷ್ಟಿಕತೆ ನೀಗಿಸಲು ಬಿಸಿಯೂಟ ಯೋಜನೆ ಅತ್ಯಂತ ಪರಿಣಾಮಕಾರಿಯಾಗಿದೆ. ಈ ಯೋಜನೆ ಅನುಷ್ಠಾನಕ್ಕೆ ಕಳೆದ 20 ವರ್ಷಗಳಿಂದ ಬೆನ್ನೆಲುಬಾಗಿರುವವರು ಮಹಿಳಾ ಕಾರ್ಮಿಕರೇ ಆಗಿದ್ದಾರೆ.
ರಾಜ್ಯದಲ್ಲಿ 1.18 ಲಕ್ಷ ಬಿಸಿಯೂಟ ಕಾರ್ಮಿಕರು ದುಡಿಯುತ್ತಿದ್ದಾರೆ. ಇವರ ಸೇವೆಗೆ ಗೌರವಯುತ ವೇತನ ನೀಡಲಾಗುತ್ತಿಲ್ಲ. ಗೌರವಧನವನ್ನೂ ಸಕಾಲಕ್ಕೆ ನೀಡುತ್ತಿಲ್ಲ. ಸೇವಾ ಹಿರಿತನದ ಭತ್ಯೆ ಸಿಗುತ್ತಿಲ್ಲ. ವಯೋ ನಿವೃತ್ತಿಯಾಗುವ ಕಾರ್ಮಿಕರಿಗೆ ಯಾವುದೇ ಇಡುಗಂಟಿನ ಭರವಸೆಯಾಗಲೀ, ನಿವೃತ್ತಿ ವೇತನವಾಗಲೀ ಇಲ್ಲ. ಶಾಸನಬದ್ಧವಾಗಿ ದೊರಕಬೇಕಾದ ವೇತನಸಹಿತ ಹೆರಿಗೆ ರಜೆ, ವೈದ್ಯಕೀಯ ಸೌಲಭ್ಯವನ್ನೂ ನೀಡುತ್ತಿಲ್ಲ ಎಂದು ಕಿಡಿಕಾರಿದರು. ಕಾನೂನಾತ್ಮಕವಾಗಿ ದೇಶಾದ್ಯಂತ ಬಿಸಿಯೂಟ ಯೋಜನೆ ಜಾರಿಯಲ್ಲಿದ್ದು, ನಿರಂತರವಾಗಿ ನಡೆಯುವುದರಿಂದ ಬಿಸಿಯೂಟ ಕಾರ್ಮಿಕರನ್ನು ಸರ್ಕಾರಿ ನೌಕರರೆಂದು ಪರಿಗಣಿಸಬೇಕು. ಕನಿಷ್ಠ ವೇತನ, ಆರೋಗ್ಯ ರಕ್ಷಣೆ, ಇಎಸ್‌ಐ, ಇಪಿಎಫ್, ನಿವೃತ್ತಿ ಪಿಂಚಣಿ, ಹೆರಿಗೆ ರಜೆ, ಸಮವಸ್ತ್ರ, ಗುರುತಿನ ಚೀಟಿ ನೀಡಬೇಕು. ಬಿಸಿಯೂಟ ಕಾರ್ಮಿಕರ ಹುದ್ದೆಯನ್ನು ಖಾಯಂಗೊಳಿಸಬೇಕು. ರಜಾ ದಿನಗಳಲ್ಲಿ ಕೆಲಸ ಮಾಡಿದವರಿಗೆ ದುಪ್ಪಟ್ಟು ವೇತನ ನೀಡಬೇಕು. ನಿವೃತ್ತಿಯಾದವರಿಗೆ 5 ಲಕ್ಷ ಇಡುಗಂಟು ನೀಡಬೇಕೆಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ರಾಜ್ಯ ಕಾರ್ಯದರ್ಶಿ ಸಂಧ್ಯಾ.ಪಿ.ಎಸ್, ಗೀತಮ್ಮ, ಮಹದೇವಮ್ಮ, ಕುಮಾರಿ, ರಾಜೇಶ್ವರಿ, ಮಂಜುಳಾ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.



ಇಂದು ಹೊಂಬೆಳಕು ಕೃತಿ ಲೋಕಾರ್ಪಣೆ

ಮೈಸೂರು, ಡಿ.28–ಚುಟುಕು ಸಾಹಿತ್ಯ ಪರಿಷತ್ ಕೇಂದ್ರ ಸಮಿತಿ ಮತ್ತು ವೈದ್ಯ ವಾರ್ತಾ ಪ್ರಕಾಶನವು ಡಿ.29 ರಂದು ಬೆಳಗ್ಗೆ 10ಕ್ಕೆ ಜೆಎಲ್‌ಬಿ ರಸ್ತೆಯ ನಾದ ಬ್ರಹ್ಮ ಸಂಗೀತ ಸಭಾದಲ್ಲಿ ಡಾ. ಸಿಎಸ್‌ಕೆ ಅಭಿನಂದನಾ ಗ್ರಂಥ ಹೊಂಬೆಳಕು ಕೃತಿ ಲೋಕಾರ್ಪಣೆ ಕಾರ್ಯಕ್ರಮ ಏರ್ಪಡಿಸಿದ್ದು, ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷ ಎಂ.ಶಿವಣ್ಣ ಉದ್ಘಾಟಿಸುವರು. ಪರಿಷತ್ ಸದಸ್ಯ ಡಾ.ತಿಮ್ಮಯ್ಯ ಅಧ್ಯಕ್ಷತೆ ವಹಿಸುವರು. ಜಯದೇವ ಹೃದ್ರೋಗ ಆಸ್ಪತ್ರೆ ಡಾ.ಸದಾನಂದ ಮತ್ತು ವಿಶ್ರಾಂತ ಕುಲಪತಿ ಪ್ರೊ. ರಂಗಪ್ಪ, ಮಾಜಿ ಎಂಎಲ್‌ಸಿ ತೋಂಟದಾರ್ಯ, ಅಮರ್‌ನಾಥರಾಜೇ ಅರಸ್, ಲಿಂಗರಾಜೇ ಅರಸ್ ಪಾಲ್ಗೊಳ್ಳುವರು.



ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಅರುಣ್‌ಕುಮಾರ್‌ಗೌಡ ಸಮ್ಮುಖದಲ್ಲಿ ಹಲವರು ಬಿಜೆಪಿಗೆ ಸೇರ್ಪಡೆ



ಮೈಸೂರು, ಡಿ.28(ಆರ್‌ಕೆಬಿ)– ಚಾಮುಂಡೇಶ್ವರಿ ವಿಧಾನ ಸಭಾ ಕ್ಷೇತ್ರದ ಬಿಜೆಪಿ ಮುಖಂಡ ಎನ್.ಅರುಣ್ ಕುಮಾರ್ ಗೌಡ ಸಮ್ಮುಖದಲ್ಲಿ ಬುಧವಾರ ಕಾಂಗ್ರೆಸ್ ಮತ್ತು ಜೆಡಿಎಸ್ ಪಕ್ಷಗಳ ಅನೇಕರು ಬಿಜೆಪಿಗೆ ಸೇರ್ಪಡೆಯಾದರು.
ಕ್ಷೇತ್ರದ ಡಿಎಂಜಿ ಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆ.ಮಾದಳ್ಳಿಗೆ ಭೇಟಿ ನೀಡಿ, ಗ್ರಾಮದ ಮುಖಂಡರಾದ ಮಹದೇವಪ್ಪ, ಬಸವರಾಜು, ಮಲ್ಲೇಶ್, ನಾಗರಾಜು, ಮಹೇಶ, ರವಿ ಚೆಲುವಾಚಾರ್, ಶಿವರಾಜು, ವೀರಭದ್ರ, ಸ್ವಾಮಿ, ಜಗದೀಶ್, ಮಲ್ಲಿಕಾರ್ಜುನ ಸೇರಿದಂತೆ ಹಲವರು ಬಿಜೆಪಿಗೆ ಸೇರ್ಪಡೆಯಾದರು. ಅವರಿಗೆ ಪಕ್ಷದ ಚಿಹ್ನೆಯುಳ್ಳ ಶಾಲು ಹಾಕಿ ಅರುಣ್‌ಕುಮಾರ್ ಗೌಡ ಬರಮಾಡಿಕೊಂಡರು.
ಈ ಸಂದರ್ಭದಲ್ಲಿ ಮಾತನಾಡಿದ ಅರುಣ್‌ಕುಮಾರ್ ಗೌಡ, ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಬದಲಾವಣೆ ಪರ್ವ ಆರಂಭವಾಗಿದ್ದು, ಮುಂದಿನ ದಿನಗಳಲ್ಲಿ ಅನ್ಯಪಕ್ಷದ ನೂರಾರು ಮುಖಂಡರು ಹಾಗೂ ಯುವ ಕಾರ್ಯಕರ್ತರು ಬಿಜೆಪಿ ಸೇರಲಿದ್ದಾರೆ. ಕ್ಷೇತ್ರದಲ್ಲಿ ಬಿಜೆಪಿ ಪರ ವಾತಾವರಣ ಸೃಷ್ಟಿಯಾಗುತ್ತಿದೆ ಎಂದರು.
ಈ ಕ್ಷೇತ್ರದಿಂದ ಆಯ್ಕೆಯಾಗಿದ್ದವರು ಮುಖ್ಯಮಂತ್ರಿ, ಜಿಲ್ಲಾ ಮಂತ್ರಿಗಳಾದರು. ಆದರೆ ಕ್ಷೇತ್ರದ ಜನರ ಸಂಕಷ್ಟಕ್ಕೆ ಆಗದೆ ತಮ್ಮ ಸ್ವಹಿತಾಸಕ್ತಿ ರಾಜಕಾರಣದ ಸಲುವಾಗಿ ಕ್ಷೇತ್ರ ಅಭಿವೃದ್ಧಿ ಪಡಿಸುವಲ್ಲಿ ವಿಫಲರಾದರು ಎಂದು ದೂರಿದರು. ಈ ಸಂದರ್ಭದಲ್ಲಿ ಚಾಮುಂಡೇಶ್ವರಿ ಕ್ಷೇತ್ರದ ಬಿಜೆಪಿ ಅಧ್ಯಕ್ಷ ಗೆಜ್ಜಗಳ್ಳಿ ಮಹೇಶ್, ಪ್ರಧಾನ ಕಾರ್ಯದರ್ಶಿ ಪೈಲ್ವಾನ್ ರವಿ, ಭೂನ್ಯಾಯ ಮಂಡಳಿ ಸದಸ್ಯ ಗೋಪಾಲ್‌ಗೌಡ, ಮುಖಂಡರಾದ ವಿಜಯ್‌ಗೌಡ, ಎನ್.ಕೆ.ರವಿಕುಮಾರ್, ಬೀರಿಹುಂಡಿ ಮಹಾಶಕ್ತಿ ಕೇಂದ್ರದ ಅಧ್ಯಕ್ಷ ಸೋಮಶೇಖರ್, ಮರಯ್ಯನಹುಂಡಿ ಮೋಹನ್, ನಿಂಗರಾಜ್ ಇನ್ನಿತರರು ಉಪಸ್ಥಿತರಿದ್ದರು.



ಮೈಸೂರಿನ ಗೋಕುಲಂನ ಕೆಂಪೇಗೌಡರ ಉದ್ಯಾನವನದಲ್ಲಿ ಸಮಾನಮನಸ್ಕ ಗೆಳೆಯರ ವತಿಯಿಂದ ರಾಷ್ಟ್ರಕವಿ ಕುವೆಂಪು ಅವರ 118ನೇ ಜಯಂತಿಯನ್ನು ಆಚರಿಸಲಾಯಿತು. ಬಿಜೆಪಿ ಮುಖಂಡ ಎಲ್.ಚೌಡಪ್ಪ, ಸಹಕಾರಿ ರತ್ನ ಪ್ರಶಸ್ತಿ ಪುರಸ್ಕೃತ ಕೆ.ಉಮಾಶಂಕರ್ ಕುವೆಂಪು ಭಾವಚಿತ್ರಕ್ಕ ಪುಷ್ಪನಮನ ಸಲ್ಲಿಸಿದರು. ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಪಡುವಾರಹಳ್ಳಿ ಎಂ.ರಾಮಕೃಷ್ಣ, ಹೆಚ್.ಹರೀಶ್‌ಕುಮಾರ್, ದಿ ಸಿಟಿ ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ವಿ.ಮಧು, ನಗರಪಾಲಿಕೆ ಸದಸ್ಯ ಎಂ.ಚಿಕ್ಕವೆಂಕಟು, ಒಕ್ಕಲಿಗರ ಸಂಘದ ಅಧ್ಯಕ್ಷ ಸಿ.ಮರಿಸ್ವಾಮಿ, ಅಖಿಲ ಕರ್ನಾಟಕ ಒಕ್ಕಲಿಗರ ಮಹಾಸಭಾ ಅಧ್ಯಕ್ಷ ಎನ್.ಬೆಟ್ಟೇಗೌಡ, ಜನಹಿತ ವಿವಿಧೋದ್ದೇಶ ಸಹಕಾರ ಸಂಘದ ನಿರ್ದೇಶಕರಾದ ಸಿ.ಡಿ.ಕುಮಾರ್, ಬಿ.ಕುಮಾರ್, ರಾಘವ್ ಗೌಡ, ಸಿ.ಸಂತೋಷ್, ಪಾಲಹಳ್ಳಿ ನಾಗರಾಜು, ಯತಿ, ಚಿರು, ಗೋಕುಲಂನಾಗು, ಜಯಣ್ಣ, ಜೀವನ್ ಪ್ರಕಾಶ್, ಶ್ರೀನಿವಾಸ್‌ಗೌಡ, ಫಾಲ್ಕನ್ ಪ್ರಸನ್ನ, ಕೇಬಲ್ ಕಿಟ್ಟಿ, ಶಾಂತಿ, ಆಟೋ ಕಾಂತ, ಚುರುಮುರಿ ಚಾಮು, ಸುರೇಂದ್ರ, ಗುರುದತ್ತ, ಗಿರೀಶ್ ಮತ್ತಿತರಿದ್ದರು

ಪ್ರಹ್ಲಾದ್ ಮೋದಿ ಭೇಟಿ ಮಾಡಿ ಆರೋಗ್ಯ ವಿಚಾರಿಸಿದ ಸಚಿವ ಎಸ್.ಟಿ.ಸೋಮಶೇಖರ್

ಮೈಸೂರು,ಡಿ.28(ಆರ್‌ಕೆಬಿ)–ಮೈಸೂರು ತಾಲೂಕು ಕಡಕೊಳ ಬಳಿ ಮಂಗಳವಾರ ಸಂಭವಿಸಿದ ಅಪಘಾತದಲ್ಲಿ ಗಾಯಗೊಂಡು ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಸಹೋದರ ಪ್ರಹ್ಲಾದ್ ಮೋದಿ ಹಾಗೂ ಕುಟುಂಬದವರನ್ನು ಮೈಸೂರು ಜಿಲ್ಲಾ ಉಸ್ತುವಾರಿಯೂ ಆದ ಸಹಕಾರ ಸಚಿವ ಎಸ್.ಟಿ.ಸೋಮಶೇಖರ್ ಭೇಟಿ ಮಾಡಿ ಆರೋಗ್ಯ ವಿಚಾರಿಸಿದರು. ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪ್ರಹ್ಲಾದ್ ಮೋದಿ ಹಾಗೂ ಕುಟುಂಬದರಿಗೆ ಸಣ್ಣ ಪುಟ್ಟ ಗಾಯಗಳಾಗಿವೆ. ಅವರನ್ನು ವಿಶೇಷ ವಿಮಾನದ ಮೂಲಕ ಅಹಮದಾಬಾದ್‌ಗೆ ಕಳುಹಿಸಿಕೊಡಲಾಗುತ್ತಿದೆ ಎಂದರು. ಈ ವೇಳೆ ಮೇಯರ್ ಶಿವಕುಮಾರ್, ಬಿಜೆಪಿ ಜಿಲ್ಲಾಧ್ಯಕ್ಷೆ ಮಂಗಳಾ ಸೋಮಶೇಖರ್ ಇನ್ನಿತರರು ಉಪಸ್ಥಿತರಿದ್ದರು.



ಭಾರತೀಯ ಶೈಲಿ ಕುಸ್ತಿ ಮಹಾಸಂಘದಿಂದ ರಾಷ್ಟ್ರೀಯ ಹಿಂದ್ ಕೇಸರಿ, ಸೀನಿಯರ್ ಕುಸ್ತಿ ಸ್ಪರ್ಧೆಗೆ ನಾಳೆ ಆಯ್ಕೆ ಪ್ರಕ್ರಿಯೆ

ಮೈಸೂರು, ಡಿ.28(ಆರ್‌ಕೆಬಿ)– ತೆಲಂಗಾಣ ರಾಜ್ಯದ ಹೈದರಾಬಾದ್‌ನ ಲಾಲ್ ಬಹದ್ದೂರ್ ಶಾಸ್ತ್ರಿ ಕ್ರೀಡಾಂಗಣದಲ್ಲಿ ಜನವರಿ 5ರಿಂದ 8 ರವರೆಗೆ ನಡೆಯುವ 51ನೇ ಭಾರತೀಯ ಶೈಲಿಯ ರಾಷ್ಟ್ರೀಯ ಹಿಂದ್ ಕೇಸರಿ ಮತ್ತು ಸೀನಿಯರ್ ಕುಸ್ತಿ ಸ್ಪರ್ಧೆಗೆ (ಪುರುಷ ಮತ್ತು ಮಹಿಳೆ) ಕರ್ನಾಟಕ ರಾಜ್ಯ ತಂಡವನ್ನು ಆಯ್ಕೆ ಮಾಡಲು ಮೈಸೂರಿನಲ್ಲಿ ಡಿ.30ರಂದು ಆಯ್ಕೆ ಪ್ರಕ್ರಿಯೆ ನಡೆಸಲಾಗುವುದು ಎಂದು ಭಾರತೀಯ ಶೈಲಿಯ ಕುಸ್ತಿ ಮಹಾಸಂಘದ ಮುಖಂಡರು ತಿಳಿಸಿದರು.
ಮೈಸೂರು ಪತ್ರಕರ್ತರ ಭವನದಲ್ಲಿ ಸಂಘದ ಮುಖಂಡ ಅಮೃತ್ ಪುರೋಹಿತ್ ಮಾತನಾಡಿ, ಮೈಸೂರಿನ ಡಿ.ದೇವರಾಜ ಅರಸು ವಿವಿಧೋದ್ದೇಶ ಕುಸ್ತಿ ಅಖಾಡದ ದೊಡ್ಡಕೆರೆ ಮೈದಾನದಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಬೆಳಗ್ಗೆ 8ರಿಂದ 10ರವರೆಗೆ ಕುಸ್ತಿಪಟುಗಳ ದೇಹತೂಕ ತೆಗೆದುಕೊಳ್ಳಲಾಗುವುದು. 11 ಗಂಟೆಗೆ ಕುಸ್ತಿ ಆಯ್ಕೆ ಮಾಡಲಾಗುವುದು ಎಂದರು. ಆಯ್ಕೆಯಾದ ಕುಸ್ತಿ ಪಟುಗಳು ರಾಷ್ಟ್ರೀಯ ಹಿಂದ್ ಕೇಸರಿ, ಸೀನಿಯರ್ ಸ್ಪರ್ಧೆಯಲ್ಲಿ ಭಾಗವಹಿಸಲು ಅರ್ಹರಾಗುತ್ತಾರೆ. 55 ಕೆಜಿ, 60 ಕೆಜಿ, 70 ಕೆಜಿ, 75 ಕೆಜಿ, 140 ಕೆಜಿ ಯವರು ಹಿಂದ್ ಕೇಸರಿ ವಿಭಾಗದಲ್ಲಿ ಹಾಗೂ ಮಹಿಳೆಯರ ವಿಭಾಗದಲ್ಲಿ 48 ಕೆಜಿ, 52 ಕೆಜಿ, 56 ಕೆಜಿ, 62 ಕೆಜಿ, 68 ಕೆಜಿ (65 ಕೆಜಿಯಿಂದ 90 ಕೆಜಿಯವರು) ಮಹಿಳಾ ಹಿಂದ್ ಕೇಸರಿ ಸ್ಪರ್ಧೆಯಲ್ಲಿ ಭಾಗವಹಿಸಬಹುದು.
ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಆಸಕ್ತ 20 ವರ್ಷ ವಯೋಮಿತಿಯ ಕುಸ್ತಿ ಪಟುಗಳು ಹಾಗೂ 18–19ನೇ ವಯಸ್ಸಿನ ಕ್ರೀಡಾಪಟುಗಳು ಕೋಚ್ ಮತ್ತು ತಂದೆ–ತಾಯಿಯ ಅನುಮತಿ ಪತ್ರದ ಜೊತೆಗೆ ಆಧಾರ್ ಕಾರ್ಡ್, ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ, ತರಬೇಕು ಎಂದರು. ಗೋಷ್ಠಿಯಲ್ಲಿ ಮೈಸೂರು ವಕೀಲರ ಸಂಘದ ಕಾರ್ಯದರ್ಶಿ ಉಮೇಶ್, ರವಿ ಬನ್ನೂರು, ದೊರೆಸ್ವಾಮಿ, ಮಹಮದ್ ಖಾಸಿಂ ಉಪಸ್ಥಿತರಿದ್ದರು.

ಇಟ್ಟಿಗೆಗೂಡಿನ ಮುಡಾ ಕಾಂಪ್ಲೆಕ್ಸ್‌ಗೆ ಪಾಸ್‌ಪೋರ್ಟ್ ಸೇವಾ ಕೇಂದ್ರ ಸ್ಥಳಾಂತರ



ಮೈಸೂರು, ಡಿ. 28(ಆರ್‌ಕೆ)–ಮೈಸೂರಿನ ಮೇಟಗಳ್ಳಿ ಅಂಚೆ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪಾಸ್‌ಪೋರ್ಟ್ ಸೇವಾ ಕೇಂದ್ರವನ್ನು ಇಟ್ಟಿಗೆಗೂಡಿನ ಲಿಂಗಯ್ಯ ಸರ್ಕಲ್ ಬಳಿ ಮುಡಾದಿಂದ ನಿರ್ಮಿಸಿರುವ ವಾಣಿಜ್ಯ ಸಂಕೀರ್ಣ ಕಟ್ಟಡಕ್ಕೆ ಸ್ಥಳಾಂತರಿಸಲಾಗುವುದು ಎಂದು ಸಂಸದ ಪ್ರತಾಪ್ ಸಿಂಹ ತಿಳಿಸಿದ್ದಾರೆ.
ಬುಧವಾರ ಮುಡಾ ಅಧ್ಯಕ್ಷ ಯಶಸ್ವಿ ಎಸ್. ಸೋಮಶೇಖರ್ ರೊಂದಿಗೆ ನೂತನ ಕಟ್ಟಡಕ್ಕೆ ಭೇಟಿ ನೀಡಿ ಪರಿಶೀಲಿಸಿದ ಅವರು, ಕಡಿಮೆ ಸ್ಥಳಾವಕಾಶವಿರುವ ಮೇಟಗಳ್ಳಿ ಅಂಚೆ ಕಚೇರಿಯಲ್ಲಿ ನಡೆಯುತ್ತಿರುವ ಪಾಸ್‌ಪೋರ್ಟ್ ಸೇವಾ ಕೇಂದ್ರದಲ್ಲಿ ಸಾರ್ವಜನಿಕರಿಗೆ ಅಗತ್ಯ ಸೌಲಭ್ಯಗಳ ಕೊರತೆ ಇರುವುದರಿಂದ ಈ ಕಟ್ಟಡಕ್ಕೆ ಸ್ಥಳಾಂತರಿಸಲು ಅವಕಾಶ ನೀಡಿ ಎಂದರು.
ಅದಕ್ಕೆ ಸಮ್ಮತಿಸಿದ ಮುಡಾ ಅಧ್ಯಕ್ಷ ಸೋಮಶೇಖರ್ ಹಾಗೂ ಆಯುಕ್ತ ಜಿ.ಟಿ. ದಿನೇಶ್‌ಕುಮಾರ್, ಸರ್ಕಾರಿ ಸೇವೆಗೆ ಬಳಸಿಕೊಳ್ಳಲು ಕಟ್ಟಡದಲ್ಲಿ ಅವಕಾಶ ಕಲ್ಪಿಸಲಾಗುವುದು. ಯಾವ ಸಂದರ್ಭದಲ್ಲಾದರೂ ಪಾಸ್‌ಪೋರ್ಟ್ ಸೇವಾ ಕೇಂದ್ರವನ್ನು ಸ್ಥಳಾಂತರಿಸಿಕೊಳ್ಳಬಹುದು ಎಂದು ತಿಳಿಸಿದರು.
2017ರ ಜನವರಿ 25ರಂದು ಮೈಸೂರಿನ ಮೇಟಗಳ್ಳಿ ಅಂಚೆ ಕಚೇರಿಯಲ್ಲಿ ಆರಂಭವಾದ ಪಾಸ್‌ಪೋರ್ಟ್ ಸೇವಾ ಕೇಂದ್ರವು ಸಾರ್ವಜನಿಕರಿಗೆ ಉತ್ತಮ ಸೇವೆ ನೀಡುತ್ತಾ ಬಂದಿದೆ. ಪ್ರತಿದಿನ 70ರಿಂದ 100 ಮಂದಿ ಪಾಸ್‌ಪೋರ್ಟ್‌ಗೆ ಅರ್ಜಿ ಸಲ್ಲಿಸಲು ಕಚೇರಿಗೆ ಭೇಟಿ ನೀಡುತ್ತಿದ್ದಾರೆ.

ಮಾನವ ಹಕ್ಕುಗಳ ದಿನಾಚರಣೆ: ನಾಳೆ ಮೈಸೂರಲ್ಲಿ ವಿವಿಧ ಕಾರ್ಯಕ್ರಮ

ಮೈಸೂರು,ಡಿ.28(ಆರ್‌ಕೆಬಿ)–ಮಾನವ ಹಕ್ಕುಗಳ ದಿನಾಚರಣೆ ಅಂಗವಾಗಿ ಮಾನವ ಹಕ್ಕುಗಳ ಸೇವಾ ಸಮಿತಿ ಆಶ್ರಯದಲ್ಲಿ ಡಿ.30 ರಂದು ಬೆಳಗ್ಗೆ 10 ಗಂಟೆಗೆ ಮೈಸೂರಿನ ಪುರಭವನದಲ್ಲಿ ಉಚಿತ ಕಾನೂನು ಅರಿವು–ನೆರವು, ಹುತಾತ್ಮ ವೀರಯೋಧರ ತಾಯಂದಿರಿಗೆ ಸನ್ಮಾನ, ಕಾರ್ಮಿಕ ಇಲಾಖೆಯಿಂದ ಇ–ಶ್ರಮ್ ಯೋಜನೆ ಉಚಿತ ನೋಂದಣಿ ಅಭಿಯಾನ, ಉದ್ಯೋಗ ಮೇಳ, ವೈದ್ಯರು ಮತ್ತು ವಿವಿಧ ಕ್ಷೇತ್ರದ ಸಾಧಕರಿಗೆ ಸನ್ಮಾನ, ಉಚಿತ ಕಣ್ಣು ತಪಾಸಣೆ ಮತ್ತು ಚಿಕಿತ್ಸಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿಯ ಕಾರ್ಯದರ್ಶಿ ರಾಜೇಶ್ ರಂಪೂರೆ ತಿಳಿಸಿದರು.
ಮೈಸೂರು ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಅಂದು ಈ ಎಲ್ಲಾ ಕಾರ್ಯಕ್ರಮಗಳಿಗೆ ಮೈಸೂರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ದೇವರಾಜ ಭೂತೆ ಉದ್ಘಾಟಿಸುವರು. ಇಳೈ ಆಳ್ವಾರ್ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಚಿಂತಕ ಡಾ.ಕೆ.ರಘುರಾಂ ವಾಜಪೇಯಿ ಅಧ್ಯಕ್ಷತೆ ವಹಿಸುವರು ಎಂದರು. ಉಚಿತ ಕಣ್ಣಿನ ತಪಾಸಣಾ ಶಿಬಿರದಲ್ಲಿ ಚಿಕಿತ್ಸೆಗೆ ಆಯ್ಕೆಯಾಗುವವರಿಗೆ ಉಚಿತ ಶಸ್ತ್ರ ಚಿಕಿತ್ಸೆ ನಡೆಸಿ, ಉಚಿತವಾಗಿ ಕನ್ನಡಕಗಳನ್ನು ನೀಡಲಾಗುವುದು ಎಂದು ಅನ್ನಪೂರ್ಣ ಕಣ್ಣಾಸ್ಪತ್ರೆಯ ವ್ಯವಸ್ಥಾಪಕ ವಿನೋದ್ ನಾಯರ್ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಕಾರ್ತಿಕ್, ಸವಿತಾ ಶಾಸ್ತ್ರಿ, ನಿರ್ಮಲಾ, ರವೀಂದ್ರ ಉಪಸ್ಥಿತರಿದ್ದರು.

ಮೈಸೂರಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ತೆರೆಯುವುದು ಸೇರಿದಂತೆ ನಾನಾ ಬೇಡಿಕೆ ಈಡೇರಿಕೆಗೆ ವಿದ್ಯಾರ್ಥಿಗಳ ಪ್ರತಿಭಟನೆ

ಮೈಸೂರು, ಡಿ.28 (ಎಂಟಿವೈ)– ಮೈಸೂರಿನಲ್ಲಿ ಸರ್ಕಾರಿ ಎಂಜಿನಿಯರಿಂಗ್ ಕಾಲೇಜು ತೆರೆಯುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು.
ಮೈಸೂರಿನ ರಾಮಸ್ವಾಮಿ ವೃತ್ತದಲ್ಲಿ ಆಲ್ ಇಂಡಿಯಾ ಡೆಮಾಕ್ರಟಿಕ್ ಸ್ಟೂಡೆಂಟ್ ಆರ್ಗನೈಸೇಷನ್ (ಎಐಡಿಎಸ್‌ಒ) ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದ ವಿದ್ಯಾರ್ಥಿಗಳು, ಎಐಡಿಎಸ್‌ಒ ವಿದ್ಯಾರ್ಥಿ ಸಂಘಟನೆ ಕಳೆದ 68 ವರ್ಷಗಳಿಂದ ವಿದ್ಯಾರ್ಥಿಗಳಲ್ಲಿ ಮಹಾನ್ ವ್ಯಕ್ತಿಗಳ ಆದರ್ಶ, ಮೌಲ್ಯಗಳನ್ನು ಬೆಳೆಸುತ್ತಿದೆ. ಅನ್ಯಾಯದ ವಿರುದ್ಧ, ಸರ್ಕಾರಿ ಶಾಲಾ ಕಾಲೇಜುಗಳನ್ನು ಉಳಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳನ್ನು ಒಗ್ಗೂಡಿಸಲು ಸತತ ಪ್ರಯತ್ನ ಮಾಡುತ್ತಿದೆ. ಇತ್ತೀಚೆಗೆ ವಿದ್ಯಾರ್ಥಿಗಳಿಗೆ ಸೂಕ್ತ ಸೌಲಭ್ಯ ಸಿಗುತ್ತಿಲ್ಲ. ಹೀಗಾಗಿ ಎಲ್ಲಾ ವಿದ್ಯಾರ್ಥಿಗಳಿಗೂ ವೈಜ್ಞಾನಿಕ, ಧರ್ಮ ನಿರಪೇಕ್ಷ, ಪ್ರಜಾತಾಂತ್ರಿಕ ಶಿಕ್ಷಣ ಖಾತರಿಪಡಿಸಬೇಕು. ಜಿಲ್ಲೆಯಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ತೆರೆಯಬೇಕು. ಎಲ್ಲಾ ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಮೂಲಸೌಲಭ್ಯ ಕಲ್ಪಿಸಬೇಕು. ಎಲ್ಲಾ ವಿದ್ಯಾರ್ಥಿಗಳಿಗೂ ಸಮಯಕ್ಕೆ ಸರಿಯಾಗಿ ವಿದ್ಯಾರ್ಥಿವೇತನ ಪಾವತಿಸಬೇಕು. ಹಾಸ್ಟೆಲ್ ವ್ಯವಸ್ಥೆ ಮಾಡಬೇಕು. ಹಳ್ಳಿಗಳಿಗೆ ಸಮರ್ಪಕ ಬಸ್ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಎಐಡಿಎಸ್‌ಓ ಜಿಲ್ಲಾಧ್ಯಕ್ಷ ಸುಭಾಷ್, ಉಪಾಧ್ಯಕ್ಷೆ ಆಸಿಯಾ ಬೇಗಂ, ಜಿಲ್ಲಾ ಕಾರ್ಯದರ್ಶಿ ಚಂದ್ರಕಲಾ, ಕಾರ್ಯಕಾರಿ ಸಮಿತಿ ಸದಸ್ಯರಾದ ಸ್ವಾತಿ, ನಿತಿನ್, ಹೇಮಲತಾ, ಚಂದ್ರಿಕಾ, ಚಂದನ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.



ಇಂದು, ನಾಳೆ ಡೇ-ನಲ್ಮ್ ಅಭಿಯಾನ

ಮೈಸೂರು,ಡಿ.28– ಮೈಸೂರು ಮಹಾನಗರಪಾಲಿಕೆ ವ್ಯಾಪ್ತಿಯ ಡೇ-ನಲ್ಮ್ ಅಭಿಯಾನದ 2021-22ನೇ ಸಾಲಿನ ನಗರ ವಸತಿರಹಿತರಿಗೆ ಆಶ್ರಯ ಉಪಘಟಕದಡಿ ಎನ್‌ಜಿಓಗಳಿಂದ 3ನೇ ವ್ಯಕ್ತಿಯ ಸಮೀಕ್ಷಾ ಕಾರ್ಯದ ಮೂಲಕ ನಗರದ ವಸತಿ ರಹಿತರನ್ನು ಡಿ.29 ಮತ್ತು 30ರಂದು 2 ದಿನಗಳ ಕಾಲ ರಾತ್ರಿ 11.00 ಗಂಟೆಯಿಂದ ಪ್ರಾರಂಭವಾಗಿ ಬೆಳಗಿನ ಜಾವ 4 ಗಂಟೆಯ ತನಕ ಇಡೀ ನಗರದಾದ್ಯಂತ ಏಕ ಕಾಲದಲ್ಲಿ ಸಮೀಕ್ಷೆಯನ್ನು ಏರ್ಪಡಿಲಾಗಿದೆ. ಕೇಂದ್ರ ಸರ್ಕಾರದ ವಸತಿ ಮತ್ತು ನಗರ ಬಡತನ ನಿರ್ಮೂಲನಾ ಮಂತ್ರಾಲಯ ಭಾರತ ಸರ್ಕಾರದ ಪ್ರಾಯೋಜಿತ ಕಾರ್ಯಕ್ರಮವಾದ ದೀನ್ ದಯಾಳ್ ಅಂತ್ಯೋದಯ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ(ಡೇ-ನಲ್ಮ್)ವನ್ನು ಮೈಸೂರು ಮಹಾನಗರ ಪಾಲಿಕೆ ಅನುಷ್ಠಾನಗೊಳಿಸುತ್ತಿದ್ದು, ಸದರಿ ಅಭಿಯಾನದ ನಗರದ ವಸತಿ ರಹಿತರಿಗೆ ಆಶ್ರಯ ಉಪಘಟಕದಡಿ ನಗರ ವಸತಿರಹಿತರ ಮೂರನೇ ವ್ಯಕ್ತಿ ಸಮೀಕ್ಷೆ ಕಾರ್ಯವನ್ನು ಎನ್‌ಜಿಓ ಮೂಲಕ ನಗರದ ವಸತಿರಹಿತರನ್ನು ರ್‍ಯಾಪಿಡ್ ಸರ್ವೆ (rapid survey) ಮೂಲಕ ಗುರುತಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಎರಡು ದಿನಗಳಂದು 3 ಎನ್‌ಜಿಓಗಳ ಮೂಲಕ ಎಲ್ಲಾ ವಲಯ ಕಛೇರಿಗಳಲ್ಲಿ ನಡೆಸಲಾಗುವ 3ನೇ ವ್ಯಕ್ತಿಯ ಮೂಲಕ ನಗರ ವಸತಿ ರಹಿತರನ್ನು, ಗುರುತಿಸುವ ಸಮೀಕ್ಷಾ ಕಾರ್ಯಕ್ರಮಕ್ಕೆ ನಗರದ ಎಲ್ಲಾ ನಾಗರಿಕ ಸಂಘಟನೆಗಳು, ಸರ್ಕಾರದ ವಿವಿಧ ಇಲಾಖೆಗಳು, ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳು, ಸಮುದಾಯ ಆಧಾರಿತ ಸಂಘಟನೆಗಳು ಮತ್ತು ಸಾರ್ವಜನಿಕರು ಪಾಲಿಕೆಯು ಕೈಗೊಂಡಿರುವ ಈ ಆಂದೋಲನಕ್ಕೆ ಕೈಜೋಡಿಸಿ ಸಹಕರಿಸಬೇಕೆಂದು ಮೈಸೂರು ಮಹಾನಗರ ಪಾಲಿಕೆಯ ಹೆಚ್ಚುವರಿ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕುವೆಂಪು ರಚಿತ ಭಾವಗೀತೆಗಳ ಸಂಗೀತ ಕಾರ್ಯಕ್ರಮ

ಮೈಸೂರು,ಡಿ.28–ಕುವೆಂಪುನಗರ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ನಾಳೆ(ಡಿ.29) ಸಂಜೆ 7 ಗಂಟೆಗೆ ಕುವೆಂಪು ರಚಿತ ಭಾವಗೀತೆಗಳ ಸಂಗೀತ ಕಾರ್ಯಕ್ರಮ ಆಯೋಜಿಸಲಾಗಿದೆ. ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕಲಾವಿದೆ ಕವಿತಾ ಕಾಮತ್ ಮತ್ತು ತಂಡದಿಂದ ಸಂಗೀತ ಕಾರ್ಯಕ್ರಮ ನಡೆಯಲಿದೆ.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ಮೈಸೂರು ಮಿತ್ರ 43 ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
–ಜಾಹೀರಾತು ವ್ಯವಸ್ಥಾಪಕರು

ಬೋಗಯ್ಯನಹುಂಡಿಯಲ್ಲಿ ಕೆರೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ

ರಾಜಕಾರಣಿಗಳು ಕೆಟ್ಟ ಮನಸ್ಥಿತಿ ಬಿಟ್ಟರೆ ಉತ್ತಮ ಸಮಾಜ ನಿರ್ಮಾಣ ಸಾಧ್ಯ

ತಿ.ನರಸೀಪುರ,ಡಿ.28– ರಾಜಕಾರಣಿ ಎಂದರೆ ಬೇರೆಯವರಿಗೆ ಮಾದರಿಯಾಗುವ ರೀತಿಯಲ್ಲಿ ಅಭಿವೃದ್ಧಿ ಕೆಲಸ ಮಾಡಬೇಕು. ರಾಜಕಾರಣಕ್ಕೆ ಬಂದು ಹೇಗೋ ಬದುಕಬಹುದು, ಯಾವುದೇ ರೀತಿ ಬೇಕಾದರೂ ಅಧಿಕಾರ ನಡೆಸಬಹುದು ಎಂಬ ಕೆಟ್ಟ ಮನಸ್ಥಿತಿಯನ್ನು ನಿಯಂತ್ರಿಸಿದರೆ ಉತ್ತಮ ಸಮಾಜದ ನಿರ್ಮಾಣ ಸಾಧ್ಯ ಎಂದು ಜಿ.ಪಂ ಮಾಜಿ ಸದಸ್ಯ ಹಾಗೂ ಎಂಸಿಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಸದಾನಂದ ಅಭಿಪ್ರಾಯ ವ್ಯಕ್ತಪಡಿಸಿದರು.

ವರುಣಾ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬೋಗಯ್ಯನ ಹುಂಡಿ ಗ್ರಾಮದಲ್ಲಿ ಅಂತರ್ಜಲಾಭಿವೃದ್ಧಿಗಾಗಿ 4 ಎಕರೆ ಪ್ರದೇಶದಲ್ಲಿ ಅಭಿವೃದ್ಧಿ ಪಡಿಸಲಾಗುವ ಕೆರೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ಗ್ರಾಮೀಣ ಪ್ರದೇಶದ ಜನರಲ್ಲಿ ಸುಸ್ಥಿರ ಬದುಕನ್ನು ಕಟ್ಟಿಕೊಳ್ಳಬೇಕೆಂಬ ಭಾವನೆ ಇದೆಯಾದರೂ, ರಾಜಕಾರಣ ಎಲ್ಲೋ ಕೆಲವರ ವೈಚಾರಿಕ ಚಿಂತನೆಗಳಡಿ ಸಿಲುಕಿ ಅಪ್ರಭುದ್ಧತೆಯನ್ನು ಜನರಲ್ಲಿ ಮೂಡುವಂತೆ ಮಾಡಿದೆ. ಒಬ್ಬ ರಾಜಕಾರಣಿ ತಾನೇ ಸಾರ್ವಭೌಮ, ತಾನೇಳಿದ್ದೇ ಸರಿ, ತಾನು ಮಾಡಿದ್ದೇ ಸರಿ ಎಂಬ ಕೆಟ್ಟ ಮನಸ್ಥಿತಿಯನ್ನು ಸ್ವಲ್ಪ ಮಟ್ಟಿಗಾದರೂ ನಿಯಂತ್ರಿಸಿದರೆ ಒಳ್ಳೆಯ ಫಲಿತಾಂಶ ನೀಡಿ ಉತ್ತಮ, ಸಮ ಸಮಾಜದ ನಿರ್ಮಾಣ ಸಾಧ್ಯ ಎಂದರು.

2016 ರ ಚುನಾವಣೆ ಸಂದರ್ಭದಲ್ಲಿ ಗ್ರಾಮಕ್ಕೆ ಬಂದಾಗ ಕೆರೆಯನ್ನು ನೋಡಿ ಅಭಿವೃದ್ಧಿ ಸಾಧ್ಯವಿಲ್ಲವೇ ಎಂಬ ಪ್ರಶ್ನೆ ಮೂಡಿತ್ತು. ಗ್ರಾಮಸ್ಥರು ನಮ್ಮದು ಸಣ್ಣ ಗ್ರಾಮ, ಅಭಿವೃದ್ಧಿ ಕಾರ್ಯಗಳಾಗಬೇಕಾದರೆ ಜಾತಿ ಪ್ರಾಬಲ್ಯ ಇರಬೇಕು ಅಥವಾ ಆ ಊರಿನ ಜನಸಂಖ್ಯೆ ಹೆಚ್ಚಿರಬೇಕು, ಹಾಗಾದಾಗ ಮಾತ್ರವೇ ರಾಜಕಾರಣಿಗಳು ಗಮನ ಹರಿಸಿ ಅಭಿವೃದ್ಧಿ ಕಾಮಗಾರಿಗಳನ್ನು ಮಾಡುತ್ತಾರೆ ಎಂಬ ಅಭಿಪ್ರಾಯ ಬಂದಿತ್ತು. ಆಗ ಗ್ರಾಮಸ್ಥರ ಸಹಕಾರ ಕೋರಿ ನಾನೇ ಕೆರೆ ಅಭಿವೃದ್ಧಿ ಕಾಮಗಾರಿ ಮಾಡುವ ಬಯಕೆ ವ್ಯಕ್ತಪಡಿಸಿದ್ದೆ. ಅದಕ್ಕೆ ಪೂರಕವಾಗಿ 5 ವರ್ಷದಿಂದ ಏನನ್ನೂ ಮಾಡಲು ಸಾಧ್ಯವಾಗಲಿಲ್ಲ. ಕಾಮಳ್ಳಿ ಕೆರೆಯಲ್ಲಿ ಶಿಲ್ಟ್ ತುಂಬಿ ಹೋಗಿತ್ತು. ಕಾರ್ಯ ಗ್ರಾಮದಲ್ಲಿ 40 ರಿಂದ 50 ವರ್ಷಗಳಿಂದ ಕೆರೆಗಳ ಶಿಲ್ಟ್ ತೆಗೆಸಿರಲಿಲ್ಲ. ಇದರಿಂದಾಗಿ ಸಿದ್ದೇಶ್ವರ ಜಾತ್ರೆ ಸಂದರ್ಭದಲ್ಲಿ ಕೆರೆಯಲ್ಲಿ ನೀರಿಲ್ಲದೇ ತ್ರಿಪ್ಪಸ್ಥಿತಿಗೊಂಡಿತ್ತು ಎಂದರು.

ಗ್ರಾಮಸ್ಥರ ಸಹಕಾರದೊಂದಿಗೆ ಕೆರೆಗಳ ಶಿಲ್ಟ್ ತೆಗೆಸಿದ್ದರಿಂದ ಶೇ.20 ರಷ್ಟು ನೀರಿನ ಸಮಸ್ಯೆ ಬಗೆಹರಿಯಿತು.ಕೆರೆ ಹೂಳೆತ್ತಿಸಿದ್ದರಿಂದ ಅಂತರ್ಜಲ ವೃದ್ಧಿಯಾಯಿತು. ಹಾಗಾಗಿ ನಾವು ಗುಡಿ ಗೋಪುರಗಳಿಗೆ ಕೊಡುತ್ತಿರುವ ಪ್ರಾಮುಖ್ಯತೆಯನ್ನು ಕೆರೆಯ ಹೂಳೆತ್ತುವುದಕ್ಕೆ ಕೊಟ್ಟಲ್ಲಿ, ಕೆರೆ ಅಭಿವೃದ್ಧಿಯನ್ನು ಮೂಲಭೂತ ಉದ್ದೇಶವನ್ನಾಗಿಸಿಕೊಂಡು ನಮ್ಮ ಶ್ರಮದ ಹಣದಲ್ಲಿ, ಊರಿನವರ ಆರ್ಥಿಕ ಸಹಭಾಗಿತ್ವದಲ್ಲಿ ಕೆಲಸ ಮಾಡಿಕೊಂಡು ಹೋದಾಗ ಸಾಮಾನ್ಯರಿಗೂ ಸಹ ನಮ್ಮ ಕೆಲಸ ನಾವೇ ಮಾಡಿಕೊಳ್ಳಬೇಕೆಂಬ ಮನೋಭಾವನೆ ಬರುತ್ತದೆ ಎಂದರು.



ಅಳಗಂಚಿ ಗ್ರಾಮದಲ್ಲಿ ಕೆರೆ ನಿರ್ಮಾಣ: ಅಳಗಂಚಿ ಗ್ರಾಮದಲ್ಲಿ ಕೆರೆ ಅಭಿವೃದ್ಧಿ ಪಡಿಸಿ, ನೀರನ್ನು ತುಂಬಿಸುವ ಮೂಲಕ ಬಾಗಿನ ಅರ್ಪಿಸಲಾಗಿದೆ. ಗ್ರಾಮಸ್ಥರು ಕೆರೆ ತುಂಬಿಸಿ ಕೊಡುವಂತೆ ಕೋರಿದ್ದ ಹಿನ್ನೆಲೆಯಲ್ಲಿ ಕೆರೆ ಅಭಿವೃದ್ಧಿ ಪಡಿಸಲಾಗಿದೆ. ಕೆರೆ ಅಭಿವೃದ್ಧಿಗೆ ಗ್ರಾಮಸ್ಥರು ಮೂರೇ ದಿನದಲ್ಲಿ 1 ಲಕ್ಷ ರೂ.ಗಳನ್ನು ಕೊಟ್ಟಿದ್ದನ್ನು ಮರೆಯಲು ಸಾಧ್ಯವಾಗದು. ಗ್ರಾಮಗಳಲ್ಲಿ ಸಾಮಾನ್ಯವಾಗಿ ಬಂದ ರಾಜಕಾರಣಿಯ ಹತ್ತಿರ ಎಷ್ಟು ಸಾಧ್ಯವೋ ಅಷ್ಟೂ ಕಿತ್ತುಕೊಳ್ಳುವ ಮನೋಭಾವನೆ ಕೆಲವೆಡೆ ಇರುವ ಪ್ರಸ್ತುತ ದಿನಗಳಲ್ಲಿ ಉದಾರತೆಯಿಂದ ಊರಿನ ಕೆಲಸವಾಗಬೇಕೆಂಬ ಉದ್ದೇಶದೊಂದಿಗೆ ತಮ್ಮಕೈಲಾದ್ದನ್ನು ನೀಡಿದ್ದಾರೆ ಎಂದು ಸ್ಮರಿಸಿದರು.

ಕೆರೆ ನಿರ್ಮಾಣ ರಾಜಕೀಯ ಉದ್ದೇಶದಿಂದಲ್ಲ!: ಕೆರೆ ನಿರ್ಮಾಣದಿಂದ ಅಂತರ್ಜಲ ಹೆಚ್ಚಾಗಿ ಸುತ್ತಮುತ್ತಲ ಗ್ರಾಮಗಳಿಗೆ ಹಾಗೂ ಪ್ರಾಣಿ ಪಕ್ಷಿಗಳಿಗೆ ಸಹಾಯಕವಾಗಲಿ ಎಂಬ ಮಾನವೀಯತೆಯಡಿ ಎಲ್ಲರಿಗೂ ಒಳ್ಳೆಯದಾಗಲಿ ಎಂಬ ಸದುದ್ದೇಶದಿಂದ ನನ್ನ ಸ್ವಂತ ದುಡಿಮೆಯಲ್ಲಿ ಕೆರೆ ಅಭಿವೃದ್ಧಿ ಪಡಿಸಲು ಪ್ರಾರಂಭ ಮಾಡಿದ್ದೇನೆ. ಯಾವುದೇ ರಾಜಕೀಯ ದುರುದ್ದೇಶದಿಂದಲ್ಲ. ಹಾಗಾಗಿ ಗ್ರಾಮಸ್ಥರು ತಮ್ಮಲ್ಲಿರುವ ವೈಮನಸ್ಯಗಳನ್ನು ಮನೆಯಲ್ಲೇ ಮುಗಿಸಿ ನನಗೆ ಸಹಕಾರ ನೀಡಿ, ರಾಜಕಾರಣವನ್ನು ಚುನಾವಣೆ ಬಂದಾಗ ಮಾಡಿ, ಈಗ ಹಳ್ಳಿಯ ಅಭಿವೃದ್ಧಿಗೆ ನನ್ನೊಂದಿಗೆ ಕೈ ಜೋಡಿಸಿ ಎಂದು ಮನವಿ ಮಾಡಿದರು.

ಕಷ್ಟವಾದರೂ ಅಭಿವೃದ್ಧಿ ಪಡಿಸುತ್ತೇನೆ: ಕೆರೆ ಅಭಿವೃದ್ಧಿ ಪಡಿಸಲು ಎಸ್ಟಿಮೇಟ್ ಮಾಡಿಸಿದಾಗ ಉದ್ದೇಶಿತ ಕಾಮಗಾರಿಗೆ 85 ಲಕ್ಷ ಬೇಕಾಗುತ್ತದೆ.ಸರ್ಕಾರಿ ಕಾರ್ಯಕ್ರಮವಾದರೆ 1 ರಿಂದ 1.5 ಕೋಟಿ ರೂ.ಗಳಾಗುತ್ತದೆ ಎಂಬ ಮಾಹಿತಿ ಸಿಕ್ಕಿತು. ಅನುದಾನ ಬಿಡುಗಡೆ ಕುರಿತಂತೆ ವಿಚಾರಿಸಲಾಗಿ ಅದು ಸಾಧ್ಯವಿಲ್ಲವೆಂಬ ಅಂಶ ಗಮನಕ್ಕೆ ಬಂತು ಕೊನೆಗೆ ನಾನೇ ಸ್ವಂತ ದುಡಿಮೆಯಿಂದ ಕೆರೆ ಅಭಿವೃದ್ಧಿ ಮಾಡಿಸಲು ಮುಂದಾಗಿದ್ದೇನೆ. 'ಅಟಲ್ ಕೆರೆ' ಎಂಬ ಹೆಸರಿನೊಂದಿಗೆ ಸುಮಾರು 4.5 ಎಕರೆ ಪ್ರದೇಶದಲ್ಲಿ ವಿಶಾಲವಾದ ಕೆರೆ ನಿರ್ಮಾಣ ಮಾಡಲಾಗುತ್ತದೆ ಎಂದು ತಿಳಿಸಿದರು.

ಆರ್‌ಎಸ್‌ಎಸ್ ಮುಖಂಡ ಅಕ್ಷಯ್, ಕ್ಷೇತ್ರ ಮಾಜಿ ಅಧ್ಯಕ್ಷ ಎ.ಎನ್. ಶಿವಯ್ಯ, ಮುಖಂಡರಾದ ವರಹಳ್ಳಿ ನಾಗೇಂದ್ರ, ಸೋಮಣ್ಣ, ಶಂಕರಪ್ಪ, ಬಿ.ಎಸ್. ಕುಮಾರ, ಪ್ರಭುಸ್ವಾಮಿ, ಚಂದ್ರಶೇಖರ್, ನಾಗರಾಜಪ್ಪ, ಜವರಪ್ಪ ಹಾಗೂ ಭೋಗಯ್ಯನಹುಂಡಿ ಗ್ರಾಮಸ್ಥರು ಈ ವೇಳೆ ಹಾಜರಿದ್ದರು.

ರೈತರ ಹೋರಾಟದ ವೇದಿಕೆ ತೆರವು ವಿರೋಧಿಸಿ ರಸ್ತೆ ತಡೆ

ಹುಣಸೂರು, ಡಿ.28– ಕಬ್ಬಿನ ದರ ನಿಗದಿಗೆ ಆಗ್ರಹಿಸಿ ಮಂಡ್ಯ ಜಿಲ್ಲೆಯಲ್ಲಿ ಹೋರಾಟ ಮಾಡುತ್ತಿದ್ದ ರೈತರ ವೇದಿಕೆಯನ್ನು ತೆರವುಗೊಳಿಸಿ ರೈತರನ್ನು ಬಂಧಿಸಿರುವ ಬಿಜೆಪಿ ಸರ್ಕಾರದ ವಿರುದ್ಧ ಹುಣಸೂರು ತಾಲೂಕಿನ ಸಂವಿಧಾನ ಸರ್ಕಲ್‌ನಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ದಲಿತ ಸಂಘರ್ಷ ಸಮಿತಿ ಮತ್ತು ಪ್ರಗತಿಪರ ಸಂಘಟನೆಗಳ ವತಿಯಿಂದ ರಸ್ತೆ ತಡೆದು ಪ್ರತಿಭಟಿಸಲಾಯಿತು.

ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಅಧ್ಯಕ್ಷ ಹೊಸೂರ್ ಕುಮಾರ್, ದಲಿತ ಸಂಘರ್ಷ ಸಮಿತಿಯ ರಾಮಕೃಷ್ಣ ಹತ್ತಿಕುಪ್ಪೆ, ಕರವೇ ಕಾರ್ಯದರ್ಶಿ ಪ್ರಭಾಕರ್ ನಿಲುವಾಗಿಲು, ತಂಬಾಕು ಮಂಡಳಿಯ ಅಧ್ಯಕ್ಷ ಶಿವಣ್ಣ, ಮೊದೂರು ಆದಿ ಜಾಂಬವ ಸಂಘದ ಅಧ್ಯಕ್ಷ ಶಿವಣ್ಣ, ದಸಂಸದ ರಾಜು, ಚಿಕ್ಕ ಹುಣಸೂರು ರೈತ ಸಂಘದ ತಾಲೂಕು ಪ್ರಧಾನ ಕಾರ್ಯದರ್ಶಿ ರಾಮೇಗೌಡ, ಅಗ್ರಹಾರ ಧನಂಜಯ, ಕಿರಿಜಾಜಿ ಶಿವರಾಜ, ಮುತ್ತುರಾಯನ ಹೊಸಳ್ಳಿ ಸಿದ್ದೇಶ, ಅತ್ತಿಕುಪ್ಪೆ ಪುಟ್ಟರಾಜು, ಬೀರನಹಳ್ಳಿ ಸತೀಶ್, ಅಗ್ರಹಾರ ವಿಷಕಂಠಪ್ಪ ಕಲ್ಲಹಳ್ಳಿ ಇನ್ನು ಹಲವಾರು ಕಾರ್ಯಕರ್ತರು ಭಾಗವಹಿಸಿದ್ದರು.



ಸಂವಿಧಾನ ಸರ್ಕಲ್‌ನಲ್ಲಿ ರಸ್ತೆ ತಡೆದು ಪ್ರತಿಭಟನೆ ನಡೆಸುತ್ತಿರುವ ರೈತರು.

ಕರಿಮುದ್ದನಹಳ್ಳಿ ಗ್ರಾಪಂ ಅಧ್ಯಕ್ಷಗಾದಿ ಕಾಂಗ್ರೆಸ್ ತೆಕ್ಕೆಗೆ



ಹುಣಸೂರು.ಡಿ.28(ಕೆಕೆ)– ಹುಣಸೂರು ತಾಲೂಕಿನ ಧರ್ಮಾಪುರ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಕರಿಮುದ್ದನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಶೃತಿ ಸ್ವಾಮಿ 11 ಮತಗಳನ್ನು ಪಡೆದು ಜಯಗಳಿಸಿದ್ದಾರೆ.

ಆಂತರಿಕ ಒಪ್ಪಂದದಂತೆ ಈ ಹಿಂದೆ ಅಧ್ಯಕ್ಷರಾಗಿದ್ದ ರತ್ನಮ್ಮ ಅವರ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಇಂದು ನಡೆದ ಚುನಾವಣೆಯಲ್ಲಿ ಶೃತಿ ಸ್ವಾಮಿ ಅವರು ನಾಮಪತ್ರ ಸಲ್ಲಿಸಿದರೆ, ಪ್ರತಿಸ್ಪರ್ಧಿಯಾಗಿ ಕಾಂಗ್ರೆಸ್ ಬಂಡಾಯ ಅಭ್ಯರ್ಥಿಯಾಗಿ ತುಳಸಮ್ಮ ನಾಮಪತ್ರ ಸಲ್ಲಿಸಿದರು. ಶೃತಿಯವರು 11 ಮತ ಪಡೆದು ಅಧ್ಯಕ್ಷರಾಗಿ ಆಯ್ಕೆಯಾದರೆ, ಪ್ರತಿಸ್ಪರ್ಧಿ ತುಳಸಮ್ಮ ಐದು ಮತ ಪಡೆದು ಸೋಲನುಭವಿಸಿದರು.

ಚುನಾವಣಾಧಿಕಾರಿಯಾಗಿ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಮೋಹನ್ ಕುಮಾರ್ ಕಾರ್ಯ ನಿರ್ವಹಿಸಿದರು. ಚುನಾವಣಾ ಪ್ರಕ್ರಿಯೆಯಲ್ಲಿ ಉಪಾಧ್ಯಕ್ಷ ಮಹದೇವ್, ಸದಸ್ಯರುಗಳಾದ ಪ್ರಕಾಶ್, ಪ್ರಭ, ಚಿಕ್ಕನಾಯಕ, ರವಿಕುಮಾರ್, ಮಂಗಳಮ್ಮ, ವಿಜಯಮ್ಮ, ಕುಮಾರಿ, ಮರಿಲಿಂಗ, ನಾಗೇಶ್, ಸೇರಿದಂತೆ ಜೆಡಿಎಸ್ ಹಾಗೂ ಬಿಜೆಪಿ ಬೆಂಬಲಿತ ಸದಸ್ಯರು ಭಾಗವಹಿಸಿದ್ದರು.

ಚುನಾವಣಾ ಫಲಿತಾಂಶ ಪ್ರಕಟಗೊಳ್ಳುತ್ತಿದ್ದಂತೆ ಕಾಂಗ್ರೆಸ್ ಕಾರ್ಯಕರ್ತರು ಪಟಾಕಿ ಸಿಡಿಸಿ ಸಿಹಿ ಹಂಚಿ ಜೈಕಾರ ಕೂಗಿದರು.

ಪತ್ನಿಗಿಂತ ಪಕ್ಷ ನಿಷ್ಠೆ ಮುಖ್ಯ

ಕರಿಮುದ್ದನಹಳ್ಳಿ ಗ್ರಾಮ ಪಂಚಾಯಿತಿಯ ಹಾಲಿ ಉಪಾಧ್ಯಕ್ಷ ಮಹದೇವ ಅವರು ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಗೆ ಸ್ಪರ್ಧಿಸಿದ್ದ ತಮ್ಮ ಪತ್ನಿ ತುಳಸಮ್ಮ ನವರಿಗೆ ಮತ ಚಲಾಯಿಸದೆ ಪಕ್ಷ ನಿಷ್ಠೆ ಮರೆದಿದ್ದಾರೆ. ಮಹದೇವ ಅವರ ಪತ್ನಿ ತುಳಸಮ್ಮ ಮಯೂರಪುರ ಕ್ಷೇತ್ರದಿಂದ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಯಾಗಿ ಸ್ಪರ್ಧಿಸಿ ಜಯಗಳಿಸಿದ್ದರು. ಇಂದು ನಡೆದ ಗ್ರಾಮ ಪಂಚಾಯಿತಿ ಅಧ್ಯಕ್ಷ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಆಕಾಂಕ್ಷಿಯಾಗಿದ್ದು, ನಾಮಪತ್ರ ಸಲ್ಲಿಸಿದ್ದರು. ಈ ಹಿಂದೆ ಮಾಡಿಕೊಂಡ ಒಪ್ಪಂದದಂತೆ ಶೃತಿ ಸ್ವಾಮಿಯವರಿಗೆ ಅಧ್ಯಕ್ಷ ಸ್ಥಾನ ನೀಡಬೇಕಾಗಿದ್ದರಿಂದ ತುಳಸಮ್ಮರಿಗೆ ಕಣದಿಂದ ಹಿಂದೆ ಸರಿಯುವಂತೆ ತಿಳಿಸಲಾಯಿತು.

ಇದ್ಯಾವುದಕ್ಕೂ ಬಗ್ಗದೆ ತುಳಸಮ್ಮ ವಿರೋಧಪಕ್ಷದವರ ಬೆಂಬಲದಿಂದ ಅಧ್ಯಕ್ಷೆಯಾಗುತ್ತೇನೆಂದು ಹಠ ಮಾಡಿ ಕೊನೆಗೆ ಚುನಾವಣಾ ಕಣದಲ್ಲೇ ಉಳಿದರು. ಚುನಾವಣೆಯಲ್ಲಿ ಬಿಜೆಪಿ ಬೆಂಬಲಿತ ಸದಸ್ಯರ ಮೂರು ಮತ, ಜೆಡಿಎಸ್ ಬೆಂಬಲಿತ ಸದಸ್ಯರ ಒಂದು ಮತ ತನ್ನದೊಂದು ಮತ ಸೇರಿದಂತೆ ಒಟ್ಟು ಐದು ಮತಗಳನ್ನು ಪಡೆದು ಸೋಲು ಅನುಭವಿಸಬೇಕಾಯಿತು.

ಪತಿ ಉಪಾಧ್ಯಕ್ಷ ಮಹದೇವ ತಮ್ಮ ಪತ್ನಿ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆಗೆ ಸ್ಪರ್ಧಿಸಿದ್ದರೂ ಅವರಿಗೆ ಮತ ಚಲಾಯಿಸದೆ ಪಕ್ಷಕ್ಕೆ ಕೊಟ್ಟ ಮಾತಿನಂತೆ ಶೃತಿ ಸ್ವಾಮಿ ಅವರಿಗೆ ಮತ ಚಲಾಯಿಸಿ ಪಕ್ಷಕ್ಕೆ ಸ್ವಾಮಿ ನಿಷ್ಠೆ ಮೆರೆದರು.

ಉದ್ಯಮಿ ಎಚ್.ಪಿ. ಅಮರನಾಥ್, ತಾಪಂ ಮಾಜಿ ಸದಸ್ಯ ದೇವರಾಜ್, ಮುಖಂಡರಾದ ಗುಣಶೇಖರ್, ಚಂದನ್, ಕೆಂಡಗಣ್ಣ, ಶಿವಪ್ಪ, ಮಹದೇವ್, ರಂಗರಾಜ್, ಶಿವಪ್ಪ, ಕನಕರಾಜ್, ಮಹದೇವಸ್ವಾಮಿ, ರಮೇಶ್ ಸೇರಿದಂತೆ ಇತರರು ಇದ್ದರು

ಜೆಡಿಎಸ್, ಬಿಜೆಪಿ ಗಿಮಿಕ್‌ಗೆ ಮರುಳಾಗದೆ ಕಾಂಗ್ರೆಸ್ ಗೆಲ್ಲಿಸಿ

ಕೋಮಲಾಪುರದ ಕಾಂಗ್ರೆಸ್ ಸಮಾವೇಶದಲ್ಲಿ ಮಾಜಿ ಶಾಸಕ ಕೆ.ವೆಂಕಟೇಶ್ ಕರೆ

ಪಿರಿಯಾಪಟ್ಟಣ, ಡಿ.28– ಒಳ ಒಪ್ಪಂದ, ಕುಟುಂಬ ರಾಜಕಾರಣದ ಜೆಡಿಎಸ್ ಮತ್ತು ಕೋಮುವಾದಿ ಬಿಜೆಪಿಯ ಚುನಾವಣಾ ಗಿಮಿಕ್‌ಗೆ ಶರಣಾಗದೆ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವಂತೆ ಮಾಜಿ ಶಾಸಕ ಕೆ. ವೆಂಕಟೇಶ್ ಕಾರ್ಯಕರ್ತರಲ್ಲಿ ಮನವಿ ಮಾಡಿದ್ದಾರೆ.

ತಾಲೂಕಿನ ಕೋಮಲಾಪುರದಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಬೃಹತ್ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ಬಾರಿಯ ಚುನಾವಣೆಯಲ್ಲಿ ನನ್ನ ಗೆಲುವು ಖಚಿತ ಎಂದರು.

ತಾಲೂಕಿನಲ್ಲಿ ನಡೆಯುವ ಜಿಜೆಪಿ ಸಮಾರಂಭಗಳಲ್ಲಿ ಸಂಸದ ಪ್ರತಾಪ್ ಸಿಂಹ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ. ಸೋಮಶೇಖರ್ ಅವರುಗಳು ಜೆಡಿಎಸ್‌ನ ಹಾಲಿ ಶಾಸಕ ಮಹದೇವ ಅವರನ್ನು ಇನ್ನಿಲ್ಲದಂತೆ ಬಹಿರಂಗವಾಗಿಯೇ ಹಾಡಿ ಹೊಗಳುವ ಮೂಲಕ ಅಪವಿತ್ರ ಮೈತ್ರಿ ಮಾಡಿಕೊಂಡಿರುವುದನ್ನು ಸಾರುತ್ತಿದ್ದಾರೆ ಎಂದು ಟೀಕಿಸಿದ ಅವರು, ಶಾಸಕ ಮಹದೇವ ಅವರಿಗೆ ತಾಲೂಕಿನ ಮೂಲಭೂತ ಸಮಸ್ಯೆಗಳ ಬಗ್ಗೆಯೇ ಅರಿವಿಲ್ಲ ಎಂದು ಏಕವಚನದಲ್ಲಿ ವಾಗ್ದಾಳಿ ನಡೆಸಿದರು.

ನಾನು ಈ ಹಿಂದೆ ನಿದ್ದೆ ಮಾಡಿ ಶೋಕಿ ಮಾಡಿದ್ದರೆ ತಾಲೂಕಿನ ಕರಡಿ ಲಕ್ಕನಕೆರೆ ಏತ ನೀರಾವರಿ ಯೋಜನೆ ಆಗುತ್ತಿತ್ತೆ. ನನ್ನ ಅವಧಿಯಲ್ಲಿ ಬಸ್ ಡಿಪೋ, ಆರ್‌ಎಂಸಿ ಗೋಡೌನ್, ಪದವಿ ಕಾಲೇಜು, ಎರಡು ಐಟಿಐ ಕಾಲೇಜ್, 100 ಬೆಡ್‌ನ ಆಸ್ಪತ್ರೆ, ಬೆಟ್ಟದಪುರದಲ್ಲಿ ಸಬ್ ರಿಜಿಸ್ಟ್ರಾರ್ ಆಫೀಸ್, ಅಗ್ನಿಶಾಮಕ ದಳದ ಕಚೇರಿ ಸೇರಿದಂತೆ ಇನ್ನೂ ಹತ್ತು ಹಲವು ಬೃಹತ್ ಯೋಜನೆಗಳು ಕಾರ್ಯರೂಪಕ್ಕೆ ಬರುತ್ತಿತ್ತೇ. ಇವುಗಳ ಬಗ್ಗೆ ಸಾಮಾನ್ಯ ಜ್ಞಾನ ಇಲ್ಲದ ಶಾಸಕರು ಬಾಯಿಗೆ ಬಂದಂತೆ ಸಭೆ ಸಮಾರಂಭಗಳಲ್ಲಿ ನನ್ನ ಬಗ್ಗೆ ಮಾತನಾಡುತ್ತಿದ್ದಾರೆ ಎಂದು ವೆಂಕಟೇಶ್ ಕಿಡಿಕಾರಿದರು.

ಉದ್ಯೋಗ ಖಾತ್ರಿ ಯೋಜನೆ ಯಾರ ಕೆಲಸ, ಪಂಚಾಯಿತಿ ಕೆಲಸಕ್ಕೆ ನೀವ್ಯಾಕೆ ಹಾರೆ–ಗುದ್ದಲಿ ಹಿಡಿಯುತ್ತೀರಿ, 40% ಕಮಿಷನ್ ಇಲ್ಲದೆ ನೀವು ಗುದ್ದಲಿ ಹಿಡಿಯುವುದಿಲ್ಲ ಎಂಬುದು ಅಧಿಕಾರಿಗಳಿಂದ ಹಿಡಿದು ಜನಸಾಮಾನ್ಯರಿಗೆ ಗೊತ್ತಿರುವ ವಿಚಾರ ಎಂದು ಅವರು ಆಪಾದಿಸಿದರು

ಇದೇ ಸಂದರ್ಭದಲ್ಲಿ ಮಾಜಿ ಶಾಸಕ ಕೆ.ವೆಂಕಟೇಶ್ ಹಾಗೂ ಮುಖಂಡರನ್ನು ಬೃಹತ್ ಬೈಕ್ ರ‍್ಯಾಲಿಯ ಮೂಲಕ ಗ್ರಾಮಕ್ಕೆ ಬರಮಾಡಿಕೊಳ್ಳಲಾಯಿತು. ಸಮಾರಂಭದಲ್ಲಿ ಮುಖಂಡರುಗಳಾದ ಬಿ.ಎನ್.ಕರಿಗೌಡ, ಎಚ್.ಡಿ. ಗಣೇಶ್, ಗೋವಿಂದೇಗೌಡ, ಡಿ.ಟಿ.ಸ್ವಾಮಿ ಅವರುಗಳು ಮಾತನಾಡಿದರು. ಸಮಾರಂಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರೆಹ್ಮತ್ ಜಾನ್ ಬಾಬು, ಕಾಂಗ್ರೆಸ್ ಕಾನೂನು ಘಟಕದ ಅಧ್ಯಕ್ಷ ವಕೀಲ ಸುದೇಶ್, ಮುಖಂಡರುಗಳಾದ ನಿತಿನ್ ವೆಂಕಟೇಶ್, ಕೆ.ಪಿ.ಜೀವನ್ ಕುಮಾರ್, ಮಾಜಿ ಗ್ರಾಪಂ ಅಧ್ಯಕ್ಷ ಶಿವಪ್ಪ, ಬಿ.ಎಸ್.ರಾಮಚಂದ್ರ, ಪದ್ಮಲತಾ ರಾಮಚಂದ್ರ, ಪುಟ್ಟಯ್ಯ ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.



ಎಸ್ಸಿ, ಎಸ್ಟಿ ಗುತ್ತಿಗೆದಾರರ ಸಂಘದಿಂದ ಪ್ರತಿಭಟನೆ



ನಂಜನಗೂಡು, ಡಿ.28– ನಂಜನಗೂಡಿನ ಕಬಿನಿ ನೀರಾವರಿ ಇಲಾಖೆಯ ಅಧಿಕಾರಿಗಳು 3ಕ್ಕೂ ಹೆಚ್ಚಿನ ಕಾಮಗಾರಿಯನ್ನು ಒಟ್ಟಿಗೆ ಸೇರಿಸಿ 3 ಕೋಟಿಗಿಂತ ಹೆಚ್ಚಿನ ಪ್ಯಾಕೇಜ್ ಟೆಂಡರ್ ಕರೆಯುವ ಮೂಲಕ ಎಸ್ಸಿ, ಎಸ್ಟಿ ವರ್ಗದ ಗುತ್ತಿಗೆದಾರರನ್ನು ಕಾಮಗಾರಿಗಳಿಂದ ದೂರವಿಟ್ಟು ವಂಚಿಸುತ್ತಿದ್ದಾರೆ. ಕೂಡಲೇ ಪ್ಯಾಕೇಜ್ ಟೆಂಡರ್ ರದ್ದುಪಡಿಸುವಂತೆ ಆಗ್ರಹಿಸಿ ಎಸ್ಸಿ, ಎಸ್ಟಿ ಗುತ್ತಿಗೆದಾರರ ಸಂಘದವರು ಪ್ರತಿಭಟನೆ ನಡೆಸಿದರು.

ನಗರದ ಕಬಿನಿ ಕಚೇರಿಯ ಮುಂಭಾಗ ಜಮಾವಣೆಗೊಂಡ ಕಾರ್ಯಕರ್ತರು, ರಾಜ್ಯ ಸರ್ಕಾರ ಮತ್ತು ನೀರಾವರಿ ಅಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಗುತ್ತಿಗೆದಾರರ ಸಂಘದ ಪ್ರಧಾನ ಕಾರ್ಯದರ್ಶಿ ಉಪ್ಪಿನಹಳ್ಳಿ ಶಿವಣ್ಣ ಮಾತನಾಡಿ, ಬಡ ಎಸ್ಸಿ, ಎಸ್ಟಿ ವರ್ಗದ ಗುತ್ತಿಗೆದಾರರಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಸಿದ್ದರಾಮಯ್ಯನವರು ಸರ್ಕಾರಿ ಕಾಮಗಾರಿಗಳಲ್ಲಿ ಮೀಸಲಾತಿಯನ್ನು ಜಾರಿಗೆ ತಂದರು. ಪ್ರಸ್ತುತ 50 ಲಕ್ಷವರೆಗಿನ ಕಾಮಗಾರಿಗಳಿಗೆ ಎಸ್ಸಿ, ಎಸ್ಟಿ ವರ್ಗದ ಗುತ್ತಿಗೆದಾರರು ಮೀಸಲು ವ್ಯವಸ್ಥೆಯ ಅನುಕೂಲ ಪಡೆಯುವ ಅವಕಾಶವಿದೆ. ನಂಜನಗೂಡಿನ ನೀರಾವರಿ ಇಲಾಖೆಯ ಅಧಿಕಾರಿಗಳು ಎಸ್ಸಿ, ಎಸ್ಟಿ ವರ್ಗದ ಗುತ್ತಿಗೆದಾರರನ್ನು ಟೆಂಡರ್ ಪ್ರಕ್ರಿಯೆಯಿಂದ ಹೊರಗಿಟ್ಟು ಕೆಲಸ ನೀಡದೆ ವಂಚಿಸುವ ಹುನ್ನಾರದಿಂದ ಸುಮಾರು 3 ರಿಂದ 4 ಕಾಮಗಾರಿಗಳನ್ನು ಒಟ್ಟಿಗೆ ಸೇರಿಸಿ 3.35 ಕೋಟಿ, 4.23 ಕೋಟಿ, 82.35 ಲಕ್ಷಗಳಿಗೆ 3 ವಿವಿಧ ಪ್ಯಾಕೇಜ್ ಟೆಂಡರ್ ಕರೆದಿದ್ದಾರೆ. ಆದ್ದರಿಂದ ಶಾಸಕರು ಮತ್ತು ಅಧಿಕಾರಿಗಳು ಈ ಬೃಹತ್ ಮೊತ್ತದ ಟೆಂಡರ್‌ಗಳನ್ನು ರದ್ದುಪಡಿಸಿ 50 ಲಕ್ಷಗಳಿಗೆ ನಿಗದಿಪಡಿಸಿ ಟೆಂಡರ್ ಕರೆಯುವ ಮೂಲಕ ಬಡ ವರ್ಗದ ಗುತ್ತಿಗೆದಾರರಿಗೆ ಅನುಕೂಲ ಕಲ್ಪಿಸಬೇಕು. ಇಲ್ಲವಾದಲ್ಲಿ ಜಿಲ್ಲಾ ಮತ್ತು ರಾಜ್ಯಮಟ್ಟದಲ್ಲಿ ಪ್ರತಿಭಟನೆ ರೂಪಿಸುವುದಾಗಿ ಎಚ್ಚರಿಸಿದರು.

ಗುತ್ತಿಗೆದಾರರ ಸಂಘದ ಅಧ್ಯಕ್ಷ ಸಿದ್ದಲಿಂಗು ಮಾತನಾಡಿದರು. ಈ ಸಂಬಂಧ ನಂಜನಗೂಡು ಕಬಿನಿ ಕಾರ್ಯಪಾಲಕ ಇಂಜಿನಿಯರ್ ಬಿ.ಎಂ.ರಾಜು ರವರಿಗೆ ಮನವಿಪತ್ರ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಗುತ್ತಿಗೆದಾರರ ಸಂಘದ ಶ್ರೀಕಂಠ, ಬಸವರಾಜು, ರಾಜೇಶ್, ಶಂಕರನಾಯಕ, ಕಾಳಯ್ಯ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಎಂ.ಶಂಕರ್, ಶ್ರೀಕಂಠ ನಾಯಕ, ಮುಖಂಡರಾದ ಹುಂಡಿ ನಾಗರಾಜು, ಸೌಭಾಗ್ಯ, ಸಿದ್ದರಾಜು, ಆರ್.ಮಹದೇವ, ಶ್ರೀನಿವಾಸ್, ರಾಜೇಶ್, ಲೋಕೇಶ್, ಸೇರಿದಂತೆ ಪದಾಧಿಕಾರಿಗಳು ಇದ್ದರು.

ಹೆರಿಗೆಗೆ ಆಸ್ಪತ್ರೆಗೆ ಹೋದಾಗ ಬಾಲ್ಯವಿವಾಹ ಪ್ರಕರಣ ಪತ್ತೆ

ಪತಿ ವಿರುದ್ಧ ಪೋಕ್ಸೋ ಪ್ರಕರಣ ದಾಖಲು

ನಂಜನಗೂಡು, ಡಿ.28– ಅಪ್ರಾಪ್ತ ಬಾಲಕಿ ಗರ್ಭಿಣಿಯಾಗಿ ಹೆರಿಗೆಗೆಂದು ಮೈಸೂರಿನ ಕೆ.ಆರ್.ಆಸ್ಪತ್ರೆಗೆ ತೆರಳಿದಾಗ ಬಾಲ್ಯ ವಿವಾಹ ಪ್ರಕರಣ ಬೆಳಕಿಗೆ ಬಂದಿದೆ.

ಈ ಸಂಬಂಧ ತಾಲೂಕಿನ ಬಿಳಿಗೆರೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬಾಲಕಿಯ ಪತಿಯ ಮೇಲೆ ಪೋಕ್ಸೋ ಕಾಯಿದೆಯಡಿಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

ಪೊಲೀಸ್ ಠಾಣೆ ವ್ಯಾಪ್ತಿಯ ಗ್ರಾಮವೊಂದರಲ್ಲಿ ಈ ಘಟನೆ ನಡೆದಿದ್ದು, ಅಪ್ರಾಪ್ತ ಬಾಲಕಿ ಹೆರಿಗೆಗೆಂದು ಆಸ್ಪತ್ರೆಗೆ ತೆರಳಿದಾಗ ಬಾಲಕಿಯ ವಯಸ್ಸು ತಿಳಿದು ಆಕೆ ಅಪ್ರಾಪ್ತೆ ಎಂದು ದೃಢಪಟ್ಟಿದೆ. ಬಳಿಕ ಆಸ್ಪತ್ರೆಯವರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳಿಗೆ ವಿಷಯ ತಿಳಿಸಿದ್ದಾರೆ.

ಆ ನಂತರ ಬಿಳಿಗೆರೆ ವೃತ್ತದ ಸಿಡಿಪಿಒ ಈ ಬಗ್ಗೆ ಬಿಳಿಗೆರೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು ಪಿಎಸ್‌ಐ ಆರತಿ ತನಿಖೆ ಕೈಗೊಂಡಿದ್ದಾರೆ.

ಅರುಂಧತಿ ಸಹಕಾರ ಸಂಘಕ್ಕೆ ಆಯ್ಕೆ

ತಿ.ನರಸೀಪುರ, ಡಿ.28– ಪಟ್ಟಣದ ತ್ರಿವೇಣಿ ನಗರದಲ್ಲಿ ನೂತನವಾಗಿ ಅಸ್ತಿತ್ವಕ್ಕೆ ತರಲಾಗಿರುವ ಅರುಂಧತಿ ಸಹಕಾರ ಸಂಘದ ಅಧ್ಯಕ್ಷರಾಗಿ ಕೆ.ಕೆಂಚಯ್ಯ ಹಾಗೂ ಉಪಾಧ್ಯಕ್ಷರಾಗಿ ಎನ್.ಸಿ.ಲಕ್ಷ್ಮಿ ಅವಿರೋಧವಾಗಿ ಆಯ್ಕೆಗೊಂಡರು.

ಪಟ್ಟಣದ ತ್ರಿವೇಣಿ ನಗರದಲ್ಲಿ 15 ಮಂದಿ ಸದಸ್ಯ ಬಲವಿರುವ ಸಹಕಾರ ಸಂಘವನ್ನು ನೂತನವಾಗಿ ಅಸ್ತಿತ್ವಕ್ಕೆ ತರಲಾಗಿದ್ದು, ಅಧ್ಯಕ್ಷ–ಉಪಾಧ್ಯಕ್ಷ ಸ್ಥಾನಕ್ಕೆ ಸಂಘದ ಕಚೇರಿಯಲ್ಲಿ ಬುಧವಾರ ಚುನಾವಣೆ ನಿಗದಿ ಮಾಡಲಾಗಿತ್ತು.

ಮುಂದಿನ 5 ವರ್ಷಗಳ ಕಾಲದ ಅವಧಿಗೆ ಅಧ್ಯಕ್ಷ ಸ್ಥಾನಕ್ಕೆ ಆಯ್ಕೆ ಬಯಸಿ ಸಾಮಾನ್ಯ ಕ್ಷೇತ್ರದಿಂದ ಕೆ.ಕೆಂಚಯ್ಯ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಮಹಿಳಾ ಮೀಸಲು ಕ್ಷೇತ್ರದಿಂದ ಎನ್.ಸಿ.ಲಕ್ಷ್ಮಿ ಇಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅರುಂಧತಿ ಸಹಕಾರ ಸಂಘದ ರಿಟರ್ನಿಂಗ್ ಆಫೀಸರ್ ಜೆ.ರಮೇಶ್ ಇವರಿಬ್ಬರ ಅವಿರೋಧ ಆಯ್ಕೆಯನ್ನು ಘೋಷಿಸಿದರು.

ಸಂಘದ ಒಟ್ಟು 15 ಆಡಳಿತ ಮಂಡಳಿಯ ಸದಸ್ಯರ ಪೈಕಿ ನೂತನ ಅಧ್ಯಕ್ಷ–ಉಪಾಧ್ಯಕ್ಷರು ಸೇರಿದಂತೆ ಬಿ.ಮಂಜುನಾಥ್, ಎಂ.ಮಹದೇವಸ್ವಾಮಿ, ಎಲ್.ಮಂಜುನಾಥ್, ಎಂ.ಎಸ್.ಶಿವಣ್ಣ ಎಂ.ನವೀನ್ ರಾಜ್, ಬಿ.ಎಸ್.ಸುನೀಲ್ ಕುಮಾರ್, ಟಿ.ನಾಗಣ್ಣ, ಡಿ.ಪ್ರಭುದೇವ್, ಎಸ್.ಮಂಜು, ಎಂ.ಪ್ರಸಾದ್, ಸಿದ್ದಮ್ಮ ಬಿ.ಎಸ್.ವಸಂತ ಚುನಾವಣೆ ಸಭೆಯಲ್ಲಿ ಹಾಜರಿದ್ದು ಸಹಕಾರ ಸಂಘದ ವರಿಷ್ಠರ ಆಯ್ಕೆಗೆ ಅನುಮೋದನೆ ಸೂಚಿಸಿದರೆ, ನಿರ್ದೇಶಕರಾದ ಟಿ.ಕೆ.ರಜನೀಶ್ ಹಾಗೂ ಎಂ.ಮಹದೇವಸ್ವಾಮಿ ಗೈರಾದರು.



ಹೆಚ್ಚು ಷೇರುದಾರರನ್ನು ನೋಂದಣಿ ಮಾಡಿ!: ನೂತನ ಅಧ್ಯಕ್ಷ ಕೆ.ಕೆಂಚಯ್ಯ ಮಾತನಾಡಿ, ಪ್ರತಿ ಹಳ್ಳಿಗಳಿಂದಲೂ ಹೆಚ್ಚಿನ ಸಂಖ್ಯೆಯ ಷೇರುದಾರರನ್ನು ಸಂಘಕ್ಕೆ ನೋಂದಣಿ ಮಾಡಿಸಿದರೆ ಸಂಘ ಮತ್ತಷ್ಟು ಸದೃಢವಾಗಿ ಬೆಳೆಯುತ್ತದೆ ಎಂದರು.

ಉಪಾಧ್ಯಕ್ಷೆ ಎನ್.ಸಿ.ಲಕ್ಷ್ಮಿ ಮಾತನಾಡಿ, ಅವಿರೋಧವಾಗಿ ಆಯ್ಕೆ ಮಾಡಿದ ಸದಸ್ಯರಿಗೆ ಕೃತಜ್ಞತೆ ಸಲ್ಲಿಸಿ, ಸಂಘದ ಆರ್ಥಿಕ ಬೆಳವಣಿಗೆಗೆ ಅಧ್ಯಕ್ಷರಿಗೆ ಸಂಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದರು.

ಡಿಆರ್‌ಸಿ ಸಿನಿಮಾಸ್

ದೂ : 4240422/4241800

- ಸ್ಕ್ರೀನ್ 1 ವೇದ (ಕ): ಬೆ.7ಕ್ಕೆ, ಬೆ.10.05ಕ್ಕೆ, ಮ.1.05ಕ್ಕೆ, ಕಾಂತಾರ (ಕ): ಸಂ.4.15ಕ್ಕೆ, ಧಮಾಕ (ತೆ): ರಾ.7.10ಕ್ಕೆ, ರಾ.10ಕ್ಕೆ.
- ಸ್ಕ್ರೀನ್ 2 ಅವತಾರ್: ದಿ ವೇ ಆಫ್ ವಾಟರ್ (3ಡಿ)(ಇಂ): ಬೆ.9.50ಕ್ಕೆ, ಕನೆಕ್ಟ್ (ತ): ಮ.1.40ಕ್ಕೆ, 18 ಪೇಜಸ್ (ತೆ): ಸಂ.4.05ಕ್ಕೆ, ವೇದ (ಕ): ರಾ.7.05ಕ್ಕೆ, ಕಾಪ (ಮ): ರಾ.10.05ಕ್ಕೆ
- ಸ್ಕ್ರೀನ್ 3 ಹೊಸ ದಿನಚರಿ (ಕ): ಬೆ.10.45ಕ್ಕೆ, ಸರ್ಕಸ್ (ಹಿಂ): ಮ.1.20ಕ್ಕೆ, ರಾ.7.05ಕ್ಕೆ, ರಾ.9.55ಕ್ಕೆ, ವಿಶಾಲ್ ಇನ್ ಲಾಠಿ (ತ): ಸಂ.4.10ಕ್ಕೆ
- ಸ್ಕ್ರೀನ್ 4 ಅವತಾರ್: ದಿ ವೇ ಆಫ್ ವಾಟರ್ (3ಡಿ)(ಇಂ): ಬೆ.10.55ಕ್ಕೆ, ಮ.2.35ಕ್ಕೆ, ಸಂ.6.15ಕ್ಕೆ, ರಾ.9.50ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

- ಸ್ಕ್ರೀನ್ 1 ವೇದ (ಕ): ಬೆ.9.55ಕ್ಕೆ, ಮ.1.05ಕ್ಕೆ, ರಾ.7.10ಕ್ಕೆ, ರಾ.10.20ಕ್ಕೆ, 18 ಪೇಜಸ್ (ತೆ): ಸಂ.4.15ಕ್ಕೆ.
- ಸ್ಕ್ರೀನ್ 2 ಅವತಾರ್: ದಿ ವೇ ಆಫ್ ವಾಟರ್ (3ಡಿ)(ಇಂ): ಬೆ.11ಕ್ಕೆ, ಮ.2.50ಕ್ಕೆ, ಸಂ.6.40ಕ್ಕೆ, ರಾ.10.30ಕ್ಕೆ,
- ಸ್ಕ್ರೀನ್ 3 ಕಾಂತಾರ (ಕ): ಬೆ.11.10ಕ್ಕೆ, ಡಾ.56 (ಕ): ಮ.2.05ಕ್ಕೆ, ವಿಜಯಾನಂದ (ಕ): ಸಂ.4.25ಕ್ಕೆ, ಮೈಸೂರು ಡೈರಿಸ್ (ಕ): ರಾ.7.40ಕ್ಕೆ, ಪಂಚತಾರಂ (ತೆ): ರಾ.10.10ಕ್ಕೆ.
- ಸ್ಕ್ರೀನ್ 4 ಗುರುತುಂದ ಸೀತಾಕಾಲಂ (ತೆ): ಬೆ.10.25ಕ್ಕೆ, ರಾ.7.20ಕ್ಕೆ, ನೈ ಸೇಕರ್ ರಿಟರ್ನ್ಸ್ (ತ): ಮ.1.15ಕ್ಕೆ, ಕಾಂತಾರ (ಕ): ಸಂ.4.15ಕ್ಕೆ, ವರಲಾಹು ಮುಕ್ಕಿಯಂ (ತ): ರಾ.10.20ಕ್ಕೆ,

ಮೈಸೂರು ವಿಷನ್ ಸಿನಿಮಾ

ದೂ : 0821–2973519

- ಸ್ಕ್ರೀನ್ 1 ಓ (ಕ): ಬೆ.10.30ಕ್ಕೆ, ಯಶೋಧಾ (ತೆ): ಮ.1.15ಕ್ಕೆ, ರಾಣಾ (ಕ): ಸಂ.4ಕ್ಕೆ, ಲವ್ ಟುಡೆ (ತ): ಸಂ.6.30ಕ್ಕೆ, ಯೆಲ್ಲೋ ಗ್ಯಾಂಗ್ಸ್ (ಕ): ರಾ.9.30ಕ್ಕೆ.
- ಸ್ಕ್ರೀನ್ 2 ಹುಬ್ಬಳ್ಳಿ ಡಾಬಾ (ಕ): ಬೆ.10.15ಕ್ಕೆ, ಕಾಂತಾರ (ಕ): ಮ.12.45ಕ್ಕೆ, ಸಂ.6.35ಕ್ಕೆ, ದಿಲ್ ಪಸಂದ್ (ಕ): ಮ.3.40ಕ್ಕೆ, ಗಂಧದಗುಡಿ (ಕ): ರಾ.9.30ಕ್ಕೆ.
- ಸ್ಕ್ರೀನ್ 3 ಕಾಂತಾರ (ಕ): ಬೆ.10.30ಕ್ಕೆ, ಮ.3.25ಕ್ಕೆ, ಗಂಧದ ಗುಡಿ (ಕ): ಮ.1.25ಕ್ಕೆ, ಬ್ಲಾಕ್ ಪ್ಯಾಂಥರ್ (3ಡಿ)(ಇಂ): ಸಂ.6.20ಕ್ಕೆ, ರಾ.9.30ಕ್ಕೆ.
- ಸ್ಕ್ರೀನ್ 4 ದಿಲ್ ಪಸಂದ್ (ಕ): ಬೆ.10.40ಕ್ಕೆ, ಬನಾರಸ್ (ಕ): ಮ.1.45ಕ್ಕೆ, ಮಿರಲ್ (ತ): ಸಂ.4.45ಕ್ಕೆ, ಗಂಧದ ಗುಡಿ (ಕ): ರಾ.7.15ಕ್ಕೆ, ಲವ್ ಟುಡೆ (ತ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಕಾಂತಾರ (ಕ): ಬೆ.9.20ಕ್ಕೆ, ಮ.12.30ಕ್ಕೆ, ಮ.1ಕ್ಕೆ, ಮ.3.40ಕ್ಕೆ, ಸಂ.6.35ಕ್ಕೆ, ರಾ.9.45ಕ್ಕೆ, ದಿ ಬ್ಲ್ಯಾಕ್ ಆಡಮ್ (ಇ): ಬೆ.9.55ಕ್ಕೆ, ಮ.12.45ಕ್ಕೆ, ಸ.7.05ಕ್ಕೆ, ರಾ.9.50ಕ್ಕೆ, ಪ್ರಿನ್ಸ್ (ತ): ಮ.12.40ಕ್ಕೆ, ರಾ.7.10ಕ್ಕೆ ಸರ್ದಾರ್ (ತ): ಬೆ. 9.15ಕ್ಕೆ ಮ.3.45ಕ್ಕೆ,

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪದ್ಮ ಚಿತ್ರಮಂದಿರ	(ದೂ: 2521923)
ವೇದ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕಾಂತಾರ (ಕ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	(ದೂ: 2520009)
ಡೇ ಅಂಡ್ ಸಮ್‌ಒನ್ (ತೆ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕಾಂತಾರ (ಹಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ವೇದ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಟೆಂಪರ್ (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ವೇದ (ಕ)	4 ಪ್ರದರ್ಶನಗಳು
ಸಂಗಂ	
ಲಾಠಿ (ತ)	4 ಪ್ರದರ್ಶನಗಳು
ಲಿಡೋ	
ಸರ್ಕಸ್ (ಹಿ)	4 ಪ್ರದರ್ಶನಗಳು
ತಿಬ್ಬಾದೇವಿ	
ವೇದ (ಕ)	4 ಪ್ರದರ್ಶನಗಳು
ಪ್ರಭಾ	
ಕಾಂತಾರ (ಕ)	4 ಪ್ರದರ್ಶನಗಳು

ಪಪಂ ಮುಖ್ಯಾಧಿಕಾರಿಯಿಂದ ಕಾಮಗಾರಿ ಪರಿಶೀಲನೆ

ಸರಗೂರು, ಡಿ.28– ಗುಣಮಟ್ಟದ ಕಾಮಗಾರಿ ಮಾಡುವಂತೆ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಕೆ.ಪಿ.ವಿಜಯಕುಮಾರಿ ತಿಳಿಸಿದ್ದಾರೆ.

ಪಟ್ಟಣದ 9ನೇ ವಾರ್ಡ್‌ನಲ್ಲಿ 15ನೇ ಹಣಕಾಸು ಯೋಜನೆಯಡಿಯಲ್ಲಿ ನಿರ್ಮಿಸುತ್ತಿರುವ ಚರಂಡಿ ಕಾಮಗಾರಿಯನ್ನು ಪರಿಶೀಲಿಸಿ ಮಾತನಾಡಿದ ಅವರು, ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ಯಾವುದೇ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು, ಅದು ನಿವಾಸಿಗಳಿಗೂ ಅನುಕೂಲಕರವಾಗಿರಬೇಕು ಎಂದರು.

ಪಟ್ಟಣ ಪಂಚಾಯಿತಿ 9ನೇ ವಾರ್ಡ್ ಸದಸ್ಯ ಶ್ರೀನಿವಾಸ್ ಮಾತನಾಡಿ, ಈ ಸ್ಥಳದಲ್ಲಿ ಹಲವಾರು ವರುಷಗಳಿಂದ ಚರಂಡಿ ವ್ಯವಸ್ಥೆ ಇಲ್ಲದೆ ಮಳೆ ಬಂದಾಗ ಹೆಚ್ಚು ನೀರು ಬಂದು ನಿವಾಸಿಗಳ ಮನೆಯ ಪಕ್ಕದ ತೋಟವನ್ನೆಲ್ಲಾ ಆವರಿಸಿ ಅಲ್ಲಿ ಕೃಷಿಗೆ ತೊಂದರೆಯಾಗುತ್ತಿತ್ತು, ಇದೀಗ ಚರಂಡಿ ಕಾಮಗಾರಿ ಮಾಡುತ್ತಿರುವುದರಿಂದ ನಿವಾಸಿಗಳಿಗೂ ಹಾಗೂ ತೋಟದ ರೈತರಿಗೂ ಅನುಕೂಲವಾಗಲಿದೆ ಎಂದರು.

ಸ್ಥಳದಲ್ಲಿ ಇಂಜಿನಿಯರ್ ಸುರೇಶ್, ಆರ್‌ಐ ಕೆ.ರಾಮು, ಕೇಸ್ ವರ್ಕರ್ ಕುಮಾರ್, ವಾಟರ್‌ಮ್ಯಾನ್ ನಾಗೇಶ್, ಗುತ್ತಿಗೆದಾರ ಟಿ.ವೆಂಕಟೇಶ್, ಆನಂದ್, ನಾಯಕ ಸಮಾಜದ ಮಾಜಿ ಯಜಮಾನರಾದ ವೆಂಕಟೇಶ್ ನಾಯಕ, ಸೋಮಣ್ಣ, ನಿವಾಸಿಗಳು ಇದ್ದರು.

ರಾಜ್‌ಕುಮಾರ್ ಪವಾರ್ ನಿಧನ



ಗಾವಡಗೆರೆ, ಡಿ.28– ಕಾಲಬೈರವೇಶ್ವರ ಸ್ವಾಮಿ ದೇವಾಲಯ ಮತ್ತು ಶ್ರೀ ಕಾಲಬೈರವೇಶ್ವರ ವಿವಿಧೋದ್ದೇಶ ಸಹಕಾರ ಸಂಘದ ಅಧ್ಯಕ್ಷರು ಮತ್ತು ಗಾವಡಗೆರೆ ಗ್ರಾಮದ ನಿವಾಸಿ ರಾಜ್‌ಕುಮಾರ್ ಪವಾರ್(64) ಹೃದಯಾಘಾತದಿಂದ ಬುಧವಾರ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.

ದಿವಂಗತರು ಪತ್ನಿ, ಇಬ್ಬರು ಪುತ್ರಿಯರು ಸೇರಿಮದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಸ್ವಗ್ರಾಮ ಗಾವಡಗೆರೆಯಲ್ಲಿ ಗುರುವಾರ ಮಧ್ಯಾಹ್ನ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮಂಜುನಾಥ್



ಬೆಟ್ಟದಪುರ, ಡಿ.28– ಬೆಟ್ಟದಪುರದ ನಿಮಿಷಾಂಬ ಎಲೆಕ್ಟ್ರಿಕಲ್ ಮಾಲೀಕರಾದ ಮಂಜುನಾಥ(40) ಹೃದಯಾಘಾತದಿಂದ ನಿಧನ ಹೊಂದಿದ್ದಾರೆ. ಇವರು ಬೆಟ್ಟದಪುರದ ಲಯನ್ಸ್ ಕ್ಲಬ್ ಸದಸ್ಯರಾಗಿ ಹಲವಾರು ಸಮಾಜ ಸೇವೆಯಲ್ಲಿ ತೊಡಗಿದ್ದರು. ಚನ್ನ ರಾಯಪಟ್ಟಣ ತಾಲೂಕಿನಲ್ಲಿ ದಿವಂಗತರ ಅಂತಿಮ ವಿಧಿ ವಿಧಾನ ನೆರವೇರಿಸಲಾಯಿತು. ಇವರ ನಿಧನಕ್ಕೆ ಬೆಟ್ಟದಪುರದ ಲಯನ್ಸ್ ಕ್ಲಬ್ ಅಧ್ಯಕ್ಷ ಹರೀಶ್, ನಿರ್ದೇಶಕ ರುದ್ರೇಶ್ ವೆಂಕಟೇಶ್ ಸೇರಿದಂತೆ ಹಲವರು ಸಂತಾಪ ಸೂಚಿಸಿದ್ದಾರೆ.

ಮಹಮದ್ ಉಸ್ಮಾನ್



ಸರಗೂರು, ಡಿ.28– ಪಟ್ಟಣ ಪಂಚಾಯತಿ ಮಾಜಿ ಸದಸ್ಯ ಮಹಮದ್ ಉಸ್ಮಾನ್ (52) ಅನಾರೋಗ್ಯದಿಂದ ಮಂಗಳವಾರ ಮೃತಪಟ್ಟಿದ್ದಾರೆ.

ಮೃತರಿಗೆ ಪತ್ನಿ, ಪುತ್ರ, ಇಬ್ಬರು. ಪುತ್ರಿಯರು ಇದ್ದಾರೆ. ಅಂತ್ಯಕ್ರಿಯೆ ಬುಧವಾರ ಬೆಳಗ್ಗೆ 10 ಗಂಟೆಗೆ ಪಟ್ಟಣದ ಖಬರಸ್ತಾನ್(ರುದ್ರಭೂಮಿ)ನಲ್ಲಿ ನಡೆಸಲಾಯಿತು.

ಕೈಗಾರಿಕೋದ್ಯಮಿಗಳಿಗೆ ಮಾಹಿತಿ ಕಾರ್ಯಕ್ರಮ

ಮೈಸೂರು, ಡಿ.28–ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರದ ಸಹಯೋಗದಲ್ಲಿ ಡಿ.29ರಂದು ಬೆಳಿಗ್ಗೆ 10.30ಕ್ಕೆ ಹೋಟೆಲ್ ರುಚಿ ದಿ ಪ್ರಿನ್ಸ್‌ನಲ್ಲಿ ಆಹಾರ ಸಂಸ್ಕರಣೆ, ಮುನಿಸಿ ಪಾಲಿಟಿ ತೆರಿಗೆ ಕಾಯ್ದೆ ಮತ್ತು ಆನ್ಲೈನ್ ಬೋರ್ಡಿಂಗ್, ZED ಪ್ರಮಾಣೀಕರಣ ಕುರಿತು ಅರಿವು ಮೂಡಿಸುವ ಮತ್ತು SIBDI ಯೋಜನೆಗಳ ಪ್ರಸ್ತುತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ನಿರ್ದೇಶಕಿ ಸತ್ಯಭಾಮ ಕಾರ್ಯಕ್ರಮ ಉದ್ಘಾಟಿಸುವರು. ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘದ ಅಧ್ಯಕ್ಷ ಕೆ.ಎನ್ ನರಸಿಂಹಮೂರ್ತಿ ಅಧ್ಯಕ್ಷತೆ ವಹಿಸುವರು. ಆಹಾರ ಕರ್ನಾಟಕ ನಿಯಮಿತ ವ್ಯವಸ್ಥಾಪಕ ನಿರ್ದೇಶಕ ಹಾಗೂ ಕರ್ನಾಟಕ ಕೃಷಿ ವಾಣಿಜ್ಯ ಅಭಿವೃದ್ಧಿ ನಿಗಮದ ಸಿಇಓ ಕೆ.ಮಹಮ್ಮದ್ ಇರ್ಫಾನ್ ಅವರನ್ನು ಒಳಗೊಂಡಂತೆ ಇತರೆ ಗಣ್ಯರು ಅತಿಥಿಗಳಾಗಿ ಭಾಗವಹಿಸುವರು.

ಲಿಂಗಸಮಾನತೆ ಕುರಿತು ಜಾಥಾ, ಉಪನ್ಯಾಸ

ಮೈಸೂರು, ಡಿ.28(ಎಂಕೆ)– ಮೈಸೂರು ಮಹಾನಗರ ಪಾಲಿಕೆ ಡೇ–ನಲ್ಮ್ ಅಭಿಯಾನದಡಿ 'ಲಿಂಗಸಮಾನತೆ' ಕುರಿತು 'ಹೊಸ ಚೇತನ: ಬದಲಾವಣೆಯ ಪ್ರವರ್ತನ' ಶೀರ್ಷಿಕೆಯಲ್ಲಿ ಜಾಥಾ, ಉಪನ್ಯಾಸ ಹಾಗೂ 'ಪುಸ್ತಕ ಬರಹಗಾರರಿಗೆ ತರಬೇತಿ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ನಾಳೆ (ಡಿ.29) ಸಂಜೆ 7 ಗಂಟೆಗೆ ಪಾಲಿಕೆ ಕೇಂದ್ರ ಕಚೇರಿಯಿಂದ ಅರಮನೆ ಉತ್ತರದ್ವಾರದಲ್ಲಿರುವ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದವರೆಗೆ ಜಾಥಾ ನಡೆಯಲಿದ್ದು, ಪಾಲಿಕೆ ಅಧಿಕಾರಿ ಮತ್ತು ಸಿಬ್ಬಂದಿ, ಮಹಿಳಾ ಸ್ವ–ಸಹಾಯ ಸಂಘಟನೆಗಳು ಭಾಗವಹಿಸಲಿವೆ. ಹಾಗೆಯೇ ಡಿ.30ರಂದು ಬೆಳಗ್ಗೆ 11ರಿಂದ ಸಂಜೆ 5ರವರೆಗೆ ಪುರಭವನದಲ್ಲಿ ಉಪನ್ಯಾಸ ಮತ್ತು ಸಂವಾದ ಹಾಗೂ ಡಿ.31ರಂದು ಪುಸ್ತಕ ಬರಹಗಾರರಿಗೆ ತರಬೇತಿ ಕಾರ್ಯಾಗಾರವನ್ನು ಏರ್ಪಡಿಸಿದೆ.

ಮೈಸೂರು ಮಿತ್ರ 43

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ಇಂದು ಕುವೆಂಪು ಜನ್ಮದಿನೋತ್ಸವ

ಮೈಸೂರು,ಡಿ.28–ಮೈಸೂರು ವಿವಿ ಪ್ರಸಾರಾಂಗ ವತಿಯಿಂದ ಡಿ.29ರಂದು ರಾಷ್ಟ್ರಕವಿ ಕುವೆಂಪು ಅವರ ಜನ್ಮದಿನೋತ್ಸವ ಕಾರ್ಯಕ್ರಮವನ್ನು ಪ್ರಸಾರಾಂಗ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಹಿರಿಯ ಸಾಹಿತಿ ಪ್ರೊ.ಸಿ.ಪಿ.ಕೃಷ್ಣಕುಮಾರ್ ಉದ್ಘಾಟಿಸುವರು. ಮೈಸೂರು ವಿವಿ ಕುಲಸಚಿವೆ ವಿ.ಆರ್.ಶೈಲಜಾ ಅಧ್ಯಕತೆಯನ್ನು ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಸಂದರ್ಶಕ ಪ್ರಾಧ್ಯಾಪಕ ಪ್ರೊ.ಸಿನಾಗಣ್ಣ ಭಾಗವಹಿಸಲಿದ್ದು, ಮೈಸೂರು ವಿವಿ ಪ್ರಸಾರಾಂಗದ ನಿರ್ದೇಶಕ ಪ್ರೊ.ಎಂ.ನಂಜಯ್ಯ ಹೊಂಗನೂರು ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ.

ಸಾರ್ವಜನಿಕ ಪ್ರಕಟಣೆ

ನಮ್ಮ ಕಕ್ಷಿದಾರರಾದ ಮೈಸೂರು ಸಿಟಿ, ಜಯನಗರ, ಬೇಡರಕಣ್ಣಪ್ಪ ದೇವಸ್ಥಾನದ ಹತ್ತಿರ, ಗಿರಿಗೌಡ ಗಾರ್ಡನ್, ಮನೆ ನಂ 11 ರಲ್ಲಿ ವಾಸವಾಗಿರುವ ಶ್ರೀನಿವಾಸ್.ಜಿ ರವರ ಮಗ ಶ್ರೀ ಕಿಶೋರ್.ಎಸ್ ರವರು ಷೆಡ್ಯೂಲ್‌ನಲ್ಲಿ ನಮೂದು ಮಾಡಿರುವ ಜಮೀನಿನ ಮಾಲೀಕರುಗಳಾದ ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ಉದ್ಬೂರು ಗ್ರಾಮ, 1ನೇ ಬ್ಲಾಕ್ ಮನೆ ನಂ.41ರಲ್ಲಿ ವಾಸವಾಗಿರುವ ಲೇಟ್.ಮಂಚನಾಯಕ ಉ॥ ಮುದ್ದನಾಯಕ ರವರ ಧರ್ಮಪತ್ನಿಯಾದ ಶ್ರೀಮತಿ ಕೆಂಪದೇವಮ್ಮ ಹಾಗೂ ಇವರ ಮಕ್ಕಳುಗಳಾದ ಶ್ರೀ ಸೋಮಣ್ಣ, ಶ್ರೀಮತಿ.ಮಂಚಕ್ಕ, ಶ್ರೀಮತಿ.ಲಕ್ಷ್ಮಿ, ಶ್ರೀಮತಿ ಕೆಂಪಮ್ಮ, ಶ್ರೀಮತಿ.ನಾಗಮ್ಮ ಮತ್ತು ಶ್ರೀ ಸೋಮಣ್ಣ ರವರ ಧರ್ಮಪತ್ನಿ ಶ್ರೀಮತಿ.ಸವಿತ ಮತ್ತು ಇವರ ಮಗನಾದ ಶ್ರೀ. ರವಿಕುಮಾರ್.ಎಸ್ ರವರುಗಳಿಂದ ಷೆಡ್ಯೂಲ್ ಜಮೀನನ್ನು ಶುದ್ಧ ಕ್ರಯಕ್ಕೆ ಪಡೆಯಲು ಇಚ್ಛೆಯನ್ನು ಹೊಂದಿದ್ದು, ಈ ಸಂಬಂಧ ಕೆಳಕಂಡಂತೆ ಸಾರ್ವಜನಿಕ ಪ್ರಕಟಣೆಯನ್ನು ನೀಡಿತ್ತಿದ್ದಾರೆ.

ಷೆಡ್ಯೂಲ್‌ನಲ್ಲಿ ನಮೂದು ಮಾಡಿರುವ ಜಮೀನು ಈ ಮೇಲೆ ತಿಳಿಸಿದ ಮಾಲೀಕರುಗಳ ಪಿತ್ರಾರ್ಜಿತವಾದ ಸ್ವತ್ತಾಗಿದ್ದು, ಹಾಲೀ ಸದರಿ ಜಮೀನಿನ ಸ್ವಾಧೀನಾನುಭವದಲ್ಲಿರುತ್ತಾರೆ, ಸದರಿ ಷೆಡ್ಯೂಲ್ ಜಮೀನಿಗೆ ಸಂಬಂಧಿಸಿದಂತೆ ಅಥವಾ ಷೆಡ್ಯೂಲ್ ಸ್ವತ್ತಿಗೆ ಯಾವುದೇ ಭಾಗಕ್ಕೆ ಸಂಬಂಧಿಸಿದಂತೆ ಯಾವುದೇ ವ್ಯಕ್ತಿ/ವ್ಯಕ್ತಿಗಳು/ಸಂಘ ಸಂಸ್ಥೆ/ಬ್ಯಾಂಕ್/ಹಣಕಾಸು ಸಂಸ್ಥೆಗಳು ಯಾವುದೇ ರೀತಿಯ ಹಕ್ಕು, ವಾರಸ್ಸು ಮಾಲೀಕತ್ವ, ಕ್ರಯ, ಕ್ರಯದ ಕರಾರು ಭೋಗ್ಯ, ಜೀವನಾಂಶ, ಜಿ.ಪಿ.ಎ., ವಿಲ್ ಅಡಮಾನ ಹಾಗೂ ಇನ್ನಿತರೆ ಯಾವುದೇ ರೀತಿಯ ಮಾಲೀಕತ್ವವನ್ನು ಹೊಂದಿದ ಪಕ್ಷದಲ್ಲಿ ಅಂತಹ ವ್ಯಕ್ತಿಗಳು ಈ ಕೆಳಕಂಡ ವಕೀಲರ ವಿಳಾಸಕ್ಕೆ ಸೂಕ್ತ ದಾಖಲಾತಿಗಳ ಸಮೇತ ಹಾಜರಾಗಿ ತಮ್ಮ ಆಕ್ಷೇಪಣೆಯನ್ನು ಈ ಸಾರ್ವಜನಿಕ ಪ್ರಕಟಣೆ ಪ್ರಕಟವಾದಂತಹ ಹದಿನೈದು (15) ದಿನದ ಒಳಗಾಗಿ ಲಿಖಿತವಾಗಿ ಸಲ್ಲಿಸುವಂತೆ ಈ ಮೂಲಕ ಸೂಚಿಸಲಾಗಿದೆ. ಒಂದು ವೇಳೆ ಮೇಲೆ ತಿಳಿಸಿದಂತಹ ಅವಧಿಯಲ್ಲಿ ಯಾವುದೇ ಆಕ್ಷೇಪಣೆ ಬರದೇ ಇದ್ದ ಪಕ್ಷದಲ್ಲಿ ನಮ್ಮ ಕಕ್ಷಿದಾರರು ಷೆಡ್ಯೂಲ್ ಸ್ವತ್ತಿನ ಕ್ರಯದ ವ್ಯವಹಾರವನ್ನು ಪೂರ್ಣಗೊಳಿಸುತ್ತಾರೆಂತಲು ಮತ್ತು ಅನಂತರ ಬರುವಂತಹ ಯಾವುದೇ ಆಕ್ಷೇಪಣೆಗಳಿಗೆ ನಮ್ಮ ಕಕ್ಷಿದಾರರು ಜವಾಬ್ದಾರರಲ್ಲವೆಂತಲೂ ಎಂದು ಈ ಮೂಲಕ ತಿಳಿಯಪಡಿಸಲಾಗುತ್ತದೆ.

ಷೆಡ್ಯೂಲ್ ಸ್ವತ್ತಿನ ವಿವರ: ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ಉದ್ಬೂರು ಗ್ರಾಮಕ್ಕೆ ಸೇರಿದ ಸರ್ವೆ ನಂ.523/3ರಲ್ಲಿರುವ ಒಟ್ಟು ವಿಸ್ತೀರ್ಣ 3–00 ಎಕರೆ ಪೈಕಿ 1–20 ಗುಂಟೆ (ಒಂದು ಎಕರೆ ಇಪತ್ತು ಗುಂಟೆ) ಖುಷ್ಕಿ ಜಮೀನಿಗೆ ಚಕ್ಕುಬಂಧಿ:

ಪೂರ್ವಕ್ಕೆ: ಲಾ.ಹಿಸ್ಸಾ 2,4,5, ಪಶ್ಚಿಮಕ್ಕೆ: ಸರ್ವೆ 523/3ರ ಉಳಿಕೆ ಜಮೀನು, ಉತ್ತರಕ್ಕೆ: ಲಾ.ಹಿಸ್ಸಾ 1, ದಕ್ಷಿಣಕ್ಕೆ: ರಸ್ತೆ

ಸಹಿ/–ರವಿ.ಎಸ್, ಬಿ.ಕಾಂ, ಎಲ್.ಎಲ್.ಬಿ

ವಕೀಲರು,KAR/2019/11, # 751, ಐ ಬ್ಲಾಕ್, ರಾಮಕೃಷ್ಣನಗರ, ಮೈಸೂರು., ಮೊ.ನಂ 7795001007

ಸ್ಥಳ: ಮೈಸೂರು, ದಿನಾಂಕ: 28.12.2022

ಸಾರ್ವಜನಿಕ ಪ್ರಕಟಣೆ

ಈ ಪ್ರಕಟಣೆಯ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತನ್ನು ನನ್ನ ಕಕ್ಷಿದಾರರು ಅದರ ಮಾಲೀಕರಾದ, ಮೈಸೂರು ತಾಲ್ಲೂಕು, ಇಲವಾಲ ಹೋಬಳಿ, ಎಂ.ಕೆ ಹಳ್ಳಿ ಅಂಚೆ, ಗಣಗರಹುಂಡಿ ಗ್ರಾಮದ ನಿವಾಸಿಯಾದ ಶ್ರೀ ಶಿವಣ್ಣ ಬಿನ್ ಶ್ರೀ ರಾಮೇಗೌಡ ಮತ್ತು ಇವರ ಕುಟುಂಬದ ಸದಸ್ಯರುಗಳಿಂದ ಖರೀದಿಸಲು ಉದ್ದೇಶಿಸಿರುತ್ತಾರೆ.


ಷೆಡ್ಯೂಲ್ ಸ್ವತ್ತಿನ ಪರಭಾರೆಯ ವಿಚಾರದಲ್ಲಿ ಯಾರಿಗಾದರು ಯಾವುದೇ ರೀತಿಯ ಹಕ್ಕು, ಹಿತಾಸಕ್ತಿ, ಭಾಗಾಂಶ, ಋಣ, ಭಾಧ್ಯತೆಗಳು ಇದ್ದಲ್ಲಿ, ಇಂದಿನಿಂದ (05) ದಿನಗಳ ಒಳಗೆ ತಮ್ಮ ಲಿಖಿತ ತಕರಾರು ಮತ್ತು ಪೂರಕ ದಾಖಲಾತಿಗಳನ್ನು ಈ ಕೆಳಗೆ ಸಹಿ ಮಾಡಿದವರಿಗೆ ಸಲ್ಲಿಸತಕ್ಕದ್ದು. ಒಂದು ವೇಳೆ ಈ ಅವಧಿಯಲ್ಲಿ ಯಾವುದೇ ತಕರಾರುಗಳು ಈ ಕೆಳಗೆ ಸಹಿ ಮಾಡಿದವರಿಗೆ ಬಾರದಿದ್ದಲ್ಲಿ, ಷೆಡ್ಯೂಲ್ ಸ್ವತ್ತಿನ ಮೇಲೆ ಇತರ ಯಾರಿಗೂ ಯಾವುದೇ ರೀತಿಯ ಹಕ್ಕು, ಹಿತಾಸಕ್ತಿ, ಭಾಗಾಂಶ, ಋಣ, ಬಾಧ್ಯತೆಗಳು ಇರುವುದಿಲ್ಲ ಮತ್ತು ಷೆಡ್ಯೂಲ್ ಸ್ವತ್ತನ್ನು ಮಾರಾಟ ಮಾಡಲು ಸ್ವತ್ತಿನ ಮಾಲೀಕರು ಪೂರ್ಣ ಹಕ್ಕುಳ್ಳವರಾಗಿರುತ್ತಾರೆ ಎಂದು ಪರಿಗಣಿಸಿ ಕ್ರಯದ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು.

ಷೆಡ್ಯೂಲ್: ಮೈಸೂರು ಜಿಲ್ಲೆ ಮತ್ತು ತಾಲ್ಲೂಕು, ಇಲವಾಲ ಹೋಬಳಿ, ಮಾದಗಳ್ಳಿ ಗ್ರಾಮದ ಸರ್ವೆ ನಂ.84/2ರಲ್ಲಿನ ಒಂಭತ್ತು ಗುಂಟೆ (0.09.00.00) ವಿಸ್ತೀರ್ಣದ ಖುಷ್ಕಿ ಜಮೀನಿಗೆ ಚಕ್ಕುಬಂದಿ: ಪೂರ್ವಕ್ಕೆ: ನಿಂಗಮ್ಮ, ಸೌಮ್ಯ ವಗೈರೆಯವರುಗಳ ಜಮೀನು, ಪಶ್ಚಿಮಕ್ಕೆ: ಸರ್ವೆ ನಂಬರ್:84/8, ಉತ್ತರಕ್ಕೆ: ಕಾಲುವೆ, ದಕ್ಷಿಣಕ್ಕೆ: ಸರ್ವೆ ನಂಬರ್ : 84/8

SD/- M.N .Prakash Kalappa, KAR -1996-2000
Advocate & legal consultant # 67/7A, PRI Complex, No 2&3, 1st floor, New Sayyaji Rao Road, Fort Mohalla, Mysuru-570004
Mob : 9343112535

ಮೈಸೂರು 28/12/2022

ಉತ್ತರ ಕ್ರಿಯಾದಿ ಆಹ್ವಾನ ಪತ್ರಿಕೆ



ಶ್ರೀ ಪುಟ್ಟಸ್ವಾಮಿಗೌಡ ರವರು

ಇವರು ದಿನಾಂಕ: 19.12.2022 ಸೋಮವಾರ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧವಾಗಿ ಮೃತರ ಉತ್ತರ ಕ್ರಿಯಾದಿ ಕಾರ್ಯವನ್ನು ದಿ: 29.12.2022 ಗುರುವಾರ ಬೆಳಗ್ಗೆ 10.30 ಗಂಟೆಗೆ ಮೃತರ ಸ್ವಗೃಹ. ಎಸ್.ಡಿ.ಜಯರಾಮ ಬಡಾವಣೆ, ಮೈಸೂರು ತಾಲ್ಲೂಕು, ಇಲ್ಲಿ ಏರ್ಪಡಿಸಿರುವುದರಿಂದ ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ

ದುಃಖತಪ್ತರು: ಮೃತರ ಪತ್ನಿ ಶ್ರೀಮತಿ ಜಿ.ಎಂ. ವರಲಕ್ಷ್ಮಿ ಹಾಗೂ ಕುಟುಂಬವರ್ಗದವರು. ಭೋಜನ: ಮಧ್ಯಾಹ್ನ 1 ಗಂಟೆಗೆ

ಸಾರ್ವಜನಿಕ ಪ್ರಕಟಣೆ

ಈ ಪ್ರಕಟಣೆಯ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ಷೆಡ್ಯೂಲ್ ಐಟಂಗಳಲ್ಲಿ ನಮೂದಿಸಿರುವ ಸ್ವತ್ತನ್ನು ನನ್ನ ಕಕ್ಷಿದಾರರು ಅದರ ಮಾಲೀಕರಾದ, ಬೆಂಗಳೂರು ನಗರ, ಗಾಂಧಿ ಬಜಾರ್, ರಾಮಕೃಷ್ಣ ಆಶ್ರಮ ವೃತ್ತ, ವೈಭವ ಅಪಾರ್ಟ್‌ಮೆಂಟ್, ನಂಬರ್ 85, 4ನೇ ಮಹಡಿ, ಫ್ಲಾಟ್ ನಂಬರ್ 42 ರ ನಿವಾಸಿಯಾದ ಶ್ರೀ ಭೂರ್ಮಲ್ ಬಿ. ಬಿನ್ ಶ್ರೀ ಭವರ್ಲಾಲ್ ಮತ್ತು ಇವರ ಕುಟುಂಬದ ಸದಸ್ಯರುಗಳಿಂದ ಖರೀದಿಸಲು ಉದ್ದೇಶಿಸಿರುತ್ತಾರೆ.

ಷೆಡ್ಯೂಲ್ ಐಟಂ ಸ್ವತ್ತಿನ ಪರಬಾರೆಯ ವಿಚಾರ ದಲ್ಲಿ ಯಾರಿಗಾದರೂ ಯಾವುದೇ ರೀತಿಯ ಹಕ್ಕು, ಹಿತಾಸಕ್ತಿ, ಭಾಗಾಂಶ, ಋಣ, ಬಾಧ್ಯತೆಗಳು ಇದ್ದಲ್ಲಿ, ಇಂದಿನಿಂದ ಏಳು (7) ದಿನಗಳ ಒಳಗೆ ತಮ್ಮ ಲಿಖಿತ ತಕರಾರು ಮತ್ತು ಪೂರಕ ದಾಖಲಾತಿಗಳನ್ನು ಈ ಕೆಳಗೆ ಸಹಿ ಮಾಡಿದವರಿಗೆ ಸಲ್ಲಿಸತಕ್ಕದ್ದು, ಒಂದು ವೇಳೆ ಈ ಅವಧಿಯಲ್ಲಿ ಯಾವುದೇ ತಕರಾರುಗಳು ಈ ಕೆಳಗೆ ಸಹಿ ಮಾಡಿದವರಿಗೆ ಬಾರದಿದ್ದಲ್ಲಿ, ಷೆಡ್ಯೂಲ್ ಐಟಂ ಸ್ವತ್ತಿನ ಮೇಲೆ ಇತರ ಯಾರಿಗೂ ಯಾವುದೇ ರೀತಿಯ ಹಕ್ಕು, ಹಿತಾಸಕ್ತಿ, ಭಾಗಾಂಶ, ಋಣ, ಬಾಧ್ಯತೆಗಳು ಇರುವುದಿಲ್ಲ ಮತ್ತು ಷೆಡ್ಯೂಲ್ ಐಟಂ ಸ್ವತ್ತನ್ನು ಮಾರಾಟ ಮಾಡಲು ಸ್ವತ್ತಿನ ಮಾಲೀಕರು ಪೂರ್ಣ ಹಕ್ಕುಳ್ಳವರಾಗಿರುತ್ತಾರೆ ಎಂದು ಪರಿಗಣಿಸಿ ಕ್ರಯದ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು.

ಷೆಡ್ಯೂಲ್ : ಐಟಂ–1

ಮೈಸೂರು ಜಿಲ್ಲೆ ಮತ್ತು ತಾಲ್ಲೂಕು, ವರುಣ ಹೋಬಳಿ, ಯಾಂದಹಳ್ಳಿ ಗ್ರಾಮದ ಸರ್ವೆ ನಂಬರ್, 28/1 ರಲ್ಲಿನ ಎರಡು ಎಕರೆ ಇಪ್ಪತ್ತನಾಲ್ಕು ಗುಂಟೆ (2.24.00.00) ವಿಸ್ತೀರ್ಣದ ವಾಸೋಪಯೋಗಿ ಉದ್ದೇಶಕ್ಕೆ ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ ರವರ ಆದೇಶ ಸಂಖ್ಯೆ DMD398033F1106CB ದಿನಾಂಕ 06–11–2019 ರಂದು ಅನ್ಯಕ್ರಾಂತವಾಗಿರುವ ಜಮೀನಿಗೆ ಚಕ್ಕುಬಂದಿ: ಪೂರ್ವಕ್ಕೆ: ಸರ್ವೆ ನಂಬರ್ 22 ; ಪಶ್ಚಿಮಕ್ಕೆ: ಸರ್ವೆ ನಂಬರ್ 29 ; ಉತ್ತರಕ್ಕೆ: ಸರ್ವೆ ನಂಬರ್ 20 ; ದಕ್ಷಿಣಕ್ಕೆ: ಸರ್ವೆ ನಂಬರ್ 28/2, 27.

ಐಟಂ–2 : ಮೈಸೂರು ಜಿಲ್ಲೆ ಮತ್ತು ತಾಲ್ಲೂಕು, ವರುಣ ಹೋಬಳಿ, ಯಾಂದಹಳ್ಳಿ ಗ್ರಾಮದ ಸರ್ವೆ ನಂಬರ್, 28/2 ರಲ್ಲಿನ ಎರಡು ಎಕರೆ ಮೂವತ್ತಾರು ಗುಂಟೆ (2.36.00.00) ವಿಸ್ತೀರ್ಣದ ವಾಸೋಪಯೋಗಿ ಉದ್ದೇಶಕ್ಕೆ ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ ರವರ ಆದೇಶ ಸಂಖ್ಯೆ DMD398033F2E1C78 ದಿನಾಂಕ 6–11–2019 ರಂದು ಅನ್ಯಕ್ರಾಂತವಾಗಿರುವ ಜಮೀನಿಗೆ ಚಕ್ಕುಬಂದಿ: ಪೂರ್ವಕ್ಕೆ: ಸರ್ವೆ ನಂಬರ್ 27 ; ಪಶ್ಚಿಮಕ್ಕೆ: ಸರ್ವೆ ನಂಬರ್ 29 ; ಉತ್ತರಕ್ಕೆ: ಸರ್ವೆ ನಂಬರ್ 28/1 ; ದಕ್ಷಿಣಕ್ಕೆ: ಸರ್ವೆ ನಂಬರ್ 26.

Sd/- M.N. Kalappa, Advocate, KAR-1996-2000
#2-3, First Floor, PRI Complex, 67/7A, New Sayyaji Rao Road, Fort Mohalla, Mysore-570 004. Mob: 93431-12535
Email: mnprakashkalappa@gmail.com

ಮೈಸೂರು : 28–12–2022

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ

ದಿನಾಂಕ : 29-12-2022 ಗುರುವಾರ



ಶ್ರೀಮತಿ ಸರೋಜಮ್ಮನವರು

(ದಿವಂಗತ ವಿ. ಶ್ರೀನಿವಾಸರವರ ಧರ್ಮಪತ್ನಿ)

85, 3ನೇ ಮುಖ್ಯರಸ್ತೆ, ವಿನಾಯಕನಗರ, (ಪಡುವಾರಹಳ್ಳಿ) ಮೈಸೂರು ಇಲ್ಲಿ ವಾಸವಾಗಿರುವ ಶ್ರೀ ಎಸ್. ಸುರೇಶ್ ಇವರು ಮಾಡುವ ವಿಜ್ಞಾಪನೆಗಳು

ದಿನಾಂಕ : 19-12-2022ನೇ ಸೋಮವಾರದಂದು ನಮ್ಮ ಪೂಜ್ಯ ತಾಯಿಯವರಾದ ಶ್ರೀಮತಿ ಸರೋಜಮ್ಮನವರು ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇನೆ. ತತ್ಸಂಬಂಧವಾಗಿ ಮೃತರ ಉತ್ತರ ಕ್ರಿಯಾದಿ ಭೂಶಾಂತಿ ಕಾರ್ಯವನ್ನು ದಿನಾಂಕ : 29-12-2022ನೇ ಗುರುವಾರ ಮಧ್ಯಾಹ್ನ 12-00 ಗಂಟೆಗೆ ನಮ್ಮ ಸ್ವಗೃಹದಲ್ಲಿ ನಡೆಸಲು ನಿಶ್ಚಯಿಸಿರುವುದರಿಂದ ಆಹ್ವಾನಪತ್ರಿಕೆ ತಲುಪದಿದ್ದವರು ಇದನ್ನೇ ಆಹ್ವಾನವೆಂದು ತಿಳಿದು ಸಕಾಲಕ್ಕೆ ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ.

ಭೋಜನ : ಮಧ್ಯಾಹ್ನ 12 ಗಂಟೆಗೆ, ಸ್ಥಳ : ನಮ್ಮ ಸ್ವಗೃಹ, ವಿನಾಯಕ ನಗರ, ಮೈಸೂರು.

ಇಂತಿ ದುಃಖತಪ್ತರು : ಮಕ್ಕಳು – ಎಸ್. ರಮೇಶ್, ಪಿ.ಎಸ್. ಭರತೇಶ್ (ಮಾಜಿ ನಗರಪಾಲಿಕೆ ಸದಸ್ಯರು) ಎಸ್. ಪ್ರದೀಪ, ಎಸ್. ವೀಣಾ, ಅಳಿಯಂದಿರು ಮತ್ತು ಸೊಸೆಯಂದಿರು, ಮೊಮ್ಮಕ್ಕಳು, ಕುಟುಂಬವರ್ಗದವರು ಹಾಗೂ ಬಂಧುಮಿತ್ರರು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು

ಸಂಖ್ಯೆ: ಮೈ.ನ.ಪ್ರಾ/ವಕ–4/2022–23 ದಿನಾಂಕ: 19.12.2022

ಸಾರ್ವಜನಿಕರ ಗಮನಕ್ಕೆ

ಈ ಮೂಲಕ ಸಾರ್ವಜನಿಕರ ಗಮನಕ್ಕೆ ತರುವುದೇನೆಂದರೇ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಶ್ರೀ.ಪಿ.ಬಿ.ವಿಠಲ್ ರವರಿಗೆ " ನಿಮ್ಮ ಸ್ವಂತ ಮನೆ ಹೊಂದುವ ಯೋಜನೆ"ಯಲ್ಲಿ ವಿಜಯನಗರ 2ನೇ ಹಂತ ಬಡಾವಣೆಯಲ್ಲಿ ಹೆಚ್.ಐ.ಜಿ–2 ಮನೆ ಸಂಖ್ಯೆ.1706, ದಿ: 09.04.1990 ರಂದು ಮಂಜೂರಾಗಿರುತ್ತದೆ. ಇವರಿಗೆ ದಿ: 24.08.1995ರಂದು ಸ್ವಾಧೀನ ಪತ್ರವನ್ನು ನೀಡಲಾಗಿದೆ.

ಪಿ.ಬಿ.ವಿಠಲ್ ರವರು ದಿನಾಂಕ 18.07.2000ರಂದು ಮರಣ ಹೊಂದಿದ್ದು, ಇವರಿಗೆ ಪತ್ನಿ ಶ್ರೀಮತಿ ಪಿ.ವಿ.ಉಮ್ಮಣ್ಣಿ, ಮಗ (1) ಶ್ರೀ ಪುಲ್ಲಂಗಡ ವಿಠಲ್ ಚೆಂಗಪ್ಪ ಮತ್ತು (2) ಶ್ರೀ.ಸೋಮಣ್ಣ ಪುಲ್ಲಂಗಡ ವಿಠಲ್ ಇಬ್ಬರು ವಯಸ್ಕ ಗಂಡು ಮಕ್ಕಳು ಇರುತ್ತಾರೆ. ಇವರ ಎರಡನೇ ಮಗನಾದ ಶ್ರೀ ಸೋಮಣ್ಣ ಪುಲ್ಲಂಗಡ ವಿಠಲ್ ರವರಿಗೆ ಸದರಿ ಮನೆಯ ಸ್ಥಿರ ಸ್ವತ್ತನ್ನು 1ನೇ ಪುಸ್ತಕದ ದಸ್ತಾವೇಜು ನಂಬರ್ ಎಂ.ವೈಎಸ್–1–04439–2022–23 ಆಗಿ ಸಿ.ಡಿ.ನಂಬರ್ ಎಂ.ವೈ.ಎಸ್.ಡಿ 1258ನೇ ದ್ದರಲ್ಲಿ ದಿ: 10.08.2022 ರಂದು ನೋಂದಾಯಿತ ಹಕ್ಕು ಖುಲಾಸೆ ಪತ್ರದ ಮೂಲಕ ಮಾಲೀಕತ್ವ ವರ್ಗಾಯಿಸಿರುತ್ತಾರೆ.

ಶ್ರೀ ಸೋಮಣ್ಣ ಪುಲ್ಲಂಗಡ ವಿಠಲ್ ರವರು ಶ್ರೀ ಸಮಿತ್.ಎಸ್ ರವರಿಗೆ 4ನೇ ಪುಸ್ತಕದ ದಸ್ತಾವೇಜು ನಂಬರ್ ಎಂ.ವೈಎಸ್–4–00439–2022–23 ಆಗಿ ಸಿ.ಡಿ.ನಂಬರ್ ಎಂ.ವೈಎಸ್.ಡಿ1269 ರಲ್ಲಿ ದಿನಾಂಕ:25.08.2022ರಂದು ಜಿ.ಪಿ.ಎ ಮೂಲಕ ನೋಂದಾಯಿಸಿರುತ್ತಾರೆ.

ಪ್ರಸ್ತುತ, ಜಿ.ಪಿ.ಎ.ದಾರರಾದ ಶ್ರೀ ಸಮಿತ್.ಎಸ್ ರವರು ಪ್ರಾಧಿಕಾರಕ್ಕೆ ಹಕ್ಕು ಪತ್ರ ಪಡೆಯಲು ಕೋರಿರುವುದರಿಂದ ಶ್ರೀ ಸೋಮಣ್ಣ ಪುಲ್ಲಂಗಡ ವಿಠಲ್ ಹೆಸರಿಗೆ ಪೌತಿ ವರ್ಗಾವಣೆ ಪತ್ರ ಹಾಗೂ ಹಕ್ಕುಪತ್ರ ನೀಡಲು ಯಾರಿಂದಾದರೂ ತಕರಾರು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಹೊರಡಿಸಿದ 10 ದಿವಸಗಳೊಳಗೆ ಲಿಖಿತವಾಗಿ ಆಯುಕ್ತರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು ರವರಿಗೆ ತಕರಾರು ಸಲ್ಲಿಸುವುದು. ಯಾವುದೇ ಆಕ್ಷೇಪಣೆ ಬಾರದಿದ್ದಲ್ಲಿ ನಿಯಮಾನುಸಾರ ಕ್ರಮವಹಿಸಲಾಗುವುದು.

ಸಹಿ/– ವಿಶೇಷ ತಹಸೀಲ್ದಾರ್ ವಲಯ ಕಛೇರಿ–4, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು

ಕರ್ನಾಟಕ ಸರ್ಕಾರ

ಪುರಸಭಾ ಕಾರ್ಯಾಲಯ, ಹೆಚ್.ಡಿ.ಕೋಟೆ, ಮೈಸೂರು ಜಿಲ್ಲೆ

www.hdkotetown.mrc.gov.in Email: itstaff_ulb_hdkote@yahoo.com Ph: 08228-255307

ಸಂ: ಪು ಕಾ. ಹೆ.ಕೋ./ಪ ಅ./ಪಿ.ಆರ್/ಕಂಪು/01/2020–21 ದಿನಾಂಕ: 19.12.2022

ಇ–ಪ್ರಕ್ಯೂರ್‌ಮೆಂಟ್ ಟೆಂಡರ್ ಮರು ಪ್ರಕಟಣೆ

ಹೆಚ್.ಡಿ.ಕೋಟೆ ಪುರಸಭಾ ಕಚೇರಿಯ ಆರೋಗ್ಯ ವಿಭಾಗಕ್ಕೆ ಅವಶ್ಯವಿರುವ Safety Tools and Safety Equipments ಸರಬರಾಜು ಕಾಮಗಾರಿಗೆ ಮರು ಟೆಂಡರ್ ಆಹ್ವಾನಿಸಲಾಗಿದೆ. ಇ–ಪ್ರೋಕ್ಯೂರ್‌ಮೆಂಟ್‌ನಲ್ಲಿ ಭರ್ತಿ ಮಾಡಿದ ಟೆಂಡರ್ ಡಾಕ್ಯೂಮೆಂಟ್‌ಗಳನ್ನು ಅಪ್‌ಲೋಡ್ ಮಾಡಲು ಕೊನೆಯ ದಿ: 11.01.2023 ಸಂಜೆ 4.30 ರವರೆಗೆ, ಟೆಂಡರ್ ಡಾಕ್ಯೂಮೆಂಟ್‌ಗಳನ್ನು ತೆರೆಯುವ ದಿ: 13.01.2023 ಬೆಳಿಗ್ಗೆ 11.00 (ಸಾಧ್ಯವಾಗದಿದ್ದಲ್ಲಿ ಮುಂದಿನ ದಿನಾಂಕ ತಿಳಿಸಿ ಟೆಂಡರ್ ಬಿಡ್‌ಗಳನ್ನು ತೆರೆಯಲಾಗುವುದು). ಹೆಚ್ಚಿನ ಮಾಹಿತಿಗಾಗಿ http:/eproc.karnataka.gov.inನಲ್ಲಿ ಲಾಗಿನ್ ಆಗಿ ಪಡೆಯಬಹುದಾಗಿದೆ ಹಾಗು ಬಿಡ್/ಗುತ್ತಿಗೆದಾರರು ಟೆಂಡರ್ ಡಾಕ್ಯೂಮೆಂಟ್‌ಗಳನ್ನು ಅಪ್‌ಲೋಡ್ ಮಾಡುವ ಮೊದಲು ಟೆಂಡರ್ ಬಿಡ್ ಷರತ್ತು/ನಿಬಂದನೆಗಳನ್ನು ಪರೀಶಿಲಿಸಿ ದಾಖಲಾತಿಗಳನ್ನು ಅಪ್ ಲೋಡ್ ಮಾಡುವುದು

ಕ್ರ.ಸಂ.1 ಕಾಮಗಾರಿಯ ಹೆಸರು: ಹೆಚ್.ಡಿ.ಕೋಟೆ ಪುರಸಭೆಯ ಆರೋಗ್ಯ ವಿಭಾಗಕ್ಕೆ ಸುರಕ್ಷಾ ಕವಚ ಮತ್ತು ಸುರಕ್ಷಾ ದಿರಿಸು ಸರಬರಾಜು ಮಾಡುವ ಕಾಮಗಾರಿ. Indent No: DMA/2022-23/IND14561/Call-2 ಅಂದಾಜು ಮೊತ್ತ (ಲಕ್ಷಗಳಲ್ಲಿ): 1.74 ಮುಂಗಡ ಠೇವಣಿ ರೂ.ಗಳಲ್ಲಿ: 4500

ಟೆಂಡರ್ ದಸ್ತಾವೇಜಿನ ಬೆಲೆ: ಇ–ಪ್ರಕ್ಯೂರ್‌ಮೆಂಟ್ ಮೂಲಕ

ಸಹಿ/– ಅಧ್ಯಕ್ಷರು	ಸಹಿ/– ಉಪಾಧ್ಯಕ್ಷರು	ಸಹಿ/– ಸ್ಥಾಯಿ ಸಮಿತಿ ಅಧ್ಯಕ್ಷರು	ಸಹಿ/– ಮುಖ್ಯಾದಿಕಾರಿ
ಪುರಸಭೆ, ಹೆಚ್.ಡಿ.ಕೋಟೆ	ಪುರಸಭೆ, ಹೆಚ್.ಡಿ.ಕೋಟೆ	ಪುರಸಭೆ, ಹೆಚ್.ಡಿ.ಕೋಟೆ	ಪುರಸಭೆ, ಹೆಚ್.ಡಿ.ಕೋಟೆ

DIPR/DDMYS/MCA/815/2022-23

ಕರ್ನಾಟಕ ಸರ್ಕಾರ ಜಿಲ್ಲಾ ಪಂಚಾಯತ್, ಹಾಸನ

ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯಪಟ್ಟಣ.

ಕಛೇರಿ ದೂರವಾಣಿ: 08176–252749

ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ:20/2022–23 ದಿನಾಂಕ:27.12.2022

ಕರ್ನಾಟಕ ಸರ್ಕಾರದ ರಾಜ್ಯಪಾಲರ ಪರವಾಗಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯಪಟ್ಟಣ, ವ್ಯಾಪ್ತಿಯ ಅರಸೀಕೆರೆ ತಾಲ್ಲೋಕಿಗೆ 2021–22ನೇ ಸಾಲಿನ ಕಾಲೋನಿ ಅಭಿವೃದ್ಧಿ–ನರೇಗಾ ಒಗ್ಗೂಡಿಸುವಿಕೆ ಯೋಜನೆಯಡಿಯಲ್ಲಿ 1) ಅರಸೀಕೆರೆ ತಾ: ಕಾಚೀಘಟ್ಟ ರೈಲ್ವೆ ಗೇಟ್‌ನಿಂದ ಕಾಚೀಘಟ್ಟ ಬೋವಿ ಕಾಲೋನಿಗೆ (ಮೇಗಲಹಟ್ಟಿ) ಮತ್ತು ಕಾಚೀಘಟ್ಟ ಕೆಳಗಲಹಟ್ಟಿ ಗ್ರಾಮದಲ್ಲಿ ನಿರ್ಮಿಸಲಾಗುತ್ತಿರುವ ಕಾಂಕ್ರೀಟ್ ರಸ್ತೆ & ಚರಂಡಿ ಕಾಮಗಾರಿಗಳಿಗೆ ನಿರ್ಮಾಣ ಸಾಮಗ್ರಿಗಳನ್ನು ಹಾಗು ಯಂತ್ರೋಪಕರಣಗಳನ್ನು ಒದಗಿಸುವ ಬಗ್ಗೆ (INDENT-3448) ಟೆಂಡರ್ ಮೊತ್ತ ರೂ 32.75 ಲಕ್ಷಗಳಿಗೆ (2) ಅರಸೀಕೆರೆ ತಾ: ಕೀರನಾಯ್ಕನಹಟ್ಟಿ ತಾಂಡ ಹಾಗು ಚಿಕ್ಕಾರೆಹಳ್ಳಿ ಎಸ್.ಸಿ ಕಾಲೋನಿ ಗ್ರಾಮದಲ್ಲಿ ನಿರ್ಮಿಸಲಾಗುತ್ತಿರುವ ಕಾಂಕ್ರೀಟ್ ರಸ್ತೆ & ಚರಂಡಿ ಕಾಮಗಾರಿಗಳಿಗೆ ನಿರ್ಮಾಣ ಸಾಮಗ್ರಿಗಳನ್ನು ಹಾಗು ಯಂತ್ರೋಪಕರಣಗಳನ್ನು ಒದಗಿಸುವ ಬಗ್ಗೆ (INDENT-3443) ಟೆಂಡರ್ ಮೊತ್ತ ರೂ 37.60 ಲಕ್ಷಗಳಿಗೆ (3) ಅರಸೀಕೆರೆ ತಾ: ಕಾಚೀಘಟ್ಟ ಪಂ:ತೀರ್ಥಮಲ್ಲೇಶ್ವರ ಬೆಟ್ಟದಿಂದ ಕಂಚೇನಹಳ್ಳಿ ಎಸ್.ಸಿ ಕಾಲೋನಿಗೆ ನಿರ್ಮಿಸಲಾಗುತ್ತಿರುವ ಕಾಂಕ್ರೀಟ್ ರಸ್ತೆ & ಚರಂಡಿ ಕಾಮಗಾರಿಗಳಿಗೆ ನಿರ್ಮಾಣ ಸಾಮಗ್ರಿಗಳನ್ನು ಹಾಗು ಯಂತ್ರೋಪಕರಣಗಳನ್ನು ಒದಗಿಸುವ ಬಗ್ಗೆ (INDENT-3451) ಟೆಂಡರ್ ಮೊತ್ತ ರೂ 34.86 ಲಕ್ಷಗಳಿಗೆ ದ್ವಿ–ಲಕೋಟೆ ಪದ್ದತಿಯಲ್ಲಿ ಸಾಮಾಗ್ರಿಗಳನ್ನು ಪೂರೈಸಲು ನೊಂದಣೀಯಾಗಿರುವ ಮಾರಟದಾರರಿಂದ & ಲೋಕೋಪಯೋಗಿ ಇಂಜಿನಿಯರಿಂಗ್ ಇಲಾಖೆಯಲ್ಲಿ ನೊಂದಾಯಿತ/ಎನ್‌ರೋಲ್ ಮಾಡಿಸಿರುವ ಅರ್ಹ ಗುತ್ತಿಗೆದಾರರುಗಳು ಸ್ಪರ್ಧಾತ್ಮಕ ಟೆಂಡರ್‌ಅನ್ನು ಇ–ಪ್ರಕ್ಯೂರ್‌ಮೆಂಟ್ ಅಂತರ್ಜಾಲದಲ್ಲಿ ದಿನಾಂಕ: 27.12.2022 ರಿಂದ ದಿನಾಂಕ: 05.01.2023ರ ಸಂಜೆ 5.00 ಘಂಟೆಯವರೆಗೆ ಟೆಂಡರ್‌ನ್ನು ನಿಗಧಿತ ನಮೂನೆಗಳನ್ನು www.eproc.karnataka.gov.in ನಲ್ಲಿ ಡೌನ್‌ಲೋಡ್ ಮಾಡಿ ಅವಶ್ಯ ಮಾಹಿತಿಗಳೊಂದಿಗೆ ಹಾಗೂ ನಿಗಧಿತ ಇ.ಎಂ.ಡಿ.ಯೊಂದಿಗೆ ದಿನಾಂಕ: 05.01.2023ರ ಸಂಜೆ 5.00 ಗಂಟೆಯೊಳಗೆ ಅಪ್‌ಲೋಡ್ ಮಾಡತಕ್ಕದ್ದು. ದಿನಾಂಕ: 04.01.2023ರವರೆಗೆ ಗುತ್ತಿಗೆದಾರರು ಈ ಕಛೇರಿ ವೇಳೆಯಲ್ಲಿ ಸಂಪರ್ಕಿಸಿ ಯಾವುದೇ ಮಾಹಿತಿಯನ್ನು ಪಡೆಯಬಹುದಾಗಿರುತ್ತದೆ. ದಿನಾಂಕ: 07.01.2023ರಂದು ಬೆಳಿಗ್ಗೆ 11.00ಗಂಟೆಗೆ ಗುತ್ತಿಗೆದಾರರ ತಾಂತ್ರಿಕ ಬಿಡ್‌ನ್ನು ತೆರೆಯಲಾಗುವುದು. ತಾಂತ್ರಿಕ ಬಿಡ್ ಅನುಮೋದನೆಯಾದ ನಂತರ ಗುತ್ತಿಗೆದಾರರ ಆರ್ಥಿಕ ಬಿಡ್ಡನ್ನು ತೆರೆಯಲಾಗುವುದು. ಕಾಮಗಾರಿಗಳ ವಿವರಗಳು ಇ–ಪ್ರಕ್ಯೂರ್‌ಮೆಂಟ್ ಅಂತರ್ಜಾಲದಲ್ಲಿ ಲಭ್ಯವಿರುತ್ತವೆ. ಸದರಿ ಕಾಮಗಾರಿಗೆ ಸಂಬಂಧಪಟ್ಟಂತೆ ಒಂದು ವೇಳೆ ಏನಾದರೂ ತಿದ್ದುಪಡಿ ಉಂಟಾದಲ್ಲಿ ಸದರಿ ತಿದ್ದುಪಡಿಯನ್ನು ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲಾಗುವುದು ಟೆಂಡರ್‌ನ್ನು ಯಾವುದೇ ಕಾರಣ ನೀಡದೇ ತಿರಸ್ಕರಿಸುವ ಹಕ್ಕನ್ನು ಕಾಯ್ದಿರಿಸಲಾಗಿದೆ.

ಸಹಿ/–ಕಾರ್ಯಪಾಲಕ ಇಂಜಿನಿಯರ್, ಪ.ರಾಜ್.
ಇಂ.ವಿಭಾಗ, ಚನ್ನರಾಯಪಟ್ಟಣ.

ವಾಸಾಸಂಇ/ಹಿಸನಿ/ಹಾಸನ/ಎಂಸಿಎ/903/2022–23

